**ಸಂಪುಟ: 04 ಸಂಚಿಕೆ: 349 ಪುಟಗಳು: 08 ಭಾನುವಾರ 02 ಮಾರ್ಚ್ 2025**

www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ

RNI No. KARKAN/2021/80833

9448225696 +91 8035841833 ₹5

**ಮುಂಜಾನೆ ಮಾತು**


ದೊಡ್ಡ ಗುರಿಯನ್ನು ಹೊಂದುವುದು, ನಿರಂತರವಾಗಿ ಜ್ಞಾನವನ್ನು ಪಡೆದುಕೊಳ್ಳುವುದು, ಪರಿಶ್ರಮ ಪಡುವುದು, ತಾಳ್ಮೆಯಿಂದಿರುವುದು ಈ ನಾಲ್ಕು ವಿಷಯಗಳನ್ನು ಅನುಸರಿಸಿದರೆ ನೀವು ಏನನ್ನಾದರೂ ಸಾಧಿಸಬಹುದು

# ಉದಯ ವಾಹಿನಿ

UV ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

## ಸದ್ಗುರು ಜೊತೆ ವೇದಿಕೆ ಹಂಚಿಕೊಂಡ ಡಿಕೆಶಿ ಸ್ಪಷ್ಟನೆ ನೀಡಬೇಕು: ಸಚಿವ

• ಉದಯವಾಹಿನಿ, ಬೆಂಗಳೂರು



ರಾಹುಲ್ ಗಾಂಧಿ ಯಾರು ಎಂದು ತಮಗೆ ಗೊತ್ತಿಲ್ಲ ಎಂದು ಹೇಳಿದ ಸದ್ಗುರು ಜಗದೀಶ್ ವಾಸುದೇವ್ ಜೊತೆ ವೇದಿಕೆ ಹಂಚಿಕೊಂಡಿರುವುದರ ಬಗ್ಗೆ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರೇ ಸ್ಪಷ್ಟನೆ ನೀಡಬೇಕು ಎಂದು ಸಹಕಾರ ಸಚಿವ ಕೆ.ಎನ್. ರಾಜಣ್ಣ ತಿರುಗೇಟು ನೀಡಿದ್ದಾರೆ.

ಇತ್ತೀಚೆಗೆ ತಮಿಳುನಾಡಿನ ಕೊಯಮತ್ತೂರಿನಲ್ಲಿ ನಡೆದ ಮಹಾಶಿವರಾತ್ರಿ ಆಚರಣೆಯಲ್ಲಿ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಭಾಗವಹಿಸಿದ್ದರು. ಆ ಕಾರ್ಯಕ್ರಮದಲ್ಲಿ ಕೇಂದ್ರ ಗೃಹಸಚಿವ ಅಮಿತ್ ಷಾ ಕೂಡ ಪಾಲ್ಗೊಂಡಿದ್ದರು. ಈ ಕುರಿತಂತೆ ರಾಜಕೀಯವಾಗಿ ಭಾರೀ ಚರ್ಚೆಗಳಾದವು.

ಡಿ.ಕೆ.ಶಿವಕುಮಾರ್ ಬಿಜೆಪಿಯತ್ತ ಮುಖ ಮಾಡಿದ್ದಾರೆ ಎಂಬೆಲ್ಲಾ ವ್ಯಾಖ್ಯಾನಗಳು ಕೇಳಿಬಂದವು. ಅದಕ್ಕೆ ಡಿ.ಕೆ.ಶಿವಕುಮಾರ್ ಸ್ಪಷ್ಟನೆ ನೀಡಿ ಕೂಡ ಆಗಿದೆ. ಸಂಪುಟದ ಬಹುತೇಕ ಸಚಿವರು ಡಿ.ಕೆ.ಶಿವಕುಮಾರ್ ನಡೆಗೆ ವಿಶೇಷ ಅರ್ಥ ಕಲ್ಪಿಸಬೇಕಿಲ್ಲ.



ಅವರವರ ನಂಬಿಕೆಗಳು, ಆಚರಣೆಗಳು ಅವರ ಸ್ವಂತಕ್ಕೆ ಸೇರಿವೆ. ಡಿ.ಕೆ.ಶಿವಕುಮಾರ್ ಕಟ್ಟಾ ಕಾಂಗ್ರೆಸ್ಸಿಗರು. ಅವರು ಪಕ್ಷಾಂತರ ಮಾಡುತ್ತಾರೆ ಎಂಬುದೇ ಹಾಸ್ಯಾಸ್ಪದ ವ್ಯಾಖ್ಯಾನ ಎಂದು ಸಮರ್ಥಿಸಿಕೊಳ್ಳುತ್ತಿದ್ದಾರೆ. ಆದರೆ ಇದಕ್ಕೆ ವ್ಯತಿರಿಕ್ತವಾಗಿ ರಾಜಣ್ಣ ಪ್ರತಿಕ್ರಿಯಿಸಿದ್ದಾರೆ. ಡಿ.ಕೆ.ಶಿವಕುಮಾರ್‌ರವರು ತಮ್ಮ ಅಭಿಪ್ರಾಯವನ್ನು ಹೇಳಿಕೊಳ್ಳಲಿ. ಆದರೆ ರಾಹುಲ್ ಗಾಂಧಿ ಯಾರು ಎಂದು ನನಗೆ ಗೊತ್ತಿಲ್ಲ ಎಂದು ಹೇಳಿದ್ದ ಸದ್ಗುರು ಜೊತೆ ವೇದಿಕೆ ಹಂಚಿಕೊಂಡಿರುವುದರ ಬಗ್ಗೆ ಡಿ.ಕೆ.ಶಿವಕುಮಾರ್ ಸ್ಪಷ್ಟನೆ ನೀಡಬೇಕು ಎಂದರು.

ರಾಜಕಾರಣದಲ್ಲಿ ಯಾರಾರು, ಏನೇನು ಮಾತನಾಡುತ್ತಾರೆ ಎಂಬುದು ನನಗಿಂತಲೂ ಡಿ.ಕೆ.ಶಿವಕುಮಾರ್ ಅವರಿಗೆ ಹೆಚ್ಚಿನ ಮಾಹಿತಿ ಇರುತ್ತದೆ ಎಂದು ಹೇಳಿದರು.

> ಮಹಾರಾಷ್ಟ್ರ, ಕರ್ನಾಟಕದ ನಡುವೆ ಸೃಷ್ಟಿಯಾರುವ ಗೊಂದಲ ಶೀಘ್ರವೇ ಬಗೆಹರಿಯಲಿದೆ. ಈಗಾಗಲೇ ಸರ್ಕಾರದ ಮುಖ್ಯ ಕಾರ್ಯದರ್ಶಿಗಳ ನಡುವೆ ಮಾತುಕತೆಯಾಗಿವೆ. ಸಿಎಂ ಸಿದ್ದರಾಮಯ್ಯ ಕೂಡ ಮಹಾರಾಷ್ಟ್ರದ ಮುಖ್ಯಮಂತ್ರಿಗಳ ಜೊತೆ ಮಾತುಕತೆ ನಡೆಸಿದ್ದಾರೆ. ಎಲ್ಲಾವೂ ಬಗೆಹರಿಯುತ್ತದೆ
>
> – ಕೆ.ಎನ್.ರಾಜಣ್ಣ, ಸಹಕಾರ ಸಚಿವ

## ಹೆಬ್ಬಾಳದಲ್ಲಿ ಮೆಟ್ರೋಗೆ ಜಮೀನು ನೀಡುವುದೇ ನಮ್ಮ ಮೊದಲ ಆದ್ಯತೆ

• ಉದಯವಾಹಿನಿ, ಬೆಂಗಳೂರು

ಹೆಬ್ಬಾಳದಲ್ಲಿರುವ 45 ಎಕರೆ ಜಾಗವನ್ನು ಬಹುಮಾದರಿ ಸಾರಿಗೆ ಹಬ್ ನಿರ್ಮಾಣಕ್ಕೆ ಬಿಎಂಆರ್‌ಸಿಎಲ್ ಸಂಸ್ಥೆಗೆ ಹಸ್ತಾಂತರಿಸಬೇಕು ಎನ್ನುವುದೇ ಸರ್ಕಾರದ ಮುಖ್ಯ ಉದ್ದೇಶವಾಗಿದೆ. ಆದರೆ, ಈ ಪ್ರಕರಣದಲ್ಲಿ ಇರುವ ಕಾನೂನಿನ ತೊಡಕುಗಳನ್ನು ನಿವಾರಿಸಿಕೊಂಡು ಮುಂದುವರಿಯುವುದು ಸೂಕ್ತ ಎನ್ನುವುದಷ್ಟೇ ನಮ್ಮ ಕಳಕಳಿಯಾಗಿದೆ ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ್ ಸ್ಪಷ್ಟಪಡಿಸಿದ್ದಾರೆ. ಈ ಬಗ್ಗೆ ಮಾಧ್ಯಮ ಪ್ರಕಟಣೆ ನೀಡಿರುವ ಅವರು, ಹೆಬ್ಬಾಳದಲ್ಲಿ ಈಗ ಚರ್ಚೆಯಲ್ಲಿರುವ ಜಮೀನಿನ ಒಟ್ಟು ವಿಸ್ತೀರ್ಣ 55 ಎಕರೆ 13 ಗುಂಟೆ ಇದೆ. ಇದರಲ್ಲಿ ನಮ್ಮ ಮೆಟ್ರೊ ಸಂಸ್ಥೆಯು 45 ಎಕರೆ 5 ಗುಂಟೆಯನ್ನು ತನಗೆ ಹಸ್ತಾಂತರಿಸುವಂತೆ ಕೇಳಿದೆ.

ಈ ಸಂಬಂಧವಾಗಿ ತಮ್ಮ, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರ ಅಧ್ಯಕ್ಷತೆಯಲ್ಲಿ ಶುಕ್ರವಾರ ಸಭೆ ನಡೆಸ ಲಾಯಿತು. ಇದರಲ್ಲಿ ಈಗಾಗಲೇ ಇರುವ ಕಾನೂನಿನ ತೊಡಕುಗಳನ್ನು ಮೊದಲು ನಿವಾರಿಸಲು ತೀರ್ಮಾನಿಸಲಾಗಿದೆ. ಇಲ್ಲದೆ ಹೋದರೆ ಇದು ಮತ್ತಷ್ಟು ಸಮಸ್ಯೆಗಳನ್ನು ಸೃಷ್ಟಿಸುತ್ತದೆ ಎಂದಿದ್ದಾರೆ.

ಹಿಂದಿನ ಬಿಜೆಪಿ ಸರ್ಕಾರವು ಈ ಜಮೀನು ತನ್ನದೆಂದು ಹೇಳುತ್ತಿರುವ ಸಂಸ್ಥೆಯ ಯೋಜನೆ ಜಾರಿಗೆ ಇನ್ನೂ ಮೂರು ವರ್ಷಗಳ ಕಾಲಾವಕಾಶ ನೀಡಿ ಆದೇಶ ಹೊರಡಿಸಿದೆ. ಇನ್ನೊಂದೆಡೆ, ನ್ಯಾಯಾಲಯದ ಆದೇಶವೂ ಇದೆ. ಹೀಗಾಗಿ ಏಕಾಏಕಿ ಮೆಟ್ರೋ ಸಂಸ್ಥೆಗೆ ಜಮೀನನ್ನು ಹಸ್ತಾಂತರಿಸುವುದು ಮತ್ತಷ್ಟು ಜಟಿಲತೆಗೆ ದಾರಿಯಾಗುತ್ತದೆ ಎಂದು ಅವರು ವಿವರಿಸಿದ್ದಾರೆ.

## ಲಿಂಗತ್ವ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ ಸ್ಥಾಪಿಸಲು ಆಗ್ರಹ

• ಉದಯವಾಹಿನಿ, ಬೆಂಗಳೂರು

ಸಮುದಾಯದ ಸರ್ವತೋಮುಖ ಅಭಿವೃದ್ಧಿಗೆ ನಿಗಮವೊಂದನ್ನು ಸ್ಥಾಪಿಸಿ, ವಾರ್ಷಿಕ 200 ಕೋಟಿ ಅನುದಾನ ಮೀಸಲಿಡಬೇಕು ಎಂದು ಲಿಂಗತ್ವ ಮತ್ತು ಲೈಂಗಿಕ ಬಹುತ್ವಕ್ಕಾಗಿ ಚಳವಳಿ ಆಗ್ರಹಿಸಿದೆ.

ಶನಿವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಚಳವಳಿಯ ಅಧ್ಯಕ್ಷೆ ಕಾಂತದೇವಿ, ಮನೋಹರ್ ಎಲವರ್ತಿ, 'ಲಿಂಗತ್ವ ಅಲ್ಪಸಂಖ್ಯಾತ ಸಮುದಾಯಕ್ಕೆ ಬಜೆಟ್‌ನಲ್ಲಿ ಪ್ರತ್ಯೇಕ ವಸತಿ ಯೋಜನೆ ರೂಪಿಸಬೇಕು. ಪ್ರತಿಯೊಬ್ಬರಿಗೆ ವಸತಿ ಸೌಲಭ್ಯ ಕಲ್ಪಿಸಬೇಕು. ಲಿಂಗತ್ವ ಅಲ್ಪಸಂಖ್ಯಾತರು ಉದ್ಯಮಶೀಲತೆಯಲ್ಲಿ ತೊಡಗಿಸಿಕೊಳ್ಳಲು ಯೋಜನೆವೊಂದನ್ನು ರೂಪಿಸಬೇಕು. ಆದ್ದರಿಂದ ಪ್ರತಿಯೊಬ್ಬ ಲಿಂಗತ್ವ ಅಲ್ಪಸಂಖ್ಯಾತರಿಗೆ ಕನಿಷ್ಠ 2 ಲಕ್ಷ ಆರ್ಥಿಕ ನೆರವು ಒದಗಿಸಬೇಕು ಎಂದು ಒತ್ತಾಯಿಸಿದರು.

ಉಚಿತ ಲಿಂಗ ಪರಿವರ್ತನೆ ಶಸ್ತ್ರಚಿಕಿತ್ಸೆ ಹಾಗೂ ಶಸ್ತ್ರಚಿಕಿತ್ಸೆಯ ನಂತರದ ಆರು ತಿಂಗಳ ಆರೈಕೆಗಾಗಿ ಬಜೆಟ್‌ನಲ್ಲಿ ಅನುದಾನ ಮೀಸಲಿಡಬೇಕು. ಉದ್ಯೋಗದಲ್ಲಿ ಶೇಕಡ 1ರಷ್ಟು ಮೀಸಲಾತಿಯನ್ನು ಪಡೆದುಕೊಳ್ಳಲು ಲಿಂಗತ್ವ ಅಲ್ಪಸಂಖ್ಯಾತ ಸಮುದಾಯದ ಅರ್ಹರಿಗೆ ತರಬೇತಿ ಮತ್ತು ಕೋಚಿಂಗ್ ನೀಡಬೇಕು' ಎಂದು ಹೇಳಿದರು.

## ಸಚಿವ ಮಂಕಾಳು ವೈದ್ಯ ವಿರುದ್ಧ ರಾಜ್ಯಪಾಲರಿಗೆ ದೂರು

• ಉದಯವಾಹಿನಿ, ಬೆಂಗಳೂರು


ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲ ಸಾರಿಗೆ ಸಚಿವ ಮಂಕಾಳು ಎಸ್. ವೈದ್ಯ ಅವರು ಅರಣ್ಯ ಭೂಮಿ ಒತ್ತುವರಿ ಮಾಡಿದ್ದಾರೆ ಎಂದು ಆರೋಪಿಸಿ ರಾಜ್ಯಪಾಲ ತಾವರ್‌ಚಂದ್ ಗೆಹ್ಲೋಟ್ ಅವರಿಗೆ ದೂರು ನೀಡಲಾಗಿದೆ.

ಕಾರವಾರ ಜಿಲ್ಲೆಯ ಭಟ್ಕಳ ಪಟ್ಟಣದ ಆರ್‌ಟಿಐ ಕಾರ್ಯಕರ್ತರಾದ ಶಂಕರ್ ನಾಯಕ್, ನಾಗೇಂದ್ರ ನಾಯಕ್ ಮತ್ತು ನಾಗೇಶ್ ನಾಯಕ್ ಅವರು ಸಚಿವ ಮಂಕಾಳು ವೈದ್ಯ ವಿರುದ್ಧ ರಾಜ್ಯಪಾಲರಿಗೆ ದೂರು ನೀಡಿದ್ದಾರೆ. ಈ ಬಗ್ಗೆ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳಿಗೂ ದೂರು ಸಲ್ಲಿಸಲಾಗಿದೆ. ಅಲ್ಲದೆ ಹೆಚ್ಚುವರಿಯಾಗಿ, ಕ್ರಮ ಕೈಗೊಳ್ಳುವಂತೆ ನ್ಯಾಯಾಲಯದಲ್ಲಿ ಅರ್ಜಿ ಸಲ್ಲಿಸಲಾಗಿದೆ ಎಂದು ತಿಳಿಸಿದ್ದಾರೆ.

# ಬಿಜೆಪಿ ಸೇರ್ತಾರ ಡಿಕೆಶಿ? ಗುಸುಗುಸು ಪಿಸುಪಿಸು

● ಕಾಂಗ್ರೆಸ್‌ನಲ್ಲಿ ಬಿರುಗಾಳಿ ಎದ್ದಿದೆ ● ಉಡುಪಿಗೆ ಹೊರಟ ಡಿಕೆಶಿ : ಡಿಸಿಎಂ ಅವರನ್ನು ಹೊಗಳಿ ಅಟ್ಟಕ್ಕೇರಿಸಿ, ● ನಿಮಗಿದೋ ಆದರದ ಸ್ವಾಗತ' ಎಂದ ಬಿಜೆಪಿ ● ಡಿಕೆಶಿ ಬಿಜೆಪಿಗೆ ಬಂದೇ ಬಿಡ್ತಾರೆ ಅಂತ ಗುಸುಗುಸು: ಬಿ.ವೈ.ವಿಜಯೇಂದ್ರ, ● ತೆಲಂಗಾಣಕ್ಕೆ 1.24 ಟಿಎಂಸಿ ನೀರು ಬಿಡುಗಡೆ: ಕಾಂಗ್ರೆಸ್ ಸರ್ಕಾರದ ವಿರುದ್ಧ ಆರ್ ಅಶೋಕ್ ವಾಗ್ದಾಳಿ ● ಬಜೆಟ್ ಅಧಿವೇಶನ ಹಿನ್ನೆಲೆ ವಿಪಕ್ಷಗಳನ್ನು ಎದುರಿಸಲು ಕಾಂಗ್ರೆಸ್ ಪ್ರತಿತಂತ್ರ ● ತಾಕತ್ತಿದ್ದರೆ ಡಿ.ಕೆ.ಶಿವಕುಮಾರ್ ಸಸ್ಪೆಂಡ್ ಮಾಡಿ: ಅಶೋಕ ಸವಾಲು

• ಉದಯವಾಹಿನಿ, ಬೆಂಗಳೂರು




ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಕಾಂಗ್ರೆಸ್ ತೊರೆದು ಬಿಜೆಪಿಗೆ ಬಂದೇ ಬಿಡ್ತಾರೆ ಅಂತಾ ಗುಸು,ಗುಸು ಶುರುವಾಗಿದೆ. ಇದರಲ್ಲಿ ಯಾವುದೇ ಅರ್ಥವಿಲ್ಲ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಹೇಳಿದರು. ಸುದ್ದಿಗಾರರೊಂದಿಗೆ ಮಾತನಾಡಿ, ರಾಜ್ಯ ಸರ್ಕಾರದಲ್ಲಿ ದಿನೇ ದಿನೇ ಮುಖ್ಯಮಂತ್ರಿ ಸ್ಥಾನಕ್ಕೆ ಪೈಪೋಟಿ ಹೆಚ್ಚಾಗುತ್ತಿದ್ದು, ಸಿಎಂ ಸಿದ್ದರಾಮಯ್ಯ ಅವರು ರಾಜೀನಾಮೆ ಕೊಡಬೇಕು. ತಾವು ಮುಖ್ಯಮಂತ್ರಿ ಆಗಬೇಕು ಅಂತ ಅನೇಕರು ಕಾಯ್ತಾ ಇದ್ದಾರೆ. ಕಾಂಗ್ರೆಸ್ ಒಂದು ರೀತಿ ತಾಲಿಬಾನ್ ಸರ್ಕಾರ. ಹಿಂದುತ್ವಕ್ಕೆ, ಹಿಂದೂಗಳಿಗೂ ಗೌರವವಿಲ್ಲ. ಪ್ರಯಾಗ್‌ರಾಜ್‌ನಲ್ಲಿ ಮಹಾ ಕುಂಭಮೇಳಕ್ಕೆ ಕಾಂಗ್ರೆಸ್ ಅವರು ತಕರಾರು ಎತ್ತಿದ್ರು. ಇದರ ಮಧ್ಯೆ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಕುಟುಂಬ ಸಮೇತ ಕುಂಭಮೇಳಕ್ಕೆ ಹೋಗಿ ಬಂದಿದ್ದಾರೆ. ನಮ್ಮ ಪ್ರಾಚೀನತೆ, ಪರಂಪರೆ ಆಧಾರದ ಮೇಲೆ ಹೋಗಿ ಬಂದಿದ್ದಾರೆ ಎಂದರು. ಈಶ ಫೌಂಡೇಶನ್ ಕಾರ್ಯಕ್ರಮದಲ್ಲಿ ಕೇಂದ್ರ ಗೃಹಸಚಿವರ ಜೊತೆ ಡಿಕೆಶಿ ಅವರು ಭಾಗವಹಿಸಿದ್ದರು. ಶಿವರಾತ್ರಿ ಸಂದರ್ಭದಲ್ಲಿ ಒಂದೇ ವೇದಿಕೆಯಲ್ಲಿ ಕಾಣಿಸಿಕೊಂಡಿದ್ದಾರೆ. ಡಿ.ಕೆ. ಶಿವಕುಮಾರ್ ಬಿಜೆಪಿಗೆ ಬಂದು ಬಿಡ್ತಾರೆ ಎಂಬ ಗುಸುಗುಸು ಶುರುವಾಗಿದೆ. ಇದಕ್ಕೆ ಯಾವ ರೀತಿಯೂ ಅರ್ಥವಿಲ್ಲ ಎಂದು ಹೇಳಿದರು.

**1** ಮಲ್ಲಿಕಾರ್ಜುನ ಖರ್ಗೆ ವಿರೋಧಿಸಿದರೂ ಕುಂಭ ಮೇಳದಲ್ಲಿ ಮಿಂದ ಡಿಕೆಶಿ

**2** ಎಐಸಿಸಿ ಮುನಿಸಿನ ಮಧ್ಯೆಯೂ ಈಶಾ ಫೌಂಡೇಶನ್ ಶಿವರಾತ್ರಿಯಲ್ಲಿ ಭಾಗವಹಿಸಿದ ಡಿಕೆಶಿ

**3** ಕಾಪು ಮಾರಿಯಮ್ಮನ ದೇವಸ್ಥಾನದಲ್ಲಿ ನಡೆಯುವ ಕಾರ್ಯಕ್ರಮದಲ್ಲಿ ಡಿಕೆಶಿ ಭಾಗಿ

**ಕನ್ನಡ ವಿರುದ್ಧ ಪಿತೂರಿ ಸಹಿಸಲಸಾಧ್ಯ:** ಈ ನೆಲದ ನೀರು, ಅನ್ನ, ಗಾಳಿ ಸೇವಿಸಿ ಕನ್ನಡದ ವಿರುದ್ಧ ಮಾತ ನಾಡುವುದು, ರಾಜ್ಯದ ವಿರುದ್ಧ ಪಿತೂರಿ ನಡೆಸುವುದನ್ನು ಸಹಿಸಲು ಸಾಧ್ಯವಿಲ್ಲ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಕಿಡಿಕಾರಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿ, ನಮ್ಮ ನೆಲದಲ್ಲಿ ಇದ್ದುಕೊಂಡು ಕನ್ನಡಿಗರ ತೇಜೋವಧೆ ಮಾಡುವುದು ಅಕ್ಷಮ್ಯ. ಅನೇಕ ಕನ್ನಡಪರ ಹೋರಾಟಗಾರರ ಹೇಳಿಕೆಗಳನ್ನು ಗಮನಿಸಿದ್ದೇನೆ. ಕಂಡಕ್ಟರ್ ಮೇಲಿನ ಹಲ್ಲೆ ವಿರುದ್ಧ ಕನ್ನಡಿಗರು ಧ್ವನಿ ಎತ್ತಬೇಕು. ಷಡ್ಯಂತ್ರ, ಪಿತೂರಿ ಮಾಡುವವರನ್ನು ಸರ್ಕಾರ ಹತ್ತಿಕ್ಕಬೇಕು ಎಂದು ಆಗ್ರಹಿಸಿದರು. ಉದಯಗಿರಿ ಘಟನೆ ಹಿನ್ನೆಲೆ ಮೈಸೂರು ಚಲೋ ಕಾರ್ಯಕ್ರಮ ನಡೆಯಲಿದೆ. ನಾನು ಮೈಸೂರಿಗೆ ತೆರಳಲಿದ್ದೇನೆ. ರಾಜ್ಯ ಸರ್ಕಾರ ಕಾನೂನು–ಸುವ್ಯವಸ್ಥೆ ವಿಚಾರದಲ್ಲಿ ಸಂಪೂರ್ಣ ವಿಫಲವಾಗಿದೆ. ಉದಯಗಿರಿ ಘಟನೆ, ಪೊಲೀಸ್ ಠಾಣೆಗೆ ಪುಡಾರಿಗಳು ನುಗ್ಗಿ ದಾಂಧಲೆ ಮಾಡಿದವರನ್ನು ರಕ್ಷಿಸುವ ಕೆಲಸವನ್ನು ಕಾಂಗ್ರೆಸ್ ಸರ್ಕಾರ ಮಾಡುತ್ತಿದೆ ಎಂದು ವಿಜಯೇಂದ್ರ ಆಕ್ಷೇಪಿಸಿದರು. ಅಪರಾಧ ಪ್ರಕರಣಗಳ ಬಗ್ಗೆ ಗೃಹ ಸಚಿವರ ಹೇಳಿಕೆ ಗಮನಿಸಿದ್ದೇನೆ. ನಾನು ರಾಜೀನಾಮೆ ಕೊಡಬೇಕೇ...? ಅಥವಾ ಕೊಡುತ್ತೇನೆ ಎಂಬ ಧಾಟಿಯಲ್ಲಿ ಮಾತನಾಡಿದ್ದಾರೆ. ಇದು ಅವಿವೇಕತನದ ಪರಮಾವಧಿ. ಕಾನೂನು– ಸುವ್ಯವಸ್ಥೆ ಕಾಪಾಡಿ ಅಭಿವೃದ್ಧಿ ಮಾಡಬೇಕೆಂದು ನಿಮಗೆ ರಾಜ್ಯದ ಜನ ಆಶೀರ್ವಾದ ಮಾಡಿದ್ದಾರೆ. ಅದನ್ನು ಮಾಡದೇ ಈ ರೀತಿ ಹೇಳಿಕೆ ನೀಡಿದರೆ ದೇಶದ್ರೋಹಿಗಳು, ಕೊಲೆ ಗಡುಕರಿಗೆ ಆನೆ ಬಲ ಬಂದಂತಾಗುತ್ತದೆ ಎಂದರು.



**ಹಿಂದುತ್ವದ ವಿಚಾರದಲ್ಲಿ ಡಿಕೆಶಿ ಇತರರಿಗೆ ಮಾದರಿ:** ಹಿಂದುತ್ವದ ಪರ ನಿಲುವು ಪ್ರಕಟಿಸುವ ಮೂಲಕ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಇತರರಿಗೆ ಮಾದರಿ ಯಾಗಿದ್ದಾರೆ ಎಂದು ಮಾಜಿ ಉಪಮುಖ್ಯಮಂತ್ರಿ ಕೆ.ಎಸ್. ಈಶ್ವರಪ್ಪ ಹೇಳಿದರು. ಶನಿವಾರ ಸುದ್ದಿರಾರರೊಂದಿಗೆ ಮಾತನಾಡಿದ ಅವರು. ಡಿ.ಕೆ. ಶಿವಕುಮಾರ್ ಅವರಿಗೆ ಈಗಾಲಾದರೂ ಬುದ್ದಿ ಬಂದಿದೆ. ಸಿಎಂ ಸಿದ್ದರಾಮಯ್ಯ ಅವರಿಗೂ ಬುದ್ದಿ ಬರಲಿ. ಡಿ.ಕೆ. ಶಿವಕುಮಾರ್ ಅವರ ಹಿಂದುತ್ತದ ನಿಲುವು ನಾಟಕವೋ, ನಿಜವೋ ದೇವರು ತೀರ್ಮಾನ ಮಾಡುತ್ತಾನೆ ಎಂದರು. ನಾಟಕೀಯವಾಗಿ ಮತಬ್ಯಾಂಕ್‌ಗಾಗಿ ಮುಸ್ಲಿಮರನ್ನು ಓಲೈಸುವ ಕೆಲಸ ಮಾಡುತ್ತಿದ್ದಾರೆ ಎಂದು ಟೀಕಿಸಿದರು.

### ಡಿಕೆಶಿವಕುಮಾರ್ ಪ್ರತಿಕ್ರಿಯೆ

ನಾರಾಯಣಪುರ ಅಣೆಕಟ್ಟೆಯಿಂದ ತೆಲಂಗಾಣಕ್ಕೆ ರಾತ್ರಿಯಿಡೀ ನೀರು ಬಿಡುಗಡೆ ಮಾಡಲಾಗಿದೆ ಎಂಬ ಆರೋಪದ ಬಗ್ಗೆ ಉತ್ತರಿಸಿದ ಜಲಸಂಪನ್ಮೂಲ ಸಚಿವರೂ ಆಗಿರುವ ಉಪಮುಖ್ಯಮಂತ್ರಿ ಶಿವಕುಮಾರ್, ಇಲ್ಲಿ ಮರೆಮಾಡಲು ಏನೂ ಇಲ್ಲ. ನದಿ ತೀರದ ರಾಜ್ಯಗಳು ಸಂಕಷ್ಟದ ಸಮಯದಲ್ಲಿ ಪರಸ್ಪರ ಸಹಾಯ ಮಾಡಿಕೊಳ್ಳುತ್ತವೆ. ಅವರು ಅನೇಕ ಸಂದರ್ಭಗಳಲ್ಲಿ ನಮಗೆ ಸಹಾಯ ಮಾಡಿದ್ದಾರೆ ಮತ್ತು ನಾವು ಸಹ ಅವರಿಗೆ ಸಹಾಯ ಮಾಡುತ್ತೇವೆ. ನೀರಾವರಿ ಸಚಿವರು ವೈಯಕ್ತಿಕವಾಗಿ ಮನವಿ ಮಾಡಿದ್ದರಿಂದ ಒಂದು ಟಿಎಂಸಿ ನೀರನ್ನು ಬಿಡುಗಡೆ ಮಾಡಲಾಗಿದೆ' ಎಂದು ಹೇಳಿದರು. ತೆಲಂಗಾಣ ರಾಜ್ಯವು ರಾಜ್ಯದ ಅವಶ್ಯಕತೆಗಳಿಗೆ ಹಲವು ಬಾರಿ ಸ್ಪಂದಿಸಿದೆ. ಅವರು ನಮಗೆ ಕೃಷ್ಣಾ ನದಿಯಿಂದ ನೀರು ನೀಡಿದ್ದಾರೆ. ಇದರಲ್ಲಿ ಯಾವುದೇ ತಪ್ಪಿಲ್ಲ ಮತ್ತು ನೆರೆಯ ರಾಜ್ಯಗಳಾಗಿ ಪರಸ್ಪರ ಸಹಾಯಕ್ಕೆ ನಿಲ್ಲಬೇಕಾಗುತ್ತದೆ ಎಂದರು.



> ಸಿಎಂ ಸಿದ್ದರಾಮಯ್ಯ ಮತ್ತು ಡಿಸಿಎಂ ಡಿ.ಕೆ. ಶಿವಕುಮಾರ ಮಧ್ಯೆ ಆಂತರಿಕ ಯುದ್ಧ ಆರಂಭವಾಗಿದ್ದು ನಡೀತಾನೇ ಇದೆ. ಆದರೆ ಇಬ್ಬರೂ ಬಹಿರಂಗ ಹೇಳಿಕೆ ನೀಡುತ್ತಿಲ್ಲ ಅಷ್ಟೇ, ಸಿದ್ದರಾಮಯ್ಯ ಪರ ಇರುವವರು ಡಿ.ಕೆ. ಶಿವಕುಮಾರ್ ಮೇಲೆ ನೇರವಾಗಿ ಆಕ್ರಮಣ ಮಾಡುತ್ತಿದ್ದಾರೆ. ಶಿವಕುಮಾರ್ ಅಸಹಾಯಕರಾಗಿದ್ದಾರೆ.
>
> – ಜಗದೀಶ ಶೆಟ್ಟರ್, ಸಂಸದ



> ಈ ಹಿಂದೆ ಮಹಾರಾಷ್ಟ್ರದಲ್ಲಿ ಶಿಂಧೆ ಮೇನಿಯಾ ಯಾವ ರೀತಿ ಆಯಿತೋ, ಅದೇ ರೀತಿ ಕರ್ನಾಟಕದಲ್ಲೂ ಆಗಲಿದೆ. ಇಲ್ಲಿನ ಆಡಳಿತ ಪಕ್ಷದಲ್ಲಿ ಯಾರು ಶಿಂಧೆ ಆಗುತ್ತಾರೆ ಎಂಬುದನ್ನು ಕಾದುನೋಡಿ. ಕರ್ನಾಟಕದ ಏಕನಾಥ ಶಿಂಧೆಗೆ ಬೆಂಬಲ ನೀಡುವ ವಿಚಾರವನ್ನು ನಮ್ಮ ಹೈಕಮಾಂಡ್ ತೀರ್ಮಾನ ಮಾಡಲಿದೆ.
>
> –ಬಿ. ಶ್ರೀರಾಮುಲು, ಮಾಜಿ ಸಚಿವ



> ರಾಜ್ಯದಲ್ಲಿ ಕ್ಷಿಪ್ರ ರಾಜಕೀಯ ಕ್ರಾಂತಿಯಾಗಲಿದೆ ಎಂದು ಬಿಜೆಪಿಯವರು ಹಗಲು ಗನಸು ಕಾಣುತ್ತಿದ್ದಾರೆ. ಡಿಸಿಎಂ ಡಿ.ಕೆ.ಶಿವಕುಮಾರ್ ರಕ್ತದಲ್ಲೇ ಕಾಂಗ್ರೆಸ್ ಇದೆ. ಬಿಜೆಪಿ–ಜೆಡಿಎಸ್ ಪಕ್ಷಗಳ 13 ರಿಂದ 14 ಶಾಸಕರು ನಮ್ಮ ಸಂಪರ್ಕದಲ್ಲಿದ್ದಾರೆ.
>
> –ಜಮೀರ್ ಅಹ್ಮದ್ ಖಾನ್, ಸಚಿವ

### ಪಾಪರ್ ಸರ್ಕಾರ



ಗ್ಯಾರಂಟಿಗಳಿಂದಾಗಿ ಪಾಪರ್ ಆಗಿರುವ ಸರ್ಕಾರ, ವಿವಿಗಳನ್ನು ಮುಚ್ಚಿದೆ. ಮಂಡ್ಯ, ಚಾಮರಾಜನಗರ ಮೊದಲಾದ ಜಿಲ್ಲೆಗಳು ಶಿಕ್ಷಣದಲ್ಲಿ ಮೇಲಕ್ಕೆ ಬರಬೇಕೆಂದು ವಿವಿಗಳನ್ನು ಆರಂಭಿಸಲಾಗಿತ್ತು. ಈಗ ವಿವಿಗಳನ್ನು ಮುಚ್ಚಿ ಅದೇ ಸ್ಥಳದಲ್ಲಿ ಬಾರ್‌ಗಳನ್ನು ಆರಂಭಿಸಬಹುದು. ಸರ್ಕಾರದ ಉದ್ದೇಶ ವಿದ್ಯೆ ನೀಡುವುದೋ ಅಥವಾ ಮದ್ಯ ಹಂಚುವುದೋ ಎಂದು ತಿಳಿಸಬೇಕು ಎಂದು ಹೇಳಿದರು. ಡಿ.ಕೆ.ಶಿವಕುಮಾರ್ ಕುಂಭಮೇಳಕ್ಕೆ ಹೋದಾಗ ಕಾಂಗ್ರೆಸ್ ಹೈಕಮಾಂಡ್ ಏನೂ ಮಾಡಲಿಲ್ಲ. ಪ್ರಧಾನಿಯನ್ನು ಭೇಟಿ ಮಾಡಿದಾಗಲೂ ಏನೂ ಮಾಡಲಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.

## ಸಿಎಂ ಮನೆ ಗೃಹಪ್ರವೇಶಕ್ಕಾಗಿ ಬೀದಿ ಬದಿ ವ್ಯಾಪಾರಿಗಳ ಎತ್ತಂಗಡಿ

• ಉದಯವಾಹಿನಿ, ಬೆಂಗಳೂರು

ಮೈಸೂರಿನ ವಿಶ್ವಮಾನವ ರಸ್ತೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಇತ್ತೀಚೆಗೆ ಕಟ್ಟಿಸಿರುವ, ಅಂದಾಜು ಆರು ಅಥವಾ ಏಳು ಕೋಟಿ ರೂ. ವೆಚ್ಚದಲ್ಲಿ ನಿರ್ಮಿಸಲಾಗಿದೆಯೆಂದು ಹೇಳಲಾಗುತ್ತಿರುವ ನೂತನ ಬಂಗಲೆಯ ಗೃಹ ಪ್ರವೇಶ ಸದ್ಯದಲ್ಲೇ ನೆರವೇರಲಿದೆ. ಈ ಹಿನ್ನೆಲೆಯಲ್ಲಿ ಮುಖ್ಯಮಂತ್ರಿಗಳ ಮನೆಯಿರುವ ರಸ್ತೆಯು ಸ್ವಚ್ಛವಾಗಿರಬೇಕು ಎಂಬ ಕಾರಣಕ್ಕಾಗಿ, ವಿಶ್ವಮಾನವ ರಸ್ತೆಯ ಫುಟ್ ಪಾತ್ ನಲ್ಲಿ ಕಳೆದ ಮೂವತ್ತು ವರ್ಷಗಳಿಂದ ವ್ಯಾಪಾರ ಮಾಡಿಕೊಂಡಿದ್ದ ಬೀದಿ ಬದಿಯ ವ್ಯಾಪಾರಿಗಳನ್ನು ಎತ್ತಂಗಡಿ ಮಾಡಲಾಗುತ್ತಿದೆ. ಇದರ ವಿರುದ್ಧ



ಬಿಜೆಪಿ ಕಿಡಿಕಾರಿದೆ. ಈ ಕುರಿತಂತೆ ಟ್ವೀಟ್ ಮಾಡಿರುವ ಬಿಜೆಪಿ, ಮಜಾವಾದಿಯ ಮೋಜಿಗೆ ಬಡವರ ಹೊಟ್ಟೆ ಮೇಲೆ ತಣ್ಣೀರು ಬಟ್ಟೆ ಹಾಕಿದೆ ತುಘಲಕ್ ಸರ್ಕಾರ. ಮೈಸೂರಿನ ವಿಶ್ವಮಾನವ ರಸ್ತೆಯಲ್ಲಿ ನಿರ್ಮಾಣವಾಗಿರುವ ಭ್ರಷ್ಟ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ನೂತನ ಐಷಾರಾಮಿ ಬಂಗಲೆಯ ಗೃಹ ಪ್ರವೇಶಕ್ಕಾಗಿ ಬೀದಿ ಬದಿ ವ್ಯಾಪಾರಿಗಳನ್ನು ಎತ್ತಂಗಡಿ ಮಾಡಲಾಗಿದೆ ಎಂದು ಹೇಳಿದೆ. ಬೆಂಗಳೂರಿನ ಸಿಎಂ ಕಾವೇರಿ ನಿವಾಸದ ನವೀಕರಣಕ್ಕೆ ಕನ್ನಡಿಗರ ತೆರಿಗೆ ದುಡ್ಡಿನಲ್ಲಿ ಕೋಟಿ ಕೋಟಿ ಖರ್ಚು ಮಾಡಲಾಗುತ್ತಿದೆ. ಇನ್ನೊಂದೆಡೆ ಬಂಗಲೆ ಗೃಹ ಪ್ರವೇಶಕ್ಕೆ ರಸ್ತೇಲಿ ರೆಡ್ ಕಾರ್ಪೆಟ್ ಹಾಕಲು ತರಕಾರಿ ವ್ಯಾಪಾರಿಗಳನ್ನು ಓಡಿಸಲಾಗಿದೆ. ಇದೇ ಮಜಾವಾದಿಯ ಅಸಲಿ ಮುಖ ಎಂದು ಟೀಕೆ ಮಾಡಿದೆ.


ಆದರೆ, ಮಾಧ್ಯಮಗಳ ಮುಂದೆ ವ್ಯಾಪಾರಿಗಳು ತಮ್ಮ ಅಳಲು ತೋಡಿಕೊಂಡಿದ್ದಾರೆ. ಕಳೆದ 30 ವರ್ಷಗಳಿಂದಲೂ ನಾವು ಇಲ್ಲಿ ವ್ಯಾಪಾರ ಮಾಡಿಕೊಂಡು ಜೀವನ ನಡೆಸುತ್ತಿದ್ದವು. ಈಗ ಇದ್ದಕ್ಕಿದ್ದಂತೆ ನೋಟಿಸ್ ನೀಡಿರುವ ಪಾಲಿಕೆಯ ಅಧಿಕಾರಿಗಳು, ಇಲ್ಲಿ ವ್ಯಾಪಾರ ಮಾಡಬೇಡಿ, ಬೇರೆ ಬೀದಿಗೆ ಹೋಗಿ ಎನ್ನುತ್ತಿದ್ದಾರೆ.

## ಸಭಾಪತಿಯವರ ಮಾತೇ ಅಂತಿಮ ಎಂಬಂತಿತ್ತು; ಆದರೆ ಈಗ ಹಾಗಿಲ್ಲ!

### ▶▶ ಲಕ್ಷ್ಮೀಹೆಬ್ಬಾಳ್ಕರ್–ಸಿ.ಟಿ.ರವಿ ನಡುವಿನ ವಿವಾದದ ಸೌಹಾರ್ದ ಇತ್ಯರ್ಥಕ್ಕೆ ಯತ್ನ : ಬಸವರಾಜ ಹೊರಟ್ಟಿ

• ಉದಯವಾಹಿನಿ, ಬೆಂಗಳೂರು

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀಹೆಬ್ಬಾಳ್ಕರ್ ಹಾಗೂ ಬಿಜೆಪಿ ವಿಧಾನಪರಿಷತ್ ಸದಸ್ಯ ಸಿ.ಟಿ.ರವಿ ಅವರ ನಡುವಿನ ಪ್ರಕರಣವನ್ನು ಈ ಅಧಿವೇಶನದಲ್ಲಿ ಸೌಹಾರ್ದಯುತವಾಗಿ ಬಗೆಹರಿಸಲು ಪ್ರಯತ್ನಿಸಲಾಗುವುದು ಎಂದು ವಿಧಾನಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ತಿಳಿಸಿದ್ದಾರೆ. ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ವಿಧಾನಪರಿಷತ್ ಕಲಾಪ ನಡೆಯುವ ವೇಳೆ ಈ ಘಟನೆ ನಡೆದಿದ್ದರೆ ಅಸಂಸದೀಯ ಪದಬಳಕೆ ಎಂದು ಕಡತದಿಂದ ತೆಗೆದುಹಾಕುವ ಮೂಲಕ ಪ್ರಕರಣವನ್ನು ಅಲ್ಲಿಯೇ ಮುಕ್ತಾಯಗೊಳಿಸಬಹುದಿತ್ತು. ಅಧಿವೇಶನ ನಡೆಯದ ವೇಳೆ ಘಟನೆಯಾಗಿದೆ. ಅದು ಕೂಡ ವಿಧಾನಪರಿಷತ್‌ನ ಸಭಾಂಗಣದ ಒಳಗೆ ನಡೆದಿರುವುದರಿಂದ ವಿವಾದಗಳು ತಲೆ ಎತ್ತಿವೆ. ಪ್ರಕರಣವನ್ನು ನೈತಿಕ ಸಮಿತಿಗೆ ಒಪ್ಪಿಸಲಾಗಿದೆ. ಅಲ್ಲಿ ಇಬ್ಬರನ್ನೂ ಕರೆಸಿ ಪರಸ್ಪರ ಮಾತುಕತೆಯ ಮೂಲಕ ಒಳ್ಳೆಯ ರೀತಿಯಲ್ಲಿ ಬಗೆ ಹರಿಸಲು ಪ್ರಯತ್ನಿಸುತ್ತೇವೆ. ಒಂದು ವೇಳೆ ಅದು ಸಾಧ್ಯವಾಗದೇ ಇದ್ದರೆ ಪಿ.ಎಚ್.ಪೂಜಾರ್ ಅವರ ಅಧ್ಯಕ್ಷತೆಯ ನೈತಿಕ ಸಮಿತಿ ನೀಡುವ ವರದಿಯಂತೆ ಮುಂದಿನ ನಿರ್ಧಾರ ತೆಗೆದುಕೊಳ್ಳುತ್ತೇವೆ. ಒಂದು ತಿಂಗಳ ಒಳಗಾಗಿ ವರದಿ ನೀಡುವಂತೆಯೂ ಸೂಚಿಸಿದ್ದೇವೆ ಎಂದರು. ಇದೇ ವೇಳೆ ಉತ್ತರ ಪ್ರದೇಶದ ಘಟನೆಯೊಂದನ್ನು ಪ್ರಸ್ತಾಪಿಸಿದ ಹೊರಟ್ಟಿಯವರು 1965ರಲ್ಲಿ ಸದಸ್ಯರೊಬ್ಬರು ಸಭಾಪತಿಯವರ ವಿರುದ್ಧ ದಿಕ್ಕಿಗೆ ತಿರುಗಿ ನಮಸ್ಕಾರ ಹಾಕಿದ್ದರು. ಇದಕ್ಕಾಗಿ ಆ ಸದಸ್ಯರನ್ನು ಅಮಾನತುಗೊಳಿಸಿ 8 ದಿನ ಜೈಲು ಶಿಕ್ಷೆ ವಿಧಿಸಿ ಸಭಾಪತಿ ಆದೇಶ ನೀಡಿದ್ದರು. ಸದಸ್ಯ ನ್ಯಾಯಾಲಯಕ್ಕೆ ಹೋಗಿ ಆದೇಶಕ್ಕೆ ತಡೆಯಾಜ್ಞೆ ತಂದು ಮುಂದುವರೆದ ಸಭಾವತಿಯವರು ನ್ಯಾಯಾಧೀಶರ ಬಂಧನಕ್ಕೆ ಆದೇಶ ಹೊರಡಿಸಿದ್ದರು. ಕೊನೆಗೆ ನ್ಯಾಯಾಧೀಶರಿಗೆ ಹೆದರಿ ಸುಪ್ರೀಂಕೋರ್ಟ್‌ನ ನ್ಯಾಯಾಧೀಶರ ಮನೆಯಲ್ಲಿ ಅಡಗಿಕೊಂಡಿದ್ದರು. ಸುಪ್ರೀಂಕೋರ್ಟ್‌ನ ನ್ಯಾಯಾಧೀಶರ ಮನೆಯಲ್ಲಿದ್ದಾಗ ಯಾರನ್ನೂ ಬಂಧಿಸಲು ಸಾಧ್ಯವಿಲ್ಲ ಎಂಬ ಕಾರಣಕ್ಕೆ ಒಂದಷ್ಟು ವಿಳಂಬವಾಗಿತ್ತು. ಕೊನೆಗೆ ಅದು ರಾಷ್ಟ್ರಪತಿ ಅಂಗಳಕ್ಕೂ ಹೋಗಿತ್ತು. ಸಭಾಪತಿಯವರ ತೀರ್ಪೇ ಅಂತಿಮ ಎಂದು ನ್ಯಾಯಾಲಯ ಪುನರ್ ಆದೇಶ ಹೊರಡಿ






ಸಿದ್ದರಿಂದ ವಿವಾದಕ್ಕೊಳಗಾದ ಸದಸ್ಯ ಜೈಲುಶಿಕ್ಷೆ ಅನುಭವಿಸಲೇಬೇಕಾಯಿತು. ಆಗೆಲ್ಲಾ ಸಭಾಪತಿಯವರ ಮಾತೇ ಅಂತಿಮ ಎಂಬಂತಿತ್ತು. ಆದರೆ ಈಗ ಪರಿಸ್ಥಿತಿ ಹಾಗೆ ಇಲ್ಲ ಎಂದು ವಿಷಾದಿಸಿದರು. ನೈತಿಕ ಸಮಿತಿಗೆ ಸಿ.ಟಿ.ರವಿ ಈ ಮೊದಲು ಅಧ್ಯಕ್ಷರಿದ್ದರು. ಘಟನೆಯಾದ ತಕ್ಷಣವೇ ಅವರನ್ನು ಬದಲಾವಣೆ ಮಾಡಿ ಪಿ.ಎಚ್.ಪೂಜಾರ್ ಅವರನ್ನು ನೇಮಿಸಲಾಗಿದೆ ಎಂದು ಸ್ಪಷ್ಟಪಡಿಸಿದರು. ವಿಧಾನಪರಿಷತ್‌ಗೆ ಆಡಳಿತಾರೂಢ ಕಾಂಗ್ರೆಸ್ ಪಕ್ಷ 4 ಮಂದಿ ಸದಸ್ಯರನ್ನು ನೇಮಿಸಿದರೆ ಬಹುಮತ ಪಡೆದುಕೊಳ್ಳುತ್ತದೆ. ಒಂದು ವೇಳೆ ಆಗ ತಮ್ಮ ವಿರುದ್ಧ ಅವಿಶ್ವಾಸ ಸೂಚನೆ ನೀಡಿದರೆ ರಾಜೀನಾಮೆ ನೀಡಿ ಮನೆಗೆ ಹೋಗುತ್ತೇನೆ. ನನಗೆ ಯಾವುದೇ ಅಧಿಕಾರದ ವ್ಯಾಮೋಹ ಇಲ್ಲ. ಸಾಮಾನ್ಯ ಕುಟುಂಬದಿಂದ ಬಂದವನು. ಶಿಕ್ಷಕನಾಗಿದ್ದ ನಾನು ಸಚಿವನಾಗಿ, ಸಭಾವತಿಯಂತಹ ಉನ್ನತ ಹುದ್ದೆಯಲ್ಲಿದ್ದೇನೆ. ನನಗೆ ಈ ಬಗ್ಗೆ ತೃಪ್ತಿ ಇದೆ ಎಂದರು. ಈ ಮೊದಲು ವಿಧಾನಮಂಡಲದ ಕಾರ್ಯಕಲಾಪ ಪಟ್ಟಿಯ ಜೊತೆಯಲ್ಲೇ ವಿಧೇಯಕಗಳ ಅಜೆಂಡಾವೂ ಸೇರುತ್ತಿತ್ತು. ಅವುಗಳ ಅಧ್ಯಯನಕ್ಕೆ ಶಾಸಕರಿಗೆ ಸಾಕಷ್ಟು ಸಮಯ ಸಿಗುತ್ತಿತ್ತು. ಈಗ ತರಾತುರಿಯಲ್ಲಿ ಮಸೂದೆಗಳನ್ನು ಕಳುಹಿಸುತ್ತಿದ್ದಾರೆ. ಹೀಗಾಗಿ ಅಧ್ಯಯನಕ್ಕೆ ಅವಕಾಶವೇ ಸಿಗುತ್ತಿಲ್ಲ. ಮೊದಲು ವಿಧಾನಪರಿಷತ್, ವಿಧಾನಸಭೆಗಿಂತ ಒಂದು ದಿನ ತಡವಾಗಿ ಆರಂಭವಾಗುತ್ತಿದ್ದವು. ಒಂದು ದಿನ ತಡವಾಗಿ ಮುಗಿಯುತ್ತಿತ್ತು. ಆದರೆ ಈಗ ಕಾಲಮಾನವೂ ಬದಲಾಗಿದೆ ಎಂದರು.

ವಿಧೇಯಕಗಳನ್ನು ಮುಂಚಿತವಾಗಿ ಕಳುಹಿಸಬೇಕು. ಇಲ್ಲವಾದರೆ ಚರ್ಚೆಗೆ ತೆಗೆದುಕೊಳ್ಳುವುದಿಲ್ಲ ಎಂದು ಸ್ಪಷ್ಟವಾಗಿ ಸರ್ಕಾರಕ್ಕೆ ತಿಳಿಸಿದ್ದೇನೆ. ಅಧಿಕಾರಿಗಳು ಯಾರ ಮಾತು ಕೇಳುತ್ತಾರೋ, ಕೇಳುವುದಿಲ್ಲವೋ ಗೊತ್ತಾಗುತ್ತಿಲ್ಲ. ವಿಧಾನಸಭೆಯಲ್ಲಿ ಬೆಳಿಗ್ಗೆ ಪರಿಷತ್ತಿನಲ್ಲಿ ಸಂಜೆ ಚರ್ಚೆ ಎಂಬ ವಾತಾವರಣ ಇದೆ. ಇದು ಸರಿಯಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

> ವಿಧಾನಮಂಡಲದಲ್ಲಿ ಚರ್ಚೆಯ ಗುಣಮಟ್ಟ ಮೊದಲಿನಂತಿಲ್ಲ. ಈ ಮೊದಲು ಬಹುತೇಕ ಶಾಸಕರು ಶಾಸಕರ ಭವನದಲ್ಲೇ ಉಳಿಯುತ್ತಿದ್ದರು. ಅಧಿವೇಶನ ಮುಗಿದರೆ ಶಾಲಾ ಮಕ್ಕಳಂತೆ ಸಾಲುಗಟ್ಟಿ ಹೋಗುತ್ತಿದ್ದರು. ಈಗ ಎಲ್ಲಾರೂ ಬದಲಾಗಿದ್ದಾರೆ. ಒಂದೇ ದಿನ 22 ವಿಧೇಯಕಗಳನ್ನು ಅಂಗೀಕರಿಸಿದ ಉದಾಹರಣೆಗಳಿವೆ. ಶಾಸಕರು ಎಲ್ಲರನ್ನೂ ವಿಶ್ವಾಸಕ್ಕೆ ತೆಗೆದುಕೊಂಡು ಈ ಬಾರಿ ಉತ್ತಮವಾಗಿ ಅಧಿವೇಶನ ನಡೆಸುತ್ತೇವೆ. ಚರ್ಚೆಯ ಗುಣಮಟ್ಟವೂ ಉತ್ತಮವಾಗಿರುತ್ತದೆ
>
> – ಬಸವರಾಜ ಹೊರಟ್ಟಿ, ವಿಧಾನಪರಿಷತ್ ಸಭಾಪತಿ



## ಸಿದ್ಧಸೂಕ್ತಿ

**ಡಾ ಆರೂಢಭಾರತೀ ಸ್ವಾಮೀಜಿ**
ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ
ರಾಮೋಹಳ್ಳಿ

### ಚತುರ್ಥೇ ಮಾಸಿ ಕರ್ತವ್ಯಂ

ಶಿಶೋರ್ನಿಷ್ಕಮಣಂ ಗೃಹಾತ್.
ಷಷ್ಠೇನ್ನಪ್ರಾಶನಂ ಮಾಸಿ
ಯದ್ವೇಷ್ಟಂ ಮಂಗಲಂ ಕುಲೇ.

ಮನುಸ್ಮೃತಿಯ ಎರಡನೇ ಅಧ್ಯಾಯದ ಮೂವತ್ನಾಲ್ಕನೇ ಶ್ಲೋಕ. ಆರನೇ ಸಂಸ್ಕಾರ ನಿಷ್ಕಮಣ ಹಾಗೂ ಏಳನೇ ಸಂಸ್ಕಾರ ಅನ್ನಪ್ರಾಶನ ವಿಧಿಗಳ ವಿವರಣೆ. ಮಗುವಿಗೆ ನಾಲ್ಕು ತಿಂಗಳಾದ ಬಳಿಕ ಮಗುವನ್ನು ಮನೆಯಿಂದ ಆಚೆ ಕರೆದೊಯ್ದು ಸೂರ್ಯದರ್ಶನ ಮಾಡಿಸಬಹುದು. ಇದು ನಿಷ್ಕಮಣ. ಮಗುವಿಗೆ ಆರು ತಿಂಗಳಾದ ಬಳಿಕ ಮೃದುವಾದ ಆಹಾರವನ್ನು ಉಣಿಸಲು ಆರಂಭಿಸಬೇಕು. ಅಥವಾ ಸಂದರ್ಭಾನುಸಾರ ಸೂಕ್ತವಾದಂತೆ ಶುಭ ಸಂಪ್ರದಾಯದಂತೆ ಆಹಾರವನ್ನು ಉಣಿಸಬಹುದಾಗಿದೆ. ಇದು ಅನ್ನಪ್ರಾಶನ.

## ಮೇ ತಿಂಗಳಲ್ಲಿ ಬಿಬಿಎಂಪಿ ಚುನಾವಣೆ ನಡೆಯಲಿದೆ : ರಾಮಲಿಂಗಾರೆಡ್ಡಿ

• ಉದಯವಾಹಿನಿ,ಬೆಂಗಳೂರು

ಬಿಬಿಎಂಪಿ ಚುನಾವಣೆಯು ಮೇ ತಿಂಗಳಲ್ಲಿ ನಡೆಯಲಿದೆ ಎಂದು ಸಾರಿಗೆ ಸಚಿವ ರಾಮಲಿಂಗಾ ರೆಡ್ಡಿ ತಿಳಿಸಿದ್ದಾರೆ. ವಿಧಾನಸೌಧದಲ್ಲಿ ಬಿಬಿಎಂಪಿ ಚುನಾವಣೆ ಬಗ್ಗೆ ಪ್ರತಿಕ್ರಿಯಿಸಿದ ಅವರು, ಸ್ಪೀಕರ್‌ಗೆ ಗ್ರೇಟರ್ ಬೆಂಗಳೂರು ವರದಿಯನ್ನು ರಿಜ್ವಾನ್ ಅರ್ಷದ್ ಸಮಿತಿ ಕೊಟ್ಟಿದ್ದಾರೆ. ಬಿಲ್ ಬಗ್ಗೆ ಸದನದಲ್ಲಿ ಚರ್ಚೆ ಆಗಲಿದೆ. ಬಿಜೆಪಿ ಅವರಿಗೆ ಬೆಂಗಳೂರು ಅಭಿವೃದ್ಧಿ ಬೇಕಿಲ್ಲ. ವೋಟ್ ಮಾತ್ರ ಬೇಕು. ಹೀಗಾಗಿ ಗ್ರೇಟರ್ ಬೆಂಗಳೂರು ವಿಧೇಯಕ ವಿರೋಧ ಮಾಡುತ್ತಿದ್ದಾರೆ ಎಂದು ಕಿಡಿಕಾರಿದ್ದಾರೆ. ಮೇ ತಿಂಗಳಲ್ಲಿ 100% ಬಿಬಿಎಂಪಿ ಚುನಾವಣೆ ಆಗಲಿದೆ. ಗ್ರೇಟರ್ ಬೆಂಗಳೂರು ಆದರೆ ವಾರ್ಡ್ ಜಾಸ್ತಿ ಆಗಬಹುದು. 2-3 ಪಾಲಿಕೆ ಆಗಬಹುದು. ಈಗಿನ ಬೆಂಗಳೂರನ್ನ ಒಬ್ಬ ಮೇಯರ್, ಕಮಿಷನರ್ ಆಡಳಿತ ಮಾಡಲು ಸಾಧ್ಯವಿಲ್ಲ. ನನ್ನ ಪ್ರಕಾರ ಬೆಂಗಳೂರು ಅಭಿವೃದ್ಧಿ ಆಗಬೇಕಾದರೆ 2-3 ಪಾಲಿಕೆ ಆಗಬೇಕು ಎಂದು ಹೇಳಿದ್ದಾರೆ

## ಸರ್ಕಾರಿ ಇಲಾಖೆಗಳಿಂದಲೇ 8 ಸಾವಿರ ಕೋಟಿ ವಿದ್ಯುತ್ ಬಿಲ್ ಬಾಕಿ

• ಉದಯವಾಹಿನಿ,ಬೆಂಗಳೂರು

ಸರ್ಕಾರಿ ಇಲಾಖೆಗಳೇ ಕೋಟ್ಯಾಂತರ ರೂಪಾಯಿ ವಿದ್ಯುತ್ ಬಿಲ್ ಪಾವತಿ ಮಾಡದೆ ಇರುವ ಗಂಭೀರ ಆರೋಪ ಕೇಳಿಬಂದಿದ್ದು, ಸಾರ್ವಜನಿಕರಿಗೆ ಒಂದು ನ್ಯಾಯ, ಸರ್ಕಾರಿ ಇಲಾಖೆಗಳಿಗೆ ಮತ್ತೊಂದು ನ್ಯಾಯವೇ ಎಂದು ಪ್ರಶ್ನಿಸಲಾಗಿದೆ.

ಬಹುತೇಕ ಸರ್ಕಾರಿ ಇಲಾಖೆಗಳು ಕರೆಂಟ್ ಬಿಲ್ ಬಾಕಿ ಉಳಿಸಿಕೊಂಡಿವೆ. ಅದು ಬರೋಬ್ಬರಿ 8 ಸಾವಿರ ಕೋಟಿಯಷ್ಟು ವಿದ್ಯುಲ್ ಬಿಲ್ ಬಾಕಿ ಉಳಿಸಿಕೊಂಡಿವೆ.

ಇಂಧನ ಇಲಾಖೆಯೇ ಈ ಮಾಹಿತಿ ನೀಡಿದೆ. ಅದರಲ್ಲೂ, ಗ್ರಾಮೀಣಾಭಿವೃದ್ಧಿ ಪಂಚಾಯತ್ ರಾಜ್ ಇಲಾಖೆಯಿಂದ 4,106 ಕೋಟಿ ರೂ., ನಗರಾಭಿವೃದ್ಧಿ ಇಲಾಖೆ 2,313 ಕೋಟಿ ರೂ., ನೀರಾವರಿ ಇಲಾಖೆ 1,085 ಕೋಟಿ ರೂ., ವಾಣಿಜ್ಯ ಕೈಗಾರಿಕಾ ಇಲಾಖೆ 353 ಕೋಟಿ ರೂ. ಸಣ್ಣ ನೀರಾವರಿ ಇಲಾಖೆ 126 ಕೋಟಿ ರೂ., ಆರೋಗ್ಯ ಇಲಾಖೆ 33 ಕೋಟಿ ರೂ ಇತರೆ 30 ಸರ್ಕಾರಿ ಇಲಾಖೆಗಳು 90 ಕೋಟಿ ರೂ. ಸೇ ಒಟ್ಟು ಹಣ ಬಾಕಿ 8,169 ಕೋಟಿ ರೂಪಾಯಿಯಷ್ಟು ಇದೆ.

ಇನ್ನೂ ಸರ್ಕಾರಿ ಇಲಾಖೆಗಳಿಗೆ ಕರೆಂಟ್ ಬಿಲ್ ಕಟ್ಟುವಂತೆ ಇಂಧನ ಇಲಾಖೆ ಸೂಚಿಸಿದೆ. ಆದರೆ ಕೆಲ ಇಲಾಖೆಗಳು ದುಡ್ಡಿನ ಕೊರತೆ ನೆಪವೊಡ್ಡಿ ಕಟ್ಟಿಲ್ಲ. ಹೀಗಾಗಿ ಇಂಧನ ಇಲಾಖೆಗೆ 8 ಸಾವಿರ ಕೋಟಿಯಷ್ಟು ಬೊಕ್ಕಸಕ್ಕೆ ನಷ್ಟವಾಗಿದೆ. ಪ್ರತಿ ವರ್ಷವೂ ನಷ್ಟದ ನೆಪವೊಡ್ಡಿ ಜನರಿಗೆ ದರ ಏರಿಕೆಯ ಬಿಸಿಯನ್ನು ಇಲಾಖೆ ನೀಡುತ್ತೆ. ಆದರೆ ಬಿಲ್ ಪಾವತಿ ಮಾಡದ ಸರ್ಕಾರಿ ಇಲಾಖೆಗಳ ಬಳಿ ಮಾತ್ರ ಬಿಲ್ ಕಲೆಕ್ಟ್ ಮಾಡಲು ಮೀನಮೇಷ ಎಣಿಸುತ್ತಿದೆ.

## ಹೈದರ್ ಹತ್ಯೆ ಪ್ರಕರಣಕ್ಕೆ ಬಿಗ್ ಟ್ವಿಸ್ಟ್

• ಉದಯವಾಹಿನಿ,ಬೆಂಗಳೂರು

ಕಾಂಗ್ರೆಸ್ ಮುಖಂಡ ಹೈದರ್ ಅಲಿ ಕೊಲೆ ಪ್ರಕರಣದಲ್ಲಿ ರೋಚಕ ಟ್ವಿಸ್ಟ್ ಸಿಕ್ಕಿದೆ. ರಾಜಿಗೆ ಕರೆದು ವಿಶ್ವಾಸಗಳಿಸಿ ಒಬ್ಬಂಟಿಯಿದ್ದಾಗ ಅಟ್ಯಾಕ್ ಮಾಡಿ ಗ್ಯಾಂಗ್ ಕೊಲೆ ಮಾಡಿರುವುದು ಬೆಳಕಿಗೆ ಬಂದಿದೆ. ದುಷ್ಮನಿ ಬೇಡ ಎಂದು ಧರ್ಮಗ್ರಂಥದ ಮೇಲೆ ಪ್ರಮಾಣ ಮಾಡಿ, ಅಬ್ಬಾಸ್, ನಾಜ್ ಹಾಗೂ ಹೈದರ್ ಅಲಿಯನ್ನ ಕರೆಸಿ ಸಂಧಾನ ಮಾಡಲಾಗಿತ್ತು. ಆದಿನ ಎಲ್ಲರೂ ಒಂದೇ ತಟ್ಟೆಯಲ್ಲಿ ಊಟ ಕೂಡ ಮಾಡಿದ್ದರು. ಹೈದರ್ ಅಲಿ ಖುದ್ದು ಅಬ್ಬಾಸ್ ಬಾಯಿಗೆ ತುತ್ತು ತಿನ್ನಿಸಿದ್ದ. ಕಳೆದ ರಂಜಾನ್ ಹಬ್ಬದ ವೇಳೆ ಮೂವರಿಗೂ ರಾಜಿ ಸಂಧಾನ ಮಾಡಿಸಲಾಗಿತ್ತು. ಆದರೆ ಈ ವರ್ಷ ರಂಜಾನ್ ಬರುವುದರೊಳಗೆ ಹೈದರ್ ಅಲಿಯ ಉಸಿರನ್ನು ಗ್ಯಾಂಗ್ ನಿಲ್ಲಿಸಿದೆ.ವಿಚಾರಣೆ ವೇಳೆ ಸ್ಫೋಟಕ ರಹಸ್ಯ ಬಯಲು ಕಾಂಗ್ರೆಸ್ ಮುಖಂಡ ಹೈದರ್ ಅಲಿ ಮರ್ಡರ್ ಪ್ರಕರಣದ ಬಂಧಿತ ಆರೋಪಿಗಳ ವಿಚಾರಣೆ ವೇಳೆ ಸ್ಫೋಟಕ ಮಾಹಿತಿಗಳು ಹೊರಬರುತ್ತಿದೆ. ಶಿವಮೊಗ್ಗದಿಂದ ಗಡಿಪಾರು ಆಗಿದ್ದ ನಾಲ್ವರು ಆರೋಪಿಗಳನ್ನ ಕರೆಸಿ ಸುಪಾರಿ ಕೊಟ್ಟು ಕೊಲೆ ಮಾಡಿಸಿರೋ ಬಗ್ಗೆ ಒಂದಷ್ಟು ಪುರಾವೆಗಳು ಪೊಲೀಸರಿಗೆ ಸಿಕ್ಕಿದೆ ಎನ್ನಲಾಗಿದೆ. ಬಂಧಿತ 7 ಮಂದಿ ಆರೋಪಿಗಳಲ್ಲಿ ಮತೀನ್, ಸದ್ದಾಂ ಸೇರಿ ನಾಲ್ವರು ಆರೋಪಿಗಳು ಶಿವಮೊಗ್ಗದವರಾಗಿದ್ದು, ಆರೋಪಿಗಳ ವಿರುದ್ಧ ಶಿವಮೊಗ್ಗದ ಬೇರೆ ಬೇರೆ ಪೊಲೀಸ್ ಠಾಣೆಗಳಲ್ಲಿ ಪ್ರಕರಣಗಳು ದಾಖಲಾಗಿದೆ. ನಿರಂತರ ಅಪರಾಧ ಚಟುವಟಿಕೆಗಳಲ್ಲಿ ಭಾಗಿಯಾಗುತ್ತಿದ್ದ ಕಾರಣ ಆರೋಪಿಗಳನ್ನ ಶಿವಮೊಗ್ಗದಿಂದ ಗಡಿಪಾರು ಮಾಡಲಾಗಿತ್ತು.

## ವಿವಿಗಳಿಂದ ಲಾಭವಿಲ್ಲ ಎಂದಿದೆ ಕಾಂಗ್ರೆಸ್ ಸರ್ಕಾರ ..ಶಿಕ್ಷಣವೆಂದರೆ ವ್ಯಾಪಾರವಲ್ಲ

• ಉದಯವಾಹಿನಿ,ಬೆಂಗಳೂರು

ವಿಶ್ವವಿದ್ಯಾಲಯಗಳಿಂದ ಲಾಭ ಬರುತ್ತಿಲ್ಲ ಎಂಬ ಕಾರಣಕ್ಕೆ ಅವುಗಳನ್ನು ಮುಚ್ಚಲಾಗಿದೆ ಎಂದಿರುವ ಕಾಂಗ್ರೆಸ್ ಸರ್ಕಾರ ಭಿಕ್ಷೆ ಬೇಡುವ ಸ್ಥಿತಿಗೆ ಬಂದಿದೆ ಎಂದು ವಿಪಕ್ಷ ನಾಯಕ ಆರ್.ಅಶೋಕ್ ಆಕ್ರೋಶ ವ್ಯಕ್ತಪಡಿಸಿದರು. ಮಂಡ್ಯದಲ್ಲಿ ನಡೆದ ಪ್ರತಿಭಟನೆಯಲ್ಲಿ ಮಾತನಾಡಿದ ಅವರು, ಮಂಡ್ಯ ಜಿಲ್ಲೆ ಶಿಕ್ಷಣದಲ್ಲಿ ಹಿಂದುಳಿದಿದೆ. ಇದಕ್ಕಾಗಿ ಬಿಜೆಪಿ ಸರ್ಕಾರ ಹೊಸ 9 ವಿಶ್ವವಿದ್ಯಾಲಯಗಳನ್ನು ನೀಡಿತ್ತು. ಆದರೆ ಕಾಂಗ್ರೆಸ್ ಸರ್ಕಾರ ಅದನ್ನು ಕಿತ್ತುಕೊಂಡಿದೆ. ವಿವಿಗಳನ್ನು ಮುಚ್ಚಲು ರೂಪಿಸಿದ ವರದಿಯಲ್ಲಿ ವಿವಿಗಳು ಲಾಭದಾಯಕವಾಗಿಲ್ಲ ಎಂದು ಉಲ್ಲೇಖಿಸಲಾಗಿದೆ. ಶಿಕ್ಷಣ ಸಂಸ್ಥೆಗಳಿಂದಲೂ ಆದಾಯ ಬರಬೇಕು ಎಂಬುದು ಸರ್ಕಾರದ ಉದ್ದೇಶ ಏಕೆಂದರೆ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಡಿಸಿಎಂ ಡಿ.ಕೆ.ಶಿವಕುಮಾರ್ ಭಿಕ್ಷೆ ಬೇಡುತ್ತಿದ್ದಾರೆ. ಈ ಬಾರಿ 1 ಲಕ್ಷ ಕೋಟಿ ರೂ. ಸಾಲ ಮಾಡಲಾಗಿದೆ. ಹಿಂದಿನ ಎಲ್ಲಾ ಮುಖ್ಯಮಂತ್ರಿಗಳಿಗೆ ಹೋಲಿಸಿದರೆ ಸಿದ್ದರಾಮಯ್ಯ ಅವರೇ ಅತ್ಯಧಿಕ ಸಾಲ ಮಾಡಿದ್ದಾರೆ ಎಂದು ದೂರಿದರು.

**ಜಿಲ್ಲೆಗೆ ಒಂದು ವಿಶ್ವವಿದ್ಯಾಲಯವಿದ್ದರೆ ಆ ಜಿಲ್ಲೆ ಶಿಕ್ಷಣದಲ್ಲಿ ಸ್ವಾವಲಂಬಿಯಾಗುತ್ತದೆ:** ಶಿಕ್ಷಣ ಎಂದರೆ ವ್ಯಾಪಾರವಲ್ಲ, ಅದು ನಮ್ಮ ದೇಶದ ಆಸ್ತಿ. ಮುಚ್ಚಿರುವ ಬಾರ್‌ಗಳನ್ನು ತೆರೆದು, ವಿವಿಗಳನ್ನು ಮುಚ್ಚಲಾಗುತ್ತಿದೆ. ಎಲ್ಲಾ ವಿವಿಗಳನ್ನು ನಡೆಸಲು 252 ಕೋಟಿ ರೂ. ಇದ್ದರೆ ಸಾಕು. ಉಚಿತವಾಗಿ 2 ಸಾವಿರ ರೂ. ನೀಡಿ ವಿವಿಗಳನ್ನು ಮುಚ್ಚುತ್ತೇವೆ ಎಂದರೆ ಗ್ಯಾರಂಟಿಗೆ ಬೆಲೆ ಇರುವುದಿಲ್ಲ. ಬಿಜೆಪಿ ಸರ್ಕಾರ ವಿಶ್ವವಿದ್ಯಾಲಯಗಳನ್ನು ರೂಪಿಸಿದಾಗ ಹೊಸ ಹುದ್ದೆಗಳನ್ನು ಸೃಷ್ಟಿ ಮಾಡಿರಲಿಲ್ಲ. ಇರುವ ಸಿಬ್ಬಂದಿಯನ್ನೇ ನೇಮಕ ಮಾಡಲಾಗಿತ್ತು. ವಿಶ್ವವಿದ್ಯಾಲಯ ಮುಚ್ಚುವುದರಿಂದ ಲಾಭವಾಗುತ್ತದೆಯೋ ನಷ್ಟವಾಗುತ್ತದೆಯೋ ಎಂಬುದು ಬೇಕಿಲ್ಲ.

# ಕೇಂದ್ರದ ವಿರುದ್ಧದ ಹೋರಾಟಕ್ಕೆ ಸಿಎಂ ನಾಯಕತ್ವ

### ದಕ್ಷಿಣದ ರಾಜ್ಯಗಳಲ್ಲಿ ಗೊಂದಲ ಹುಟ್ಟಿಸುವ ದುರುದ್ದೇಶದಿಂದ ಕೂಡಿದೆ ಎಂದು ಸಿದ್ದರಾಮಯ್ಯ ಆರೋಪ

• ಉದಯವಾಹಿನಿ,ಬೆಂಗಳೂರು

ಕ್ಷೇತ್ರ ಪುನರ್ ವಿಂಗಡನೆ ನಿರ್ಧಾರದ ವಿರುದ್ಧ ದಕ್ಷಿಣ ರಾಜ್ಯಗಳು ತೀವ್ರ ಅಪಸ್ವರ ಎತ್ತಿದ್ದು ಕೇಂದ್ರ ಸರ್ಕಾರದ ವಿರುದ್ಧ ಹೋರಾಟಕ್ಕೆ ವೇದಿಕೆ ಸಿದ್ದಗೊಳ್ಳುತ್ತಿದೆ. ಕೇಂದ್ರದ ನಡೆಯ ವಿರುದ್ಧ ಆರಂಭದಲ್ಲೇ ಸಿಎಂ ಸಿದ್ದರಾಮಯ್ಯ ಅವರು ಧ್ವನಿ ಎತ್ತಿದ್ದು, ಇದೀಗ ತಮಿಳುನಾಡು ಸಿಎಂ ಎಂಕೆ ಸ್ಟಾಲಿನ್ ಕೂಡಾ ಒಗ್ಗಟ್ಟಿನ ಹೋರಾಟದ ಎಚ್ಚರಿಕೆ ನೀಡಿದ್ದಾರೆ. ಈ ಹಿನ್ನೆಲೆಯಲ್ಲಿ ಕ್ಷೇತ್ರ ಪುನರ್ ವಿಂಗಡನೆ ವಿರುದ್ಧ ದಕ್ಷಿಣ ರಾಜ್ಯಗಳ ಹೋರಾಟಕ್ಕೆ ಹಿರಿಯ ರಾಜಕಾರಣಿ ಸಿದ್ದರಾಮಯ್ಯ ನಾಯಕತ್ವ ನೀಡುತ್ತಾರಾ ಎಂಬ ಕುತೂಹಲ ಕೆರಳಿಸಿದೆ.


ಲೋಕಸಭೆ ಕ್ಷೇತ್ರಗಳು ಪುನರ್ ವಿಂಗಡನೆಯಲ್ಲಿ ದಕ್ಷಿಣದ ರಾಜ್ಯಗಳಿಗೆ ಅನ್ಯಾಯ ಆಗಲಿದೆ ಎಂಬುವುದು ಈ ರಾಜ್ಯಗಳ ಆತಂಕವಾಗಿದೆ. ಒಟ್ಟು 130 ಲೋಕಸಭೆ ಕ್ಷೇತ್ರಗಳನ್ನು ಹೊಂದಿರುವ ದಕ್ಷಿಣದ ರಾಜ್ಯಗಳು 1971 ರ ಜನಗಣತಿ ಆಧಾರದ ಮೇಲೆ ನಿಗದಿಪಡಿಸಲಾದ ರಾಜ್ಯಗಳಲ್ಲಿನ ಲೋಕಸಭೆ ಮತ್ತು ವಿಧಾನಸಭೆ ಕ್ಷೇತ್ರಗಳ ಪ್ರಸ್ತುತ ಅನುಪಾತವನ್ನು ಮುಂದುವರಿಸಬೇಕು ಎಂಬುವುದು ದಕ್ಷಿಣ ರಾಜ್ಯಗಳ ಬೇಡಿಕೆಯಾಗಿದೆ. ಅಷ್ಟೇ ಅಲ್ಲದೆ ಉತ್ತರ ಪ್ರದೇಶ ಮತ್ತು ಬಿಹಾರದಂತಹ ರಾಜ್ಯಗಳು ಜನಸಂಖ್ಯಾ ನಿಯಂತ್ರಣ ಕ್ರಮಗಳನ್ನು ಗಂಭೀರವಾಗಿ ಅನುಷ್ಠಾನಗೊಳಿಸುವ ವರೆಗೂ ಕ್ಷೇತ್ರ ಪುನರ್ ವಿಂಗಡನೆ ಪ್ರಕ್ರಿಯೆ ಮುಂದೂಡಬೇಕು ಎಂಬುವುದು ದಕ್ಷಿಣದ ಬೇಡಿಕೆಯಾಗಿದೆ.

**ಸಚಿವ ಅಮಿತ್ ಶಾ ಅವರ ಹೇಳಿಕೆ**

**ಅನ್ಯಾಯವಾಗಲು ಬಿಡ್ಡಲ್ಲ ಎಂದ ಶಾ**

**ಇನ್ನು ಕ್ಷೇತ್ರ ಪುನರ್ ವಿಂಗಡನೆಯಿಂದ ದಕ್ಷಿಣದ ರಾಜ್ಯಗಳಿಗೆ ಅನ್ಯಾಯ ಆಗಲು ಬಿಡುವುದಿಲ್ಲ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಭರವಸೆ ನೀಡಿದ್ದಾರೆ. ಕೇಂದ್ರ ಸರ್ಕಾರ ನ್ಯಾಯಯುತ ಮತ್ತು ಪಾರದರ್ಶಕ ವಿಧಾನವನ್ನು ಅಳವಡಿಸಿಕೊಳ್ಳಲಿದೆ ಎಂದು ಅವರು ತಿಳಿಸಿದ್ದಾರೆ.**

**ಆರಂಭದಲ್ಲೇ ಧ್ವನಿ ಎತ್ತಿದ ಸಿದ್ದರಾಮಯ್ಯ:** ಕ್ಷೇತ್ರ ಮರು ವಿಂಗಡಣೆ ನಡೆದಾಗ ದಕ್ಷಿಣದ ರಾಜ್ಯಗಳಿಗೆ ಅನ್ಯಾಯವಾಗಲು ಬಿಡುವುದಿಲ್ಲ ಎನ್ನುವ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರ ಹೇಳಿಕೆ ನಂಬಿಕೆಗೆ ಅರ್ಹವಾಗಿಲ್ಲ, ಇದು ದಕ್ಷಿಣದ ರಾಜ್ಯಗಳಲ್ಲಿ ಗೊಂದಲ ಹುಟ್ಟಿಸುವ ದುರುದ್ದೇಶದಿಂದ ಕೂಡಿದೆ ಎಂದು ಸಿದ್ದರಾಮಯ್ಯ ಆರೋಪ ಮಾಡಿದ್ದಾರೆ. ಕೇಂದ್ರ ಗೃಹ ಸಚಿವರ ಬೀಸು ಹೇಳಿಕೆಯನ್ನು ನೋಡಿದರೆ ಅವರಿಗೆ ಒಂದೋ ಮಾಹಿತಿಯ ಕೊರತೆ ಇದೆ, ಇಲ್ಲವಾದರೆ ಕರ್ನಾಟಕವೂ ಸೇರಿದಂತೆ ದಕ್ಷಿಣದ ರಾಜ್ಯಗಳಾದ ತೆಲಂಗಾಣ, ತಮಿಳುನಾಡು, ಕೇರಳ ಮತ್ತು ಆಂಧ್ರಪ್ರದೇಶಗಳಿಗೆ ಅನ್ಯಾಯ ಮಾಡುವ ದುರುದ್ದೇಶ ಇದೆ ಎಂದು ಅರ್ಥಮಾಡಿಕೊಳ್ಳಬಹುದು ಎಂದು ಆರೋಪಿಸಿದ್ದಾರೆ. ದಕ್ಷಿಣದ ರಾಜ್ಯಗಳಿಗೆ ಅನ್ಯಾಯ ಮಾಡಬಾರದೆಂಬ ಸದುದ್ದೇಶ ಕೇಂದ್ರ ಸರ್ಕಾರ ಹೊಂದಿರುವುದಾಗಿ ದ್ದರೆ ಕ್ಷೇತ್ರ ಮರುವಿಂಗಡಣೆಯನ್ನು ಜನಸಂಖ್ಯೆಯ ಅನುಪಾತದ ಆಧಾರದಲ್ಲಿ ಮಾಡ ಲಾಗುವುದೋ ಇಲ್ಲವೇ ಲೋಕಸಭಾ ಸದಸ್ಯರ ಈಗಿನ ಸಂಖ್ಯೆಯ ಅನುಪಾತದಲ್ಲಿ ಮಾಡಲಾಗುವುದೋ ಎಂಬ ಮುಖ್ಯ ಪ್ರಶ್ನೆಗೆ ಗೃಹ ಸಚಿವರು ಉತ್ತರಿಸಬೇಕಾಗುತ್ತದೆ ಎಂದು ಸವಾಲು ಹಾಕಿದ್ದಾರೆ.



**ಒಗ್ಗಟ್ಟಾಗುತ್ತಾ ದಕ್ಷಿಣ:** ದಕ್ಷಿಣದ ರಾಜ್ಯಗಳಿಗೆ ತೆರಿಗೆ ಅನ್ಯಾಯ ಆಗುತ್ತಿದೆ ಎಂಬ ಕೂಗು ಒಂದು ಕಡೆಯಲ್ಲಿ ಕೇಳಿ ಬರುತ್ತಿದೆ. ಈ ನಡುವೆ ಕ್ಷೇತ್ರ ಮರು ವಿಂಗಡನೆಯೂ ದಕ್ಷಿಣದ ಆತಂಕಕ್ಕೆ ಕಾರಣವಾಗಿದೆ. ಈ ನಿಟ್ಟಿನಲ್ಲಿ ದಕ್ಷಿಣದ ರಾಜ್ಯಗಳು ಒಗ್ಗಟ್ಟಾಗಿ ಇದರ ವಿರುದ್ಧ ಹೋರಾಟ ನಡೆಸಬೇಕು ಎಂದು ಸ್ವತಃ ಸಿಎಂ ಸಿದ್ದರಾಮಯ್ಯ ಕರೆ ನೀಡಿದ್ದಾರೆ. ಇದೇ ವಿಚಾರವಾಗಿ ತಮಿಳುನಾಡು ಸಿಎಂ ಎಂಕೆ ಸ್ಟಾಲಿನ್ ಕೂಡಾ ಪ್ರತಿಕ್ರಿಯೆ ನೀಡಿದ್ದು, ತಮಿಳಲು ತಮ್ಮ ಹಕ್ಕು ಗಳಿಗಾಗಿ ಹೋರಾಟ ನಡೆಸಬೇಕು ಎಂಬ ಕರೆಯನ್ನು ನೀಡಿದ್ದಾರೆ.

**ದಕ್ಷಿಣದ ಆತಂಕ ಏನು**

**ಕ್ಷೇತ್ರ ಮರುವಿಂಗಡಣೆ ನಡೆದರೆ ಕರ್ನಾಟಕದ ಲೋಕಸಭಾ ಕ್ಷೇತ್ರಗಳ ಸಂಖ್ಯೆ 28ರಿಂದ 26ಕ್ಕೆ ಇಳಿಯುವ ಸಾಧ್ಯತೆ ಇದೆ. ಇದೇ ರೀತಿ ಆಂಧ್ರಪ್ರದೇಶದ ಲೋಕಸಭಾ ಕ್ಷೇತ್ರಗಳ ಸಂಖ್ಯೆ 42ರಿಂದ 34, ಕೇರಳದ ಸಂಖ್ಯೆ 20ರಿಂದ 12ಕ್ಕೆ, ತಮಿಳುನಾಡಿನ ಸಂಖ್ಯೆ 39ರಿಂದ 31ಕ್ಕೆ ಇಳಿಯಲಿದೆ. ಇದೇ ವೇಳೆ ಉತ್ತರಪ್ರದೇಶದ ಲೋಕಸಭಾ ಕ್ಷೇತ್ರಗಳ ಸಂಖ್ಯೆ 80ರಿಂದ 91, ಬಿಹಾರದ ಸಂಖ್ಯೆ 40ರಿಂದ 50, ಮಧ್ಯಪ್ರದೇಶದ ಸಂಖ್ಯೆ 29ರಿಂದ 33ಕ್ಕೆ ಏರಿಕೆಯಾಗಲಿದೆ. ಈ ಮೂಲಕ ದಕ್ಷಿಣದ ರಾಜ್ಯಗಳಿಗೆ ಅನ್ಯಾಯ ಆಗಲಿದೆ ಎಂಬುವುದು ಆತಂಕವಾಗಿದೆ.**

**ಸಿದ್ದು ನಾಯಕತ್ವ:** ದಕ್ಷಿಣ ಭಾರತದ ರಾಜಕಾರಣಿಗಳು ಪೈಕಿ ಸಿದ್ದರಾಮಯ್ಯ ಪ್ರಭಾವಿಯಾಗಿದ್ದಾರೆ.

ಕೇಂದ್ರ ಸರ್ಕಾರದ ವಿರುದ್ಧ ಗಟ್ಟಿ ಧ್ವನಿಯಲ್ಲೇ ಅವರು ಮಾತನಾಡುತ್ತಾ ಬಂದಿದ್ದಾರೆ.

ಹೀಗಾಗಿ ಇದೀಗ ಕ್ಷೇತ್ರ ವಿಂಗಡನೆ ವಿಚಾರವಾಗಿ ಸಿದ್ದರಾಮಯ್ಯ ಅವರೇ ದಕ್ಷಿಣದ ಒಗ್ಗಟ್ಟಿನ ಹೋರಾಟಕ್ಕೆ ಕರೆ ನೀಡಿದ್ದಾರೆ. ಹೀಗಾಗಿ ಎಲ್ಲರ ಜೊತೆಗೆ ಸಮನ್ವಯ ಸಾಧಿಸಿ ಹೋರಾಟಕ್ಕೆ ನಾಯಕತ್ವ ನೀಡುತ್ತಾರಾ ಎಂಬ ಕುತೂಹಲವೂ ಕೆರಳಿಸಿದೆ.

## ಕರ್ನಾಟಕ ಬಂದ್ ಬೆಂಬಲಕ್ಕೆ ಆಗ್ರಹಿಸಿ ವಾಟಾಳ್ ಪ್ರತಿಭಟನೆ

• ಉದಯವಾಹಿನಿ,ಬೆಂಗಳೂರು

ಮರಾಠಿಗರ ಪುಂಡಾಟ, ಅಟ್ಟಹಾಸ ನಿಲ್ಲಬೇಕು. ಕನ್ನಡಿಗರ ಮೇಲಿನ ದೌರ್ಜನ್ಯಕ್ಕೆ ಕಡಿವಾಣ ಹಾಕಬೇಕು. ಎಂಇಎಸ್ ನಿಷೇಧ ಮಾಡುವುದು ಸೇರಿದಂತೆ ಹಲವು ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿ ಅಖಂಡ ಕರ್ನಾಟಕ ಬಂದ್‌ಗೆ ಕರೆ ಕೊಟ್ಟಿರುವ ಕನ್ನಡ ಒಕ್ಕೂಟದ ಅಧ್ಯಕ್ಷ ವಾಟಾಳ್ ನಾಗರಾಜ್ ನೇತೃತ್ವದಲ್ಲಿ ರಾಮನಗರದ ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣದಲ್ಲಿ ಪ್ರತಿಭಟನೆ ನಡೆಸಿ ಬಂದ್‌ಗೆ ಬೆಂಬಲ ನೀಡುವಂತೆ ಮನವಿ ಮಾಡಿದರು.

ಕಳಸಾ ಬಂಡೂರಿ ಮಹದಾಯಿ ಯೋಜನೆ ಕಾರ್ಯಗತವಾಗಬೇಕು. ಮೇಕೆದಾಟು ಯೋಜನೆ ಅನುಷ್ಠಾನ ಮಾಡಬೇಕು. ಕಲ್ಯಾಣ ಕರ್ನಾಟಕ ಅಭಿವೃದ್ಧಿ ಮಾಡಬೇಕೆಂದು ವಾಟಾಳ್ ನಾಗರಾಜ್ ಈ ಸಂದರ್ಭದಲ್ಲಿ ಒತ್ತಾಯಿಸಿದರು.

ಅದಕ್ಕೂ ಮುನ್ನ ಹೊಸೂರು ಗಡಿ ಬಂದ್,



ಬೆಳಗಾವಿ ಚಲೋ ಮುಂತಾದ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಜಾಗೃತಿ ಮೂಡಿಸಲಾಗುವುದು ಎಂದು ಅವರು ಹೇಳಿದರು. ಡಾ.ರಾಜ್‌ಕುಮಾರ್ ಅಭಿಮಾನಿಗಳ ಸಂಘದ ಅಧ್ಯಕ್ಷ ಸಾ.ರಾ.ಗೋವಿಂದು, ಕನ್ನಡ ಸೇನೆಯ ಕೆ.ಆರ್.ಕುಮಾರ್, ಕರವೇ ಮುಖಂಡರಾದ ಶಿವರಾಮೇಗೌಡ, ಪ್ರವೀಣ್ ಕುಮಾರ್‌ಶೆಟ್ಟಿ, ಕನ್ನಡ ಜಾಗೃತಿ ವೇದಿಕೆ ರಾಜ್ಯಾಧ್ಯಕ್ಷ ಮಂಜುನಾಥ್ ದೇವ್, ಎಚ್.ವಿ.ಗಿರೀಶ್ ಗೌಡ ಮತ್ತಿತರರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

**ನಿರ್ವಾಹಕನ ಮೇಲೆ ಮರಾಠಿಗರು ದಾಳಿ ನಡೆಸಿದ ಕ್ರಮವನ್ನು ಖಂಡಿಸಿದ ವಾಟಾಳ್ ನಾಗರಾಜ್‌ರವರು ಹಲ್ಲೆ ಮಾಡಿದ ದುರುಳರನ್ನು ಬಂಧಿಸಿ ಗಡೀಪಾರು ಮಾಡಬೇಕೆಂದು ಒತ್ತಾಯಿಸಿದರು. ಈ ಎಲ್ಲಾ ಸಮಗ್ರ ಬೇಡಿಕೆಗಳನ್ನು ಮುಂದಿಟ್ಟುಕೊಂಡು ಇದೇ 22ರಂದು ಕರ್ನಾಟಕ ಬಂದ್‌ಗೆ ಕರೆ ಕೊಟ್ಟಿದ್ದೇವೆ. ಎಲ್ಲಾ ಕನ್ನಡಪರ ಸಂಘಟನೆಗಳು, ರೈತ ಸಂಘಟನೆಗಳು, ನಾಗರಿಕ ಸಂಘಟನೆಗಳು ಬೆಂಬಲ ನೀಡಬೇಕು ಎಂದು ಮನವಿ ಮಾಡಿದರು.**

## ಡಿಸಿಎಂ ಭೇಟಿ ಮಾಡಿದ ಉದ್ಯಮಿ ಮೋಹನ್‌ದಾಸ್ ಪೈ

• ಉದಯವಾಹಿನಿ,ಬೆಂಗಳೂರು

ರಾಜ್ಯಸರ್ಕಾರದ ಅದರಲ್ಲೂ ಬೆಂಗಳೂರಿನಲ್ಲಿ ಮೂಲಭೂತ ಸೌಕರ್ಯಗಳ ಬಗ್ಗೆ ಬಹಿರಂಗ ಅಸಮಾಧಾನ ವ್ಯಕ್ತಪಡಿಸಿ ವಿವಾದ ಸೃಷ್ಟಿಸಿದ್ದ ಉದ್ಯಮಿ ಮೋಹನ್ ದಾಸ್ ಪೈ ಇಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರನ್ನು ಭೇಟಿ ಮಾಡಿದ್ದಾರೆ.

ಇತ್ತೀಚೆಗೆ ಮೋಹನ್‌ದಾಸ್ ಪೈ ಅವರ ಸಾಮಾಜಿಕ ಜಾಲತಾಣಗಳ ಸಂದೇಶಗಳು ಸಾಕಷ್ಟು ವಿವಾದ ಸೃಷ್ಟಿಸಿದ್ದವು. ಇದಕ್ಕೆ ಕಾಂಗ್ರೆಸ್‌ನಿಂದ ಸಚಿವರಾದ ಎಂ.ಬಿ.ಪಾಟೀಲ್, ಖುದ್ದು ಡಿ.ಕೆ.ಶಿವಕುಮಾರ್ ಕೂಡ ಅಸಮಾಧಾನ ಹೊರಹಾಕಿದ್ದರು.

ರಾಜ್ಯದಲ್ಲಿ ಐಟಿಬಿಟಿ ಬೆಳೆಯಲು ಉದ್ಯಮಿಗಳ ಪಾತ್ರ ಮಹತ್ವದ್ದಾಗಿದೆ. ಹಾಗೆಯೇ ಸರ್ಕಾರದ ಬೆಂಬಲವೂ ಕೂಡ ಗಮನಾರ್ಹ. ಮೋಹನ್ ದಾಸ್ ಪೈ ಬಿಜೆಪಿಯಿಂದ ರಾಜ್ಯಸಭಾ ಸದಸ್ಯರಾಗಲು ಲಾಬಿ ನಡೆಸುತ್ತಿದ್ದು, ಹೈಕಮಾಂಡ್ ಅನ್ನು ಮೆಚ್ಚಿಸಲು ಕಾಂಗ್ರೆಸ್ ಸರ್ಕಾರವನ್ನು ಟೀಕಿಸುತ್ತಿದ್ದಾರೆ



☛ ಉದಯವಾಹಿನಿ ಚಿತ್ರ

ಎಂದು ಸಚಿವರುಗಳು ತಿರುಗೇಟು ನೀಡಿದರು.

ಮೂಲಭೂತ ಸೌಕರ್ಯಗಳ ಕೊರತೆಯಿದ್ದರೆ ತಮ್ಮ ಗಮನಕ್ಕೆ ತರಬಹುದು, ಪರಿಸ್ಥಿತಿ ಸುಧಾರಿಸಲು ನಾವು ಕ್ರಮ ಕೈಗೊಳ್ಳುತ್ತೇವೆ. ಅದರ ಬದಲು ರಾಜಕೀಯದ ಕಾರಣಕ್ಕೆ ಟೀಕೆ ಮಾಡಿ ವಿವಾದ ಸೃಷ್ಟಿಸುವುದು ಸರಿಯಲ್ಲ ಎಂದು ಸಚಿವರು ಆಕ್ಷೇಪ ವ್ಯಕ್ತಪಡಿಸಿದರು. ಕೊನೆಗೆ ಇಂದು ಮೋಹನ್ ದಾಸ್ ಪೈ ಅವರು ಡಿ.ಕೆ.ಶಿವಕುಮಾರ್ ಅವರನ್ನು ಭೇಟಿ ಮಾಡುವ ಮೂಲಕ ತೀವ್ರ ಕುತೂಹಲ ಕೆರಳಿಸಿದ್ದಾರೆ. ಇನ್ನು ಮುಂದೆ ಮೋಹನ್‌ದಾಸ್ ಅವರ ಟೀಕೆಗಳು ನಿಲ್ಲಲಿವೆಯೇ ಎಂಬ ಕುತೂಹಲ ಕೆರಳಿದೆ.

## ನಮ್ಮ ತೆರಿಗೆ ಹಣವನ್ನ ಉತ್ತರ ಭಾರತಕ್ಕೆ ಕೊಡ್ತಿದ್ದಾರೆ: ಸತೀಶ್ ಜಾರಕಿಹೊಳಿ

• ಉದಯವಾಹಿನಿ,ಬೆಂಗಳೂರು

ಪ್ರತಿ ಬಾರಿ ತೆರಿಗೆ ಹಣ ಕಡಿತ ಮಾಡುತ್ತಿದ್ದಾರೆ. ನಮ್ಮ ಹಣವನ್ನ ಉತ್ತರ ಭಾರತಕ್ಕೆ ನೀಡುತ್ತಿದ್ದಾರೆ ಎಂದು ಸಚಿವ ಸತೀಶ್ ಜಾರಕಿಹೊಳಿ ಕೇಂದ್ರ ಸರ್ಕಾರದ ವಿರುದ್ಧ ಕಿಡಿ ಕಾಡಿದ್ದಾರೆ. ತೆರಿಗೆ ಕಡಿತ ವಿಚಾರವಾಗಿ ನಗರದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ನಮ್ಮ ಹಣ ಉತ್ತರ ಭಾರತಕ್ಕೆ ನೀಡುತ್ತಿದ್ದಾರೆ.



**ಕೇಂದ್ರ ಸರ್ಕಾರದ ವಿರುದ್ಧ ಕಿಡಿ**

ಪ್ರತಿ ಬಾರಿ ರಾಜ್ಯಕ್ಕೆ ತೆರಿಗೆ ಕಡಿತ ಮಾಡುತ್ತಿದ್ದಾರೆ. ಇದರ ವಿರುದ್ಧ ಹೋರಾಟ ಮಾಡಬೇಕು ಎಂದು ಹೇಳಿದ್ದಾರೆ. ಡಿಕೆಶಿ ಸಾಫ್ಟ್ ಹಿಂದೂತ್ವ ವಿಚಾರ ಕುರಿತು ಪ್ರತಿಕ್ರಿಯಿಸಿ, ಡಿಕೆ ಶಿವಕುಮಾರ್ ಈ ಹಿಂದಿನಿಂದಲೂ ದೇವಸ್ಥಾನಗಳಿಗೆ ಹೋಗುತ್ತಿದ್ದಾರೆ. ಅದರಲ್ಲೇನೂ ಹೊಸದಿಲ್ಲ. ಇನ್ನೂ ಸದ್ಗುರು ಬಗ್ಗೆ ರಾಹುಲ್ ಗಾಂಧಿ ಅವರು ಮಾತನಾಡಿರುವುದು ನನಗೆ ಗೊತ್ತಿಲ್ಲ. ಹಾಗೇನಾದ್ರೂ ಮಾತನಾಡಿದ್ದರೆ, ಹೈಕಮಾಂಡ್ ಗಮನಿಸುತ್ತೆ ಎಂದು ಹೇಳಿದ್ದಾರೆ. ನಮ್ಮ ಮೇಲೆ ಆರೋಪ ಮಾಡಬಹುದು, ಆದ್ರೆ ಇದು ಪೊಲೀಸ್ ಅಧಿಕಾರಿ ಮಾಡಿದ ತಪ್ಪು. ನಮ್ಮ ಜವಾಬ್ದಾರಿ ಅಲ್ಲ ಅದು ಪೊಲೀಸ್ ಜವಾಬ್ದಾರಿ. ನಾವು ಮಾಡಿದ ತಪ್ಪಿಲ್ಲ, ಕಂಡಕ್ಟರ್ ಮೇಲೆ ಹಾಕಿದ ಕೇಸ್‌ಗೆ ಇಷ್ಟು ದೊಡ್ಡದಾಗಿದೆ. ಈಗಾಗಲೇ ಪೊಲೀಸ್ ಅಧಿಕಾರಿ ವರ್ಗಾವಣೆ ಆಗಿದೆ. ಪೊಲೀಸ್ ನಮ್ಮ ಅಡಿಯಲ್ಲಿ ಕೆಲಸ ಮಾಡಬೇಕು ಅಂದಿಲ್ಲ, ಅಡಿಷನಲ್ ಕೇಸ್ ಹಾಕಿದ್ದು ತಪ್ಪು. ಮೇಲಿನ ಅಧಿಕಾರಿಗಳ ಮಾತು ಕೇಳಬೇಕಿತ್ತು. ಸದ್ಯ ಶಾಂತವಾಗಿದೆ, ಮತ್ತೆ ಕದಡಿಸುವುದು ಬೇಡ.

**ಇದೇ ವೇಳೆ ಮಾರ್ಚ್ 22ರಂದು ಕರ್ನಾಟಕ ಬಂದ್ ವಿಚಾರ ಕುರಿತು ಮಾತನಾಡಿ, ಮುಖ್ಯಮಂತ್ರಿಗಳು ಶಾಂತಿಯುವಾಗಿ ಪರಿಹರಿಸಲು ಕೆಲಸ ಮಾಡುತ್ತಿದ್ದಾರೆ. ಬೆಂಗಳೂರು ಮಟ್ಟದಲ್ಲಿ ಕೂಡ ಮಾತುಕತೆ ನಡೆಯುತ್ತಿದೆ, ಎಲ್ಲವೂ ಸರಿ ಹೋಗಲಿದೆ ಎಂದಿದ್ದಾರೆ.**

ಬಂದ್ ಮಾಡಿದ್ರೆ ಬೆಳಗಾವಿ ನಗರಕ್ಕೆ ತೊಂದರೆ ಆಗುತ್ತೆ ಎಂದು ಸಚಿವರು ಹೇಳಿದ್ದಾರೆ.

ಇನ್ನೂ ಕೇಂದ್ರ ಸರ್ಕಾರ ಕ್ಷೇತ್ರಗಳ ಪುನರ್‌ವಿಂಗಡಣೆ ಕುರಿತು ಮಾತನಾಡಿ, ಕ್ಷೇತ್ರ ಪುನರ್‌ವಿಂಗಡಣೆಯಿಂದ ದಕ್ಷಿಣ ಭಾರತದಲ್ಲಿ ಕ್ಷೇತ್ರ ಕಡಿಮೆಯಾಗಲಿವೆ. ಅದರ ಬಗ್ಗೆ ಪ್ರತಿಭಟನೆ ಮಾಡಬೇಕಿದೆ. ನಮಗೆ ಕ್ಷೇತ್ರಗಳು ಹೆಚ್ಚಾಗಬೇಕು ಎಂದು ಆಗ್ರಹಿಸಿದ್ದಾರೆ.

## ಬಜೆಟ್ ಅಧಿವೇಶನನದ ಹಿನ್ನೆಲೆಯಲ್ಲಿ ವಿಧಾನ ಸೌಧ ಸುತ್ತ ನಿಷೇಧಾಜ್ಞೆ

• ಉದಯವಾಹಿನಿ,ಬೆಂಗಳೂರು

ವಿಧಾನಸೌಧದದಲ್ಲಿ ಜಂಟಿ ಮತ್ತು ಆಯವ್ಯಯ ಅಧಿವೇಶನಗಳು ಮಾ.3 ರಿಂದ 21 ವರೆಗೆ ನಡೆಯಲಿದ್ದು, ಕಾರ್ಯಕಲಾಪಗಳಿಗೆ ಅಡಚಣೆ ಉಂಟಾಗದಂತೆ ವಿಧಾನಸೌಧ ಸುತ್ತ ಎರಡು ಕಿ.ಮೀ. ವ್ಯಾಪ್ತಿಯಲ್ಲಿ ನಿಷೇಧಾಜ್ಞೆ ಜಾರಿಗೊಳಿಸಲಾಗಿದೆ ಎಂದು ನಗರ ಪೊಲೀಸ್ ಆಯುಕ್ತ ದಯಾನಂದ ಅವರು ತಿಳಿಸಿದ್ದಾರೆ.

ಅಧಿವೇಶನದ ಕಲಾಪಗಳು ಸುಗಮವಾಗಿ ನಡೆಯುವ ಹಾಗೂ ಕಾನೂನು ಸುವ್ಯವಸ್ಥೆಯನ್ನು ಕಾಪಾಡುವ ದೃಷ್ಠಿಯಿಂದ ನಿಷೇಧಾಜ್ಞೆ ಜಾರಿಗೊಳಿಸಲಾಗಿದೆ.

ಐದು ಅಥವಾ ಅದಕ್ಕಿಂತ ಹೆಚ್ಚು ಜನರು ಗುಂಪು ಸೇರಬಾರದು, ಮೆರವಣಿಗೆ ಮತ್ತು ಸಭೆ ನಡೆಸಬಾರದು, ಮಾರಾಕಾಸ್ತ್ರಗಳನ್ನು ಒಯ್ಯಬಾರದು, ಸ್ಫೋಟಕ ವಸ್ತು ಸಿಡಿಸಬಾರದು, ಬಿತ್ತಿಪತ್ರ ಪ್ರದರ್ಶಿಸುವುದನ್ನು ನಿಷೇಧಿಸಲಾಗಿದೆ ಎಂದು ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅಣ್ಣ ಸಿಎಂ ಆಗಲಿ ಅನ್ನೋ ಆಸೆ ಈಗಲೂ ಇದೆ

• ಉದಯವಾಹಿನಿ,ಬೆಂಗಳೂರು

ಅಣ್ಣ ಸಿಎಂ ಆಗಲಿ ಅನ್ನೋ ಆಸೆ ಈಗಲೂ ಇದೆ. ಆದರೆ ಅದಕ್ಕೆ ಕಾಲ ಕೂಡಿ ಬರಬೇಕು ಎಂದು ಮಾಜಿ ಸಂಸದ ಡಿ.ಕೆ ಸುರೇಶ್ ಹೇಳಿದ್ದಾರೆ.

ಬೆಂಗಳೂರಿನಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಡಿ.ಕೆ ಶಿವಕುಮಾರ್ ಹೈಕಮಾಂಡ್ ಭೇಟಿ ಯಾವುದು ಹೊಸತಲ್ಲ. ನಿರಂತರವಾಗಿ ಭೇಟಿ ಮಾಡುತ್ತಲ್ಲೇ ಇರುತ್ತಾರೆ. ಹೈಕಮಾಂಡ್ ಮುಂದೆ ಡಿಮ್ಯಾಂಡ್ ಇಡಲು ಏನಿದೆ ಪಾರ್ಟಿ ಅವರನ್ನ ಡಿಸಿಎಂ ಮಾಡಿದೆಯಲ್ಲ ಇನ್ನೇನು ಬೇಕು ಎಂದಿದ್ದಾರೆ. ಈಗ ಸಿದ್ದರಾಮಯ್ಯ ಸಿಎಂ ಸ್ಥಾನದಲ್ಲಿ ಇದ್ದಾರೆ, ಸ್ಥಾನ ಬೇಕು ಅಂತ ಎಂದು ಚೇರ್‌ನಿಂದ ಎಳೆದು ಕೂರಿಸೋಕೆ ಆಗುತ್ತಾ ಪಕ್ಷದ ಅಧ್ಯಕ್ಷರು ದೆಹಲಿಗೆ ಹೋಗುತ್ತಾ ಇರುತ್ತಾರೆ. ಹೈಕಮಾಂಡ್ ಜೊತೆ ಸಂಪರ್ಕ ಇಟ್ಟುಕೊಂಡಿರುತ್ತಾರೆ. ಹೈಕಮಾಂಡ್ ಭೇಟಿ ಮಾಡಿ ಬರುವುದು ಪ್ರವೃತ್ತಿ. ಡಿಕೆಶಿ ಮುಂದೆ ಯಾವುದೇ ಅಜೆಂಡ ಇಲ್ಲ. ಬೇರೆ ಯಾವುದೇ ಚಿಂತನೆಗಳೂ ಇಲ್ಲ. ಹಕ್ಕು ಅನ್ನೋ ಪ್ರಶ್ನೆ ಇಲ್ಲ ಎಂದು ನುಡಿದ್ದಾರೆ.

ಡಿ.ಕೆ.ಶಿವಕುಮಾರ್ ಹಿಂದೆ ಪ್ರಧಾನಿ ಭೇಟಿ ಆಗುವುದು ಹೈಕಮಾಂಡ್ ಗಮನಕ್ಕೆ ತಂದಿದ್ದರು. ಶಿವರಾತ್ರಿ ಹಬ್ಬದಲ್ಲಿ ಅಮಿತ್ ಶಾ ಭೇಟಿಯೂ ಹೈಕಮಾಂಡ್ ಗಮನಕ್ಕೆ ತಂದಿದ್ದರು ಎಂದು ಹೇಳಿದ್ದಾರೆ. ಕೇಂದ್ರದ ತೆರಿಗೆ ಕಡಿತ ಮಾಡುವ ವಿಚಾರವಾಗಿ ಪ್ರತಿಕ್ರಿಯಿಸಿ, ಈ ವಿಷಯ ಅಲ್ಲಲ್ಲಿ ಚರ್ಚೆ ಆಗುತ್ತಿದೆ. ಒಕ್ಕೂಟ ವ್ಯವಸ್ಥೆಯನ್ನು ದುರ್ಬಲ ಮಾಡುವ ಕೆಲಸ ನಡೆಯುತ್ತಿದೆ. ರಾಜ್ಯಗಳಿಗೆ ಶಕ್ತಿ ತುಂಬುವುದು ಬಿಟ್ಟು ಬಲವಂತವಾದ ಕಾನೂನು ಹೇರಲು ಹೊರಟಿದೆ ಎಂದು ಕಿಡಿಕಾರಿದ್ದಾರೆ.

ದೇಶ ಅಂದರೆ ಉತ್ತರ ಪ್ರದೇಶ ಹಾಗೂ ಗುಜರಾತ್ ಎರಡೇ ರಾಜ್ಯ ಅಲ್ಲ. ನಮಗೂ ಕೂಡ ಸಮಾನ ಅವಕಾಶ



☛ ಉದಯವಾಹಿನಿ ಚಿತ್ರ

**ರಾಜ್ಯಗಳ ಅಭಿವೃದ್ಧಿ ಕುಂಠಿತಕ್ಕೆ ಕೇಂದ್ರ ಸರ್ಕಾರ ಯಾವ ರೀತಿ ಕಾರಣ ಆಗುತ್ತಿದೆ ನಾವು ನೋಡ್ತಾ ಇದ್ದೇವೆ. ರಾಷ್ಟ್ರ ಹಾಗೂ ರಾಜ್ಯದ ಜನರು ತಿರುಗಿ ಬೀಳಬಹುದು. ತೆರಿಗೆ ಹಣ ಕೊಡಿ ಎಂದು ನಾನು ಮನವಿ ಮಾಡ್ತೇನೆ. ಜನಸಂಖ್ಯೆ ಆಧಾರದ ಮೇಲೆ ತೆರಿಗೆ ಹಣ ವಿಭಜನೆ ಆಗುತ್ತಿದೆ. ಮಹಿಳಾ ಮೀಸಲಾತಿ ಅನುಮೋದನೆ ಆಗಿದೆ. ಜಾತಿಗಣತಿ ಆಗುವ ಸಾಧ್ಯತೆ ಇದೆ. ಕ್ಷೇತ್ರಗಳನ್ನ ಜಾಸ್ತಿ ಮಾಡಿದರೆ, ಸಂಪೂರ್ಣವಾಗಿ ಉತ್ತರ ಭಾರತದ ಹಿಡಿತಕ್ಕೆ ಹೋಗುತ್ತದೆ. ಬಿಜೆಪಿ ನಾಯಕರು ಮಲತಾಯಿ ಧೋರಣೆ ಮಾಡುತ್ತಿದ್ದಾರೆ ಎಂದು ದೂರಿದ್ದಾರೆ.**

ಸಿಗಬೇಕು ಅದನ್ನ ಕಸಿದುಕೊಳ್ಳುತ್ತಿದ್ದಾರೆ. ರಾಜಕೀಯ ಒಂದು ಕಡೆ ಇಡಿ, ನಮ್ಮ ಅಸ್ತಿತ್ವ ಉಳಿಸಿಕೊಳ್ಳಬೇಕು. ಎಲ್ಲಾ ರಾಜಕೀಯ ಪಕ್ಷಗಳು ಒಂದಾಗಬೇಕು. ಇಂಥ ಕಾನೂನು ಮಾಡಿ ನಮ್ಮನ್ನ ಸದೆಬಡಿಯುವುದು, ಎಲ್ಲವನ್ನೂ ಮ್ಯಾನೇಜ್ ಮಾಡುವ ಕಲೆ ಬಿಜೆಪಿಯದ್ದು ಎಂದು ವಾಗ್ದಾಳಿ ನಡೆಸಿದ್ದಾರೆ.

# ಬಿಜೆಪಿ ಪಕ್ಷದ ನಾಯಕರುಗಳು ಜಾತಿ ಹೆಸರಿನಲ್ಲಿ ಸಮಾವೇಶ


### ಯಡಿಯೂರಪ್ಪನವರ ಮೇಲಿನ ಅಭಿಮಾನದ ಕಾರಣಕ್ಕೆ ವೀರಶೈವ ಲಿಂಗಾಯತ ಸಮುದಾಯದ ಸರಣಿ ಸಭೆ

• ಉದಯವಾಹಿನಿ,ಬೆಂಗಳೂರು

ಬಿಜೆಪಿ ಪಕ್ಷದ ನಾಯಕರುಗಳು ಜಾತಿ ಹೆಸರಿನಲ್ಲಿ ಸಮಾವೇಶಗಳನ್ನು ನಡೆಸದಂತೆ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಮನವಿ ಮಾಡಿದ್ದಾರೆ.

ಕೆಲ ಹಿತೈಷಿಗಳು ಇತ್ತೀಚಿನ ರಾಜಕೀಯ ಬೆಳವಣಿಗೆಯ ಹಿನ್ನೆಲೆಯಲ್ಲಿ ನನ್ನ ಹಾಗೂ ಮಾಜಿ ಮುಖ್ಯಮಂತ್ರಿ ಯಡಿಯೂರಪ್ಪನವರ ಮೇಲಿನ ಅಭಿಮಾನದ ಕಾರಣಕ್ಕೆ ವೀರಶೈವ ಲಿಂಗಾಯತ ಸಮುದಾಯದ ಸರಣಿ ಸಭೆಗಳನ್ನು ನಡೆಸಲು ಹೊರಟಿರುವುದು ಸರಿಯಲ್ಲ, ಇದರಿಂದ ಪಕ್ಷಕ್ಕೆ ಮುಜುಗರದ ಸನ್ನಿವೇಶ ಸೃಷ್ಟಿಯಾಗಲಿದೆ. ಹಾಗಾಗಿ ನನ್ನ ಹಿತೈಷಿಗಳು ಹಾಗೂ ಅಭಿಮಾನಿಗಳು ಜಾತಿ ಸಮಾವೇಶಗಳನ್ನುನಡೆಸುವುದು ಬೇಡ. ಜಾತಿ ಸಮಾವೇಶಗಳನ್ನು ಕೂಡಲೇ ನಿಲ್ಲಿಸಿ ಎಂದು ವಿಜಯೇಂದ್ರ, ಸಾಮಾಜಿಕ ಜಾಲತಾಣ ಎಕ್ಸ್ ನಲ್ಲಿ ಟ್ವೀಟ್ ಮಾಡಿ ಮನವಿ ಮಾಡಿದ್ದಾರೆ.

ಜಾತಿ ಸಮಾವೇಶಗಳನ್ನು ನಡೆ ಸುವ ನಾಯಕರುಗಳು ತಮ್ಮ ಗಮನ ವನ್ನು ಪಕ್ಷ ಸಂಘಟನೆಯತ್ತ ಕೇಂದ್ರೀಕರಿಸಬೇಕೇ ಹೊರತು ಸಮಾಜದ ಹೆಸರಿನಲ್ಲಿ ಸಭೆಗಳನ್ನು ಸಂಘಟಿಸುವುದು ಬೇಡ. ಕೂಡಲೇ ಈ ಪ್ರಯತ್ನಗಳನ್ನು ನಿಲ್ಲಿಸಿ ಎಂದು ಅವರು ಮನವಿ ಮಾಡಿದ್ದಾರೆ. ಬಿಜೆಪಿಯ ಭಿನ್ನಮತೀಯ ಗುಂಪಿನ ನಾಯಕರಾದ ಬಸನಗೌಡಪಾಟೀಲ್ ಯತ್ನಾಳ್ ಅವರು ಇತ್ತೀಚೆಗೆ ವೀರಶೈವ ಲಿಂಗಾಯತ ಸಮುದಾಯ ಮುಖಂಡರ ಸಭೆ ನಡೆಸಿದ್ದಕ್ಕೆ ಪರ್ಯಾಯವಾಗಿ ಮಾಜಿ ಸಚಿವ ಎಂ.ಪಿ. ರೇಣುಕಾಚಾರ್ಯ ಅವರು ಸಮಾನ ಮನಸ್ಕ ನಾಯಕರ ಜತೆಗೂಡಿ ರಾಜ್ಯದ ಹಲವೆಡೆ ವೀರಶೈವ ಲಿಂಗಾಯತ ಸಮುದಾಯದ ಸಭೆಗಳನ್ನು ನಡೆಸಲು ಮುಂದಾಗಿದ್ದ ಬೆನ್ನಲ್ಲೆ ವಿಜಯೇಂದ್ರ ಅವರು ಈ ಸಭೆಗಳನ್ನು ನಡೆಸದಂತೆ ಸೂಚನೆ ನೀಡಿರುವುದು ಬಿಜೆಪಿ ವಲಯದಲ್ಲಿ ಭಾರಿ ಮಹತ್ವ ಪಡೆದುಕೊಂಡಿದೆ.



ಸಮ ಸಮಾಜ ಕಟ್ಟಲು ತಮ್ಮನ್ನು ಸಮರ್ಪಿಸಿಕೊಂಡ ಅಣ್ಣ ಬಸವಣ್ಣನವರ ತತ್ವ ಅನುಸರಿಸಿ ರಾಜ್ಯದಲ್ಲಿ ಮುಖ್ಯಮಂತ್ರಿಯಾಗಿ ಸರ್ವರಿಗೂ ಸಮಬಾಳು, ಸರ್ವರಿಗೂ ಸಮಪಾಲು ಎಂಬ ಧ್ಯೇಯ ಪಾಲಿಸಿ ಆಡಳಿತ ನಡೆಸಿದವರು ಯಡಿಯೂರಪ್ಪನವರು. ಅವರ ಆದರ್ಶಗಳನ್ನು ಅಳವಡಿಸಿಕೊಂಡು ಮುನ್ನಡೆಯುತ್ತಿರುವ ನಾನು ವೀರಶೈವ ಲಿಂಗಾಯತ ಸಮಾಜಕ್ಕೆ ಸೇರಿದವನು ಎಂಬ ಬಗ್ಗೆ ಕಾಳಜಿ ಪೂರ್ವಕ ಹೆಮ್ಮೆ ಇರಿಸಿಕೊಂಡಿದ್ದೇನೆ. ಈ ನಿಟ್ಟಿನಲ್ಲಿ ಸಮಾಜದ ಆಶಯಕ್ಕೆ ಪೂರಕವಾಗಿ ಸರ್ವ ಸಮಾಜಗಳ ಬಗ್ಗೆ ಸಮಭಾವ ಇಟ್ಟುಕೊಂಡು ಒಟ್ಟು ಸಮಾಜದ ಏಳ್ಗೆ ಹಾಗೂ ಅಭಿವೃದ್ಧಿಗೆ ಚಿಂತಿಸುವವನು ಎಂದು ವಿಜಯೇಂದ್ರ ಟ್ವೀಟ್‌ನಲ್ಲಿ ಹೇಳಿದ್ದಾರೆ. ಮಾಜಿ ಮುಖ್ಯಮಂತ್ರಿ ಯಡಿಯೂರಪ್ಪನವರ ಹುಟ್ಟುಹಬ್ಬದ ದಿನವಾದ ಫೆ. 27 ರಂದು ಮಾಜಿ ಸಚಿವ ರೇಣುಕಾಚಾರ್ಯ ಅವರು ವೀರಶೈವ ಲಿಂಗಾಯತ ಮುಖಂಡರ ಸಭೆ ನಡೆಸಿದ್ದರು, ನಿನ್ನೆಯೂ ಅವರು ಕೆಲವೆಡೆ ಸಮುದಾಯದ ಮುಖಂಡರ ಸಭೆ ನಡೆಸಿ ಯಡಿಯೂರಪ್ಪ ಮತ್ತು ವಿಜಯೇಂದ್ರ ನೇತೃತ್ವದಲ್ಲಿ ಬೃಹತ್ ಸಮಾವೇಶಕ್ಕೆ ಸಿದ್ಧತೆ ನಡೆಸಿದ್ದರು. ಈ ಸಮಾವೇಶ ವಿಜಯೇಂದ್ರ ಪರ ಶಕ್ತಿ ಪ್ರದರ್ಶನದ ಸಮಾವೇಶ ಎಂದೆ ವ್ಯಾಖ್ಯಾನಿಸಲಾಗಿತ್ತು. ಈ ಸಮಾವೇಶಕ್ಕೆ ವೀರಶೈವ ಲಿಂಗಾಯತ ಸಮುದಾಯದ ಎಲ್ಲಾ ಮಠಾಧೀಶರನ್ನು ಆಹ್ವಾನಿಸುವ ತಯಾರಿಯನ್ನು ರೇಣುಕಾಚಾರ್ಯಮತ್ತು ಸಮಾನ ಮನಸ್ಕ ಮುಖಂಡರು ನಡೆಸಿದ್ದರು. ಈ ಬೆಳವಣಿಗೆಗಳ ಹಿನ್ನೆಲೆಯಲ್ಲಿ ಯಾವುದೇ ಜಾತಿ ಸಮುದಾಯದ ಸಭೆ ನಡೆಸದಂತೆ ವಿಜಯೇಂದ್ರ ಮುಖಂಡರಲ್ಲಿ ಮನವಿ ಮಾಡಿದ್ದಾರೆ.

**ವಿಜಯೇಂದ್ರ ಹೇಳಿಕೆ**

**ಸಮಗ್ರ ಕರ್ನಾಟಕದ ಶ್ರೇಯೋಭಿವೃದ್ಧಿಗೆ ಹಾಗೂ ಪ್ರಧಾನಿ ಮೋದಿ ಅವರ ವಿಕಸಿತ ಭಾರತದ ಮಹಾ ಸಂಕಲ್ಪದ ಗುರಿ ಸಾಧಿಸಲು ಪರಿಶ್ರಮಿಸುತ್ತಿರುವ ಭಾರತೀಯ ಜನತಾಪಾರ್ಟಿಯ ಸಿದ್ಧಾಂತ ಪ್ರತಿಪಾದಿಸುವ ಒಬ್ಬ ನಿಷ್ಠ ಕಾರ್ಯಕರ್ತನಾಗಿ ಹೆಜ್ಜೆ ಇಡುತ್ತಿದ್ದೇನೆ. ನನಗಾಗಿ ನನ್ನ ಹಿತೈಷಿಗಳು ಹಾಗೂ ಅಭಿಮಾನಿಗಳು ನಡೆಸುತ್ತಿರುವ ವೀರಶೈವ ಲಿಂಗಾಯತ ಸಮುದಾಯದ ಸಭೆಗಳನ್ನು ನಡೆಸುವುದು ಬೇಡ. ಈ ವಿಚಾರ ನನ್ನ ಗಮನಕ್ಕೆ ಬಂದ ತಕ್ಷಣ ಇದನ್ನು ನಿಲ್ಲಿಸುವಂತೆ ತಿಳಿಸಿದ್ದೇನೆ ಎಂದು ವಿಜಯೇಂದ್ರ, ಹೇಳಿದ್ದಾರೆ.**

# ಹಕ್ಕಿಜ್ವರದ ಬಗ್ಗೆ ಹೆಚ್ಚಿನ ಆತಂಕ ಬೇಡ: ಜಿಲ್ಲಾಧಿಕಾರಿ ಪಿ.ಎನ್ ರವೀಂದ್ರ

**● ಜನರು ಹೆಚ್ಚಿನ ಆತಂಕಕ್ಕೆ ಒಳಗಾಗದೆ ಆರೋಗ್ಯ ಇಲಾಖೆಯ ಮಾರ್ಗಸೂಚಿ ಕ್ರಮಗಳನ್ನು ಪಾಲಿಸುವಂತೆ ಮನವಿ**

• ಉದಯವಾಹಿನಿ ಚಿಕ್ಕಬಳ್ಳಾಪುರ

ಜಿಲ್ಲೆಯಲ್ಲಿ ಕಾಣಿಸಿಕೊಂಡಿರುವ ಹಕ್ಕಿ ಜ್ವರವನ್ನು ಹತೋಟಿಗೆ ತರಲು ತಾಲ್ಲೂಕಿನ ವರದಹಳ್ಳಿ ಹಾಗೂ ಸುತ್ತಮುತ್ತಲ ಪ್ರದೇಶದಲ್ಲಿ ನಿಯಂತ್ರಣ ಕ್ರಮಗಳನ್ನು ಸಮರೋಪಾಧಿಯಲ್ಲಿ ತೆಗೆದುಕೊಳ್ಳಲಾಗುತ್ತಿದೆ. ಜನರು ಹೆಚ್ಚಿನ ಆತಂಕಕ್ಕೆ ಒಳಗಾಗದೆ ಆರೋಗ್ಯ ಇಲಾಖೆಯ ಮಾರ್ಗಸೂಚಿ ಕ್ರಮಗಳನ್ನು ಪಾಲಿಸುವಂತೆ ಜಿಲ್ಲಾಧಿಕಾರಿ ಪಿ.ಎನ್ ರವೀಂದ್ರ ಅವರು ಮನವಿ ಮಾಡಿದರು.

ಹಕ್ಕಿ ಜ್ವರ ನಿಯಂತ್ರಣದ ಕುರಿತು ಜಿಲ್ಲಾಡಳಿತ ಭವನದಲ್ಲಿ ಸುದ್ದಿಗಾರರೊಂದಿಗೆ ಮಾತನಾಡುತ್ತಾ ತಾಲ್ಲೂಕಿನ ವರದಹಳ್ಳಿ ಗ್ರಾಮದಲ್ಲಿ ಕಾಣಿಸಿಕೊಂಡಿರುವ ಹಕ್ಕಿಜ್ವರ ಸೋಂಕು ನಿಯಂತ್ರಿಸುವ ಮೂಲಕ ರೋಗ ಬೇರೆಡೆಗೆ ಹರಡದಂತೆ ಹಲವು ಕ್ರಮಗಳನ್ನು ಜಿಲ್ಲಾಡಳಿತ ಕೈಗೊಂಡಿದ್ದು, ಜನರು ಆತಂಕ ಪಡುವ ಅಗತ್ಯವಿಲ್ಲ.

**ರೋಗ ಬೇರೆಡೆಗೆ ಹರಡದಂತೆ ಕ್ರಮ**

ಈಗಾಗಲೇ ವರದಹಳ್ಳಿಯಲ್ಲಿ ಸಾವನ್ನಪಿದ ಕೋಳಿಗಳಲ್ಲಿ ಹಕ್ಕಿಜ್ವರದ ಸೋಂಕು ಪತ್ತೆಯಾಗಿ ದೃಢಪಟ್ಟಿರುವ ಕಾರಣ ಈ ಗ್ರಾಮವನ್ನು ಕೇಂದ್ರವಾಗಿಸಿಕೊಂಡು ಸುತ್ತಲೂ 10 ಕಿ.ಮೀ ವ್ಯಾಪ್ತಿಯಲ್ಲಿ ಕೋಳಿ ಸಾಗಾಣಿಕೆ ಮೇಲೆ ನಿರ್ಬಂಧ ಹೇರಲಾಗಿದೆ. ಅಲ್ಲದೇ ಹೊರಗಡೆಯಿಂದ ವರದಹಳ್ಳಿ ಸುತ್ತಮುತ್ತಲ ಗ್ರಾಮಗಳಿಗೆ ಕೋಳಿಗಳನ್ನು ತರದಂತೆ ನಾಕಾಬಂಧಿ ಹಾಕಲಾಗಿದೆ. ವರದಹಳ್ಳಿಯಲ್ಲಿನ ಕೋಳಿಗಳ ಮೇಲೆ ಹೆಚ್ಚಿನ ನಿಗಾ ಇಡಲಾಗಿದ್ದು, ರೋಗ ನಿಯಂತ್ರಣದ ಮುಂಜಾಗ್ರತಾ ಕ್ರಮದ ಭಾಗವಾಗಿ ಅವುಗಳನ್ನೆಲ್ಲಾ ಸರ್ಕಾರದ ಮಾರ್ಗಸೂಚಿಯಂತೆ ಸಾಮೂಹಿಕವಾಗಿ ವಿಲೇವಾರಿ ಮಾಡಲು ಸೂಚಿಸಲಾಗಿದೆ. ಗ್ರಾಮದಲ್ಲಿನ ಕೋಳಿಗಳನ್ನು ಪಡೆಯುವ ಪ್ರಕ್ರಿಯೆ ಆರಂಭವಾಗಿದೆ.

ಇದುವರೆಗೆ ಗ್ರಾಮದ ಜನರಲ್ಲಿ ಯಾವುದೇ ಕೆಮ್ಮು,ಶೀತ,ನೆಗಡಿ,ಜ್ವರದಂತಹ ಪ್ರಕರಣಗಳು ಕಂಡುಬಂದಿಲ್ಲ. ಆದರೂ ಆರೋಗ್ಯ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳು ಸಮನ್ವಯದೊಂದಿಗೆ ಪ್ರತಿ ಕುಟುಂಬದ ಆರೋಗ್ಯದ ಮೇಲೂ ನಿಗಾ ಇಡಲಾಗಿದೆ ಎಂದರು.

ವರದಹಳ್ಳಿಯ ಒಂದು ಕಿ.ಮೀ ವ್ಯಾಪ್ತಿಯಲ್ಲಿ ಹಕ್ಕಿ ಜ್ವರ ಉಲ್ಬಣವಾಗಿ ಹೊರಹೋಗದಂತೆ ಕಟ್ಟೆಚ್ಚರ ವಹಿಸಲಾಗಿದೆ. ಜಿಲ್ಲೆಯ ಉಳಿದೆಡೆಗಳಲ್ಲಿ ಯಾವುದೇ ರೀತಿ ಸಮಸ್ಯೆ ಕಂಡು ಬರದ ಕಾರಣ ಸಾರ್ವಜನಿಕರು ಶುಚಿತ್ವವನ್ನೂ ಗಮನದಲ್ಲಿಟ್ಟುಕೊಂಡು ಆರೋಗ್ಯವಾಗಿರುವ ಕೋಳಿ ಮಾಂಸವನ್ನು ಚೆನ್ನಾಗಿ ಬೇಯಿಸಿ ಎಂದಿನಂತೆ ತಿನ್ನಲು ಬಳಸಬಹುದು.

ಯಾವುದೇ ರೀತಿಯ ಗೊಂದಲ,ಆತಂಕ ಬೇಡ. ರೋಗ ನಿಯಂತ್ರಣಕ್ಕೆ ಜಿಲ್ಲಾಡಳಿತ ಸಮರೋಪಾದಿಯ ಕ್ರಮಗಳನ್ನು ಕೈಗೊಂಡಿದೆ. ಹೊರಗಿನಿಂದ ವಾಹನಗಳ ಮೂಲಕ ಜಿಲ್ಲೆಗೆ ಬರುವ ಕೋಳಿಗಳ ಮಾದರಿಗಳನ್ನೂ ಪರೀಕ್ಷೆಗೆ ಒಳಪಡಿಸಿ ಖಚಿತಪಡಿಸಿಕೊಳ್ಳಲು ಜಿಲ್ಲಾಡಳಿತ ಮುಂದಾಗಿದೆ.

ಆರೋಗ್ಯ ಇಲಾಖೆ, ಪಶುವೈದ್ಯಕೀಯ ಸೇವಾ ಇಲಾಖೆ,ಅರಣ್ಯ ಇಲಾಖೆ,ಕಂದಾಯ ಇಲಾಖೆ ಮತ್ತು ಗ್ರಾಮೀಣಾಭಿವೃದ್ಧಿ ಇಲಾಖೆಗಳ ಸಭೆಗಳನ್ನು ಕಾಲಕಾಲಕ್ಕೆ ನಡೆಸಿ ಜಿಲ್ಲಾಡಳಿತ ವರದಿ ಪಡೆದು ನಂತರದ ಅಗತ್ಯ ಕ್ರಮಗಳನ್ನು ಕೈಗೊಳ್ಳುತ್ತಿದೆ ಎಂದು ತಿಳಿಸಿದರು.



ಉದಯವಾಹಿನಿ ಚಿತ್ರ

### ರೋಗ ಲಕ್ಷಣಗಳು

**ಈ ರೋಗ ಪೀಡಿತರಲ್ಲಿ ಜ್ವರ, ಕೆಮ್ಮು, ಶಿತ, ತಲೆನೋವು, ಗಂಟಲು ಕೆರೆತ, ನೆಗಡಿ, ಸ್ನಾಯುಗಳಲ್ಲಿ ನೋವು, ಆಯಾಸ ಕಾಣಿಸಿಕೊಳ್ಳುತ್ತದೆ. ಕೆಲವೊಮ್ಮೆ ವಾಂತಿ ಮತ್ತು ಭೇದಿಯೂ ಆಗಬಹುದು ಉಸಿರಾಟದಲ್ಲಿ ತೊಂದರೆ ಈ ಲಕ್ಷಣಗಳು ಕಾಣಿಸಿದ ಕೂಡಲೇ ಹತ್ತಿರದ ಸಾರ್ವಜನಿಕ ಆಸ್ಪತ್ರೆಗೆ ಭೇಟಿ ನೀಡಿ ಆರೋಗ್ಯ ತಪಾಸಣೆ ಮಾಡಿಸಬೇಕು ಎಂದು ತಿಳಿಸಿದರು.**

### ತೆಗೆದುಕೊಳ್ಳಬೇಕಾದ ಮುನ್ನೆಚ್ಚರಿಕೆ ಕ್ರಮಗಳು

**ಶಂಕಿತ ಹಕ್ಕಿಜ್ವರ ಪೀಡಿತ ಕೋಳಿಗಳು, ಹಕ್ಕಿಗಳು ಹಾಗೂ ಬಾತುಕೋಳಿಗಳ ಸಂಪರ್ಕಕ್ಕೆ ಬಾರದಂತೆ ಎಚ್ಚರವಹಿಸುವುದು. ಬೇರೆಯವರ ಮನೆಗೆ ಭೇಟಿ ನೀಡಿದಾಗ ಅಲ್ಲಿರುವ ಶಂಕಿತ ಹಕ್ಕಿಜ್ವರ ಪೀಡಿತ ಕೋಳಿ ಅಥವಾ ಹಕ್ಕಿಗಳನ್ನು ಸ್ಪರ್ಶಿಸಬಾರದು. ಹಕ್ಕಿಜ್ವರ ಶಂಕಿತ ಅಥವಾ ಪೀಡಿತ ಫಾರಂಗಳಿಗೆ ಭೇಟಿ ನೀಡಬಾರದು. ಹಕ್ಕಿಜ್ವರ ಹರಡಿರುವ ಫಾರಂನ ವಾತಾವರಣದ ಸಂಪರ್ಕಕ್ಕೆ ಬಂದಲ್ಲಿ ತಕ್ಷಣ ತಮ್ಮ ಕೈಕಾಲು ಮತ್ತು ಮುಖವನ್ನು ತೊಳೆದುಕೊಂಡು ಬಟ್ಟೆಯನ್ನು ಬದಲಾಯಿಸಿಕೊಳ್ಳುವುದು. ಮತ್ತು ಮುಂದಿನ 4 ದಿನಗಳವರೆಗೆ ತಮ್ಮ ದೇಹದ ಉಷ್ಣಾಂಶದಲ್ಲಿ ಆಗುವ ಬದಲಾವಣೆಗಳನ್ನು ಗಮನಿಸುವುದು. ಒಂದು ವೇಳೆ ಜ್ವರದ ಲಕ್ಷಣಗಳು ಕಾಣಿಸಿಕೊಂಡಲ್ಲಿ ವೈದ್ಯರನ್ನು ಸಂಪರ್ಕಿಸುವುದು. ಸೋಂಕಿರುವ ಪ್ರದೇಶದಲ್ಲಿ ಯಾವುದೇ ವಸ್ತುವನ್ನು ಮುಟ್ಟಿದಾಗ ಯಾವಾಗಲೂ ಕೈಗಳನ್ನು ಸೋಪಿನಿಂದ ತೊಳೆಯಬೇಕು ಎಂದು ಸಲಹೆ ನೀಡಿದರು.**

### ಬೇಯಿಸಿದ ಕೋಳಿ ಮಾಂಸದ ಸೇವನೆಯಿಂದ ಹಕ್ಕಿಜ್ವರ ಬರುವುದಿಲ್ಲ

**ಕೋಳಿ ಮಾಂಸ ಮತ್ತು ಮೊಟ್ಟೆಯನ್ನು 70 ಡಿಗ್ರಿ ಸೆಂಟಿಗ್ರೇಡ್‌ಗಳ ಅಧಿಕ ಉಷ್ಣಾಂಶದಲ್ಲಿ ಬೇಯಿಸಿದ ನಂತರವಷ್ಟೇ ಸೇವಿಸಬೇಕು. ಅಡುಗೆಗಾಗಿ ಕೋಳಿ ಮಾಂಸವನ್ನು ಸಿದ್ಧಪಡಿಸಿದ ನಂತರ ಕೈಗಳನ್ನು ನಂಜುನಾಶಕದಿಂದ ಸ್ವಚ್ಛವಾಗಿ ತೊಳೆದುಕೊಳ್ಳಬೇಕು. ಸೋಂಕಿತ ಹಸಿ ಮೊಟ್ಟೆಯನ್ನು ಸೇವಿಸಬಾರದು. ಹಕ್ಕಿಜ್ವರವು ಮುನ್ನೆಚ್ಚರಿಕೆಯಿಂದ ತಡೆಯಬಲ್ಲ ಖಾಯಿಲೆ ಆದ್ದರಿಂದ ಖಾಯಿಲೆಯ ಲಕ್ಷಣಗಳು ಕೋಳಿಗಳಲ್ಲಿ ಕಾಣಿಸಿಕೊಂಡ ಕೂಡಲೇ ಹತ್ತಿರದ ಪಶು ವೈದ್ಯಕೀಯ ಆಸ್ಪತ್ರೆಗಳಿಗೆ ಮಾಹಿತಿಯನ್ನು ನೀಡಬೇಕು. ಹೆಚ್ಚಿನ ಮಾಹಿತಿಗಾಗಿ ಉಚಿತ ಆರೋಗ್ಯ ಸಹಾಯವಾಣಿ 104ಕ್ಕೆ ಕರೆಮಾಡಿ ಎಂದು ತಿಳಿಸಿದರು.**

---

## ನವೀಕರಣ ಪ್ರೌಢ ಶಾಲಾ ಕಟ್ಟಡ ಲೋಕಾರ್ಪಣೆ

• ಉದಯವಾಹಿನಿ ಮಾಲೂರು

ದಾನಿಗಳ ಸಹಕಾರ ಹಾಗೂ ಸರ್ಕಾರಿ ಅನುದಾನವನ್ನು ಬಳಸಿಕೊಂಡು ತಾಲ್ಲೂಕಿನ ಸರ್ಕಾರಿ ಶಾಲೆಗಳನ್ನು ಅಭಿವೃದ್ಧಿಪಡಿಸುವುದರ ಮೂಲಕ ಬಡ ಮಕ್ಕಳ ಶಿಕ್ಷಣಕ್ಕೆ ಅನುಕೂಲ ಕಲ್ಪಿಸಲಾಗುವುದು ಎಂದು ಶಾಸಕ ಕೆ ವೈ ನಂಜೇಗೌಡ ಹೇಳಿದರು.

ಭಾರತ್ ಬಯೋಟೆಕ್ ಮತ್ತು ಯುನೈಟೆಡ್ ವೇ ಆಫ್ ಹೈದರಾಬಾದ್ ಸಂಸ್ಥೆ ಪಟ್ಟಣದ ಸರ್ಕಾರಿ ಬಾಲಕರ ಮಾದರಿ ಹಿರಿಯ ಪ್ರಾಥಮಿಕ ಶಾಲೆ, ಪ್ರೌಢಶಾಲೆ ಕಟ್ಟಡ ದುರಸ್ತಿ ಮತ್ತು ನವೀಕರಣಗೊಂಡ ಕಟ್ಟಡ ಲೋಕಾರ್ಪಣೆಗೊಳಿಸಿ ಮಾತನಾಡಿದರು.

ತಾಲ್ಲೂಕಿನಲ್ಲಿ ಸರ್ಕಾರಿ ಶಾಲೆಗಳನ್ನು ಅಭಿವೃದ್ಧಿಪಡಿಸುವಲ್ಲಿ ಜಿಲ್ಲೆಯಲ್ಲಿ ತಾಲ್ಲೂಕು ಮೊದಲನೇ ಸ್ಥಾನದಲ್ಲಿದೆ ಇಲ್ಲಿನ ಸರ್ಕಾರಿ ಬಾಲಕರ ಹಿರಿಯ ಪ್ರಾಥಮಿಕ ಶಾಲೆಯು ಶತಮಾನೋತ್ಸವ ಕಂಡ ಶಾಲೆಯಾಗಿದ್ದು ಈ ಶಾಲೆಯಲ್ಲಿ ಸಾವಿರಾರು ಸಂಖ್ಯೆಯಲ್ಲಿ ವಿದ್ಯಾರ್ಥಿಗಳು ವ್ಯಾಸಂಗ ಮಾಡಿ ಸಮಾಜದ ವಿವಿಧ ಕ್ಷೇತ್ರಗಳಲ್ಲಿ ಸೇವೆಯನ್ನು ಸಲ್ಲಿಸುತ್ತಿದ್ದಾರೆ ಆದರೆ ಈ ಶಾಲೆ ಶಿಥಿಲಗೊಂಡ ಕಾರಣ ಭಾರತ್ ಬಯೋಟೆಕ್ ಮತ್ತು ಯುನೈಟೆಡ್ ವೇ ಆಫ್ ಹೈದರಾಬಾದ್ ಸಂಸ್ಥೆಯವರು ಸಿಎಸ್‌ಆರ್ ಅನುದಾನದಲ್ಲಿ ಗುಣಮಟ್ಟದಲ್ಲಿ ಯಾವುದೇ ರಾಜಿ ಇಲ್ಲದೆ ಶಾಲೆಯನ್ನು ನವೀಕರಣಗೊಳಿಸಿರುವುದು ಉತ್ತಮ ಬೆಳವಣಿಗೆಯಾಗಿದೆ ಇದರಿಂದ ಬಡ ಮಕ್ಕಳ ಶಿಕ್ಷಣಕ್ಕೆ ಅನುಕೂಲವಾಗಲಿದೆ.

ತಾಲ್ಲೂಕಿನಲ್ಲಿ ದಾನಿಗಳು ಹಾಗೂ ಸಿಎಸ್ ಆರ್ ಅನುದಾನದಲ್ಲಿ ದೊಡ್ಡ ದೊಡ್ಡ ಶಾಲೆಗಳು ಅತಿ ಹೆಚ್ಚು ಮಕ್ಕಳಿರುವ ಶಾಲೆಗಳನ್ನು ಧಾನಿಗಳು ಮತ್ತು ಸರ್ಕಾರದ ಅನುದಾನ ಬಳಸಿಕೊಂಡು ಅಭಿವೃದ್ಧಿಪಡಿಸಲಾಗುವುದು, ತಾಲ್ಲೂಕಿನಲ್ಲಿ ಕೆಲವು ಸರ್ಕಾರಿ ಶಾಲೆಗಳು ಖಾಸಗಿ ಶಾಲೆಗಳಿಗೆ ಪೈಪೋಟಿ ನೀಡುವಂತಹ ಉತ್ತಮ ಕಟ್ಟಡಗಳನ್ನು ಹೊಂದಿದ್ದು ಗುಣಾತ್ಮಕ ಶಿಕ್ಷಣವನ್ನು ಸಹ ನೀಡುತ್ತಿವೆ.



ಉದಯವಾಹಿನಿ ಚಿತ್ರ

**ಯಾವುದೇ ಶಿಕ್ಷಕರ ಮೇಲೆ ವೈಯುಕ್ತಿಕವಾಗಿ ವಿರೋಧವಿಲ್ಲ ಆದರೆ ಸರ್ಕಾರಿ ಶಾಲೆಗಳು ಉಳಿಸುವ ನಿಟ್ಟಿನಲ್ಲಿ ಶಿಕ್ಷಕರು ಸಹಕಾರ ನೀಡಬೇಕು ಸರ್ಕಾರಿ ಶಾಲೆಗಳನ್ನು ಉಳಿಸುವುದು ಶಿಕ್ಷಣ ಇಲಾಖೆಯ ಹೆಚ್ಚಿನ ಜವಾಬ್ದಾರಿಯಾಗಿದೆ, ಇಲಾಖೆಯವರು ಜವಾಬ್ದಾರಿ ವಹಿಸಿ ಬಡವರು ವ್ಯಾಸಂಗ ಮಾಡುವ ಶಾಲೆಗಳ ಮಕ್ಕಳ ಶಿಕ್ಷಣ ಪಡೆಯುವಂತಹ ಉತ್ತಮ ವಾತಾವರಣ ನಿರ್ಮಿಸಿ ಸರ್ಕಾರಿ ಶಾಲೆಗಳನ್ನು ಉಳಿಸಿ ಬೆಳೆಸಿರುವಂತೆ ಹೇಳಿದರು**

**-ಕೆ ವೈ ನಂಜೇಗೌಡ, ಶಾಸಕ**

---

## ವಸತಿ ಶಾಲೆಗೆ ಶಾಸಕ ಹೆಚ್.ಟಿ.ಮಂಜು ದಿಢೀರ್ ಭೇಟಿ

• ಉದಯವಾಹಿನಿ ಕೆ.ಆರ್.ಪೇಟೆ

ತಾಲ್ಲೂಕಿನ ಶೆಟ್ಟಿನಾಯಕನ ಕೊಪ್ಪಲು ಗ್ರಾಮದ ಬಳಿಯಿರುವ ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಗೆ ದಿಢೀರ್ ಭೇಟಿ ನೀಡಿದ ಶಾಸಕ ಹೆಚ್.ಟಿ.ಮಂಜು ಮಕ್ಕಳ ಶೈಕ್ಷಣಿಕ ಪ್ರಗತಿಯ ಬಗ್ಗೆ ಮಾಹಿತಿ ಪಡೆದರು.

**ಶೈಕ್ಷಣಿಕ ಪ್ರಗತಿಯ ಬಗ್ಗೆ ಮಾಹಿತಿ**

ವಸತಿ ಶಾಲೆಯ ಪ್ರತಿ ಕೊಠಡಿಗೂ ತೆರಳಿ ವಿದ್ಯಾರ್ಥಿಗಳೊಂದಿಗೆ ಮಾತನಾಡಿ ಶಾಲೆಯ ಪಠ್ಯ ಮತ್ತು ಪಠ್ಯೇತರ ಚಟುವಟಿಕೆಗಳು, ಕುಡಿಯುವ ನೀರಿನ ವ್ಯವಸ್ಥೆ, ಶೌಚಾಲಯ ವ್ಯವಸ್ಥೆ, ಊಟ ಮತ್ತು ವಸತಿ ವ್ಯವಸ್ಥೆಗಳ ಬಗ್ಗೆ ಮಾಹಿತಿ ಪಡೆದರು.

ರಾಜ್ಯ ಸರ್ಕಾರ ಮಕ್ಕಳ ಶೈಕ್ಷಣಿಕ ಪ್ರಗತಿಗಾಗಿ ಪ್ರತಿವರ್ಷ ಕೋಟ್ಯಾಂತರ ರೂ ಅನುದಾನ ನೀಡುತ್ತಿದೆ. ಇದರ ಸದ್ಬಳಕೆಯಾಗಬೇಕಾದರೆ ಮಕ್ಕಳ ಶೈಕ್ಷಣಿಕ ಪ್ರಗತಿಯಲ್ಲಿ ಹೆಚ್ಚಳವಾಗಬೇಕು.

ಸರ್ಕಾರದ ಸವಲತ್ತು ಪಡೆಯುತ್ತಿರುವ ಮಕ್ಕಳು ಕಲಿಕೆಯ ವಿಚಾರದಲ್ಲಿ ಕಠಿಣ ಪರಿಶ್ರಮ ಪಡಬೇಕು. ಉತ್ತಮ ಫಲಿತಾಂಶ ನೀಡುವ ಮೂಲಕ ಪೊ?ಷಕರಿಗೆ ಮತ್ತು ಕಲಿತ ಶಾಲೆಗೆ ಗೌರವ ತಂದುಕೊಡುವಂತೆ ಶಾಸಕರು ವಿದ್ಯಾರ್ಥಿಗಳಿಗೆ ಕಿವಿ ಮಾತು ಹೇಳಿದರು.

ಎಸ್.ಎಸ್.ಎಲ್.ಸಿ ಪರೀಕ್ಷೆ ಫಲಿತಾಂಶದಲ್ಲಿ ಕೆ.ಆರ್.ಪೇಟೆ ತಾಲ್ಲೂಕು ಜಿಲ್ಲೆಯಲ್ಲಿಯೇ ಮೊದಲ ಸ್ಥಾನಕ್ಕೆ ಬರಬೇಕು ಎನ್ನುವುದು ನನ್ನ ಆಶಯ. ಅದರಿಂದ ತಾಲ್ಲೂಕಿನ ಶಾಲೆಗಳಿಗೆ ಅನಿರೀಕ್ಷಿತ ಭೇಟಿ ನೀಡಿ ಪ್ರತಿ ಶಾಲೆಯ ಶೈಕ್ಷಣಿಕ ಚಟುವಟಿಕೆಗಳ ಪರಿಸೀಲನೆ ಮಾಡುವ ಉದ್ದೇಶ ಹೊಂದಿದ್ದೇನೆ. ಶಿಕ್ಷಕರು ಬದ್ದತೆಯಿಂದ ಕೆಲಸ ಮಾಡಿ ಮಕ್ಕಳ ಶೈಕ್ಷಣಿಕ ಪ್ರಗತಿಗೆ ಶ್ರಮ ವಹಿಸಬೇಕು ಎಂದು ಶಾಸಕ ಹೆಚ್.ಟಿ.ಮಂಜು ತಿಳಿಸಿದರು.



ಉದಯವಾಹಿನಿ ಚಿತ್ರ

---

## ಹೆರಿಗೆ ಆಸ್ಪತ್ರೆ ನಿರ್ಮಾಣ ಮಾಡಲು ಮನವಿ


• ಉದಯವಾಹಿನಿ ತಿ.ನರಸೀಪುರ

ತಾಲ್ಲೂಕು ಕೇಂದ್ರವಾದ ಪಟ್ಟಣದಲ್ಲಿ ಸುಸಜ್ಜಿತವಾದ ತಾಯಿ ಮಗು ಹಾರೈಕೆ ಮತ್ತು ಹೆರಿಗೆ ಆಸ್ಪತ್ರೆ ತುಂಬಾ ಅವಶ್ಯಕವಾಗಿರುವುದರಿಂದ ರಾಜ್ಯ ಸರ್ಕಾರ ಕೂಡಲೇ ಈ ಸಾಲಿನ ಆಯವ್ಯಯದಲ್ಲಿಯೇ ಹಣಕಾಸನ್ನು ಕಾಯ್ದಿರಿಸಿ, ಪ್ರತ್ಯೇಕ ಹೆರಿಗೆ ಆಸ್ಪತ್ರೆಯನ್ನು ನಿರ್ಮಾಣ ಮಾಡುವವಂತೆ ಸಿಎಂ ಪುತ್ರ, ವಿಧಾನ ಪರಿಷತ್ ಸದಸ್ಯ ಡಾ.ಯತೀಂದ್ರ ಸಿದ್ದರಾಮಯ್ಯ ಅವರಿಗೆ ಹೋರಾಟ ಸಮಿತಿಯ ಪದಾಧಿಕಾರಿಗಳು ಮನವಿ ಸಲ್ಲಿಸಿದ್ದಾರೆ.

**ಡಾ.ಯತೀಂದ್ರ ಸಿದ್ದರಾಮಯ್ಯ ಅವರಿಗೆ ಮನವಿ**

ತಾಲ್ಲೂಕಿನ ಇಂಡವಾಳು ಗ್ರಾಮದಲ್ಲಿ ಕಳೆದ ಮಂಗಳವಾರ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಭೂಮಿ ಪೂಜೆ ಸಲ್ಲಿಸಿ, ಚಾಲನೆ ನೀಡಿದ ಅವರನ್ನು ಸಮಾರಂಭದ ವೇದಿಕೆಯಲ್ಲೇ ಭೇಟಿಯಾದ ತಾಯಿ ಮಗು ಹಾರೈಕೆ ಮತ್ತು ಹೆರಿಗೆ ಆಸ್ಪತ್ರೆ ಹೋರಾಟ ಸಮಿತಿಯ ಪದಾಧಿಕಾರಿಗಳು ತಾಲ್ಲೂಕು ಕೇಂದ್ರದಲ್ಲಿ ಹೆರಿಗೆ ಆಸ್ಪತ್ರೆ ನಿರ್ಮಾಣ ಮಾಡುವ ಮೂಲಕ ತಾಲ್ಲೂಕಿನ ತಾಯಿ ಮತ್ತು ಮಕ್ಕಳ ಆರೋಗ್ಯವನ್ನು ಕಾಪಾಡಲು ಆಸರೆ ಆಗಬೇಕೆಂದು ಮನವಿ ಮಾಡಿಕೊಂಡರು.

ಹೋರಾಟ ಸಮಿತಿಯ ನೇತೃತ್ವವನ್ನು ವಹಿಸಿರುವ ದಸಂಸ ಜಿಲ್ಲಾ ಸಂಚಾಲಕ ಆಲಗೂಡು ಶಿವಕುಮಾರ್ ಮಾತನಾಡಿ, ತಾಲ್ಲೂಕಿನಲ್ಲಿ ಪ್ರತಿವರ್ಷ ಸರಿಸುಮಾರು 3000 ಕ್ಕೂ ಅಧಿಕ ಸಂಖ್ಯೆಯಲ್ಲಿ ಗರ್ಭಿಣಿಯರು ಹೆರಿಗೆಗೆ ಸರ್ಕಾರಿ ಆಸ್ಪತ್ರೆಗೆ ದಾಖಲಾಗುತ್ತಿದ್ದು, ಇವರಲ್ಲಿ ಸುಮಾರು 2600 ಕ್ಕೂ ಹೆಚ್ಚು ಹೆರಿಗೆಗಳು ಜಿಲ್ಲಾ ಕೇಂದ್ರದ ಮೈಸೂರು ಚೆಲುವಾಂಬ ಮತ್ತು ಖಾಸಗಿ ನರ್ಸಿಂಗ್ ಹೋಂಗಳಿಗೆ ಶಿಫಾರಸ್ಸು ಆಗುತ್ತಿರುವುದು ನಿಜಕ್ಕೂ ಬೇಸರದ ಸಂಗತಿಯಾಗಿದೆ.



ಉದಯವಾಹಿನಿ ಚಿತ್ರ

---

## ಸಾರ್ವಜನಿಕ ಸ್ಥಳಗಳಲ್ಲಿ ತಂಬಾಕು ಬಳಕೆ ಮಾಡಿದರೆ ಕಾನೂನು ಕ್ರಮ

• ಉದಯವಾಹಿನಿ ಕೋಲಾರ

ಕೋಟ್ಪಾ ಕಾಯ್ದೆಯಡಿಯಲ್ಲಿ ಸೆಕ್ಷನ್ 4 ರ ಅನುಸಾರ ಸಾರ್ವಜನಿಕ ಸ್ಥಳಗಳಲ್ಲಿ ತಂಬಾಕು ಬಳಕೆ ಮಾಡಿದರೆ ಅವರ ವಿರುದ್ಧ ಕಾನೂನು ಕ್ರಮ ಕೈಗೊಂಡು ದಂಡ ವಿಧಿಸಲಾಗುವುದು. ಈವರೆಗೂ ಜಿಲ್ಲೆಯಲ್ಲಿ 735 ಪ್ರಕರಣಗಳನ್ನು ದಾಖಲು ಮಾಡಿ ದಂಡವನ್ನು ವಿಧಿಸಲಾಗಿದೆ ಎಂದು ಅಪರ ಜಿಲ್ಲಾಧಿಕಾರಿ ಮಂಗಳಾ ಅವರು ತಿಳಿಸಿದರು. ಕೋಲಾರ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಹಮ್ಮಿಕೊಂಡಿದ್ದ ತಂಬಾಕು ನಿಯಂತ್ರಣದ ಕುರಿತು ಜಿಲ್ಲಾ ಮಟ್ಟದ ಸಮನ್ವಯ ಸಮಿತಿ ಸಭೆಯಲ್ಲಿ ಅವರು ಮಾತನಾಡಿದರು.

ಸರ್ಕಾರದಿಂದ ಹೊಸದಾಗಿ ಆದೇಶಿಸಿರುವ ತಂಬಾಕು ಮಾರಾಟ ಪ್ರತ್ಯೇಕ ಪರವಾನಿಗೆ ನೀತಿಯನ್ನು ಅನುಷ್ಠಾನಗೊಳಿಸಲು ಈಗಾಗಲೇ ಹಿಂದಿನ ಸಭೆಯಲ್ಲಿ ತಿಳಿಸಲಾಗಿದೆ. ರಾಜ್ಯ ಮಟ್ಟದಿಂದ ತರಬೇತಿಯು ಸಹ ನೀಡಿದ್ದು ಸದರಿ ಸ್ಥಳೀಯ ಸಂಸ್ಥೆಗಳಿಂದ ಪರವಾನಿಗೆ ವಿತರಣೆಯಾಗಿರುವವರಿಗೆ ತಂಬಾಕು ಮಾರಾಟ ಪರವಾನಿಗೆ ನೀಡಬೇಕು ಎಂದು ಹೇಳಿದರು.

ಜಿಲ್ಲೆಯ ಎಲ್ಲಾ ಸರ್ಕಾರಿ ಕಚೇರಿಗಳಲ್ಲಿ ತಂಬಾಕು ಮುಕ್ತ ನಾಮಫಲಕಗಳನ್ನು ಅಳವಡಿಸಬೇಕು ಇದು ಸರ್ಕಾರದ ಆದೇಶವಾಗಿದೆ. ಕಚೇರಿಯ ಆವರಣಗಳಲ್ಲಿ ತಂಬಾಕು ಬಳಕೆ ಮಾಡಬಾರದು ಎಂಬುದು ಇದರ ಉದ್ದೇಶವಾಗಿದೆ ಎಂದು ತಿಳಿಸಿದರು.

ಗ್ರಾಮ ಪಂಚಾಯತಿಗಳ ಮುಖಾಂತರ ಒಂದು ಹಳ್ಳಿ ಅಥವಾ ಗ್ರಾಮವನ್ನು ಗುರುತಿಸಿ ಸ್ಥಳೀಯ ಆರೋಗ್ಯ ಕೇಂದ್ರದ ಸಮನ್ವಯದೊಂದಿಗೆ ಗ್ರಾಮದಲ್ಲಿ ತಂಬಾಕು ಉತ್ಪನ್ನಗಳ ಮಾರಾಟ ಮತ್ತು ಬಳಕೆಯನ್ನು ಸಂಪೂರ್ಣವಾಗಿ ತಂಬಾಕು ಮುಕ್ತ ಗ್ರಾಮವನ್ನಾಗಿ ಘೋಷಿಸಬೇಕು ಎಂದು ತಿಳಿಸಿದರು .

ಶಿಕ್ಷಣ ಇಲಾಖೆ ವತಿಯಿಂದ ಶಾಲಾ-ಕಾಲೇಜುಗಳನ್ನು, ಪೊಲೀಸ್ ಇಲಾಖೆಯಿಂದ ಸಾರ್ವಜನಿಕ ಸ್ಥಳಗಳಲ್ಲಿ, ಕೆ.ಎಸ್.ಆರ್.ಟಿ.ಸಿ ವತಿಯಿಂದ ಬಸ್ ನಿಲ್ದಾಣಗಳಲ್ಲಿ ತಂಬಾಕು ಉತ್ಪನ್ನಗಳ ಬಳಕೆ ಮಾಡಬಾರದು ಎಂದು ನಾಮಫಲಕಗಳನ್ನು ಅಳವಡಿಸಿ ಸಂಪೂರ್ಣವಾಗಿ ನಿಷೇಧಿಸಬೇಕು ಎಂದರು. ಸಭೆಯಲ್ಲಿ ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪ ನಿರ್ದೇಶಕ ಕೃಷ್ಣಮೂರ್ತಿ, ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.



ಉದಯವಾಹಿನಿ ಚಿತ್ರ

**ಶಾಲಾ ಕಾಲೇಜು ಆವರಣದಿಂದ ನೂರು ಮೀಟರ್ ಅಂತರದಲ್ಲಿ ತಂಬಾಕು ಉತ್ಪನ್ನಗಳ ಮಾರಾಟ ಮತ್ತು ಬಳಕೆಯನ್ನು ನಿಷೇಧಿಸಲಾಗಿದೆ. ಜಿಲ್ಲೆಯ ಕೆಲವು ಭಾಗಗಳಲ್ಲಿ ಶಾಲೆಗಳ ಸಮೀಪದಲ್ಲಿ ಮಾರಾಟವನ್ನು ಮಾಡುತ್ತಿರುತ್ತಾರೆ ಅದನ್ನು ತಡೆಗಟ್ಟಬೇಕು ಎಂದು ಪೊಲೀಸ್ ಇಲಾಖೆಗೆ ತಿಳಿಸಿದರು. ಈಗಾಗಲೇ ತಂಬಾಕು ಉತ್ಪನ್ನಗಳನ್ನು ಬಳಸಿ ವ್ಯಸನಕ್ಕೆ ಒಳಗಾಗಿರುವ 3373 ಜನರಿಗೆ ಜಿಲ್ಲೆಯ ಸರ್ಕಾರಿ ಆಸ್ಪತ್ರೆಯಲ್ಲಿ ಶಿಬಿರವನ್ನು ನಡೆಸಿ ಅವರಿಗೆ ಚಿಕಿತ್ಸೆಯನ್ನು ನೀಡುತ್ತಿದ್ದೇವೆ. ಅವರಲ್ಲಿ 163 ಜನರು ತಂಬಾಕು ಬಳಕೆ ಮುಕ್ತವಾಗಿದ್ದಾರೆ**

**-ಮಂಗಳಾ, ಅಪರ ಜಿಲ್ಲಾಧಿಕಾರಿ**

---

## ವಿಜ್ಞಾನದಿಂದ ಮೌಢ್ಯತೆ, ಅಂಧಕಾರ ನಿರ್ಮೂಲನೆ

• ಉದಯವಾಹಿನಿ ಕೋಲಾರ

ವಿಜ್ಞಾನದಿಂದ ಮಾತ್ರ ದೇಶದ ಸಮಗ್ರ ಅಭಿವೃದ್ಧಿ ಸಾಧ್ಯವಾಗಿದೆ ಮತ್ತು ಸಮಾಜದಲ್ಲಿನ ಅಂಧಕಾರ, ಮೌಢ್ಯತೆ ನಿರ್ಮೂಲನೆಗೂ ಸಹಕಾರಿಯಾಗಿದ್ದು, ವಿದ್ಯಾರ್ಥಿಗಳು ಪ್ರಶ್ನಿಸುವ ಮನೋಭಾವ ಬೆಳೆಸಿಕೊಳ್ಳಬೇಕು ಎಂದು ತಾಲ್ಲೂಕಿನ ಅರಾಭಿಕೊತ್ತನೂರು ಸರ್ಕಾರಿ ಪ್ರೌಢಶಾಲೆ ಮುಖ್ಯಶಿಕ್ಷಕಿ ತಾಹೇರಾ ನುಸ್ರತ್ ಕರೆ ನೀಡಿದರು. ತಾಲ್ಲೂಕಿನ ಅರಾಭಿ ಕೊತ್ತನೂರು ಸರ್ಕಾರಿ ಪ್ರೌಢಶಾಲೆ ಆವರಣದಲ್ಲಿ ರಾಷ್ಟ್ರೀಯ ವಿಜ್ಞಾನ ದಿನಾಚರಣೆಯ ಪ್ರತಿಜ್ಞೆ ಸ್ವೀಕರಿಸಿ ಅವರು ಮಾತನಾಡಿದರು.

ಮಕ್ಕಳಲ್ಲಿ ವೈಜ್ಞಾನಿಕ ಚಿಂತನೆ ಬೆಳೆಸುವುದು, ವಿಜ್ಞಾನ ತಂತ್ರಜ್ಞಾನ ಯೋಜನೆಗಳನ್ನು ಜನಸಾಮಾನ್ಯರ ದಿನನಿತ್ಯದ ಸಮಸ್ಯೆಗಳಿಗೆ ಪರಿಹಾರವಾಗಿ ಅನ್ವಯ ಮಾಡಿಕೊಳ್ಳುವುದು, ಮುಖ್ಯವಾಗಿ ವಿದ್ಯಾರ್ಥಿಗಳು ಓದುವ ಹವ್ಯಾಸ ಬಳಸಿಕೊಂಡರೆ ಮಾತ್ರ ಅದು ಸಾಧ್ಯ ಎಂದು ತಿಳಿಸಿದರು.

ಮಕ್ಕಳು ಮೂಢ ನಂಬಿಕೆಗಳಿಂದ ದೂರವಾಗಬೇಕು, ಪೋಷಕರಿಗೂ ಅರಿವು ಮೂಡಿಸಬೇಕು, ಯಾವುದೇ ವಿಷಯ, ನಿರ್ಧಾರವನ್ನು ಪ್ರಶ್ನಿಸಿ ಉತ್ತರ ಪಡೆದುಕೊಂಡೇ ಒಪ್ಪುವ ಪ್ರವೃತ್ತಿ ಬಲಗೊಳ್ಳಬೇಕು ಎಂದರು.

ಶಾಲೆಯ ಗಣಿತ ಶಿಕ್ಷಕ ಭವಾನಿ ಮಾತನಾಡಿ, ಏಷ್ಯಾದಲ್ಲಿ ಮೊದಲಬಾರಿಗೆ ನೋಬೆಲ್ ಪ್ರಶಸ್ತಿ ಪಡೆದ ಭಾರತದ ಹೆಮ್ಮೆಯ ವಿಜ್ಞಾನಿ ಸರ್ ಸಿ.ವಿ.ರಾಮನ್ ಅವರ ಅಪೂರ್ವ ಸಾಧನೆ ನೆನಪಿನಲ್ಲಿ ವಿಜ್ಞಾನ ದಿನ ಆಚರಿಸಲಾಗುತ್ತದೆ, ಅವರು ದೇಶಕಂಡ ಆದರ್ಶ ವ್ಯಕ್ತಿತ್ವ ಹೊಂದಿದ್ದು ಅವರ ಜೀವನ ಆದರ್ಶಗಳು ವಿದ್ಯಾರ್ಥಿಗಳಿಗೆ ಸ್ಪೂರ್ತಿ ಎಂದರು.

---

## ಕರ್ನಾಟದಲ್ಲೂ ಏಕನಾಥ ಶಿಂಧೆ ಮೇನಿಯ ಆಗಲಿದೆ

• ಉದಯವಾಹಿನಿ ಮೈಸೂರು

ಈ ಹಿಂದೆ ಮಹಾರಾಷ್ಟ್ರದಲ್ಲಿ ಶಿಂಧೆ ಮೇನಿಯ ಯಾವ ರೀತಿ ಆಯಿತೋ, ಅದೇ ರೀತಿ ಕರ್ನಾಟಕದಲ್ಲೂ ಆಗಲಿದೆ. ಇಲ್ಲಿನ ಆಡಳಿತ ಪಕ್ಷದಲ್ಲಿ ಯಾರು ಶಿಂಧೆ ಆಗುತ್ತಾರೆ ಎಂಬುದನ್ನು ಕಾದುನೋಡಿ ಎಂದು ಮಾಜಿ ಸಚಿವ ಶ್ರೀರಾಮುಲು ಹೇಳಿದರು.



ಚಾಮುಂಡಿ ಬೆಟ್ಟಕ್ಕೆ ಭೇಟಿ ನೀಡಿದ ಅವರು ದೇವಿಗೆ ವಿಶೇಷ ಪೂಜೆ ಸಲ್ಲಿಸಿದ ಬಳಿಕ ಸುದ್ದಿಗಾರರೊಂದಿಗೆ ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಕಾಂಗ್ರೆಸ್ ತೊರೆಯುವ ಊಹಾಪೋಹ ಸುದ್ದಿಗೆ ಪ್ರತಿಕ್ರಿಯಿಸಿ, ರಾಜಕಾರಣ ನಿಂತ ನೀರಲ್ಲ, ಬದಲಿಗೆ ಹರಿಯುತ್ತಿರುವ ನೀರಿನಂತೆ. ಕೆಲ ಕ್ಷಿಪ್ರ ಬೆಳವಣಿಗೆಗಳನ್ನು ರಾಜಕಾರಣದಲ್ಲಿ ನೋಡುತ್ತೇವೆ. ಕಾಂಗ್ರೆಸ್ ವೀರೇಂದ್ರ ಪಾಟೀಲ್ ಅವರನ್ನು ಯಾವ ರೀತಿ ಸಿಎಂ ಸ್ಥಾನದಿಂದ ಕೆಳಗಿಳಿಸಿತು ಎಂಬುದನ್ನು ನೋಡಿದ್ದೇವೆ. ಜತೆಗೆ ಡಿ.ದೇವರಾಜು ಅರಸು ಅವರನ್ನು ಇಳಿಸಿದ್ದನ್ನು ಕಂಡಿದ್ದೇವೆ. ಆ ರೀತಿಯ ಬೆಳವಣಿಗೆ ರಾಜ್ಯದಲ್ಲಿ ಆಗುವ ಲಕ್ಷಣಗಳಿವೆ ಎಂದರು. ಕರ್ನಾಟದಲ್ಲೂ ಇನ್ನೊಂದು ಏಕನಾಥ ಶಿಂಧೆ ಮೇನಿಯ ಆಗಲಿದೆ. ಮಹಾರಾಷ್ಟ್ರದಲ್ಲಿ ಶಿಂಧೆ ಮೇನಿಯ ಯಾವ ರೀತಿ ಆಯಿತೊ, ಅದೇ ರೀತಿ ಇಲ್ಲೂ ಆಗಲಿದೆ. ಆಡಳಿತ ಪಕ್ಷದಲ್ಲಿ ಯಾರು ಶಿಂಧೆ ಆಗುತ್ತಾರೆ ಎಂಬುದನ್ನು ಕಾದುನೋಡಿ. ಕರ್ನಾಟಕದ ಏಕನಾಥ ಶಿಂಧೆಗೆ ಬೆಂಬಲ ನೀಡುವ ವಿಚಾರವನ್ನು ನಮ್ಮ ಹೈಕಮಾಂಡ್ ತೀರ್ಮಾನ ಮಾಡಲಿದೆ ಎಂದು ಹೇಳಿದರು. ಜಾತಿಗಣತಿ ವಿಚಾರದಲ್ಲಿ ಸಾಕಷ್ಟು ಜನರಿಗೆ ಅಸಮಾಧಾನ ಇದೆ. ಮುಂದಿನ ದಿನಗಳಲ್ಲಿ ಏನಾಗುತ್ತೋ ಕಾದು ನೋಡೋಣ ಎಂದು ಹೇಳಿದರು.

---

## ಮಿನಿ ನ್ಯೂಸ್

### ಶ್ರೀ ಶನೈಶ್ವರಾಯ ಸ್ವಾಮಿಯ ಪಲ್ಲಕಿ ಉತ್ಸವ

• ಉದಯವಾಹಿನಿ ಪಿರಿಯಾಪಟ್ಟಣ

ಪಿರಿಯಾಪಟ್ಟಣ ತಾಲ್ಲೂಕಿನ ಬೆಟ್ಟದಪುರ ಸಮೀಪದ ಚಿಕ್ಕನೇರಳೆ (ಸಂತೆಮಾಳ) ಗ್ರಾಮದಲ್ಲಿ ಶಿವರಾತ್ರಿ ಹಬ್ಬದ ಅಂಗವಾಗಿ ಮೂರನೇ ವರ್ಷದ ಶ್ರೀ ಶನೈಶ್ವರಾಯ ಸ್ವಾಮಿ ಮತ್ತು ಶ್ರೀ ಪಂಚಮುಖಿ ಆಂಜನೇಯ ಸ್ವಾಮಿಯ ಸ್ವಾಮಿಯ ಪಲ್ಲಕ್ಕಿ ಉತ್ಸವ ಸಾವಿರಾರು ಭಕ್ತರ ಸಮ್ಮುಖದಲ್ಲಿ ಅದ್ದೂರಿಯಾಗಿ ನೆರವೇರಿತು.

ಗ್ರಾಮದಲ್ಲಿರುವ ಶ್ರೀ ಏಳನೇ ಶನೈಶ್ವರಾಯ ಸ್ವಾಮಿ ಹಾಗೂ ಶ್ರೀ ಪಂಚಮುಖಿ ಆಂಜನೇಯ ದೇವಸ್ಥಾನದವತಿಯಿಂದ ಶ್ರೀ ಶನಿದೇವರ ಜಯಂತಿ ಹಾಗೂ ಶಿವರಾತ್ರಿ ಅಂಗವಾಗಿ ಮೂರನೇ ವರ್ಷದ ಪಲ್ಲಕ್ಕಿ ಉತ್ಸವವನ್ನು ಆಯೋಜಿಸಲಾಗಿತ್ತು. ಶ್ರೀ ಶನಿದೇವರ ಹಾಗೂ ಪಂಚಮುಖಿ ಆಂಜನೇಯ ಸ್ವಾಮಿಯ ಉತ್ಸವ ಮೂರ್ತಿಗಳಿಗೆ ಗ್ರಾಮದ ಹೊರ ಭಾಗದಲ್ಲಿರುವ ಕೆರೆಯ ಬಳಿ ವಿಶೇಷ ನದಿ ಪೂಜೆ ಸಲ್ಲಿಸಲಾಯಿತು. ಬಳಿಕ ಅಲಂಕಾರಗೊಂಡ ಪಲ್ಲಕ್ಕಿಯ ಮೇಲೆ ದೇವರ ಉತ್ಸವ ಮೂರ್ತಿಗಳನ್ನು ಪ್ರತಿಷ್ಠಾಪಿಸಿ ವಾದ್ಯ ಹಾಗೂ ಪೂರ್ಣಕುಂಭದೊಂದಿಗೆ ಅದ್ದೂರಿಯಾಗಿ ರಸ್ತೆಯಲ್ಲಿ ಮೆರವಣಿಗೆ ಮೂಲಕ ದೇವಸ್ಥಾನಕ್ಕೆ ಕರೆತರಲಾಯಿತು.

### ಶಿವರಾತ್ರಿ ಜಾತ್ರಾ ಮಹಾ ರಥೋತ್ಸವ

• ಉದಯವಾಹಿನಿ ಹನೂರು

ತಾಲ್ಲೂಕಿನ ಪ್ರಸಿದ್ಧ ಧಾರ್ಮಿಕ ಪುಣ್ಯಕ್ಷೇತ್ರ ಶ್ರೀ ಮಲೆ ಮಹದೇಶ್ವರ ಬೆಟ್ಟದಲ್ಲಿ ಮಹಾ ಶಿವರಾತ್ರಿ ಜಾತ್ರೋತ್ಸವ ಕೇಂದ್ರ ಬಿಂದುವಾಗಿ ಬೆಳಗ್ಗೆ ಮಹದೇಶ್ವರ ಸ್ವಾಮಿಯ ಮಹಾರಥೋತ್ಸವವು ಲಕ್ಷಾಂತರ ಭಕ್ತಾದಿಗಳ ಸಮ್ಮುಖದಲ್ಲಿ ವಿಜೃಂಭಣೆಯಿಂದ ಜರುಗಿತು.

ಮಲೆ ಮಹದೇಶ್ವರ ಸ್ವಾಮಿ ದೇವಾಲಯದಲ್ಲಿ ಬೆಳಗ್ಗೆ ವಿವಿಧ ಪೂಜಾ ಕೈಂಕರ್ಯಗಳನ್ನು ನೆರವೇರಿಸಿದ ನಂತರ ಶ್ರೀ ಸ್ವಾಮಿಯ ಮಹಾ ರಥೋತ್ಸವವನ್ನು ಭಕ್ತಾದಿಗಳು ಭಕ್ತಿಯಿಂದ ತೇರನ್ನು ಎಳೆದು ಉಘೇ ಉಘೇ ಮಾದಪ್ಪ ಎಂದು ಜೈಂಕಾರ ಕೂಗುತ್ತಾ ಹರ್ಷೋದ್ಘಾರ ಮೊಳಗಿತು. ಪವಾಡ ಪುರುಷನ ನೆಲೆಯಾದ ಮಹದೇಶ್ವರ ಸ್ವಾಮಿ ದೇವಾಲಯದಲ್ಲಿ ಕಳೆದ ಐದು ದಿನಗಳಿಂದ ನಡೆಯುತ್ತಿರುವ ಮಹಾಶಿವರಾತ್ರಿ ಜಾತ್ರಾ ಮಹೋತ್ಸವದ ಕೇಂದ್ರ ಬಿಂದುವಾಗಿದ್ದ ಮಹಾ ರತೋತ್ಸವವನ್ನು ಉಘೇ ಮಾದಪ್ಪ ಉಘೇ ಮಾದಪ್ಪ ಎಂಭ ಹರ್ಷೋದ್ಗಾರ ಮೊಳಗಿಸಿದರು.

ಶಿವರಾತ್ರಿ ಜಾತ್ರಾ ಮಹಾ ರಥೋತ್ಸವ ಪ್ರಯುಕ್ತ ಮಾಯ್ಕಾರ ಮಾದಪ್ಪನಿಗೆ ವಿವಿಧ ಪೂಜಾ ಕೈಂಕರ್ಯಗಳು ನಡೆದ ಬಳಿಕ ಮಹದೇಶ್ವರ ಸ್ವಾಮಿ ಉತ್ಸವ ಮೂರ್ತಿಯನ್ನು ಬಿಳಿ ಆನೆಯ ಮೇಲೆ ಪ್ರತಿಷ್ಠಾಪಿಸಿ ದೇವಾಲಯದ ಹೊಳ ಭಾಗದಲ್ಲಿ ಬೇಡಗಂಪಣ ಸಮುದಾಯದ ವಿಧಿ ವಿಧಾನಗಳಲ್ಲಿ ಪೂಜಾ ಕೈಂಕರ್ಯಗಳನ್ನು ನೆರವೇರಿಸಿ ಪ್ರದಕ್ಷಿಣೆ ಹಾಕಲಾಯಿತು.

### ಮನೆ ಮುಂದಿದ್ದ ನಾಯಿ ಹೊತ್ತೊಯ್ದ ಚಿರತೆ

• ಉದಯವಾಹಿನಿ ತುಮಕೂರು

ಇಲ್ಲಿನ ತುರುವೇಕೆರೆ ತಾಲ್ಲೂಕು ತೊರೆಮಾವಿನಹಳ್ಳಿ ಗ್ರಾಮದಲ್ಲಿ ಚಿರತೆ ಪ್ರತ್ಯಕ್ಷವಾಗಿದೆ. ಮನೆಯ ಮುಂದಿದ್ದ ನಾಯಿಯನ್ನು ಹೊತ್ತೊಯ್ದಿದ್ದು, ಗ್ರಾಮಸ್ಥರು ಭಯಭೀತರಾಗಿದ್ದಾರೆ.

ಚಿರತೆ ಬಂದು ಹೋದ ದೃಶ್ಯ ಸಿಸಿಟಿವಿ ಕ್ಯಾಮೆರಾದಲ್ಲಿ ಸೆರೆಯಾಗಿದೆ. ಕೆಲ ದಿನಗಳಿಂದ ಗ್ರಾಮದ ಸುತ್ತಮುತ್ತ ಕಾಣಿಸಿಕೊಳ್ಳುತ್ತಿದ್ದ ಚಿರತೆ ತಡರಾತ್ರಿ ತೊರೆಮಾವಿನಹಳ್ಳಿಯ ಶಂಕರಲಿಂಗಯ್ಯ ಎಂಬುವರ ಮನೆಯಂಗಳದಲ್ಲಿ ಕಾಣಿಸಿಕೊಂಡಿದೆ. ಈ ವೇಳೆ ಮನೆಯ ಆವರಣಕ್ಕೆ ನುಗ್ಗಿ ಮನೆ ಮುಂದಿದ್ದ ನಾಯಿಯನ್ನು ಹೊತ್ತೊಯ್ದಿದೆ.

ಚಿರತೆ ಓಡಾಟದಿಂದ ಭಯಭೀತರಾಗಿರುವ ಗ್ರಾಮಸ್ಥರು, ರಾತ್ರಿ ವೇಳೆ ಮನೆಯಿಂದ ಹೊರ ಬರಲು ಆತಂಕಪಡುತ್ತಿದ್ದಾರೆ.

### ಮಂಡ್ಯ ವಿವಿ ವಿಲೀನಗೊಳಿಸುವ ಸರ್ಕಾರದ ನಿರ್ಧಾರಕ್ಕೆ ವಿರೋಧ

• ಉದಯವಾಹಿನಿ ಮಂಡ್ಯ

ಇಲ್ಲಿನ ವಿವಿ ವಿಲೀನಗೊಳಿಸುವ ಸರ್ಕಾರದ ನಿರ್ಧಾರವನ್ನು ವಿರೋಧಿಸಿ ಬಿಜೆಪಿ ಹಾಗೂ ಜೆಡಿಎಸ್ ಪಕ್ಷಗಳು ಜಂಟಿಯಾಗಿ ಮಂಡ್ಯ ಡಿಸಿ ಕಚೇರಿ ಎದುರು ಬೃಹತ್ ಪ್ರತಿಭಟನೆ ನಡೆಸಿತು.

ಮೈಸೂರು ವಿವಿಯೊಂದಿಗೆ ವಿಲೀನಗೊಳಿಸಲು ಸರ್ಕಾರ ಚಿಂತನೆ ನಡೆಸಿದೆ. ಸರ್ಕಾರದ ನಿರ್ಧಾರ ಮಂಡ್ಯ ಅಸ್ಮಿತೆಗೆ ಧಕ್ಕೆ ತಂದಿದೆ. ಬಿಜೆಪಿ ಸರ್ಕಾರದ ಕೊಠಡಿ ಕಿತ್ತುಕೊಳ್ಳಲು ಕಾಂಗ್ರೆಸ್ ಸಂಚು ನಡೆಸಿದೆ. ಸಾವಿರಾರು ವಿದ್ಯಾರ್ಥಿಗಳ ಭವಿಷ್ಯದೊಂದಿಗೆ ಆಟವಾಡುತ್ತಿದೆ ಎಂದು ಪ್ರತಿಭಟನಾಕಾರರು ಕಿಡಿಕಾರಿದರು. ಅಲ್ಲದೇ ವಿವಿ ವಿಲೀನಗೊಳಿಸುವ ನಿರ್ಧಾರ ಕೈಬಿಡುವಂತೆ ಆಗ್ರಹಿಸಿದರು. ಪ್ರತಿಭಟನೆಯಲ್ಲಿ ವಿಪಕ್ಷ ನಾಯಕ ಆರ್.ಅಶೋಕ್, ಮಾಜಿ ಡಿಸಿಎಂ ಅಶ್ವತ್ ನಾರಾಯಣ್, ಮಾಜಿ ಸಚಿವರಾದ ಸಿ.ಎಸ್.ಪುಟ್ಟರಾಜು, ಡಿ.ಸಿ.ತಮ್ಮಣ್ಣ ಸೇರಿ ಭಾಗಿಯಾಗಿದ್ದರು.

---

# ವ್ಯಾಸಂಗದ ಅವಧಿಯಲ್ಲಿಯೇ ಕೌಶಲ ತರಬೇತಿ ಅಗತ್ಯ: ಸಿ.ಪುಟ್ಟರಂಗಶೆಟ್ಟಿ

**● ಉದ್ಯೋಗ ನೀಡುವ ಸಂಸ್ಥೆಗಳು ಕೌಶಲ ನೈಪುಣ್ಯ ತರಬೇತಿ ಹೊಂದಿದ ಅಭ್ಯರ್ಥಿಗಳಿಗೆ ಆದ್ಯತೆ ನೀಡಿ ಆಯ್ಕೆ ಮಾಡಿಕೊಳ್ಳಲಿದ್ದಾರೆ**

• ಉದಯವಾಹಿನಿ ಚಾಮರಾಜನಗರ

ಶೈಕ್ಷಣಿಕ ವ್ಯಾಸಂಗದಲ್ಲಿ ಕೌಶಲ ತರಬೇತಿಯನ್ನು ನೀಡುವುದರಿಂದ ಉದ್ಯೋಗ ಪಡೆಯಲು ಅನುಕೂಲವಾಗಲಿದೆ. ಹೀಗಾಗಿ ಕೌಶಲ ನೈಪುಣ್ಯ ವಿಷಯಗಳಿಗೂ ಒತ್ತು ನೀಡಬೇಕಾದ ಅಗತ್ಯವಿದೆ ಎಂದು ಶಾಸಕ ಸಿ. ಪುಟ್ಟರಂಗಶೆಟ್ಟಿ ಅವರು ತಿಳಿಸಿದರು.

ನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಆವರಣದಲ್ಲಿಂದು ಜಿಲ್ಲಾಡಳಿತ ಮತ್ತು ಜಿಲ್ಲಾ ಪಂಚಾಯತ್, ಕೌಶಲ್ಯಾಭಿವೃದ್ಧಿ, ಉದ್ದಿಮೆಶೀಲತೆ ಮತ್ತು ಜೀವನೋಪಾಯ ಇಲಾಖೆ, ಸಂಜೀವಿನಿ ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಅಭಿಯಾನ ಮತ್ತು ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮ ಸಹಯೋಗದೊಂದಿಗೆ ದೀನ್ ದಯಾಳ್ ಉಪಾಧ್ಯಾಯ ಗ್ರಾಮೀಣ ಕೌಶಲ್ಯ ಯೋಜನೆ (ಡಿಡಿಯು-ಜಿಕೆವೈ)ಯಡಿ ಹಮ್ಮಿಕೊಳ್ಳಲಾಗಿದ್ದ ಉದ್ಯೋಗ ಮೇಳ ಉದ್ಘಾಟಿಸಿ ಅವರು ಮಾತನಾಡಿದರು.

ಪ್ರಸ್ತುತ ಸಂದರ್ಭದಲ್ಲಿ ಯಾವುದೇ ವಿದ್ಯಾರ್ಹತೆಯಿರಲಿ ಜೊತೆಗೆ ಕೌಶಲವೂ ಉದ್ಯೋಗಕ್ಕೆ ಅವಶ್ಯಕವಾಗಿದೆ. ಉದ್ಯೋಗ ನೀಡುವ ಸಂಸ್ಥೆಗಳು, ಉದ್ಯಮಗಳು, ಕೌಶಲ ನೈಪುಣ್ಯ ತರಬೇತಿ ಹೊಂದಿದ ಅಭ್ಯರ್ಥಿಗಳಿಗೆ ಆದ್ಯತೆ ನೀಡಿ ಆಯ್ಕೆ ನೀಡಿ ಆಯ್ಕೆ ಮಾಡಿಕೊಳ್ಳಲಿದ್ದಾರೆ. ಕೌಶಲ ವಿಷಯವನ್ನು ಬೋಧಿಸಲಾಗುತ್ತಿದೆ. ಎಲ್ಲಾ ಹಂತಗಳಲ್ಲಿಯೂ ಇದು ಹೆಚ್ಚಾಗಬೇಕಿದೆ ಎಂದು ಶಾಸಕರು ಹೇಳಿದರು.

ಉದ್ಯೋಗ ಮೇಳದಲ್ಲಿ ಉದ್ಯೋಗ ಹಾಗೂ ತರಬೇತಿಗೆ ಅಭ್ಯರ್ಥಿಗಳನ್ನು ಆಯ್ಕೆ ಮಾಡಿಕೊಳ್ಳಲಾಗುತ್ತದೆ. ಅಭ್ಯರ್ಥಿಗಳು ಯಾವ ಸ್ಥಳಕ್ಕೆ ನಿಯೋಜನೆಯಾದರು ವರದಿ ಮಾಡಿಕೊಳ್ಳಬೇಕು. ತರಬೇತಿ ಅನುಭವ ಪಡೆಯುವುದರಿಂದ ಮುಂದೆ ಇನ್ನ ಉತ್ತಮ ಉದ್ಯೋಗ ದೊರಕಲು ನೆರವಾಗಲಿದೆ ಎಂದು ಶಾಸಕರು ಅಭಿಪ್ರಾಯಪಟ್ಟರು.

ನಗರಕ್ಕೆ ಸಮೀಪದ ಬದನಗುಪ್ಪೆ-ಕೆಲ್ಲಂಬಳ್ಳಿ ಕೈಗಾರಿಕಾ ಪ್ರದೇಶದಲ್ಲಿ ಸ್ಥಳೀಯರಿಗೆ ಹೆಚ್ಚಿನ ಉದ್ಯೋಗ ಅವಕಾಶ ನೀಡಬೇಕೆಂದು ತಿಳಿಸಲಾಗಿದೆ. ಅನುಭವ ಇಲ್ಲದವರಿಗು ಸಾಕಷ್ಟು ಉದ್ಯೋಗಗಳನ್ನು ಕೈಗಾರಿಕಾ ಪ್ರದೇಶಗಳಲ್ಲಿ ನೀಡಲು ಅವಕಾಶವಿದೆ ಎಂದು ಶಾಸಕರಾದ ಸಿ. ಪುಟ್ಟರಂಗಶೆಟ್ಟಿ ಅವರು ತಿಳಿಸಿದರು.

ಕಾಡಾ ಅಧ್ಯಕ್ಷ ಪಿ. ಮರಿಸ್ವಾಮಿ ಅವರು ಮಾತನಾಡಿ ಜಿಲ್ಲಾ ಕೇಂದ್ರದಲ್ಲಿ ಉದ್ಯೋಗ ಮೇಳ ಆಯೋಜನೆ ಮಾಡಿರುವುದು ಔಚಿತ್ಯಪೂರ್ಣವಾಗಿದೆ. ನಿರುದ್ಯೋಗ ಸಮಸ್ಯೆಯಿಂದ ಬಳಲುತ್ತಿರುವ ಯುವ ಜನರಿಗೆ ಉದ್ಯೋಗ ಪಡೆದುಕೊಳ್ಳಲು ಈ ಉದ್ಯೋಗ ಮೇಳ ಹೆಚ್ಚು ಅನುಕೂಲಕರವಾಗಿದೆ ಎಂದರು.

ಚೂಡಾ ಅಧ್ಯಕ್ಷ ಮಹಮ್ಮದ್ ಅಸ್ಗರ್ ಮುನ್ನಾ ಅವರು ಮಾತನಾಡಿ ಅಧಿಕಾರಿಗಳು, ವಿವಿಧ ಉದ್ಯಮ ಸಂಸ್ಥೆಗಳು ಕಂಪನಿಗಳೊಂದಿಗೆ ಸಮಾಲೋಚಿಸಿ ಉದ್ಯೋಗ ಮೇಳ ಆಯೋಜನೆ ಮಾಡಿದ್ದಾರೆ.

ಇದರ ಸದುಪಯೋಗ ಪಡೆದು ಉತ್ತಮ ಜೀವನ ರೂಪಿಸಿಕೊಳ್ಳಬೇಕೆಂದು ಸಲಹೆ ಮಾಡಿದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ ಮೋನಾ ರೋತ್ ಅವರು ಇಂದಿನ ಉದ್ಯೋಗ ಮೇಳದಲ್ಲಿ 30ಕ್ಕೂ ಹೆಚ್ಚು ಪ್ರತಿಷ್ಠಿತ ಕಂಪನಿಗಳು ಭಾಗವಹಿಸಿವೆ. 18 ರಿಂದ 40 ವರ್ಷದೊಳಗಿನ ಎಲ್ಲಾ ನಿರುದ್ಯೋಗಿ ಅಭ್ಯರ್ಥಿಗಳು ಈ ಅವಕಾಶವನ್ನು ಸದ್ಬಳಕೆ ಮಾಡಿಕೊಳ್ಳಬೇಕು ಎಂದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಬಿ.ಟಿ. ಕವಿತಾ ಅವರು ಮಾತನಾಡಿ ಶೈಕ್ಷಣಿಕ ಹಿನ್ನಲೆ ಕೆಲಸ ಮಾಡುವ ಮನೋಭಾವ ಇದ್ದರೆ ಯಾರಿಗೂ ಉದ್ಯೋಗಕ್ಕೆ ಕೊರತೆ ಇರುವುದಿಲ್ಲ. ಶ್ರದ್ದೆ ಬದ್ದತೆಯಿಂದ ಕೆಲಸ ಮಾಡಿದರೆ ಬೆಳವಣಿಗೆ ಸಾಧ್ಯ ವರ್ಕ್ ಕಲ್ಚರ್ ಅನ್ನು ಬೆಳೆಸಿಕೊಂಡರೆ ಉದ್ಯೋಗದಲ್ಲಿ ಉನ್ನತ ಸ್ಥಾನ ಪಡೆಯಬಹುದು ಎಂದು ಹೇಳಿದರು.

**ಉದ್ಯೋಗ ಮೇಳ ಉದ್ಘಾಟನೆ**

ನಗರಸಭಾ ಸದಸ್ಯ ಎಂ. ಮಹೇಶ್ ಅವರು ಮಾತನಾಡಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಇನ್ನಿತರ ಇಲಾಖೆಗಳ ಸಹಕಾರದೊಂದಿಗೆ ಜಿಲ್ಲೆಯ ನಿರುದ್ಯೋಗಿಗಳಿಗೆ ಉದ್ಯೋಗ ಲಭಿಸಲು ಉದ್ಯೋಗ ಮೇಳ ಏರ್ಪಡಿಸಿರುವುದು ಒಳ್ಳೆಯ ಕಾರ್ಯವಾಗಿದೆ. ಪ್ರತಿ ಆರು ತಿಂಗಳಿಗೊಮ್ಮೆ ಇಂತಹ ಉದ್ಯೋಗ ಮೇಳಗಳು ಜಿಲ್ಲೆಯಲ್ಲಿ ಆಯೋಜನೆಯಾದರೆ ಹೆಚ್ಚಿನ ಅನುಕೂಲವಾಗಲಿದೆ ಎಂದರು.

ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಹೆಚ್.ವಿ. ಚಂದ್ರು, ನಗರಸಭೆ ಅಧ್ಯಕ್ಷ ಎಸ್. ಸುರೇಶ್, ಉಪಾಧ್ಯಕ್ಷೆ ಮಮತ, ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಲಕ್ಷ್ಮೀ. ಪಿ, ಯೋಜನಾ ನಿರ್ದೇಶಕ ಕಿರಣ್ ಪಡ್ನೇಕರ್, ಕಾಲೇಜಿನ ಪ್ರಾಂಶುಪಾಲ ಗುರುಪ್ರಸಾದ್, ಇತರರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

**ಉದ್ಯೋಗದಾತ ಕಂಪನಿಗಳ ಸ್ಟಾಲ್‌ಗಳನ್ನು ಉದ್ಘಾಟಿಸಿ ಮಾತನಾಡಿದ ಶಾಸಕ ಎ.ಆರ್. ಕೃಷ್ಣಮೂರ್ತಿ ಅವರು ಡಾ. ಬಿ.ಆರ್. ಅಂಬೇಡ್ಕರ್ ಅವರು ರಚಿಸಿದ ಸಂವಿಧಾನ ಜಾರಿಯಾದ ಮೇಲೆ ಎಲ್ಲರಿಗೂ ಶಿಕ್ಷಣ, ಉದ್ಯೋಗ, ಸ್ವಾವಲಂಬಿ ಬದುಕಿಗೆ ಅವಕಾಶ ಕಲ್ಪಿಸಿಕೊಡಲಾಗಿದೆ. ನಿರುದ್ಯೋಗಿಗಳಿಗೆ ಉದ್ಯೋಗ ಪಡೆಯಲು ಅವಕಾಶ ಮಾಡಿಕೊಟ್ಟಿರುವ ಉದ್ಯೋಗ ಮೇಳ ಆಯೋಜನೆಯಾಗಿರುವುದು ಉಪಯುಕ್ತ ಕಾರ್ಯವಾಗಿದೆ -ಸಿ.ಪುಟ್ಟರಂಗಶೆಟ್ಟಿ**



ಉದಯವಾಹಿನಿ ಚಿತ್ರ

**ಬದನಗುಪ್ಪೆ-ಕೆಲ್ಲಂಬಳ್ಳಿ ಕೈಗಾರಿಕಾ ಪ್ರದೇಶವು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಅವಧಿಯಲ್ಲಿಯೇ ಆರಂಭವಾಯಿತು. ಇಲ್ಲಿನ ಕೈಗಾರಿಕೆಗಳಿಗೆ ಭೂಮಿ, ನೀರು, ವಿದ್ಯುತ್ ಎಲ್ಲವೂ ಸಹ ಸ್ಥಳೀಯವಾಗಿ ಪೂರೈಕೆಯಾಗುತ್ತಿದೆ. ಹೀಗಾಗಿ ಸ್ಥಳೀಯ ನಿರುದ್ಯೋಗಿಗಳಿಗೆ ಹೆಚ್ಚಿನ ಅವಕಾಶ ಕೊಡಬೇಕು. ಇದರಿಂದ ನಿರುದ್ಯೋಗ ಸಮಸ್ಯೆ ನಿವಾರಣೆಯಾಗಲಿದೆ. ಜಿಲ್ಲೆಯ ಅಭ್ಯರ್ಥಿಗಳು ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಬರೆದು ಉನ್ನತ ಹುದ್ದೆಗಳನ್ನು ಪಡೆಯಬೇಕು -ಎ.ಆರ್. ಕೃಷ್ಣಮೂರ್ತಿ**

ಅಂತರಾಳದಿಂದ..
EDITORIAL

# ತಮ್ಮ ಮೌನಕ್ಕೆ ರಾಜ್ಯಗಳು


## ಕಟ್ಟಬೇಕಾದ ಭಾರೀ ತೆರಿಗೆ

ಈಗಾಗಲೇ ಜಿಎಸ್‌ಟಿ ಪರಿಹಾರವನ್ನು ಕೇಂದ್ರ ಸರಕಾರ ಸ್ಥಗಿತಗೊಳಿಸಿರುವ ಬಗ್ಗೆ ರಾಜ್ಯ ಸರಕಾರಗಳು ಆಕ್ರೋಶ ವ್ಯಕ್ತಪಡಿಸುತ್ತಿವೆ. ಕರ್ನಾಟಕ ಸರಕಾರವಂತೂ, ತನ್ನ ಪಾಲಿಗೆ ಹಣವನ್ನು ನೀಡಲು ಕೇಂದ್ರ ಸರಕಾರ ಸತಾಯಿಸುತ್ತಿದೆ ಎಂದು ಆರೋಪ ಮಾಡಿದೆ. ಮಾತ್ರವಲ್ಲ, ಇದರ ವಿರುದ್ಧ ನ್ಯಾಯಾಲಯದ ಕದವನ್ನೂ ತಟ್ಟಿದೆ. ಸಂಸತ್ ಮುಂದೆ ಹಲವು ಬಾರಿ ಧರಣಿ ಕೂತು, ಪ್ರಧಾನಿ ಮೋದಿಯ ವಿರುದ್ಧ ಘೋಷಣೆ ಕೂಗಿದೆ. ಕರ್ನಾಟಕ ಅತ್ಯಧಿಕ ತೆರಿಗೆಯನ್ನು ಪಾವತಿಸುವ ರಾಜ್ಯವಾದರೂ, ತನ್ನ ಪಾಲಿನ ಅನುದಾನಗಳನ್ನು ಪಡೆಯುವ ಸಂದರ್ಭದಲ್ಲಿ ಪಕ್ಷಪಾತವನ್ನು ಎದುರಿಸುತ್ತಾ ಬಂದಿದೆ. ಡಬಲ್ ಇಂಜಿನ್ ಸರಕಾರವಿದ್ದಾಗಲೂ ರಾಜ್ಯದ ಸ್ಥಿತಿ ಭಿನ್ನವಾಗಿಯೇನೂ ಇರಲಿಲ್ಲ.ನಮ್ಮ ರಾಜ್ಯವು ಪ್ರತಿವರ್ಷ ಸುಮಾರು ನಾಲ್ಕು ಲಕ್ಷ ಕೋಟಿ ರೂಪಾಯಿಗಳನ್ನು ಕೇಂದ್ರಕ್ಕೆ ಒಪ್ಪಿಸುತ್ತಿದೆ. ತಾನು ಸಲ್ಲಿಸಿದ ತೆರಿಗೆ ಪ್ರಮಾಣಕ್ಕೆ ಹೋಲಿಸಿದರೆ ಮರಳಿ ಸಿಗುವುದು ಪ್ರತಿ ರೂಪಾಯಿಗೆ 15 ಪೈಸೆ ಮಾತ್ರ. ಆದರೆ ಅದನ್ನು ಕೂಡ ರಾಜ್ಯಕ್ಕೆ ನೀಡಲು ಕೇಂದ್ರ ಸತಾಯಿಸುತ್ತಿದೆ. ಹದಿನೈದನೇ ಹಣಕಾಸು ಆಯೋಗ ತೆರಿಗೆ ಹಂಚಿಕೆಯ ಪ್ರಮಾಣವನ್ನು ಶೇ. 4.713ರಿಂದ ಶೇ. 3.64ಕ್ಕೆ ಇಳಿಸಿದ್ದ ಕಾರಣದಿಂದಾಗಿ ಕರ್ನಾಟಕ ಕಳೆದ ಐದು ವರ್ಷಗಳಲ್ಲಿ 68,775 ಕೋಟಿ ರೂಪಾಯಿಯನ್ನು ಕಳೆದುಕೊಂಡಿದೆ ಎಂದು ರಾಜ್ಯ ಆರೋಪಿಸುತ್ತಿದೆ. ಅಷ್ಟೇ ಅಲ್ಲ, 15ನೇ ಹಣಕಾಸು ಆಯೋಗದ ಅವಧಿ ಮುಂದಿನ ವರ್ಷ ಪೂರ್ಣಗೊಳ್ಳಲಿದೆ. ಆದರೆ ಈ ಆಯೋಗ ಶಿಫಾರಸ್ಸು ಮಾಡಿರುವ ವಿಶೇಷ ಅನುದಾನ 5,495 ಕೋಟಿ ರೂಪಾಯಿ ಮತ್ತು ರಾಜ್ಯ ಕೇಂದ್ರಿತ 6,000 ಕೋಟಿ ರೂಪಾಯಿ ಮೊತ್ತದ ವಿಶೇಷ ಅನುದಾನವನ್ನು ಇನ್ನೂ ಬಿಡುಗಡೆ ಮಾಡಿಲ್ಲ.ಇದೇ ಸಂದರ್ಭದಲ್ಲಿ ಕಡಿಮೆ ತೆರಿಗೆ ಪಾವತಿಸುವ ಉತ್ತರ ಭಾರತದ ರಾಜ್ಯಗಳಿಗೆ ಹೆಚ್ಚು ಅನುದಾನಗಳು ಹರಿದು ಹೋಗುತ್ತಿವೆ. ಇದಕ್ಕೆ ಸ್ಪಷ್ಟೀಕರಣ ನೀಡಬೇಕಾಗಿದ್ದ ವಿತ್ತ ಸಚಿವರು, 'ಹೆಚ್ಚು ತೆರಿಗೆ ಪಾವತಿಸುವ ರಾಜ್ಯಗಳಿಗೆ ಹೆಚ್ಚು ಅನುದಾನ ನೀಡಬೇಕು ಎನ್ನುವ ನಿಯಮವಿಲ್ಲ' ಎಂದು ಕೇಂದ್ರದ ಕೃತ್ಯವನ್ನು ಈಗಾಗಲೇ ಸಮರ್ಥಿಸಿಕೊಂಡಿದ್ದಾರೆ. ಜಿಎಸ್‌ಟಿಯಿಂದ ವ್ಯಾಪಾರ ಸುಲಭವಾಗುತ್ತದೆ, ಬೆಲೆ ಇಳಿಕೆಯಾಗುತ್ತದೆ ಎನ್ನುವ ಭರವಸೆ ಹುಸಿಯಾಗಿದೆ. ವ್ಯಾಪಾರ ಇನ್ನಷ್ಟು ಸಂಕಷ್ಟಕ್ಕೀಡಾಗಿದೆ. ಮೇಲಿಂದ ಮೇಲೆ ಬೀಳುತ್ತಿರುವ ತೆರಿಗೆಯಿಂದ ತತ್ತರಿಸಿ ಉದ್ದಿಮೆಗಳು ಒಂದೊಂದಾಗಿ ಮುಚ್ಚುವ ಹಂತಕ್ಕೆ ಬಂದಿವೆ.

> ಇದು ಸಹಜವಾಗಿಯೇ ಕಾರ್ಪೊರೇಟ್‌ಗಳ ಹಿತೈಷಿ' ಮೋದಿ ನೇತೃತ್ವದ ಸರಕಾರವನ್ನು ಹತಾಶೆಗೆ ತಳ್ಳಿದೆ. ರಾಜ್ಯಗಳು ತನ್ನ ಅಭಿವೃದ್ಧಿ ಯೋಜನೆಗಳನ್ನು ತನ್ನ ಮೂಗಿನ ನೇರಕ್ಕೆ ಅನುಷ್ಠಾನಗೊಳಿಸಬೇಕು ಎನ್ನುವ ನಿಟ್ಟಿನಲ್ಲಿ ಕೇಂದ್ರ ಸರಕಾರ ಇದೀಗ ತೆರಿಗೆಯ ಪಾಲಿನಲ್ಲಿ ಇನ್ನಷ್ಟು ಕಡಿತಗೊಳಿಸಿ ರಾಜ್ಯಗಳ ಕೈಗಳನ್ನು ಕಟ್ಟಿ ಹಾಕಲು ಮುಂದಾಗಿದೆ. ಅದರ ಭಾಗವಾಗಿಯೇ ತೆರಿಗೆಯಲ್ಲಿ ರಾಜ್ಯಗಳಿಗೆ ನೀಡುವ ಪಾಲನ್ನು ಈಗಿನ ಶೇ. 41ರಿಂದ ಶೇ. 40ಕ್ಕೆ ಇಳಿಸಲು ಶಿಫಾರಸ್ಸು ಮಾಡುವಂತೆ ಹಣಕಾಸು ಆಯೋಗಕ್ಕೆ ಕೋರಿಕೆ ಸಲ್ಲಿಸಲು ಕೇಂದ್ರ ಸರಕಾರ ಸಿದ್ಧತೆ ನಡೆಸಿದೆ.

ಇದೇ ಸಂದರ್ಭದಲ್ಲಿ ಕಡಿಮೆ ತೆರಿಗೆ ಪಾವತಿಸುವ ಉತ್ತರ ಭಾರತದ ರಾಜ್ಯಗಳಿಗೆ ಹೆಚ್ಚು ಅನುದಾನಗಳು ಹರಿದು ಹೋಗುತ್ತಿವೆ. ಇದಕ್ಕೆ ಸ್ಪಷ್ಟೀಕರಣ ನೀಡಬೇಕಾಗಿದ್ದ ವಿತ್ತ ಸಚಿವರು, 'ಹೆಚ್ಚು ತೆರಿಗೆ ಪಾವತಿಸುವ ರಾಜ್ಯಗಳಿಗೆ ಹೆಚ್ಚು ಅನುದಾನ ನೀಡಬೇಕು ಎನ್ನುವ ನಿಯಮವಿಲ್ಲ' ಎಂದು ಕೇಂದ್ರದ ಕೃತ್ಯವನ್ನು ಈಗಾಗಲೇ ಸಮರ್ಥಿಸಿಕೊಂಡಿದ್ದಾರೆ. ಜಿಎಸ್‌ಟಿಯಿಂದ ವ್ಯಾಪಾರ ಸುಲಭವಾಗುತ್ತದೆ, ಬೆಲೆ ಇಳಿಕೆಯಾಗುತ್ತದೆ ಎನ್ನುವ ಭರವಸೆ ಹುಸಿಯಾಗಿದೆ. ವ್ಯಾಪಾರ ಇನ್ನಷ್ಟು ಸಂಕಷ್ಟಕ್ಕೀಡಾಗಿದೆ. ಮೇಲಿಂದ ಮೇಲೆ ಬೀಳುತ್ತಿರುವ ತೆರಿಗೆಯಿಂದ ತತ್ತರಿಸಿ ಉದ್ದಿಮೆಗಳು ಒಂದೊಂದಾಗಿ ಮುಚ್ಚುವ ಹಂತಕ್ಕೆ ಬಂದಿವೆ. ಇದೇ ಸಂದರ್ಭದಲ್ಲಿ ರಾಜ್ಯಗಳಿಗೆ ನೀಡುವ ಜಿಎಸ್‌ಟಿ ಪರಿಹಾರವನ್ನು ಆರಂಭದಲ್ಲಿ 'ಕೊರೋನ ವಿಪತ್ತನ್ನು' ಮುಂದಿಟ್ಟು ಕಡಿತ ಮಾಡಿತು. ತನ್ನ ವೈಫಲ್ಯವನ್ನು ವಿತ್ತ ಸಚಿವರು ದೇವರ ತಲೆಗೆ ಕಟ್ಟಿದರು. ರಾಜ್ಯ ಸರಕಾರ ತನ್ನ ಹಕ್ಕಿನ ಹಣವನ್ನು ಕೇಳಿದಾಗಲೆಲ್ಲ 'ಜನರಿಗೆ ಉಚಿತ ಯಾಕೆ ಕೊಟ್ಟಿರಿ' ಎಂದು ಕೇಂದ್ರ ಕೇಳಲು ಶುರು ಮಾಡಿತು. ಜನರ ಹಣವನ್ನು ಜನರ ಅಭಿವೃದ್ಧಿಗೆ ಅದರಲ್ಲೂ ತಳಸ್ತರದ ಜನರ ಏಳಿಗೆಗೆ ಬಳಸುವುದಕ್ಕೆ ರಾಜ್ಯಗಳು ಕೇಂದ್ರವನ್ನು ಕೇಳುವ ಅಗತ್ಯವೇನಿದೆ ಕೇಂದ್ರದ ಎಲ್ಲಾ ಅಸಹಕಾರಗಳ ನಡುವೆಯೂ ಕರ್ನಾಟಕದಲ್ಲಿ ಗ್ಯಾರಂಟಿ ಯೋಜನೆಗಳನ್ನು ಸರಕಾರ ಯಶಸ್ವಿಯಾಗಿ ಅನುಷ್ಠಾನಗೊಳಿಸಿದೆ. ರಾಜ್ಯಗಳಿಗೆ ನೀಡುವ ತೆರಿಗೆ ಪಾಲಿನಲ್ಲಿ ಶೇ. 1ರಷ್ಟು ಕಡಿತಗೊಳಿಸಿದರೆ, ಸುಮಾರು 350 ಶತ ಕೋಟಿ ರೂಪಾಯಿ ಕೇಂದ್ರದ ಜೇಬಿನಲ್ಲೇ ಉಳಿಯಲಿದೆ.

ಅನುದಾನ ಹಂಚಿಕೆಯ ಬಗ್ಗೆ ರಾಜ್ಯಗಳಲ್ಲಿರುವ ಅಸಮಾಧಾನಗಳನ್ನು ಇತ್ಯರ್ಥಗೊಳಿಸಲು ಮುಂದಾಗದ ಕೇಂದ್ರ ಸರಕಾರ, ತೆರಿಗೆಯ ಪಾಲಿನಲ್ಲಿ ಇನ್ನಷ್ಟು ಕಡಿತಕ್ಕೆ ಮುಂದಾಗಿರುವುದರ ಹಿಂದೆ, ಒಕ್ಕೂಟ ವ್ಯವಸ್ಥೆಯನ್ನು ದುರ್ಬಲಗೊಳಿಸಿ ರಾಜ್ಯಗಳ ಮೇಲೆ ತನ್ನ ಆರ್ಥಿಕ ನಿಯಂತ್ರಣವನ್ನು ಇನ್ನಷ್ಟು ಬಿಗಿಗೊಳಿಸುವ ದುರುದ್ದೇಶ ಎದ್ದು ಕಾಣುತ್ತಿದೆ.ರಾಜ್ಯಗಳು ತಮ್ಮ ಹಕ್ಕಿನ ತೆರಿಗೆ ಹಣದ ಬದಲಿಗೆ ಕೇಂದ್ರ ನೀಡುವ ಅನುದಾನವನ್ನೇ ನೆಚ್ಚಿಕೊಳ್ಳಲು ಆರಂಭಿಸಿದರೆ, ಜನಪರ ಯೋಜನೆಗಳನ್ನು ಘೋಷಣೆ ಮಾಡಬೇಕಾದಾಗಲೆಲ್ಲ ಕೇಂದ್ರದ ಮುಂದೆ ಹಲ್ಲು ಗಿಂಜಬೇಕಾಗುತ್ತದೆ. ಮುಂದಕ್ಕೆ ಗ್ಯಾರಂಟಿಗಳಂತಹ ಯೋಜನೆಗಳನ್ನು ಜಾರಿಗೊಳಿಸಬೇಕಾದರೆ ಕೇಂದ್ರದ ಅನುಮತಿ ಪಡೆಯಬೇಕಾಗಬಹುದು. ದೇಶಕ್ಕೆ ಸಾಲ ನೀಡುವ ಸಂದರ್ಭದಲ್ಲಿ ವಿಶ್ವಬ್ಯಾಂಕ್ ನಿಬಂಧನೆಗಳನ್ನು ಹಾಕುವಂತೆಯೇ ಕೇಂದ್ರ ಸರಕಾರವೂ ರಾಜ್ಯಗಳಿಗೆ ನಿಬಂಧನೆಗಳನ್ನು ವಿಧಿಸಬಹುದು. ಕಳೆದ ಬಜೆಟ್‌ನಲ್ಲಿ ಬಿಹಾರ ದೊಡ್ಡ ಪಾಲಿನ ಅನುದಾನವನ್ನು ತನ್ನದಾಗಿಸಿಕೊಂಡಿತು. ಕರ್ನಾಟಕಕ್ಕೆ ಬಜೆಟ್‌ನಲ್ಲಿ ಏನೇನೂ ಇದ್ದಿರಲಿಲ್ಲ. ಆರ್ಥಿಕವಾಗಿ ರಾಜ್ಯವನ್ನು ದುರ್ಬಲಗೊಳಿಸಿ, ಗ್ಯಾರಂಟಿ ಯೋಜನೆಗಳನ್ನು ಹಿಂದೆಗೆದುಕೊಳ್ಳುವಂತೆ ಪರೋಕ್ಷ ಒತ್ತಡ ಹೇರುವುದು ಕೇಂದ್ರ ಸರಕಾರದ ಉದ್ದೇಶವೆನ್ನುವುದು ಸ್ಪಷ್ಟ. ರಾಜ್ಯ ತನ್ನ ಹಣಕ್ಕೆ ಬೇಡಿಕೆ ಇಟ್ಟಾಗಲೆಲ್ಲ 'ಗ್ಯಾರಂಟಿ ಯೋಜನೆಗಳ ಕಡೆಗೆ ಕೇಂದ್ರ ಸರಕಾರ ಕೈ ತೋರಿಸಿದ್ದು ಇದೀಗ ತೆರಿಗೆ ಹಂಚಿಕೆಯಲ್ಲಿ ಪಾಲು ಕಡಿತವಾದರೆ ಬಿಜೆಪಿಯೇತರ ಸರಕಾರವಿರುವ ರಾಜ್ಯಗಳು ತೀವ್ರ ಆರ್ಥಿಕ ಸಂಕಷ್ಟಕ್ಕೆ ಸಿಲುಕುವ ಸಾಧ್ಯತೆಗಳಿವೆ.ಒಂದೆಡೆ ರಾಜಕೀಯವಾಗಿ ಕೇಂದ್ರದಲ್ಲಿ ದಕ್ಷಿಣ ರಾಜ್ಯಗಳ ಪ್ರಾತಿನಿಧ್ಯವನ್ನು ಹಂತಹಂತವಾಗಿ ಕಡಿಮೆಗೊಳಿಸುವ ನಿಟ್ಟಿನಲ್ಲಿ ಕೇಂದ್ರ ತಂತ್ರಗಳನ್ನು ಹೆಣೆಯುತ್ತಿದೆ.




• ಹಿಂದಿನ ಸಂಚಿಕೆಯಿಂದ 78 ನೆಯ ಅಧ್ಯಾಯ

ಈಗ ನಿನ್ನ ತಂದೆಯಾದ ದಶರಥರಾಜನು ಕೈಕೇಯಾದೇವಿಯೊಡನೆ ಕುಳಿತಿದ್ದಾನೆ. ನಿನ್ನನ್ನು ನೋಡಬೇಕೆಂಬ ಲವಲವಿಕೆಯಿಂದ ಕರೆತರಹೇಳಿ ನನ್ನನ್ನು ಕಳುಹಿಸಿದನು. ಆದಕಾರಣ ನಾನು ನಿನ್ನ ಸಮೀಪಕ್ಕೆ ಬಂದೆನು ಎಂದು ಬಿನ್ನವಿಸಿದನು. ಶ್ರೀರಾಮನು ಸುಮಂತ್ರನಿಗೆ ಸತ್ಕಾರಗಳನ್ನು ಮಾಡಿ ಸೀತಾದೇವಿಯನ್ನು ಕುರಿತು ಸೀತೆ ನನ್ನ ತಂದೆಯಾದ ದಶರಥರಾಜನೂ ತಾಯಿಯಾದ ಕೈಕೇಯಾದೇವಿಯು ನನ್ನ ಅಂತರಂಗವನ್ನು ಬಲ್ಲವರು : ಅವರಿಬ್ಬರೂ ಮಂತ್ರಾಲೋಚನೆಯನ್ನು ಮಾಡಿ ನನಗೆ ಪಟ್ಟಾಭಿಷೇಕವನ್ನು ಮಾಡ ಬೇಕೆಂದು ನಿಶ್ಚಯಿಸಿರಬೇಕು. ಕೈಕೇಯಾದೇವಿಯು ಯಾವಾಗಲೂ ನನಗೆ ಹಿತವಾದ ಕಾರ್ಯವನ್ನೇ ಚಿಂತಿಸುವಳು. ನನ್ನ ತಂದೆಯು ನನ್ನ ಭಾಗ್ಯದಿಂದ ಆ ದೇವಿಯ ಅರಮನೆಗೆ ಹೋಗಿ ಸತ್ಕಥಾ ವಿನೋದಗಳಿಂದ ಸಂತುಷ್ಟ ಚಿತ್ರನಾಗಿ ನನಗೆ ಹಿತವನ್ನು ಬಯಸುವ ಸುಮಂತ್ರನನ್ನು ಕಳುಹಿಸಿದ್ದಾನೆ. ಈತನು ದಶರಥರಾಜನ ಮನಸ್ಸನ್ನು ಬಲ್ಲವನು. ಅವಶ್ಯವಾಗಿ ಈ ದಿವಸ ನನ್ನ ತಂದೆಯು ನನಗೆ ಪಟ್ಟಾಭಿಷೇಕವನ್ನು ಮಾಡುವನು. ನಾನು ಶೀಘ್ರದಲ್ಲಿ ಮಹಾರಾಜನನ್ನು ಕಂಡು ಬರುತ್ತೇನೆ. ನೀನು ನಿನ್ನ ಸಖಿಯರೊಡನೆ ಇರು ಎಂದು ಸಂತವಿಟ್ಟು ದಶರಥರಾಜನ ಬಳಿಗೆ ತೆರಳಿದನು. ಸೀತಾದೇವಿಯು ರಾಮನಿಗೆ ಮಂಗಳವನ್ನು ಬಯಸುತ್ತ ಆತನ ಹಿಂದೆ ಹೊರಬಾಗಿಲವರೆಗೆ ಬಂದು ಆತನನ್ನು ನೋಡಿ ಪ್ರಾಣಕಾಂತ, ನಿನ್ನ ಪಟ್ಟಾಭಿಷೇಕವು ಸ್ವಾಮಿಯ ಕೃಪೆಯಿಂದ ನೆರವೇರಲಿ. ಪೂರ್ವದಲ್ಲಿ ಬ್ರಹ್ಮದೇವನು ದೇವೇಂದ್ರನಿಂದ ರಾಜಸೂಯಯಾಗವನ್ನು ಮಾಡಿಸಿದಂತೆ ದಶರಥರಾಜನು ನಿನ್ನಿಂದ ರಾಜಸೂಯಯಾಗವನ್ನು ಮಾಡಿಸುವಂತಾಗಲಿ, ನಾನು ಅದನ್ನು ನೋಡಿ ಸಂತೋಷಪಡುವೆನು, ನೀನು ರಾಜಸೂಯ ಯಾಗದೀಕ್ಷೆಯನ್ನು ಕೈಗೊಂಡು ಕೃಷ್ಣಾಜಿನವನ್ನು ಧರಿಸಿಕೊಂಡು ಎರಳೆಯ ಕೊಂಬನ್ನು ಕೈಯಲ್ಲಿಟ್ಟುಕೊಂಡು ಶುಚಿಯಾಗಿ ಸದಾಚಾರಸಂಪನ್ನನಾಗಿರು ವುದನ್ನು ನೋಡಿ ನಾನು ನಿನ್ನ ಸೇವೆಯನ್ನು ಮಾಡುವಂತಾಗಲಿ. ನಿನ್ನ ಸಮಸ್ತವಾದ ರಾಜ್ಯದಲ್ಲಿ ಮೂಡಣ ದಿಕ್ಕನ್ನು ದೇವೇಂದ್ರನು ಪರಿಪಾಲಿಸಲಿ. ತೆಂಕಣ ದಿಕ್ಕನ್ನು ಯಮನು ಪರಿಪಾಲಿಸಲಿ. ಪಡುವಣ ದಿಕ್ಕನ್ನು ವರುಣನು ಪರಿಪಾಲಿಸಲಿ. ಬಡಗಣ ದಿಕ್ಕನ್ನು ಕುಬೇರನು ಪರಿಪಾಲಿಸಲಿ ಎಂದು ಪ್ರಿಯವಚನಗಳನ್ನು ನುಡಿದಳು. ಶ್ರೀರಾಮನು ಸೀತಾದೇವಿಯನ್ನು ಅಂತಃಪುರದಲ್ಲಿರುವಂತೆ ಸೂಚಿಸಿ ಮಾಂಗಲ್ಯವಾಗಿ ಪಟ್ಟಾಭಿಷೇಕಕಾಲೋಚಿತವಾದ ಸಮಸ್ತ ಆಭರಣಗಳಿಂದ ಅಲಂಕೃತನಾಗಿ ಸುಮಂತ್ರನೊಡನೆ ಮಹಾಮೇರುಪರ್ವತದ ಗುಹೆಯಿಂದ ಸಿಂಹರಾಜನು ಹೊರಡುವಂತೆ ತನ್ನ ಅರಮನೆಯಿಂದ ಹೊರಟನು. ನಡುವಣ ಬಾಗಿಲಲ್ಲಿ ಬಿಲ್ಲುಬಾಣಗಳನ್ನು ಹಿಡಿದು ಕೈಮುಗಿದುಕೊಂಡು ಮಿತ್ರರೊಡನೆ ನಿಂತಿದ್ದ ಲಕ್ಷ್ಮಣನನ್ನೂ ತನ್ನ ಪಟ್ಟಾಭಿಷೇಕಕ್ಕೆ ಅನುಕೂಲರಾಗಿದ್ದ ಜನರನ್ನೂ ನೋಡಿ ಅವರಿಗೆ ಅನೇಕ ಸತ್ಕಾರಗಳನ್ನು ಮಾಡಿದನು.


ಮುಂದುವರಿಯುವುದು...

# ಮಕ್ಕಳೇ ಈ ಕೆಲಸಗಳನ್ನು ಮಾಡಿ- ಪರೀಕ್ಷೆ ಸುಲಭ..



ವಿಶ್ವಾಸ್.ಡಿ.ಗೌಡ
• ಉದಯವಾಹಿನಿ, ವಿಶೇಷ


ಮಕ್ಕಳ ಶೈಕ್ಷಣಿಕ ಬೆಳವಣಿಗೆಯಲ್ಲಿ ಶಾಲಾ ಪರೀಕ್ಷೆಗಳು ಪ್ರಮುಖ ಹಂತವಾಗಿದೆ. ಮಕ್ಕಳ ಪರೀಕ್ಷೆ ಒಂದರ್ಥದಲ್ಲಿ ಪೋಷಕರ ಪರೀಕ್ಷೆ. ಮಕ್ಕಳಿಗೆ ಓದುವ ಒತ್ತಡ ಅವರಿಗಿರುವಷ್ಟೇ ಪೋಷಕರಿಗೂ ಇರುತ್ತದೆ. ವರ್ಷವಿಡೀ ಚೆನ್ನಾಗಿ ಓದುವ ಮಗು ಇದ್ದರೆ ಪರವಾಗಿಲ್ಲ, ಇಲ್ಲದಿದ್ದರೆ, ಪರೀಕ್ಷೆಗಳು ಹತ್ತಿರವಾದಾಗ ಒತ್ತಡದಲ್ಲಿ ಓದುವುದರಿಂದ ಮಕ್ಕಳಿಗೆ ಏನೂ ಅರ್ಥವಾಗುವುದಿಲ್ಲ ಮತ್ತು ಪರೀಕ್ಷೆಯಲ್ಲಿ ಪ್ರಶ್ನೆಗಳಿಗೆ ಮಕ್ಕಳು ಹೇಗೆ ಉತ್ತರಿಸುತ್ತಾರೆ ಎಂದು ಪಾಲಕರು ಚಿಂತಿಸತೊಡಗುತ್ತಾರೆ. 10, 12ನೇ ತರಗತಿಯಂತಹ ಮಹತ್ವದ ಪರೀಕ್ಷೆಗಳಿದ್ದರೆ ಪೋಷಕರಿಗೆ ಹೆಚ್ಚು ಒತ್ತಡವಿರುತ್ತದೆ. ಇದನ್ನು ತಡೆಯಲು ಮತ್ತು ಕೊನೆಯ ಹಂತದಲ್ಲಿ ಅಂದರೆ ಅಂತಿಮ ಪರೀಕ್ಷೆಯ ಸಂದರ್ಭದಲ್ಲಿ, ಮಕ್ಕಳ ಆರೋಗ್ಯ ಮತ್ತು ಮಾನಸಿಕ



ಆರೋಗ್ಯವು ಉತ್ತಮವಾಗಿ ಉಳಿಯಲು ಪೋಷಕರು ಕೆಲವು ವಿಷಯಗಳತ್ತ ಗಮನ ಹರಿಸಬೇಕು.


ಅವು ಏನೆಂದು ನೋಡೋಣ...

**1. ಆಹಾರ ಪದ್ಧತಿ... :** ಪರೀಕ್ಷೆಯ ಅವಧಿಯಲ್ಲಿ ಮಕ್ಕಳ ಆಹಾರವು ಸಾಧ್ಯವಾದಷ್ಟು ಪೌಷ್ಟಿಕವಾಗಿರಬೇಕು. ಈ ಆಹಾರವು ತಾಜಾ ಮತ್ತು ಹಗುರವಾಗಿರುವಂತೆ ಎಚ್ಚರಿಕೆ ವಹಿಸಬೇಕು. ಆಹಾರದ ಕಾರಣದಿಂದಾಗಿ ಜೀರ್ಣಕಾರಿ ಸಮಸ್ಯೆಗಳು ಆಗದಂತೆ ಎಚ್ಚರಿಕೆ ವಹಿಸಬೇಕು. ನಿಮ್ಮ ಆಹಾರದಲ್ಲಿ ನೀರು ಮತ್ತು ದ್ರವಗಳನ್ನು ಸೇರಿಸಲು ಮರೆಯದಿರಿ.



**ಜೀರ್ಣಕಾರಿ ಸಮಸ್ಯೆಗಳು ಆಗದಂತೆ ಎಚ್ಚರಿಕೆ**

**2. ನಿದ್ರೆ :** ಸಾಮಾನ್ಯವಾಗಿ, ಅಧ್ಯಯನದ ಒತ್ತಡ ಬಂದಾಗ, ಮಕ್ಕಳು ತಡ ರಾತ್ರಿಯವರೆಗೂ ಎಚ್ಚರವಾಗಿರುತ್ತಾರೆ ಅಥವಾ ಬೆಳಿಗ್ಗೆ ಬೇಗ ಎದ್ದು ಅಧ್ಯಯನ ಮಾಡುತ್ತಾರೆ. ಇದರಿಂದ ಓದುತ್ತಿದ್ದರೂ ಸರಿಯಾಗಿ ಪರೀಕ್ಷೆಯ ಸಮಯದಲ್ಲಿ ನಿದ್ದೆ ಬರುವ ಸಾಧ್ಯತೆ ಇರುತ್ತದೆ. ಆದ್ದರಿಂದ, ಮಕ್ಕಳು ರಾತ್ರಿಯಲ್ಲಿ 7 ರಿಂದ 8 ಗಂಟೆಗಳ ಪೂರ್ಣ ನಿದ್ರೆ ಪಡೆಯುತ್ತಾರೆ ಎಂದು ಖಚಿತಪಡಿಸಿಕೊಳ್ಳಿ. ತಡರಾತ್ರಿ ಹಾಗೂ ನಸುಕಿನಲ್ಲಿ ಜಾಗರಣೆ ಮಾಡಿದರೆ ಮಾತ್ರ ಚೆನ್ನಾಗಿ ಓದಿದಂತೆ ಎಂಬ ತಪ್ಪು ಕಲ್ಪನೆ ಬೇಡ.



**4. ಓದಿನ ಹೊರೆತು ಬಿಡುವಿನ ಸಮಯ.:** ಪರೀಕ್ಷೆ ಇದೆ ಎಂದ ಮಾತ್ರಕ್ಕೆ 24 ಗಂಟೆಗಳ ಕಾಲ ಮಕ್ಕಳ ಕಣ್ಣ ಮುಂದೆ ಪುಸ್ತಕ ಇರಬೇಕಿಲ್ಲ. ಆದ್ದರಿಂದ 2 ರಿಂದ 3 ಗಂಟೆಗಳ ಕಾಲ ನಿರಂತರವಾಗಿ ಅಧ್ಯಯನ ಮಾಡಿದ ನಂತರ, ಅರ್ಧ ಗಂಟೆ ವಿರಾಮವನ್ನು ತೆಗೆದುಕೊಳ್ಳುವುದು ಅವಶ್ಯಕ. ಅಂತಹ ವಿರಾಮ ತೆಗೆದುಕೊಂಡರೆ ಮಾತ್ರ ಅಧ್ಯಯನದತ್ತ ಗಮನ ಹರಿಸಬಹುದು. ಇಲ್ಲವಾದರೆ, ಕಣ್ಣೆದುರು ಸತತ ಪಠ್ಯಪುಸ್ತಕಗಳಿದ್ದರೆ ಅಧ್ಯಯನ ನಡೆಯುವುದಿಲ್ಲ ಮಾತ್ರವಲ್ಲ, ವಿನಾಕಾರಣ ಒತ್ತಡವೂ ಮುಂದುವರಿಯುತ್ತದೆ. ಮಕ್ಕಳೊಂದಿಗೆ ಆಟವಾಡುವುದು, ಬೇರೆ ಬೇರೆ ವಿಷಯದ ಮೇಲೆ ಹರಟೆ ಹೊಡೆಯುವುದು, ಬಯಲಿನಲ್ಲಿ ವಿಹಾರಕ್ಕೆ ಹೋಗುವುದು ಅತ್ಯಗತ್ಯ. ಇದನ್ನು ಮಾಡಬೇಕು.

**5. ಸಿದ್ಧತೆಯಲ್ಲಿ ವಿವಿಧತೆ ಇರಲಿ:** ಮಕ್ಕಳು ಓದಿಗಾಗಿ ಬೇರೆ ಬೇರೆ ಪದ್ಧತಿಗಳನ್ನು ರೂಢಿಸಿಕೊಳ್ಳಲಿ. ಉದಾಹರಣೆಗೆ, ಕೆಲ ಸಮಯ ಸ್ವತಃ ಒಂಟಿಯಾಗಿ ಓದುವುದು, ಸ್ವಲ್ಪ ಹೊತ್ತು ನಿಮ್ಮ ಮುಂದೆ ಅಂದರೆ ತಂದೆ, ತಾಯಿ ಅಥವಾ ಅಣ್ಣ-ಅಕ್ಕಂದಿರ ಮುಂದೆ ಗಟ್ಟಿಯಾಗಿ ಓದುವುದು, ಸಹಪಾಠಿಗಳೊಂದಿಗೆ ಓದಿದ್ದನ್ನು ಚರ್ಚಿಸುವುದು, ಹಳೆಯ ಪ್ರಶ್ನೆ ಪತ್ರಿಕೆಗಳನ್ನು ಬಿಡಿಸುವುದು, ಇತ್ಯಾದಿ. ಇದರಿಂದ ಪಾಠಗಳು ಸರಿಯಾಗಿ ಅರ್ಥವಾಗುತ್ತವೆ ಹಾಗೂ ಜ್ಞಾಪಿಸಿಕೊಳ್ಳಲು ಸಹಾಯವಾಗುತ್ತದೆ.

**ಮಾನಸಿಕ ಒತ್ತಡ**

> **ಮಕ್ಕಳೊಂದಿಗೆ ಸಂವಹನವನ್ನು ಮುಂದುವರಿಸಿ ಇದರಿಂದ ಅವರು ಪರೀಕ್ಷೆಗಳ ಬಗ್ಗೆ ಒತ್ತಡಕ್ಕೆ ಒಳಗಾಗುವುದಿಲ್ಲ ಮತ್ತು ಉತ್ತಮ ಅಂಕಗಳನ್ನು ಪಡೆಯುತ್ತಾರೆ. ಮಕ್ಕಳ ಆತ್ಮವಿಶ್ವಾಸ ಹೆಚ್ಚುತ್ತದೆ, ಪರೀಕ್ಷೆಗಳು ಚೆನ್ನಾಗಿರುತ್ತವೆ. ಸಕಾರಾತ್ಮಕ ಭಾವನೆಯನ್ನು ಸೃಷ್ಟಿಸಲು ಸಕಾರಾತ್ಮಕ ವಿಷಯಗಳನ್ನು ಚರ್ಚಿಸಿ.**

**6. ಪರೀಕ್ಷೆಗಳ ಉದ್ದೇಶ ತಿಳಿದುಕೊಳ್ಳುವುದು:** ಕೇವಲ ಪರೀಕ್ಷೆಗಾಗಿ ಓದುವ ಉದ್ದೇಶಕ್ಕಿಂತಲೂ ವಿಷಯಗಳನ್ನು ಅರ್ಥಮಾಡಿಕೊಳ್ಳುವ ಉದ್ದೇಶದಿಂದ ಓದುವುದನ್ನು ರೂಢಿಸಿಕೊಳ್ಳಬೇಕು.

**7. ಪರೀಕ್ಷೆಗಳ ಬಗ್ಗೆ ಆತಂಕ ಬೇಡ:** ಪರೀಕ್ಷೆಗಳ ಬಗ್ಗೆ ಮಕ್ಕಳ ಮನಸ್ಸಿನಲ್ಲಿ ಭಯ, ಆತಂಕ ಹುಟ್ಟಿಸಬೇಡಿ. ಪರೀಕ್ಷೆಗಳು ಒತ್ತಡದ ಹಾಗೂ ವಲ್ಲದ ಸಮಯಗಳೆಂದು ಪರಿಗಣಿಸದೆ ಅವುಗಳು ತಮ್ಮನ್ನು ತಾವು ರೂಪಿಸಿಕೊಳ್ಳಲು ಉತ್ತಮ ಅವಕಾಶ ಎಂಬುದನ್ನು ಮಕ್ಕಳ ಮನಸ್ಸಿನಲ್ಲಿ ಬಿಂಬಿಸಿ. ಕ್ರಿಕೆಟ್ ಸ್ಪರ್ಧೆಗಾಗಿ ಮಕ್ಕಳು ಹೇಗೆ ಉತ್ಸಾಹದಿಂದ ಸಿದ್ಧತೆಗಳನ್ನು ಮಾಡಿ ಸ್ಪರ್ಧೆಗಳನ್ನು ಕ್ರೀಡಾತ್ಮಕವಾಗಿ ಆನಂದಿಸುತ್ತಾರೋ ಹಾಗೆಯೇ ಪರೀಕ್ಷೆಗಳನ್ನು ಕೂಡ ಪರಿಗಣಿಸಬೇಕು.

# ಶ್ರೀ ರಾಘವೇಂದ್ರ ಗುರುಸಾರ್ವಭೌಮರ

## 404ನೇ ಪಟ್ಟಾಭಿಷೇಕೋತ್ಸವ

• ಉದಯವಾಹಿನಿ,ಬೆಂಗಳೂರು



ಉದಯವಾಹಿನಿ ಚಿತ್ರ


**ಸುವರ್ಣ ಲೇಪಿತ ಪಾದಕ್ಕೆ ಪುಷ್ಪವೃಷ್ಟಿ ಉದ್ಘಾಟನೆ**

ಜಯನಗರ 5ನೇ ಬಡಾವಣೆಯಲ್ಲಿರುವ ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಪರಮಪೂಜ್ಯ ಶ್ರೀ 1008 ಶ್ರೀ ಸುಬುಧೇಂದ್ರತೀರ್ಥ ಶ್ರೀಪಾದಂಗಳವರ ಆದೇಶದಂತೆ ಶ್ರೀಮಠದ ಹಿರಿಯ ವ್ಯವಸ್ಥಾಪಕರಾದ ಶ್ರೀ ಆರ್. ಕೆ. ವಾದೀಂದ್ರಾಚಾರ್ಯರ ನೇತೃತ್ವದಲ್ಲಿ 'ಕಲಿಯುಗ ಕಾಮಧೇನು' ಶ್ರೀ ರಾಘವೇಂದ್ರ ಸ್ವಾಮಿಗಳವರ 404ನೇ ಪಟ್ಟಾಭಿಷೇಕೋತ್ಸವದ ಅಂಗವಾಗಿ ಶ್ರೀ ಬಾಳಗಾರು ಮಠದ ಮೂಲ ಸಂಸ್ಥಾನದ ಕಿರಿಯ ಪೀಠಾಧಿಪತಿಗಳಾದ ಪರಮಪೂಜ್ಯ ಶ್ರೀ 1008 ಶ್ರೀ ಅಕ್ಷೋಭ್ಯ ರಾಮಪ್ರಿಯತೀರ್ಥ ಶ್ರೀಪಾದಂಗಳವರ ಅಮೃತ ಹಸ್ತದಿಂದ ಶ್ರೀ ಗುರುರಾಯರ ಬೃಂದಾವನಕ್ಕೆ ಸಹಸ್ರ ಕಳಶ ಕ್ಷೀರಾಭಿಷೇಕವು ವಿಶೇಷವಾಗಿ ನೆರವೇರಿತು. ತದನಂತರ ಸ್ವರ್ಣ ಸಿಂಹಾಸನದಲ್ಲಿ ಶ್ರೀ ಗುರುರಾಯರ ಸುವರ್ಣ ಲೇಪಿತ ಪಾದುಕೆಯನ್ನು ಇರಿಸಿ 'ಪುಷ್ಪವೃಷ್ಟಿಯೊಂದಿಗೆ ಉದ್ಘಾಟನಾ ಕಾರ್ಯಕ್ರಮವು ನೆರವೇರಿತು. ನಂತರದಲ್ಲಿ ವಿಶೇಷ ಉತ್ಸವ ಹೋಮಗಳೊಂದಿಗೆ ಪರಮಪೂಜ್ಯ ಶ್ರೀಪಾದಂಗಳವರು ತಮ್ಮ ಅಮೃತ ಹಸ್ತದಿಂದ ಸಂಸ್ಥಾನ ಪೂಜೆಯನ್ನು ನೆರವೇರಿಸಿ ಶ್ರೀ ಗುರುರಾಯರ ಬೃಂದಾವನಕ್ಕೆ ಮಹಾಮಂಗಳಾರತಿಯನ್ನು ಸಲ್ಲಿಸಿ, ಭಕ್ತರಿಗೆ ಅನುಗ್ರಹ ಸಂದೇಶವನ್ನು ನೀಡಿದರು ಎಂದು ಶ್ರೀ ನಂದಕಿಶೋರಾಚಾರ್ಯರು ತಿಳಿಸಿದರು. ಈ ವಿಶೇಷವಾದ ಶ್ರೀ ರಾಘವೇಂದ್ರಸ್ವಾಮಿಗಳವರ ಪಟ್ಟಾಭಿಷೇಕ ಉತ್ಸವದಲ್ಲಿ ಭಾಗವಹಿಸಿದ ಸಹಸ್ರಾರು ಭಕ್ತರು ತೀರ್ಥ ಪ್ರಸಾದವನ್ನು ಸ್ವೀಕರಿಸಿ, ಗುರುಗಳಿಂದ ಫಲ ಮಂತ್ರಾಕ್ಷತೆಯನ್ನು ಪಡೆದು ಶ್ರೀ ಹರಿ ವಾಯು ಗುರುಗಳ ಅನುಗ್ರಹಕ್ಕೆ ಪಾತ್ರರಾದರು. ಈ ಸಂದರ್ಭದಲ್ಲಿ ರಾಜಾ ಶ್ರೀ ಬಂಡಿಯಾಚಾರ್ಯ, ಆರ್ ಕೆ ವಾದಿಂದ್ರ ಆಚಾರ್ಯ, ಶ್ರೀ ಕೃಷ್ಣ ಗುಂಡಾಚಾರ್ಯ ಇನ್ನು ಹಲವಾರು ಗಣ್ಯರು ಭಕ್ತರು ಭಾಗವಹಿಸಿದ್ದ

# ಶ್ರೀ ರಾಘವೇಂದ್ರ ಸ್ವಾಮಿಗಳ ಪಟ್ಟಾಭಿಷೇಕ

## ಮಹೋತ್ಸವ -ಲಕ್ಷ ಪುಷ್ಪಾರ್ಚನೆ

• ಉದಯವಾಹಿನಿ,ಬೆಂಗಳೂರು



ಉದಯವಾಹಿನಿ ಚಿತ್ರ

ಶೇಷಾದ್ರಿಪುರದ ಪ್ಲಾಟ್ ಫಾರಂ ರಸ್ತೆಯಲ್ಲಿರುವ ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಪರಮಪೂಜ್ಯ ಶ್ರೀ ಶ್ರೀ ಸುಬುಧೇಂದ್ರತೀರ್ಥ ಶ್ರೀಪಾದಂಗಳವರ ಆದೇಶದಂತೆ ಶ್ರೀ ರಾಘವೇಂದ್ರ ಸ್ವಾಮಿಗಳ 404ನೇ ಪಟ್ಟಾಭಿಷೇಕ ಮಹೋತ್ಸವದ ಅಂಗವಾಗಿ ಮಾರ್ಚ್ 1, ಶನಿವಾರ ಬೆಳಗ್ಗೆ ರಾಯರ ಬೃಂದಾವನಕ್ಕೆ ಅಷ್ಟೋತ್ತರ ಸಹಿತ ಪಂಚಾಮೃತ ಅಭಿಷೇಕ, ಕನಕಾಭಿಷೇಕ, ವಿಶೇಷ ಅಲಂಕಾರ, ಲಕ್ಷ ಪುಷ್ಪಾರ್ಚನೆ, ಮಹಾಮಂಗಳಾರತಿ, ಸಂಜೆ ಅಷ್ಟಾವಧಾನ, ರಥೋತ್ಸವ, ಗಿರಿನಗರದ ಶೃತಿ ಸಂಗೀತ ವಿದ್ಯಾಲಯದ ಸದಸ್ಯರಿಂದ ಹರಿ ಭಜನೆ, ಮಹಾಮಂಗಳಾರತಿ ಪ್ರಸಾದ ವಿನಿಯೋಗ ಕಾರ್ಯಕ್ರಮಗಳು ಜರುಗಿದವು ಎಂದು ಶ್ರೀಮಠದ ವಿಚಾರಣಾಕರ್ತರಾದ ಶ್ರೀ ಸುಬ್ಬುನರಹಸಿಂಹ ಅವರು ತಿಳಿಸಿದರು.

# ಜೈನ್ ವಿಶ್ವವಿದ್ಯಾಲಯದಲ್ಲಿ ಬಿಆರ್ ಅಂಬೇಡ್ಕರ್‌ರಿಗೆ ಅವಮಾನ

• ಉದಯವಾಹಿನಿ,ಬೆಂಗಳೂರು

ಡಾ. ಬಿಆರ್ ಅಂಬೇಡ್ಕರ್ ಕುರಿತು ವಿಡಂಬನಾತ್ಮಕ ನಾಟಕ ಪ್ರದರ್ಶನ ಪ್ರಕರಣಕ್ಕೆ ಸಂಬಂಧಿಸಿದಂತೆ ಇದೀಗ ಜೈನ್ ಸೆಂಟರ್ ಫಾರ್ ಮ್ಯಾನೇಜ್ಮೆಂಟ್ ವಿದ್ಯಾರ್ಥಿಗಳ ಮತ್ತು ಅಧ್ಯಾಪಕರ ವಿರುದ್ಧ ದಾಖಲಾಗಿದ್ದ ಪ್ರಕರಣವನ್ನು ಕರ್ನಾಟಕ ಹೈಕೋರ್ಟ್ ರದ್ದು ಮಾಡಿದೆ. ವಿಡಂಬನಾತ್ಮಕ ನಾಟಕಕ್ಕೆ ಸಂವಿಧಾನದ ಆರ್ಟಿಕಲ್ 19 ರಕ್ಷಣೆಯಿದೆ. ನಾಟಕದಲ್ಲಿ ದಲಿತ ದೌರ್ಜನ್ಯದ ಉದ್ದೇಶವಿರಲಿಲ್ಲ ಎಂದು ನ್ಯಾ.ಎಸ್.ಆರ್.ಕೃಷ್ಣಕುಮಾರ್‌ರಿದ್ದ ಹೈಕೋರ್ಟ್ ಪೀಠ ಅಭಿಪ್ರಾಯಪಟ್ಟಿದ್ದು, ಹೀಗಾಗಿ ಕೇಸ್ ರದ್ದುಪಡಿಸಿ ಹೈಕೋರ್ಟ್ ಏಕಸದಸ್ಯ ಪೀಠ ಶನಿವಾರ ಆದೇಶ ಹೊರಡಿಸಿದೆ. ಲಾಲ್ ಬಾಗ್ ರಸ್ತೆಯಲ್ಲಿರುವ ಜೈನ್ ಯೂನಿವರ್ಸಿಟಿಯ ಸೆಂಟರ್ ಫಾರ್ ಮ್ಯಾನೇಜ್ಮೆಂಟ್ ಸ್ಟಡೀಸ್ ಯೂತ್ ಫೆಸ್ಟ್ ಅಂಗವಾಗಿ ಫೆಬ್ರವರಿ 6ರಂದು ಆಯೋಜಿಸಲಾಗಿದ್ದ ಸ್ಕಿಟ್ ಸಾಕಷ್ಟು ವಿವಾದ ಸೃಷ್ಟಿಸಿತ್ತು. ಯಾಕಂದರೆ ಸಂವಿಧಾನ ಶಿಲ್ಪಿ ಡಾ.ಬಿ.ಆರ್ ಅಂಬೇಡ್ಕರ್ ಅವರ ಬಗ್ಗೆ ಬಳಸಿದ್ದ ಕೆಲ ಪದಗಳು ದಲಿತ ಸಂಘಟನೆಗಳನ್ನ ಕೆರಳಿಸಿತ್ತು. ಫೆ. 6ರಂದು ಕಾಲೇಜಿನ ಯುವಜನೋತ್ಸವ ಕಾರ್ಯಕ್ರಮದಲ್ಲಿ ಮ್ಯಾಡ್ ಆ್ಯಡ್ ಪ್ರದರ್ಶನದಲ್ಲಿ ಅಂಬೇಡ್ಕರ್ ಹಾಗೂ ದಲಿತರ ಬಗ್ಗೆ ಅಪಮಾನ ಮಾಡಿದ್ದಾರೆ ಎಂಬ ಆರೋಪ ಕೇಳಿಬಂದಿತ್ತು. ಬಿ ಆರ್ ಅಂಬೇಡ್ಕರ್ ಅಲ್ಲ, ಬಿಯರ್ ಅಂಬೇಡ್ಕರ್, ಡೋಂಟ್ ಟಚ್ ಮಿ, ಟಚ್ ಮಿ' ಅಂತ ಸಾಂಗ್ ಪ್ಲೇ ಮಾಡಿ ಗೇಲಿ ಮಾಡಿದ್ದಲ್ಲದೇ, ನೀವು ಡಿ-ಲಿಟ್ ಆಗಿರುವಾಗ ದಲಿತರಾಗಿರಲು ಕಾರಣವೇನು' ಎಂದು ವಿವಾದಾತ್ಮಕ ಸ್ಕಿಟ್ ಪ್ರದರ್ಶನ ಮಾಡಿದ್ದರು.

# ಪಪ್ಪಾಯಿ ಕಾಯಿಯಿಂದ ಸುಲಭದಲ್ಲಿ ಮಾಡಬಹುದು

## ರುಚಿಯಾದ ಹಲ್ವಾ: ನಾಲ್ಕೇ ಸಾಮಗ್ರಿ ಸಾಕು

• ಉದಯವಾಹಿನಿ,ಬೆಂಗಳೂರು

ಪಪ್ಪಾಯಿ ಕಾಯಿಯಿಂದ ತುಂಬಾನೇ ರುಚಿಯಾದ ಹಲ್ವಾ ಮಾಡಬಹುದು ಎಂಬುವುದು ನಿಮಗೆ ಗೊತ್ತೇ, ಅದರಲ್ಲಿಯೂ ಈ ಹಲ್ವಾ ಅಂತೂ ತುಂಬಾ ಸುಲಭದಲ್ಲಿ ಮಾಡಬಹುದು, ಬನ್ನಿ ಪಪ್ಪಾಯಿ ಕಾಯಿಯಿಂದ ಹಲ್ವಾ ಮಾಡುವುದು ಹೇಗೆ ಎಂದು ನೋಡೋಣ ಬನ್ನಿ:



**ಬೇಕಾಗುವ ಸಾಮಗ್ರಿ**

- ಒಂದು ಕಾಯಿ ಪಪ್ಪಾಯಿ
- ಅರ್ಧ ಕೆಜಿ ಬೆಲ್ಲ
- ತುಪ್ಪ
- 200 ಗ್ರಾಂ
- ಕಾರ್ನ್‌ಫ್ಲೋರ್
- ಡ್ರೈ ಫ್ರೂಟ್ಸ್

**ಮಾಡುವ ವಿಧಾನ:** ನೀವು ಪಪ್ಪಾಯಿ ಸಿಪ್ಪೆ ಸುಲಿದು ತೊಳೆದು ಚಿಕ್ಕದಾಗಿ ಕತ್ತರಿಸಿ ಕುಕ್ಕರ್‌ನಲ್ಲಿ ಹಾಕಿ ಬೇಯಲು ತಕ್ಕ ನೀರು ಹಾಕಿ ಬೇಯಿಸಿ, 2-3 ವಿಶಲ್ ಬರುವವರೆಗೆ ಬೇಯಿಸಿ ನಂತರ ಕುಕ್ಕರ್‌ನ ಆವಿ ಸಂಪೂರ್ಣ ಹೋದ ಮೇಲೆ ಪಪ್ಪಾಯಿ ತುಂಡುಗಳನ್ನು ತೆಗೆದು ಒಂದು ತಟ್ಟೆಯಲ್ಲಿ ಹಾಕಿ, ಅದರಲ್ಲಿರುವ ನೀರಿನಂಶ ಹೋಗುವಂಥ ಪಾತ್ರೆಯಲ್ಲಿ ಹಾಕಿಡಿ ಅಥವಾ ನೀರನ್ನು ಸೋಸಿ ಬೆಂದ ಪಪ್ಪಾಯಿಯನ್ನು ತಟ್ಟೆಯಲ್ಲಿ ಹಾಕಿಡಿ ಇದೇ ಸಮಯದಲ್ಲಿ ನೀವು ಬೆಲ್ಲವನ್ನು ಕರಗಿಸಿ, ಬೆಲ್ಲದ ಪಾಕ ಮಂದವಾಗಿರಲಿ ಪಪ್ಪಾಯಿ ತಣ್ಣಗಾದ ಮೇಲೆ ನೀವು ಮಿಕ್ಸಿ ಜರ್‌ಗೆ ಹಾಕಿ ರುಬ್ಬಿ ಈಗ ನೀವು ಪ್ಯಾನ್‌ಗೆ 2-3 ಚಮಚ ತುಪ್ಪ ಹಾಕಿ ನಂತರ ರುಬ್ಬಿದ ಪಪ್ಪಾಯಿ ಹಾಕಿ ಒಂದು 5 ನಿಮಿಷ ಬಿಸಿ ಮಾಡುವಷ್ಟರಲ್ಲಿ ಮೆತ್ತಗಾಗುತ್ತದೆ, ಅದರಲ್ಲಿ ಬೆಲ್ಲದ ಪಾಕ ಹಾಕಿ ಮಿಕ್ಸ್ ಮಾಡಿ, ಆಗಾಗ ಸೌಟ್‌ನಿಂದ ಆಡಿಸುತ್ತಾ ಇರಿ. ನಂತರ 200 ಗ್ರಾಂ ಕಾರ್ನ್‌ಫ್ಲೋರ್‌ಗೆ ಸ್ವಲ್ಪ ನೀರು ಹಾಕಿ ಮಿಕ್ಸ್ ಮಾಡಿ ಅದನ್ನು ಹಲ್ವಾ ಜೊತೆ ಸೇರಿಸಿ ಮಿಕ್ಸ್ ಮಾಡಿ. ಮಿಶ್ರಣ ಗಟ್ಟಿಯಾಗುತ್ತಾ ಬರುತ್ತದೆ. ಆವಾಗ ನೀವು ಮತ್ತೆ ಸ್ವಲ್ಪ ತುಪ್ಪ ಸೇರಿಸಿ, ಡ್ರೈ ಫ್ರೂಟ್ಸ್ ಸೇರಿಸಿ ಮಿಕ್ಸ್ ಮಾಡಿ ಹಲ್ವಾ ಸೌಟ್‌ನಿಂದ ಆಡಿಸುವಾಗ ಅದರ ತಳ ಬಿಟ್ಟು ಬರುವಾಗ ಹಲ್ವಾ ರೆಡಿಯಾಗಿದೆ ಎಂದರ್ಥ.

ಈಗ ನೀವು ತಟ್ಟೆಗೆ ತುಪ್ಪ ಸವರಿ ಅದರಲ್ಲಿ ಹಲ್ವಾ ಸುರಿದು ಸ್ಪೂನ್‌ನಿಂದ ಸೆಟ್ ಮಾಡಿ ಅರ್ಧ ಗಂಟೆ ಬಿಡಿ ನಂತರ ಕತ್ತರಿಸಿದರೆ ರುಚಿಯಾದ ಹಲ್ವಾ ರೆಡಿ. ಇತರ ಸಲಹೆ ಹಣ್ಣಾದ ಪಪ್ಪಾಯಿ ಬಳಸಬೇಡಿ ಹಸಿ ಅಥವಾ ಬಲಿತ ಪಪ್ಪಾಯಿ ಬಳಸಬಹುದು ಬೆಲ್ಲದ ಪುಡಿ ಅಥವಾ ಬೆಲ್ಲ ಬಳಸಬಹುದು ಡ್ರೈ ಫ್ರೂಟ್ಸ್ ಗೋಡಂಬಿ, ದ್ರಾಕ್ಷಿ, ಪಿಸ್ತಾ ಅಂತ ಏನಿದೆಯೋ ಅದನ್ನು ಬಸಬಹುದು. ಅರ್ಧ ಗಂಟೆಯಲ್ಲಿ ಹಲ್ವಾ ರೆಡಿಯಾಗುತ್ತೆ.

# ಅಬ್ಬಬ್ಬಾ ಎಷ್ಟು ಶೆಕೆ, ದೇಹದ ಹೀಟ್

## ಮೊದಲು ಕಮ್ಮಿ ಮಾಡ್ಕೋಬೇಕು

• ಉದಯವಾಹಿನಿ,ಬೆಂಗಳೂರು

ಬಿರು ಬೇಸಿಗೆಯ ಬಿಸಿಲಿನ ತಾಪ ಸಾಲದು ಎನ್ನುವಂತೆ ಹೀಟ್ ವೇವ್ ಕೂಡ ಶುರುವಾಗಿದೆ. ಇದು ನಮ್ಮನ್ನು ಮತ್ತಷ್ಟು ತಲ್ಲಣಗೊಳಿಸುತ್ತದೆ. ಅತಿಯಾದ ಬಿಸಿಯಿಂದ ನಮ್ಮ ದೇಹದ ತಾಪಮಾನವನ್ನು ಕಡಿಮೆ ಮಾಡಿಕೊಳ್ಳುವುದು ಹೇಗೆ ಎಂದು ಆಲೋಚಿಸುತ್ತಿರುವವರಿಗೆ ಇಲ್ಲಿವೆ ಬೆಸ್ಟ್ ಟಿಪ್ಸ್.



ದಿನದಿಂದ ದಿನಕ್ಕೆ ಬಿಸಿಲು ಹೆಚ್ಚಾಗುತ್ತಿದೆ. ಅದೇ ರೀತಿ ವರ್ಷದಿಂದ ವರ್ಷಕ್ಕೆ ತಾಪಮಾನ ಕೂಡ ಹೆಚ್ಚಾಗುತ್ತಿದೆ. ಇದು ನಮ್ಮ ದೇಹದ ಆರೋಗ್ಯದ ಮೇಲೆ ಪ್ರತಿಕೂಲ ಪರಿಣಾಮ ಬೀರುತ್ತದೆ. ಮಕ್ಕಳು, ದೊಡ್ಡವರು, ವಯಸ್ಸಾದವರು ಎಲ್ಲರೂ ಈ ಸಂದರ್ಭವನ್ನು ಅನುಭವಿಸಲೇಬೇಕು. ದೇಹದ ತಾಪಮಾನದ ಮೇಲೆ ಇದು ನಕರಾತ್ಮಕ ಪ್ರಭಾವ ಬೀರುವುದು ಮಾತ್ರವಲ್ಲದೆ ಆರೋಗ್ಯವನ್ನು ಹಾಳು ಮಾಡುತ್ತದೆ. ದೈಹಿಕ ಚಟುವಟಿಕೆ, ಹಾರ್ಮೋನ್ ಎಲ್ಲದರಲ್ಲಿ ವ್ಯತ್ಯಾಸ ಕಾಣುತ್ತದೆ. ಈ ಸಂದರ್ಭದಲ್ಲಿ ಎಷ್ಟು ನೀರು ಕುಡಿದರೂ ಸಾಕಾಗುವುದಿಲ್ಲ. ನಮ್ಮ ದೇಹದ ತಾಪಮಾನವನ್ನು ಬಿರು ಬೇಸಿಗೆಯ ಈ ಸಂದರ್ಭದಲ್ಲಿ ಹೇಗೆ ನಿರ್ವಹಣೆ ಮಾಡಿಕೊಳ್ಳಬಹುದು ಎಂದು ನವಿ ಮುಂಬೈ ನಲ್ಲಿನ ಅಪೋಲೋ ಹಾಸ್ಪಿಟಲ್ ನಲ್ಲಿ ಆಂತರಿಕ ಔಷಧಿ ವಿಭಾಗದಲ್ಲಿ ಕನ್ಸಲ್ಟೆಂಟ್ ಆಗಿರುವ ಡಾ. ಭಾರತ್ ಅಗರ್ವಾಲ್ ಹೇಳುತ್ತಾರೆ.



**ದೇಹದ ತಾಪಮಾನವನ್ನು ಕಡಿಮೆ ಮಾಡಿಕೊಳ್ಳುವ ಟಿಪ್ಸ್:** ಹೆಚ್ಚು ನೀರು ಮತ್ತು ಇನ್ನಿತರ ಪಾನೀಯಗಳನ್ನು ಸೇವಿಸುವುದು ಈ ಸಂದರ್ಭದಲ್ಲಿ ಬಹಳ ಒಳ್ಳೆಯದು. ಇದು ನಮ್ಮ ದೇಹದ ತಾಪಮಾನ ವನ್ನು ಕಡಿಮೆ ಮಾಡುವುದು ಮಾತ್ರವಲ್ಲದೆ ನಿರ್ಜಲೀಕರಣ ಸಮಸ್ಯೆಯನ್ನು ಹೋಗಲಾಡಿಸುತ್ತದೆ. ಇದರ ಜೊತೆಗೆ ಇನ್ನು ಕೆಲವು ಟಿಪ್ಸ್‌ಗಳಿವೆ.

**ಹಗುರವಾದ ಬಟ್ಟೆಗಳನ್ನು ಧರಿಸಿ:** ಬೇಸಿಗೆಯಲ್ಲಿ ಸಾಧ್ಯವಾದಷ್ಟು ಹಗುರವಾದ ಮತ್ತು ಸಡಿಲವಾದ ಬಟ್ಟೆಗಳನ್ನು ಧರಿಸಿ. ಕಾಟನ್ ಬಟ್ಟೆಗಳು ನಿಮ್ಮ ಆಯ್ಕೆಯಾಗಿರಲಿ. ಇವು ದೇಹದ ತಾಪಮಾನವನ್ನು ಕಡಿಮೆ ಮಾಡುತ್ತವೆ ಮತ್ತು ಹೆಚ್ಚು ಗಾಳಿ ಓಡಾಡುವಂತೆ ಅನುಕೂಲ ಮಾಡುತ್ತವೆ.



**ತಂಪಾದ ಪ್ರದೇಶದಲ್ಲಿ ಇರಿ:** ಹೊರಗೆ ಅತಿಯಾದ ಬಿಸಿ ವಾತಾವರಣ ಇರುವ ಕಾರಣ ತಂಪಾದ ಮತ್ತು ನೆರಳು ಇರುವ ಸ್ಥಳಗಳಲ್ಲಿ ಇರುವ ಅಭ್ಯಾಸ ಮಾಡಿಕೊಳ್ಳಿ. ಇದರಿಂದ ಸೂರ್ಯನ ಬಿಸಿಲು ನೇರವಾಗಿ ನಿಮ್ಮ ಮೇಲೆ ಬೀಳುವ ಸಾಧ್ಯತೆ ಇರುವುದಿಲ್ಲ.

**ಸರಾಗವಾದ ವ್ಯಾಯಾಮಗಳನ್ನು ಮಾಡಿ:** ಮೊದಲೇ ತಾಪಮಾನ ಹೆಚ್ಚಾಗಿರುವುದರಿಂದ ಸಾಧ್ಯವಾದಷ್ಟು ಸರಾಗ ವಾದ ಮತ್ತು ಸುಲಭವಾದ ವ್ಯಾಯಾಮಗಳನ್ನು ಬೇಸಿಗೆ ಸಂದರ್ಭದಲ್ಲಿ ಮಾಡಲು ಮುಂದಾಗಿ. ಇದರಿಂದ ನಿಮ್ಮ ದೇಹದ ತಾಪಮಾನ ನಿರ್ವಹಣೆ ಯಾಗುವುದರ ಜೊತೆಗೆ ಆರೋಗ್ಯ ಕೂಡ ಅಚ್ಚುಕಟ್ಟಾಗಿರುತ್ತದೆ. ಇದು ಮೆಟಬಾಲಿಸಂ ಪ್ರಕ್ರಿಯೆಯನ್ನು ಚುರುಕಾಗಿಸುವುದು ಮಾತ್ರವಲ್ಲದೆ ಮಾಂಸ ಖಂಡಗಳ ಚಟುವಟಿಕೆಯನ್ನು ಕೂಡ ವೃದ್ಧಿಸುತ್ತದೆ. ವೈದ್ಯರು ಹೇಳುವ ಹಾಗೆ ತುಂಬಾ ಕಷ್ಟಪಟ್ಟು ಈ ಸಂದರ್ಭದಲ್ಲಿ ವ್ಯಾಯಾಮ ಮಾಡುವುದು ಬೇಡ.

**ತಂಪಾದ ನೀರಿನಲ್ಲಿ ಸ್ನಾನ ಮಾಡಿ:** ಸಾಮಾನ್ಯವಾಗಿ ನಾವು ಸ್ನಾನ ಮಾಡುವಾಗ ಉಗುರು ಬೆಚ್ಚಗಿನ ನೀರು ಉಪಯೋಗಿಸುತ್ತೇವೆ. ಆದರೆ ಬೇಸಿಗೆಯಲ್ಲಿ ಹೆಚ್ಚು ಬೆವರು ಬರುವುದರಿಂದ ಮತ್ತು ದೇಹದ ತಾಪಮಾನ ಕೂಡ ಹೆಚ್ಚಾಗಿರುವುದರಿಂದ ಅತಿಯಾದ ಸುಸ್ತು ನಮ್ಮನ್ನು ಆವರಿಸುತ್ತದೆ. ಹೀಗಾಗಿ ಬಿಸಿ ನೀರಿಗಿಂತ ತಣ್ಣೀರಿನ ಸ್ನಾನ ದೇಹಕ್ಕೆ ಬಹಳ ಒಳ್ಳೆಯದು.

**ಒದ್ದೆ ಬಟ್ಟೆಯ ಉಪಯೋಗ ಮಾಡಿಕೊಳ್ಳಿ:** ನಿಮ್ಮ ದೇಹದ ತಾಪಮಾನವನ್ನು ನಿರ್ವಹಣೆ ಮಾಡಿಕೊಳ್ಳಲು ಇದು ಕೂಡ ಒಂದು ಅತ್ಯುತ್ತಮ ಮಾರ್ಗವಾಗಿದೆ. ತಂಪಾದ ನೀರಿನಲ್ಲಿ ಒಂದು ಬಟ್ಟೆ ಯನ್ನು ನೆನೆಸಿ ಅದರಿಂದ ನಿಮ್ಮ ಮೈ ಒತ್ತಿಕೊಳ್ಳುವುದು. ನಿಮ್ಮ ಹಣೆ, ಕುತ್ತಿಗೆ, ಮತ್ತು ನಿಮ್ಮ ದೇಹದ ಇನ್ನಿತರ ಭಾಗಗಳ ಒತ್ತಿಕೊಳ್ಳುವುದರಿಂದ ಸುಲಭವಾಗಿ ನಿಮ್ಮ ದೇಹದ ತಾಪಮಾನವನ್ನು ನಿರ್ವಹಣೆ ಮಾಡಿಕೊಳ್ಳ ಬಹುದು.

**ತಂಪಾದ ಆಹಾರಗಳನ್ನು ಸೇವಿಸಿ:** ಬೇಸಿಗೆಯಲ್ಲಿ ನಿಮಗೆಲ್ಲ ಗೊತ್ತಿರುವ ಹಾಗೆ ಕಲ್ಲಂಗಡಿ ಹಣ್ಣು, ಸೌತೆಕಾಯಿ, ಪುದಿನ ಸೊಪ್ಪು ಎಲ್ಲಾ ಕಡೆ ಸಿಗುತ್ತದೆ. ಇವುಗಳ ಉಪಯೋಗ ಮಾಡಿಕೊಳ್ಳಿ. ಇವುಗಳಲ್ಲಿ ನೀರಿನ ಅಂಶ ಹೆಚ್ಚಾಗಿರುವುದರಿಂದ ನಿಮ್ಮ ದೇಹದ ತಾಪಮಾನವನ್ನು ಇವು ಸುಲಭವಾಗಿ ನಿರ್ವಹಣೆ ಮಾಡುತ್ತವೆ ಮತ್ತು ನಿಮ್ಮ ದೇಹಕ್ಕೆ ನಿರ್ಜಲೀಕರಣ ಆಗದಂತೆ ನೋಡಿಕೊಳ್ಳುತ್ತವೆ.

**• ಅವಳಿ ಜಿಲ್ಲೆಯ ರೈತರ ಬದುಕನ್ನು ಹಾಳು ಮಾಡಲು ಹೊರಟಿರುವ ರಾಜ್ಯ ಸರ್ಕಾರದ ನಡೆಯನ್ನು ಖಂಡನೆ**

# ತೆಲಂಗಾಣಕ್ಕೆ ಆಲಮಟ್ಟಿ ಜಲಾಶಯ ನೀರು: ಸಚಿವರ ಪ್ರತಿಕೃತಿ ದಹಿಸಿ ಪ್ರತಿಭಟನೆ

**• ಉದಯವಾಹಿನಿ, ವಿಜಯಪುರ**

ತೆಲಂಗಾಣ ರಾಜ್ಯದ ರಂಗಾರೆಡ್ಡಿ ಜಿಲ್ಲೆಯ ಜುರಾಲಾ ಆಣೆಕಟ್ಟಿಗೆ ಆಲಮಟ್ಟಿ ಲಾಲಬಹಾದ್ದೂರ ಶಾಸ್ತ್ರೀ ಜಲಾಶಯದಿಂದ 1.27 ಟಿ.ಎಂ.ಸಿ. ನೀರನ್ನು ಹರಿಬಿಟ್ಟು ಅವಳಿ ಜಿಲ್ಲೆಯ ರೈತರ ಬದುಕನ್ನು ಹಾಳು ಮಾಡಲು ಹೊರಟಿರುವ ರಾಜ್ಯ ಸರ್ಕಾರದ ನಡೆಯನ್ನು ಖಂಡಿಸಿ ಜಲಸಂಪನ್ಮೂಲ ಸಚಿವ ಡಿ.ಕೆ.ಶಿವಕುಮಾರ ಹಾಗೂ ಮುಖ್ಯಮಂತ್ರಿ ಸಿದ್ಧರಾಮಯ್ಯನವರ ಪ್ರತಿಕೃತಿ ದಹಿಸಿ ಪ್ರತಿಭಟನೆ ನಡೆಸಿ ಶಂಖ ವಾದ್ಯ ಮೊಳಗಿಸಿದರು.

**ನಮಗೆ ಕುಡಿಯಲು ನೀರಿಲ್ಲ**

ವಿಜಯಪುರ ನಗರದ ಅಂಬೇಡ್ಕರ ವೃತ್ತದಲ್ಲಿ ಅಧಿಕ ಸಂಖ್ಯೆಯಲ್ಲಿ ಜಮಾಯಿಸಿದ ಅಖಂಡ ಕರ್ನಾಟಕ ರೈತ ಸಂಘದ ಕಾರ್ಯಕರ್ತರು ರೈತ ವಿರೋಧಿ ರಾಜ್ಯ ಸರ್ಕಾರದ ಜಲಸಂಪನ್ಮೂಲ ಸಚಿವರ ವಿರುದ್ಧ ಹಾಗೂ ಮುಖ್ಯಮಂತ್ರಿ ವಿರುದ್ಧ ಘೋಷಣೆಗಳನ್ನು ಕೂಗುತ್ತ ಅವರ ಪ್ರತಿಕೃತಿಗಳನ್ನು ದಹಿಸಿ ಸರ್ಕಾರದ ವಿರುದ್ಧ ಆಕ್ರೋಶ ಹೊರ ಹಾಕಿದರು.

ನಮಗೆ ಕುಡಿಯಲು ನೀರಿಲ್ಲ. ಈ ಸದ್ಯ ಆಲಮಟ್ಟಿ ಆಣೆಕಟ್ಟಿನಲ್ಲಿ ಕೇವಲ 33 ಟಿಎಂಸಿ ಮಾತ್ರ ನೀರು ಉಳಿದಿವೆ. ಇದರಲ್ಲಿ ಕೈಗಾರಿಕೆ ಉದ್ದೇಶಕ್ಕೆ ಜಲಚರ, ಜನ ಹಾಗೂ ಜಾನುವಾರುಗಳಿಗೆ ಹಾಗೂ ಜಿಲ್ಲೆಯ ರೈತರುಗಳಿಗೆ ನೀರು ಮೀಸಲಿರಿಸಬೇಕು. ಇರುವ ಅಲ್ಪಸ್ವಲ್ಪ ನೀರಿನಲ್ಲಿ 5 ಟಿಎಂಸಿ ನೀರು ಹರಿಸಲು ತೆಲಂಗಾಣ ಸರ್ಕಾರ ಕರ್ನಾಟಕ ಸರ್ಕಾರಕ್ಕೆ ಮನವಿ ಮಾಡಿದ ಹಿನ್ನೆಲೆಯಲ್ಲಿ ಜಲಸಂಪನ್ಮೂಲ ಸಚಿವರು ದೊಡ್ಡ ಮಾನವೀಯತೆ ತೋರಿಸಿ ತೆಲಂಗಾಣ ಸರ್ಕಾರವನ್ನು ಮೆಚ್ಚಿಸಲು ಒಂದೇ ಪಕ್ಷದ ಮುಖಾ ನೋಡಿ ನೀರು ಹರಿಸಿ ನಮ್ಮ ಜಿಲ್ಲೆಯ ರೈತರಿಗೆ ಗೋರಿ ತೋಡಲು ಹೊರಟಿದೆ. ಈ ಹಿಂದೆ ನ್ಯಾಯಮೂರ್ತಿ ಬ್ರಿಜೆಶ್ ಕುಮಾರ ನೇತೃತ್ವದ ನ್ಯಾಯಾಧೀಕರಣ ಆಲಮಟ್ಟಿ ಜಲಾಶಯದ ನೀರಿನ ಮಟ್ಟವನ್ನು 524.256 ಕ್ಕೆ ನೀರು ನಿಲ್ಲಿಸಲು ಅನುಮತಿ ಕೊಟ್ಟಾಗ ಸುಮ್ಮನಿರದ ತೆಲಂಗಾಣ ಸರ್ಕಾರ ಟ್ರಿಬ್ಯೂನಲ್ ಆದೇಶದ ವಿರುದ್ಧ ಸುಪ್ರೀಂ ಕೋರ್ಟ್‌ಗೆ ಮೇಲ್ಮನವಿ ಸಲ್ಲಿಸಿ ಆಣೆಕಟ್ಟಿನ ನೀರಿನ ಮಟ್ಟ ಎತ್ತರಿಸಲು ತಡೆಯಾಜ್ಞೆ ತಂದು ನಮ್ಮ ರೈತರನ್ನು ಹಾಳುಮಾಡಿದೆ. ಈಗ ಅವರಿಗೆ ಆಲಮಟ್ಟಿ ನೀರಿನ ನೆನಪಾಗಿದೆ. ವಿಜಯಪುರ ಜಿಲ್ಲೆಯಲ್ಲಿ ಇಬ್ಬರು ಸಚಿವರಿದ್ದರೂ ನಮ್ಮ ರೈತರ ಪಾಲಿಗೆ ಇದ್ದು ಇಲ್ಲದಂತಾಗಿದ್ದಾರೆ. ಇವರ ರೈತ ವಿರೋಧಿ ಹಾಗೂ ಜನ ವಿರೋಧಿ ಆಡಳಿತ ನೋಡಿದರೆ ಇಡೀ ರಾಜ್ಯವನ್ನೇ ಹಾಳು ಮಾಡುವುದರಲ್ಲಿ ಸಂದೇಹವಿಲ್ಲ. ಆದ್ದರಿಂದ



☛ ಉದಯವಾಹಿನಿ ಚಿತ್ರ

> ಅವಳಿ ಜಿಲ್ಲೆಯ ರೈತರ ಬದುಕನ್ನು ಕಿತ್ತುಕೊಂಡು ತೆಲಂಗಾಣ ರಾಜ್ಯಕ್ಕೆ ನೀರು ಹರಿಸಿ ತೆಲಂಗಾಣ ರಾಜ್ಯದ ರೈತರಿಗೆ ಹಾಗೂ ಜನಸಾಮಾನ್ಯರಿಂದ ಶಬ್ಬಾಶಗಿರಿ ಪಡೆದುಕೊಳ್ಳಲು ನೀರು ಹರಿಬಿಟ್ಟಿದ್ದಾರೆ. ಇದನ್ನು ಖಂಡಿಸಿ ಪ್ರತಿಕೃತಿ ದಹಿಸಿದ ನಂತರ ನಮ್ಮ ರೈತರ ಪಾಲಿಗೆ ಮುಖ್ಯಮಂತ್ರಿ ಹಾಗೂ ಜಲಸಂಪನ್ಮೂಲ ಸಚಿವರು ಇಂದಿನಿಂದ ಸತ್ತು ಹೋಗಿದ್ದಾರೆ ಎಂದು ಆಕ್ರೋಶ ಭರಿತರಾಗಿ ಹೋಳಿ ಹಬ್ಬ ಇನ್ನು ಮುಂದೆ ಇರುವಾಗಲೇ ಈಗಲೇ ನಮಗೆ ಶಂಕವಾದ್ಯ ಮೊಳಗಿಸಲು ಸರ್ಕಾರ ಎಡೆಮಾಡಿಕೊಟ್ಟಿದೆ ಎಂದು ರಾಜ್ಯ ಸರ್ಕಾರದ ವಿರುದ್ಧ ಶಂಖ ವಾದ್ಯ ಮೊಳಗಿಸಿದರು
> **-ಅರವಿಂದ ಕುಲಕರ್ಣಿ,** ಅಖಂಡ ಕರ್ನಾಟಕ ರೈತ ಸಂಘದ ರಾಜ್ಯ ಪ್ರಧಾನ ಕಾರ್ಯದರ್ಶಿ

ರಾಷ್ಟ್ರಪತಿಗಳು ಮಧ್ಯ ಪ್ರವೇಶಿಸಿ ರೈತ ವಿರೋಧಿ ರಾಜ್ಯ ಸರ್ಕಾರವನ್ನು ವಜಾಗೊಳಿಸಿ ರಾಷ್ಟ್ರಪತಿ ಆಡಳಿತ ಹೇರಬೇಕೆಂದು ರಾಷ್ಟ್ರಪತಿಯವರಿಗೂ ಕೂಡ ಮನವಿ ಮಾಡಿಕೊಂಡರು. ನಂತರ ಪ್ರತಿಕೃತಿ ದಹಿಸಿ ಜಿಲ್ಲಾಧಿಕಾರಿಗಳ ಕಚೇರಿಗೆ ತೆರಳಿ ಅಲ್ಲಿ ಕೂಡ ಪ್ರತಿಭಟನೆ ನಡೆಸಿ, ರಾಜ್ಯಪಾಲರಿಗೆ ಬರೆದ ಮನವಿ ಪತ್ರವನ್ನು ಅಪರ ಜಿಲ್ಲಾಧಿಕಾರಿ ಸೋಮಲಿಂಗ ಗೆಣ್ಣೂರ ಅವರಿಗೆ ಸಲ್ಲಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಸಂಚಾಲಕ ಪಾಂಡು ಹ್ಯಾಟಿ, ಬಸವನ ಬಾಗೇವಾಡಿ ತಾಲ್ಲೂಕಾ ಅಧ್ಯಕ್ಷ ಉಮೇಶ ವಾಲೀಕಾರ, ವಿಠ್ಠಲ ಬಿರಾದಾರ, ರಾಜೇಸಾಬ ವಾಲಿಕಾರ, ಗುರಲಿಂಗಪ್ಪ ಪಡಸಲಗಿ, ದಾವಲಸಾಬ ನದಾಫ, ಚನಬಸಪ್ಪ ಸಿಂಧೂರ, ಪರಸು ಹೊಸೂರ, ಮಲಿಗೆಪ್ಪ ಸಾಸನೂರ, ಮಂಜುನಾಥ ಸಜ್ಜನ, ಶ್ರೀಶೈಲ ಹೊಸೂರ, ಶಿವು ನಾಗ ರೆಡ್ಡಿ, ರೈತರು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.

### ಗಡಿಪಾರು ಮಾಡಬೇಕು

ತೆಲಂಗಾಣ ಸರ್ಕಾರದ ಮನವಿಗೆ ಮಣೆಹಾಕಿದ ಜಲಸಂಪನ್ಮೂಲ ಸಚಿವ ಡಿ.ಕೆ. ಶಿವಕುಮಾರ ಹಾಗೂ ಮುಖ್ಯಮಂತ್ರಿ ಸಿದ್ಧರಾಮಯ್ಯನವರು ತೆಲಗಾಂಣ ರಾಜ್ಯದ ಮೇಲೆ ಅಷ್ಟೊಂದು ಅಕ್ಕರೆ ಇದ್ದರೆ ನಮ್ಮ ರಾಜ್ಯದಲ್ಲಿ ರಾಜಕಾರಣ ತೊರೆದು ತೆಲಂಗಾಣ ರಾಜ್ಯದಲ್ಲಿಯೇ ಚುನಾವಣೆಗೆ ಸ್ಪರ್ಧೆಮಾಡಲಿ. ಅದನ್ನು ಬಿಟ್ಟು ಮುಂಬರುವ ಚುನಾವಣೆಯಲ್ಲಿ ಮತ್ತೆ ನಮ್ಮ ಕರ್ನಾಟಕದಲ್ಲಿಯೇ ಸ್ಪರ್ಧೆ ಮಾಡಿದರೆ ಕರ್ನಾಟಕದಿಂದ ಇವರನ್ನು ಗಡಿಪಾರು ಮಾಡಬೇಕೆಂದು ಎಚ್ಚರಿಕೆ ನೀಡಿದರು.

## ಮಿನಿ ನ್ಯೂಸ್

### ಪುತ್ತಿಗೆ ದೇವಸ್ಥಾನಕ್ಕೆ ಧರ್ಮಸ್ಥಳದಿಂದ ಹಸಿರುವಾಣಿ ಹೊರೆಕಾಣಿಕೆ



☛ ಉದಯವಾಹಿನಿ ಚಿತ್ರ

**• ಉದಯವಾಹಿನಿ ಉಜಿರೆ**

ಮೂಡಬಿದ್ರೆ ಬಳಿ ಪುತ್ತಿಗೆ ಶ್ರೀ ಸೋಮನಾಥೇಶ್ವರ ದೇವಸ್ಥಾನದ ಪುನಃ ಪ್ರತಿಷ್ಠಾ ಅಷ್ಟಬಂಧ ಬ್ರಹ್ಮಕಲಶೋತ್ಸವ ಸಂದರ್ಭ ಧರ್ಮಸ್ಥಳದಿಂದ ಹೊರೆಕಾಣಿಕೆ ಸಾಗಾಣಿಕೆಗೆ ಡಿ. ನಿಶ್ಚಲ್ ಚಾಲನೆ ನೀಡಿ ಶುಭ ಹಾರೈಸಿದರು.

ಹೆಗ್ಗಡೆಯವರ ಆಪ್ತಕಾರ್ಯದರ್ಶಿ ಎ.ವಿ. ಶೆಟ್ಟಿ, ಪಾರ್ಶ್ವನಾಥ ಜೈನ್, ಸುಬ್ರಹ್ಮಣ್ಯಪ್ರಸಾದ್, ಕೆ. ಮಹಾವೀರ ಅಜ್ರಿ, ಶ್ರೀಧರ ಉಳಿಯ ಹಾಗೂ ಸಿಬ್ಬಂದಿಗಳು ಉಪಸ್ಥಿತರಿದ್ದರು.

### ಕಾಲುವೆಯಲ್ಲಿ ಮೊಸಳೆ ಪ್ರತ್ಯಕ್ಷ



☛ ಉದಯವಾಹಿನಿ ಚಿತ್ರ

**• ಉದಯವಾಹಿನಿ ಮುನವಳ್ಳಿ,**

ಕಲ್ಲೊಳ್ಳಿ ಗ್ರಾಮದ ಸಮಿಪ ಮಲಪ್ರಭಾ ಎಡದಂಡೆ ಕಾಲುವೆಯಲ್ಲಿ ಶುಕ್ರವಾರ ಬೃಹತ್ ಗಾತ್ರದ ಮೊಸಳೆ ಕಂಡುಬಂದಿದ್ದು ರೈತರು ಅರಣ್ಯ ಇಲಾಖೆಯವರಿಗೆ ತಿಳಿಸಿ ನಂತರ ಅರಣ್ಯ ಇಲಾಖೆಯವರು ಸ್ಪಂದಿಸಿ ಸಿಬ್ಬಂದಿಗಳು ಹಾಗೂ ಅಗ್ನಿಶಾಮಕ ಸಿಬ್ಬಂದಿ ಸಹಾಯದಿಂದ ಮೊಸಳೆ ರಕ್ಷಿಸಿ ಮರಳಿ ಮಲಪ್ರಭಾ ಜಲಾಶಯಕ್ಕೆ ಬಿಟ್ಟಿದ್ದಾರೆ.

## ನರೇನಹಾಳ್ ಗ್ರಾಮದಲ್ಲಿ ಚಿಣ್ಣರ ಬಾಲಗೋಕುಲ ಕಾರ್ಯಕ್ರಮ

**• ಉದಯವಾಹಿನಿ, ಚಿತ್ರದುರ್ಗ**

ಇಂದಿನ ಮಕ್ಕಳು ಮುಂದಿನ ಸಮಾಜಕ್ಕೆ ಸತ್ಕಾರ್ಯಕ್ಕಾಗಿ ಸಿಗಬೇಕಾದರೆ ಮಕ್ಕಳಿಗೆ ಶಾಲಾ ಶಿಕ್ಷಣದ ಜೊತೆಗೆ ನೈತಿಕಶಿಕ್ಷಣ ನೀಡುವುದು ಅವಶ್ಯ ಅದಕ್ಕಾಗಿ ಮಕ್ಕಳಿಗೆ ದೇಶೀಯ ಆಟಗಳ ಜೊತೆಗೆ ಭಾರತೀಯ ಸಂಸ್ಕಾರ ಸಂಸ್ಕೃತಿಗಳ ಪರಿಚಯ ಮಾಡಿಸುವ ಸಲುವಾಗಿ ಭಾರತೀಯ ಯೋಗ ಶಿಕ್ಷಣ ಸಂಸ್ಥೆ ವತಿಯಿಂದ ಮಕ್ಕಳಿ ಗಾಗಿ ಬಾಲಗೋಕುಲ ಶಿಬಿರಗಳನ್ನು ನಗರ ಮತ್ತು ಗ್ರಾಮೀಣ ಪ್ರದೇಶಗಳಲ್ಲಿ ಆಯೋಜಿಸಲಾಗುತ್ತಿದೆ ಎಂದು ಭಾರತೀಯ ಯೋಗ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಹಾಗೂ ಯೋಗಗುರು ರವಿ ಕೆ.ಅಂಬೇಕರ್ ಅಭಿಪ್ರಾಯ ಪಟ್ಟಿದ್ದಾರೆ.

ಚಿತ್ರದುರ್ಗ ತಾಲ್ಲೂಕು ನರೇನಹಾಳ್ ಗ್ರಾಮದಲ್ಲಿ ಭಾರತೀಯ ಯೋಗ ಶಿಕ್ಷಣ ಸಂಸ್ಥೆ ಚಿತ್ರದುರ್ಗ ಬಾಲಗೋಕುಲ ವಿಭಾಗದಿಂದ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಪಾಠ ಶಾಲಾ ಆವರಣದಲ್ಲಿ ಮಕ್ಕಳಿಗಾಗಿ ಶನಿವಾರ ಏರ್ಪಡಿಸಿದ್ದ ಬಾಲಗೋಕುಲ ಮಕ್ಕಳ ಶಿಬಿರದಲ್ಲಿ ಭಾಗವಹಿಸಿ ಅವರು ಮಾತನಾ



☛ ಉದಯವಾಹಿನಿ ಚಿತ್ರ

ಡುತ್ತಾ ಬಾಲಗೋಕುಲಗಳು ಜ್ಞಾನವನ್ನು ಬೆಳಗಿಸುವ ಕೇಂದ್ರಗಳಾಗಿದ್ದು ನಾಯಕತ್ವ ಗುಣವನ್ನು ಬೆಳೆಸುವ ಕೆಲಸ ಮಾಡುತ್ತದೆ. ಯಾವುದೇ ಪರಿಸ್ಥಿತಿಯನ್ನು ಎದುರಿಸುವ ಧೈರ್ಯ ಮತ್ತು ಮನೋಬಲವನ್ನು ತುಂಬಿ ಸುದೃಢ ಪ್ರಜೆಗಳನ್ನು ಸೃಷ್ಠಿಸುತ್ತದೆ. ಮಾತ್ರವಲ್ಲದೆ ಸಾಮಾಜಿಕ ಕಳಕಳಿಯನ್ನು ಜಾಗೃತಗೊಳಿಸಿ ಸ್ಪರ್ಧಾತ್ಮಕ ಮನೋಭಾವದಿಂದ ದೂರವಿರಿಸಿ ತನ್ನತನದಿಂದ ತಾನು ಬೆಳೆಸು ಬರುವಂತೆ ಪ್ರೇರೇಪಿಸುತ್ತದೆ ಎಂದು ಹೇಳಿದರು. ಶಿಬಿರದಲ್ಲಿ ಮಕ್ಕಳಿಗೆ ಅಮೃತ ವಚನ, ಶ್ಲೋಕಗಳು, ಕಬೀರನ ದೋಹೆಗಳು, ಗಾದೆಗಳು, ಒಗಟುಗಳು, ದೇಶಭಕ್ತಿ ಗೀತೆಗಳು, ಯೋಗಾಸನ, ಕಲಿಸಿಕೊಡಲಾಯಿತು. ಸಹಶಿಕ್ಷಕರಾದ ಶ್ರೀಮತಿ ಟಿ.ಗೀತಾ, ಮನೀಷ್,ಎ.ನೀಲಮ್ಮ,ಪಿ.ನರಸಿಂಹಪ್ಪ ಶಾಲಾ ಮಕ್ಕಳು ಸೇರಿದಂತೆ ಹಲವಾರು ಗ್ರಾಮಸ್ಥರು ಪಾಲ್ಗೊಂಡಿದ್ದರು.

> ನೈತಿಕ ಮೌಲ್ಯ ಕುಸಿಯುತ್ತಿರುವ ವರ್ತಮಾನ ಕಾಲದಲ್ಲಿ ಸಾಮಾಜಿಕ ಅಧ:ಪತನ ಉಂಟಾಗುತ್ತಿದೆ. ಇದನ್ನು ತಡೆಯಲು ಮಾನವೀಯ ಮೌಲ್ಯ ಬೆಳೆಸುವ ಸಾಂಸ್ಕೃತಿಕ ಶಿಕ್ಷಣವನ್ನು ಬೋಧಿಸುವ ವ್ಯವಸ್ಥೆಯ ಬಾಲಗೋಕುಲದಂತಹ ಸಂಸ್ಕಾರವನ್ನು ನೀಡುವ ಸಂಸ್ಥೆಗಳು, ಬಾಲ್ಯದಲ್ಲೇ ಮಕ್ಕಳಿಗೆ ಉತ್ತಮವಾದ ಜೀವನ ಮೌಲ್ಯಗಳನ್ನು ಕಲಿಸುವುದರಿಂದ ಮಕ್ಕಳು ಸತ್ಪ್ರಜೆಗಳಾಗಿ ರೂಪುಗೊಂಡು ನಮ್ಮ ರಾಷ್ಟ್ರದ ಉನ್ನತ್ತಿಗೆ ಜೊತೆಯಾಗುತ್ತಾರೆ
> **-ಮೊ.ಸುಭಾನ್,** ಶಾಲಾ ಮುಖ್ಯ ಶಿಕ್ಷಕರಾದ

## ಕಲ್ಲು ಗಣಿಗಾರಿಕೆ ನಿಲ್ಲಿಸಲು ಪ್ರಭು ಚವ್ಹಾಣ ಆಗ್ರಹ

**• ಉದಯವಾಹಿನಿ ಕಮಲನಗರ**



**ಧೂಳಿನಿಂದ ಆವರಿಸಿ ಬೆಳೆನಷ್ಟ**

ತಾಲ್ಲೂಕಿನ ಚಿಮ್ಮೇಗಾಂವ ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ನಡೆಯುತ್ತಿರುವ ಕಲ್ಲು ಗಣಿಗಾರಿಕೆಯಿಂದ ರೈತರು ಮತ್ತು ಸಾರ್ವಜನಿಕರು ಸಾಕಷ್ಟು ತೊಂದರೆ ಅನುಭವಿಸುತ್ತಿರುವ ಬಗ್ಗೆ ದೂರುಗಳು ಬರುತ್ತಿದ್ದು, ಕೂಡಲೇ ಗಣಿಗಾರಿಕೆಯನ್ನು ನಿಲ್ಲಿಸಿ ಸಾರ್ವಜನಿಕರಿಗೆ ಅನುಕೂಲ ಮಾಡಿ ಕೊಡಬೇಕೆಂದು ಮಾಜಿ ಸಚಿವರು ಹಾಗೂ ಔರಾದ(ಬಿ) ಶಾಸಕರಾದ ಪ್ರಭು ಬಿ.ಚವ್ಹಾಣ ಅವರು ಆಗ್ರಹಿಸಿದ್ದಾರೆ.

ಗಣಿ ಮತ್ತು ಭೂವಿಜ್ಞಾನಗಳ ಇಲಾಖೆಯ ಹಿರಿಯ ಭೂವಿಜ್ಞಾನಿಗಳಿಗೆ ಪತ್ರ ಬರೆದಿರುವ ಶಾಸಕರು, ಮೇಘನಾ ಕನ್‌ಸ್ಟ್ರಕ್ಷನ್ಸ್ ಎಂಬ ಸಂಸ್ಥೆಯವರು ಕಲ್ಲು ಗಣಿಗಾರಿಕೆ ನಡೆಸುತ್ತಿದ್ದು, ಇಲ್ಲಿಂದ ಹೊರಬರುತ್ತಿರುವ ವಿಪರೀತ ಧೂಳಿನಿಂದಾಗಿ ಸುತ್ತನಲ್ಲಿ ಕೃಷಿ ಮಾಡಿಕೊಂಡು ಬದುಕುತ್ತಿರುವ ರೈತರಿಗೆ ಮಾರಕವಾಗಿ ಪರಿಣಮಿಸಿದೆ. ದೊಡ್ಡ ಪ್ರಮಾಣದ ಯಂತ್ರಗಳನ್ನು ಬಳಸುತ್ತಿರುವುದರಿಂದ ಬೆಳೆಗಳು ಧೂಳಿನಿಂದ ಆವರಿಸಿ ಬೆಳೆನಷ್ಟವಾಗುತ್ತಿದೆ. ಗಣಿಗಾರಿಕೆ ಆರಂಭವಾದಾಗಿನಿಂದ ಆದಾಯ ಸಿಗದೇ ನಮಗೆ ಅನ್ಯಾಯವಾಗುತ್ತಿದೆ ಎಂದು ಬಹಳಷ್ಟು ರೈತರು ನನ್ನ ಬಳಿಗೆ ಬಂದು ಸಮಸ್ಯೆ ತೋಡಿಕೊಳ್ಳುತ್ತಿದ್ದಾರೆ ಎಂದಿದ್ದಾರೆ.

ಹತ್ತಿರದಲ್ಲೇ ಔರಾದ-ಉದಗೀರ ಹೆದ್ದಾರಿಯಿದೆ. ಈ ಮಾರ್ಗದಲ್ಲಿ ಸಾಕಷ್ಟು ವಾಹನಗಳು ಓಡಾಡುತ್ತವೆ. ಗಣಿಯಿಂದ ಹೊರಬರುವ ಧೂಳು ರಸ್ತೆಯ ಮೇಲೆ ಆವರಿಸುವುದರಿಂದ ವಾಹನ ಸವಾರರ ಕಣ್ಣುಗಳಲ್ಲಿ ಧೂಳು ಬಿದ್ದು, ಸಂಚರಿಸಲು ಪರದಾಡುವ ಪರಿಸ್ಥಿತಿಯಿದೆ. ಈ ರಸ್ತೆಯ ಮೂಲಕ ಬಹಳಷ್ಟು ವಿದ್ಯಾರ್ಥಿಗಳು ಶಾಲಾ-ಕಾಲೇಜುಗಳಿಗೆ ಹೋಗುವುದರಿಂದ ಮಕ್ಕಳಿಗೂ ಕೂಡ ಸಮಸ್ಯೆಯಾಗುತ್ತಿದೆ ಎಂದು ಸ್ಥಳೀಯರು ನೋವುಗಳನ್ನು ಹಂಚಿಕೊಳ್ಳುತ್ತಿದ್ದಾರೆ.

## ಅಭಿವೃದ್ಧಿ ಕಾಮಗಾರಿಗೆ ಶಿವರಾಜ್ ತಂಗಡಗಿ ಚಾಲನೆ

**• ಉದಯವಾಹಿನಿ ಕಾರಟಗಿ**

ತಾಲ್ಲೂಕಿನ ಚಳ್ಳೂರು ಗ್ರಾಮದಲ್ಲಿ 4.1ಕಿ.ಮಿ ರಸ್ತೆ ಅಭಿವೃದ್ಧಿ ಕಾಮಗಾರಿಗೆ ಹಿಂದುಳಿದ ವರ್ಗಗಳ ಕಲ್ಯಾಣ, ಕನ್ನಡ ಮತ್ತು ಸಂಸ್ಕೃತ ಇಲಾಖೆ ಸಚಿವ ಶಿವರಾಜ್ ತಂಗಡಗಿ ಶನಿವಾರ ಚಾಲನೆ ನೀಡಿದರು.

ನಂತರ ಮಾತನಾಡಿದ ಅವರು ಕಾರಟಗಿಯಿಂದ ಹಣವಾಳ ರಸ್ತೆ ಅಭಿವೃದ್ಧಿ ಮತ್ತು ಡಾಂಬರೀಕರಣ ಕಾಮಗಾರಿಗೆ ಚಾಲನೆ ನೀಡಲಾಗಿದೆ, ಚಳ್ಳೂರಿಂದ ಚಳ್ಳೂರು ಕ್ಯಾಂಪ್- 3.3 ಕಿ.ಮೀ, ಮತ್ತು ಹಗೇದಾಳ ಗ್ರಾಮದಿಂದ ತೊಂಡಿಹಾಳ ವರೆಗೆ - 0.8 ಕಿ.ಮೀ ಒಟ್ಟು 414.71 ಲಕ್ಷ ರೂ. ಕಾಮಗಾರಿ ನಡೆಸಲಾಗುತ್ತದೆ, ಗುತ್ತಿಗೆದಾರರು ಗುಣಮಟ್ಟದ ಕಾಮಗಾರಿ ನಡೆಸಬೇಕು, ಮತ್ತು ಬೇಗನೆ ಸಾರ್ವಜನಿಕರ ಓಡಾಟಕ್ಕೆ ಅನುಕೂಲ ಮಾಡಿಕೊಡಬೇಕು, ಎಂದರು. ಈ ವೇಳೆ ಮುಖಂಡರಾದ ಗಾದಿಲಿಂಪ್ಪ ಹೊಸಮನಿ,



☛ ಉದಯವಾಹಿನಿ ಚಿತ್ರ

ವಿಜಯ ಕುಮಾರ ಕೊಲ್ಕಾರ್, ಶರಣಪ್ಪ ಹುಡೇದ, ಅಣ್ಣಪ್ಪ ತೆಗ್ಗಿನಾಳ, ಸೋಮನಾಥ ದೊಡ್ಮನಿ, ನಾಗರಾಜ ಸಂಕನಾಳ, ಚನ್ನಪ್ಪ ರ್ಯಾವಳದ, ಗಾದಿಲಿಂಪ್ಪ ತಳವಾರ, ಹನುಮೇಶ ಕಲ್ಗುಡಿ, ದೇವರೆಡ್ಡಿ ಮೇಟಿ, ಶರಣಪ್ಪ ಕರಡೋಣಿ, ಯಂಕೋಬ ಅಳ್ಳಳ್ಳಿ, ಪಂಪಾಪತಿ, ವಿರುಪಣ್ಣ ನುಗ್ಗಿಕಾಯಿ, ಲಿಂಗೇಶ ಕಲ್ಗುಡಿ, ಬಸವ ರಾಜ, ಮಲ್ಲಿಕಾರ್ಜುನ, ಮಲ್ಲೇಶ ಇತರರು ಇದ್ದರು.

## ವಿಕಲಚೇತನರಿಗೆ ತಾಲ್ಲೂಕು ಗ್ರಾಮೀಣ ನಗರ ಪುನರ್ವಸತಿ ಕಾರ್ಯಕರ್ತರ ಒಂದು ದಿನದ ತರಬೇತಿ ಕಾರ್ಯಗಾರ

**• ಉದಯವಾಹಿನಿ ಕಾರಟಗಿ**

ತಾಲ್ಲೂಕು, ಗ್ರಾಮೀಣ,ನಗರ ಪುನರ್ವಸತಿ ಕಾರ್ಯಕರ್ತರ ಒಂದು ದಿನದ ತರಬೇತಿ ಕಾರ್ಯಕ್ರಮ ಕೊಪ್ಪಳ ಜಿಲ್ಲಾಡಳಿತ ಜಿಲ್ಲಾ ಪಂಚಾಯತ್ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಕೊಪ್ಪಳ ವತಿಯಿಂದ ಒಂದು ದಿನದ ತರಬೇತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು

ಸಭೆಯ ಅಧ್ಯಕ್ಷತೆಯನ್ನು ಶ್ರೀ ವೆಂಕಟೇಶ ದೇಶಪಾಂಡೆ ವಹಿಸಿ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಕಾರ್ಯಕ್ರಮ ಹಾಗೂ ಯೋಜನೆಗಳಾದ ನಿರಾಮಯ, ಆಧಾರ್ ಯೋಜನೆ, ಸಾಧನೆ, ಪ್ರತಿಭಾ ಯೋಜನೆ, ಸಾಧನ ಸಲಕರಣೆ ವಿತರಣೆ ಯಂತ್ರಾಚಾಲಿತ ವಾಹನ ವಿತರಣೆ ಶಿಶು ಪಾಲನ ಭತ್ಯೆ ಶುಲ್ಕ ಮರುಪಾವತಿ ವಿವಾಹ ಪ್ರೋತ್ಸಾಹ ಧನ ಶಿಷ್ಯವೇತನ ದೃಷ್ಟಿದೋಷಯುಳ್ಳವರಿಗೆ ಲ್ಯಾಪ್ ಟ್ಯಾಪ್ ವಿತರಣೆ ಶ್ರವಣ ನ್ಯೂನತೆ ಯುಳ್ಳವರಿಗೆ ಹೊಲಿಗೆ ಯಂತ್ರ ಹಾಗೂ ಹಿರಿಯ ನಾಗರಿಕರ ಸೌಲಭ್ಯಗಳ





☛ ಉದಯವಾಹಿನಿ ಚಿತ್ರ

ಕುರಿತು ಮಾಹಿತಿಯನ್ನು ತಿಳಿಸಿದರು.

ಕಾರ್ಯಕ್ರಮದಲ್ಲಿ ಸಂಪನ್ಮೂಲ ವ್ಯಕ್ತಿಯಾಗಿ ಭಾಗವಹಿಸಿ ಅಂಜಲಿ ಬೆಳಗಲಿ ಮಾತನಾಡಿ ವಿಕಲಚೇತನರ ಹಕ್ಕುಗಳ ಕಾಯ್ದೆ 2016 ಕುರಿತು ಹಾಗೂ ವಿಕಲಚೇತನರ ಆತ್ಮ ವಿಶ್ವಾಸ ಬೆಳವಣಿಗೆ ಕುರಿತು ಮಾಹಿತಿಯನ್ನು ತಿಳಿಸಿದರು ನಂತರದಲ್ಲಿ ಜಿಲ್ಲಾ ಪಂಚಾಯಿತಿ ಎಎಸ್ ಓ ಮಾತನಾಡಿ ಜಿಲ್ಲಾ ಪಂಚಾಯಿತಿ ಕೆಲವು ಕಾರ್ಯಕ್ರಮಗಳ ಕುರಿತು ಹಾಗೂ ವಿಕಲಚೇತನರ ಸ್ವಯಂ ಉದ್ಯೋಗಕ್ಕೆ ಮುಂದಾಗಿ ಆರ್ಥಿಕವಾಗಿ ಶೈಕ್ಷಣಿಕವಾಗಿ ಮುಂದೆ ಬರಬೇಕು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಗ್ರಾಮೀಣ ಪುನರ್ವಸತಿ ಸಂಘಟನೆಯ ಮುಖಂಡರಗಳಾದ ಮಂಜುನಾಥ ಹೊಸಕೇರಾ .ಹುಲಗಪ್ಪ.ಯಮನೂರಪ್ಪ ಪುಂಡುಗೌಡ ಮಲ್ಲಿಕಾರ್ಜುನ ಪೂಜಾರ. ಈರಣ್ಣ ಕರೆಕುರಿ. ವಿರಭಂದ್ರಪ್ಪ . ನಾಲ್ಕು ತಾಲೂಕಿನ ಎಂ ಆರ್ ಡಬ್ಲ್ಯೂಗಳಾದ. ಚಂದ್ರಶೇಖರ್ ಹಿರೇಮನಿ. ಜಯಶ್ರೀ. ಮಂಜುಳ ಪುರಾಣಿ ಮಠ. ಶಶಿಕಲಾ. ವೀರೇಶ ಹಾಲಗುಂಡಿ ಕಾರ್ಯಕ್ರಮ ನಿರೂಪಿಸಿದರು.

ಜಿಲ್ಲೆಯ ಎಲ್ಲಾ ತಾಲೂಕ ವಿವಿಧೋದ್ದೇಶ, ಗ್ರಾಮೀಣ, ನಗರ ಪುನರ್ವಸತಿ ಕಾರ್ಯಕರ್ತರು ಬಾಗವಹಿಸಿ ಯಶಸ್ವಿಗೊಳಿಸಿದರು.

> ತಾಲ್ಲೂಕು ಗ್ರಾಮೀಣ ನಗರ ಪುನರ್ವಸತಿ ಕಾರ್ಯಕರ್ತರ ವಿವಿಧ ಬೇಡಿಕೆಗಳಾದ 5% ವಿಕಲಚೇತನರ ಅನುದಾನ ಬಳಕೆ, ಸಾರಿಗೆ ವೆಚ್ಚ, ಕಾರ್ಯಕರ್ತರಿಗೆ ಪಂಚಾಯಿತಿಯಲ್ಲಿ ಕುರ್ಚಿ ಟೇಬಲ್ ಕಂಪ್ಯೂಟರ್ ವ್ಯವಸ್ಥೆ ಕುರಿತು ಈಡೇರಿಕೆಗೆ ನನ್ನ ಕೆಲಸದ ಅವಧಿಯಲ್ಲಿ ಮಾಡಿ ಕೊಡಲು ಪ್ರಯತ್ನಿಸುತ್ತೇನೆ
> **- ಶ್ರೀ ರಾಹುಲ್ ರತ್ನಂ ಪಾಂಡೆ**
> ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ

## ಮನೆಯ ಬಾಗಿಲು ಕೊಂಡಿ ಮುರಿದು 1.49 ಲಕ್ಷ ರೂ.ಮೌಲ್ಯದ ನಗನಾಣ್ಯ ಕಳವು

**• ಉದಯವಾಹಿನಿ ಕಲಬುರಗಿ,**

ಮನೆಯ ಬಾಗಿಲು ಕೊಂಡಿ ಮುರಿದು 1.49 ಲಕ್ಷ ರೂಪಾಯಿ ಮೌಲ್ಯದ ನಗನಾಣ್ಯ ಕಳವು ಮಾಡಿರುವ ಘಟನೆ ಹಾಗರಗಾ ರಸ್ತೆಯ ಮಾಲಗತ್ತಿ ಕ್ರಾಸ್‌ನ ಫಿರದೋಶ ಕಾಲೋನಿಯಲ್ಲಿ ನಡೆದಿದೆ.

ಸೈಯದ್ ಬಿಲಾಲ್ ಎಂಬುವವರ ಮನೆ ಬಾಗಿಲು ಕೊಂಡಿ ಮುರಿದು ಕಳ್ಳರು ಮನೆಯ ಅಲಮಾರದಲ್ಲಿಟ್ಟಿದ್ದ 90 ಸಾವಿರ ರೂ. ಮೌಲ್ಯದ 4 ಬಂಗಾರದ ಬಳೆ, 30 ಸಾವಿರ ರೂ.ಮೌಲ್ಯದ 10 ಗ್ರಾಂ. ಬಂಗಾರದ ಸುತ್ತುಂಗುರ, 6 ಸಾವಿರ ರೂ.ಮೌಲ್ಯದ 20 ತೊಲೆ ಬೆಳ್ಳಿಯ ಕಾಲು ಚೈನ, 3 ಸಾವಿರ ರೂ.ಮೌಲ್ಯದ 10 ತೊಲೆಯ ಬೆಳ್ಳಿಯ ಕಾಲು ಚೈನ ಮತ್ತು 20 ಸಾವಿರ ರೂ.ನಗದು ಸೇರಿ 1.49 ಲಕ್ಷ ರೂ.ಮೌಲ್ಯದ ನಗನಾಣ್ಯ ದೋಚಿಕೊಂಡು ಹೋಗಿದ್ದಾರೆ. ಸೈಯದ್ ಬಿಲಾಲ್ ಅವರು ಆರೋಗ್ಯ ತಪಾಸಣೆಗೆಂದು ಮನಗೆ ಬೀಗ ಹಾಕಿಕೊಂಡು ಪತ್ನಿ ಮತ್ತು ಮಕ್ಕಳೊಂದಿಗೆ ಜಹಿರಾಬಾದಗೆ ಹೋದ ವೇಳೆ ಮನೆ ಕಳ್ಳತನವಾಗಿದೆ ಎಂದು ತಿಳಿದುಬಂದಿದೆ. ಈ ಸಂಬಂಧ ಅವರು ವಿಶ್ವವಿದ್ಯಾಲಯ ಪೊಲೀಸ್ ಠಾಣೆಯಲ್ಲಿ ದೂರು ಸಲ್ಲಿಸಿದ್ದು, ತನಿಖೆ ನಡೆದಿದೆ.

## ರಾಷ್ಟ್ರೀಯ ವಿಜ್ಞಾನ ದಿನಾಚರಣೆ

**• ಉದಯವಾಹಿನಿ ಬಳ್ಳಾರಿ**

ರಾಷ್ಟ್ರೀಯ ವಿಜ್ಞಾನ ದಿನಾಚರಣೆ ಬಳ್ಳಾರಿ ನಗರದ ಸಂಜಯ್ ಗಾಂಧಿ ಪಾಲಿಟೆಕ್ನಿಕ್ ಕಾಲೇಜಿನಲ್ಲಿ ಕರ್ನಾಟಕ ರಾಜ್ಯ ವೈಜ್ಞಾನಿಕ ಸಂಶೋಧನಾ ಪರಿಷತ್ ಬಳ್ಳಾರಿ ಜಿಲ್ಲಾ ಘಟಕದಿಂದ ರಾಷ್ಟ್ರೀಯ ವಿಜ್ಞಾನ ದಿನಾಚರಣೆಯನ್ನು ಆಚರಿಸಲಾಯಿತು.

ಈ ಸಂದರ್ಭದಲ್ಲಿ ಕಿಸ್ಕಿಂದ ವಿಶ್ವವಿದ್ಯಾಲಯದ ಡೀನ್ ಎಸ್.ಮಂಜುನಾಥ ತಮಟೆ ಬಾರಿಸಿ ಉದ್ಘಾಟಿಸಿ ಮಾತನಾಡುತ್ತಾ ವಿದ್ಯಾರ್ಥಿ ದೆಸೆಯಲ್ಲಿ ಯಾವುದೇ ವಿಷಯದಲ್ಲಾದರೂ ಆಸಕ್ತಿ ಬೆಳೆಸಿಕೊಳ್ಳಬೇಕು ಅಧ್ಯಯನ ಸಂಶೋಧನೆ ಪ್ರಯೋಗ ಶೀಲತೆ ಮನೋಭಾವ ಕ್ರಿಯಾಶೀಲತೆ ಚತುರತೆ ಸಂಶೋಧನೆ ಹೊಂದಿದವರಾದರೆ ಅಂತಹ ವ್ಯಕ್ತಿ ಶಕ್ತಿಯಾಗಿ ಸಾಧಕರಾಗಿ ವಿಶ್ವದಲ್ಲಿ ಮೇಲೆತ್ತರದಲ್ಲಿ ಬೆಳೆಯುತ್ತಾರೆ ಹೆಸರುವಾಸಿಯಾಗುತ್ತಾರೆ ಎಂದರು.

ಡಾಕ್ಟರ್ ಹೆಚ್. ನರಸಿಂಹಯ್ಯನವರ ಜೀವನ ಸಾಧನೆ ಬದುಕು ಬವಣೆ, ಯಾವುದನ್ನು ಸುಲಭವಾಗಿ ಒಪ್ಪಿಕೊಳ್ಳಬೇಡ ಎಂಬ ಅವರ ಪ್ರಶ್ನಾರ್ಥಕ ಚಿಹ್ನೆಯ ಸೂಚನೆ ಚಿತ್ರಅವರ ಮನೆ ಗೋಡೆಯ ಮೇಲೆ ರಾರಾಜಿಸುತ್ತಿತ್ತು. ಸರ್ ಸಿ ವಿ ರಾಮನ್ ಅವರ ಬೆಳಕಿನ ಚದುರುವಿಕೆ ಸಂಶೋಧನೆ ಕುರಿತಾದ ಹಿನ್ನೆಲೆಯನ್ನು ಮತ್ತು ನೋಬೆಲ್ ಪಾರಿತೋಷಕ ಪಡೆದ ಬಗೆಗಿನ ವಿವರಣೆಯನ್ನು ತಿಳಿಸಿದರು.

ತಮ್ಮ ವಿದ್ಯಾಭ್ಯಾಸ ದ ಪರಿ ಶ್ರಮ ಪ್ರಯೋಗಗಳ ವಿಧಾನ ಪುಸ್ತಕಗಳ ರಚನೆ ಕುರಿತಾಗಿ ವಿದ್ಯಾರ್ಥಿಗಳಲ್ಲಿ ಶಿಕ್ಷಣದ ಬಗೆಗಿನ ಅಭಿಪ್ರಾಯಗಳನ್ನು ಹಂಚಿ ಕೊಂಡರು. ಕಾರ್ಯಕ್ರಮದಲ್ಲಿ ಅತಿಥಿಗಳಾಗಿ ಸರ್ಕಾರಿ ಪದವಿಪೂರ್ವ ಬಾಲಕಿಯರ ಕಾಲೇಜಿನ ಉಪನ್ಯಾಸಕರಾದ ಡಾ.ಯು ಶ್ರೀನಿವಾಸಮೂರ್ತಿ ತಮ್ಮ ಉಪನ್ಯಾಸದಲ್ಲಿ ಇಂದಿನ ಆಧುನಿಕ ಜಗತ್ತಿನಲ್ಲಿ ವೈಜ್ಞಾನಿಕ ಪ್ರಯೋಗಗಳು ವೈಜ್ಞಾನಿಕ ಚಿಂತನೆಗಳು ವೈಚಾರಿಕತೆಗಳು ಸಂಶೋಧನೆಗಳು ದಿನ ದಿನಕ್ಕೆ ಮಾನವನ ಅಗತ್ಯತೆಗಳಿಗೆ ತಕ್ಕಂತೆ ಬದಲಾಗುತ್ತಾ ಹೋಗುತ್ತಿದೆ ಶಿಕ್ಷಕರು ಪಾಠ ಪ್ರಯೋಗ ಮಾತ್ರ ಮಾಡುತ್ತಾರೆ ವಿದ್ಯಾರ್ಥಿಗಳೇ ಅದರಲ್ಲಿ ಹೊಸತನವನ್ನು ಕಂಡು ತಮ್ಮದೇ ರೀತಿಯ ಪ್ರಯೋಗ ಶೀಲತೆಯನ್ನು ಮೆರೆಯುವುದಾದಲ್ಲಿ ಆ ಪಾಠಕ್ಕೊಂದು ಅರ್ಥ ವೈಶಿಷ್ಟ್ಯತೆ ಜ್ಞಾನ ಸಂವರ್ಧನೆ ಹೆಚ್ಚಾಗುತ್ತದೆ .



☛ ಉದಯವಾಹಿನಿ ಚಿತ್ರ

> ಸಿವಿ ರಾಮನ್ ಜಾಣ ವಿದ್ಯಾರ್ಥಿಯಾಗಿದ್ದು ಎಲ್ಲಾ ಪರೀಕ್ಷೆಗಳಲ್ಲೂ ಉನ್ನತ ಶ್ರೇಣಿ ಪಡೆದು ಉತ್ತೀರ್ಣರಾಗಿರುತ್ತಾರೆ ಸಾಹಿತ್ಯ ಸಂಗೀತ ಸಂಶೋಧನೆ ಮೆಚ್ಚಿನ ಕ್ಷೇತ್ರವಾಗಿದ್ದವು ಎಂದರಲ್ಲದೆ ಸಿವಿ ರಾಮನ್‌ರವರ ವ್ಯಕ್ತಿತ್ವ ಸಾಧನೆಯ ಛಲ ನೋಬೆಲ್ ಪ್ರಶಸ್ತಿಗೆ ಪೂರಕವಾಗಿದ್ದವು ಎಂದು ವಿದ್ಯಾರ್ಥಿಗಳಿಗೆ ಸಾಧಿಸುವ ಮನೋಭಾವ ಬೆಳೆಸಿಕೊಳ್ಳಲು ಕರೆ ನೀಡಿದರು.

## ಡಾ.ಅಂಬೇಡ್ಕರ್‌ರ ತತ್ವಗಳು ಸಮಾಜಕ್ಕೆ ದಾರಿದೀಪ

**• ಉದಯವಾಹಿನಿ ಹುಮನಾಬಾದ್**

ಡಾ. ಬಿಆರ್ ಅಂಬೇಡ್ಕರ್ ಅವರು ಶೋಷಿತ ಜನಾಂಗದ ವಿರುದ್ಧ ಹೋರಾಟ ಮಾಡಿ ನ್ಯಾಯ ದೊರಕಿಸಿ ಕೊಟ್ಟ ಮಹಾನ್ ಪುರುಷನ ಆದರ್ಶಗಳು ಸಮಾಜಕ್ಕೆ ದಾರಿದೀಪವಾಗಿವೆ ಎಂದು ತಾಲ್ಲೂಕಿನ ಕನಕಟ್ಟಾ ಗ್ರಾಮದ ಅಂಬೇಡ್ಕರ್ ವೃತ್ತದಲ್ಲಿ ನಡೆದ ಡಾ.ಬಿ.ಆರ್. ಅಂಬೇಡ್ಕರ್ ಅವರ ನೂತನ ಮೂರ್ತಿ ಅನಾವರಣ ಹಾಗೂ ಬೃಹತ್ ಬಹಿರಂಗ ಸಭೆ ಉದ್ಘಾಟಿಸಿ ಮಾತನಾಡಿದರು.

ಅನ್ಯಾಯ ಅತ್ಯಾಚಾರ ಕಂದಾಚಾರ್ಯಗಳ ವಿರುದ್ಧ ಹೋರಾಟ ಮಾಡಿ ನ್ಯಾಯ ದೊರಕಿಸಿಕೊಟ್ಟ ಮಹಾಪುರುಷನ ಆದರ್ಶಗಳು ಪ್ರತಿಯೊಬ್ಬರು ಜೀವನದಲ್ಲಿ ಅಳವಡಿಸಿಕೊಳ್ಳಲು ಕರೆ ನೀಡಿದರು .

ಡಾ ಬಿ.ಆರ್ ಅಂಬೇಡ್ಕರ್ ಅವರ ಶಿಕ್ಷಣ ಸಂಘಟನೆ ಹೋರಾಟ ಸಮಾಜಕ್ಕೆ ಸ್ಫೂರ್ತಿಯಾಗಿದೆ ಎಂದರು. ಕರ್ನಾಟಕ ಸರ್ಕಾರ ಡಾ. ಬಿ ಆರ್



☛ ಉದಯವಾಹಿನಿ ಚಿತ್ರ

ಅಂಬೇಡ್ಕರ್ ಅವರ ಸವಿಂದಾನದ ರಕ್ಷಣೆಗಾಗಿ ಸಂವಿಧಾನ ಜಾಗೃತಿ ಗಾಗಿ ಶ್ರಮಿಸುತಿದೆ ಎಂದರು. ರಾಜಶೇಖರ ಪಾಟೀಲ್ ಮಾತನಾಡಿ, ಭಾರತ ಸಂವಿಧಾನದ ಮೀಸಲಾತಿಯಿಂದ ರೇಖಾ ಗುಪ್ತ ಅವರು ದೆಹಲಿಯ ನೂತನ ಸಿಎಂ ಆಗಿದ ಬಳಿಕ ತಮ್ಮ ಕಚೇರಿಯಲ್ಲಿದ್ದ ಅಂಬೇಡ್ಕರ್ ಅವರ ಭಾವಚಿತ್ರ ತೆರವುಗಳಿಸಿ ಸಂವಿಧಾನಕ್ಕೆ ಹಾಗೂ ಅಂಬೇಡ್ಕರ್‌ಗೆ ಅಪಮಾನ ಮಾಡಿದ್ದಾರೆ. ಹೀಗಾಗಿ ಪ್ರತಿಯೊಬ್ಬರು ಜಾಗೃತರಾಗಿ ವಿಚಾರ ಮಾಡುವ ಮೂಲಕ ನಿಮ್ಮ ಹೊಲದಲ್ಲಿ ಯಾರು ಕೂಲಿ ಮಾಡುತ್ತಾರೆ ಅವರಿಗೆ ಮಾತ್ರ ಕೂಲಿ ಕೊಡಬೇಕು. ಹೊರತು ರಸ್ತೆ ಬದಿಯಲ್ಲಿ ಓಡಾಡುವ ವ್ಯಕ್ತಿಗಳಿಗೆ ಅಲ್ಲ ಎಂದು ಹೇಳಿದರು.

## ಜ್ಯೋತಿರ್ಲಿಂಗ ದರ್ಶನ

**• ಉದಯವಾಹಿನಿ ವಾಡಿ**

ಮಹಾಶಿವರಾತ್ರಿ ನಿಮಿತ್ತ ಸಂಜೆ ಪಟ್ಟಣದ ಶ್ರೀಶೈಲ ಮಲ್ಲಿಕಾರ್ಜುನ ದೇವಸ್ಥಾನದಲ್ಲಿ ಭವ್ಯ ದೀಪೋತ್ಸವ ನಡೆಯಿತು. ದೇವಸ್ಥಾನ ಸಮಿತಿ ವತಿಯಿಂದ ಪ್ರತಿಷ್ಠಾಪಿಸಲಾದ ಹನ್ನೆರಡು ಜ್ಯೋತಿರ್ಲಿಂಗಗಳ ದರ್ಶನ ಪಡೆಯುವ ಮೂಲಕ ಸಾವಿರಾರು ಜನ ಭಕ್ತರು ಧನ್ಯರಾದರು. ಇದಕ್ಕೂ ಮುನ್ನ ದೇವಸ್ಥಾನದ ಗರ್ಭಗುಡಿಯ ಶಿವಲಿಂಗಕ್ಕೆ ಅರ್ಚಕರು ಜಲಾಭಿಷೇಕ ಕ್ಷೀರಾಭಿಷೇಕ ಕೈಗೊಂಡು ಶಿವರಾತ್ರಿಯ ಸಂಪ್ರದಾಯ ಮೆರೆದರು.

ರಾವೂರ ಶ್ರೀ ಸಿದ್ದಲಿಂಗೇಶ್ವರ ಸಂಸ್ಥಾನ ಮಠದ ಪೀಠಾಧಿಪತಿ ಪೂಜ್ಯ ಶ್ರೀ ಸಿದ್ದಲಿಂಗ ಸ್ವಾಮೀಜಿ ಸಾನಿಧ್ಯ ವಹಿಸಿದ್ದರು.

## ಗಮನ ಸೆಳೆದ ಕುಸ್ತಿ ಪಂದ್ಯಾವಳಿ

**• ಉದಯವಾಹಿನಿ ಔರಾದ**

ಉದ್ಭವಲಿಂಗ ಶ್ರೀ ಅಮರೇಶ್ವರ ಜಾತ್ರೋತ್ಸವ ನಿಮಿತ್ತ ನಡೆದ ಜಂಗಿ ಪೈಲ್ವಾನರ ಕುಸ್ತಿ ಪಂದ್ಯಾವಳಿ ಗಮನ ಸೆಳೆಯಿತು. ಪಟ್ಟಣದ ಬಸ್ ಡಿಪೊ ಹಿಂದೆ ಇರುವ ನಿರ್ಮಾಳೆ ಅವರ ಜಮೀನಿನಲ್ಲಿ ನಡೆದ ಕುಸ್ತಿ ಪಂದ್ಯಾವಳಿಯಲ್ಲಿ ವಿವಿಧೆಡೆಯಿಂದ 50ಕ್ಕೂ ಹೆಚ್ಚು ಕುಸ್ತಿ ಪಟುಗಳು ಭಾಗವಹಿಸಿ ತಮ್ಮ ಕಲೆ ಪ್ರದರ್ಶಿಸಿದರು. ವಿಜೇತ ಪ್ರಥಮ, ದ್ವಿತೀಯ, ತೃತೀಯ ಕುಸ್ತಿ ಪಟುಗಳಿಗೆ ತಾಲ್ಲೂಕು ಆಡಳಿತ ಹಾಗೂ ದೇವಸ್ಥಾನ ಕಮಿಟಿಯಿಂದ ನಗದು ಬಹುಮಾನ ನೀಡಿ ಗೌರವಿಸಲಾಯಿತು. ಖಾಜಿ ಹುಸೇನ್ ಸಾಬ, ಪ್ರಮುಖರಾದ ಬಸವರಾಜ ದೇಶಮುಖ, ಶರಣಪ್ಪ ಪಂಚಾಕ್ಷರಿ, ಸುಭಾಷ ನಿರ್ಮಾಳೆ, ಶಿವರಾಜ ಅಲ್ಮಾಜೆ ಇದ್ದರು.

# ಸಿದ್ದು ಸರ್ಕಾರ ಎಸ್‌ಸಿ, ಎಸ್‌ಟಿ ಹಿತಾಸಕ್ತಿಗೆ ವಿರುದ್ಧವಾಗಿ ನಡೆದುಕೊಳ್ಳುತ್ತಿದೆ

**• ಮುಂಬರುವ ತಾಲ್ಲೂಕು ಮತ್ತು ಜಿಲ್ಲಾ ಪಂ. ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷಕ್ಕೆ ತಕ್ಕ ಪಾಠ ಕಲಿಸಬೇಕು: ರವಿಕುಮಾರ್**

**• ಉದಯವಾಹಿನಿ ಉಡುಪಿ**

ಸಿದ್ದರಾಮಯ್ಯ ನೇತೃತ್ವದ ರಾಜ್ಯ ಸರಕಾರ ಎಸ್‌ಸಿ, ಎಸ್‌ಟಿ ಹಿತಾಸಕ್ತಿಗೆ ವಿರುದ್ಧವಾಗಿ ನಡೆದುಕೊಳ್ಳುತ್ತಿದೆ ಎಂದು ರಾಜ್ಯ ಸರಕಾರದ ವಿರುದ್ಧ ಮಣಿಪಾಲ ಡಿಸಿ ಕಚೇರಿಯಲ್ಲಿ ನಡೆದ ಪ್ರತಿಭಟನೆಯಲ್ಲಿ ಎಂಎಲ್‌ಸಿ ಎನ್ ರವಿಕುಮಾರ್ ಹೇಳಿದ್ದಾರೆ.

ಎಂಎಲ್ಸಿ ಎನ್ ರವಿಕುಮಾರ್ ಮಾತನಾಡಿ, ''2023ರಲ್ಲಿ ರಾಜ್ಯ ಸರಕಾರ ಎಸ್ಸಿ/ಎಸ್ಟಿ ನಿಧಿಯಿಂದ 11 ಸಾವಿರ ಕೋಟಿ ರೂ.ಗಳನ್ನು ಖಾತರಿ ಯೋಜನೆಗೆ ಮಂಜೂರು ಮಾಡಿದೆ. ಈ ವರ್ಷ 39,000 ಕೋಟಿ ಅನುದಾನದಲ್ಲಿ 14,000 ಕೋಟಿ ರೂ.ಗಳನ್ನು ಖಾತರಿ ಯೋಜನೆಗೆ ಬಳಸಲಾಗಿದ್ದು, ಒಟ್ಟು 25,000 ಕೋಟಿ ರೂ. ಅಲ್ಪಸಂಖ್ಯಾತರಿಗೆ ಅಥವಾ ಮುಸ್ಲಿಮರಿಗೆ ಮೀಸಲಾದ ಹಣವನ್ನು ಸರ್ಕಾರವು ಎಂದಿಗೂ ತಿರುಗಿಸಲಿಲ್ಲ, ಆ ಹಣವನ್ನು ಅವರಿಗೆ ವಿಶೇಷವಾಗಿ ಬಳಸಲಾಯಿತು.

ಹಾಗಾದರೆ ಎಸ್‌ಸಿ/ಎಸ್‌ಟಿ ಕಲ್ಯಾಣಕ್ಕಾಗಿ ಮೀಸಲಿಟ್ಟ ಅನುದಾನವನ್ನು ಅವರ ಉದ್ದೇಶಿತ ಉದ್ದೇಶಕ್ಕೆ ಏಕೆ ಬಳಸಲಾಗುವುದಿಲ್ಲ? ಈ ಸರಕಾರವೂ ಡಾ.ಬಿ.ಆರ್. ಅಂಬೇಡ್ಕರ್ ಅವರ ತತ್ವಗಳು. ಅವರು





☛ ಉದಯವಾಹಿನಿ ಚಿತ್ರ

> ಕರ್ನಾಟಕದಲ್ಲಿ ಸುಮಾರು 1.7 ಕೋಟಿ ಪರಿಶಿಷ್ಟ ಜಾತಿ ವ್ಯಕ್ತಿಗಳಿದ್ದು, ಅಂದಾಜು 45 ಲಕ್ಷ ಪರಿಶಿಷ್ಟ ಪಂಗಡದ ಜನರಿದ್ದಾರೆ. ರಾಜ್ಯ ಸರಕಾರ ಎಸ್ಸಿ ಮತ್ತು ಎಸ್ಟಿ ಸಮುದಾಯಗಳಿಗೆ ಮೀಸಲಿಟ್ಟ ಅನುದಾನವನ್ನು ದುರ್ಬಳಕೆ ಮಾಡಿಕೊಳ್ಳುತ್ತಿದೆ. ಈ ಅನುದಾನವನ್ನು ಎಸ್‌ಸಿ/ಎಸ್‌ಟಿ ಜನರ ಕಲ್ಯಾಣಕ್ಕಾಗಿ ಕಟ್ಟುನಿಟ್ಟಾಗಿ ಬಳಸಬೇಕೆಂದು ನಾವು ಒತ್ತಾಯಿಸುತ್ತೇವೆ ಮತ್ತು ಇತರ ಉದ್ದೇಶಗಳಿಗೆ ತಿರುಗಿಸಬಾರದು. ನಾನು ಸಂಸತ್ತಿನಲ್ಲಿ ಈ ವಿಷಯವನ್ನು ಪ್ರಸ್ತಾಪಿಸಿದೆ, ಸರ್ಕಾರವು ಎಸ್‌ಸಿ/ಎಸ್‌ಟಿ ನಿಧಿಯಿಂದ ಅಲ್ಲ, ತನ್ನ ಸ್ವಂತ ಸಂಪನ್ಮೂಲಗಳಿಂದ ಖಾತರಿ ಯೋಜನೆಗೆ ಹಣ ನೀಡುವುದಾಗಿ ಭರವಸೆ ನೀಡಿದೆ ಎಂದು ಹೇಳಿದ್ದಾರೆ. ಸಿಎಂ ಸಿದ್ದರಾಮಯ್ಯ ಹೊರತು ಪಡಿಸಿ ಉಳಿದೆಲ್ಲ ಸಚಿವರು ನನ್ನ ಹೇಳಿಕೆಯನ್ನು ಬೆಂಬಲಿಸಿದ್ದಾರೆ. ಈ ನಿಧಿಗಳನ್ನು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಕಲ್ಯಾಣಕ್ಕಾಗಿ, ಅವರನ್ನು ಭೂಮಾಲೀಕರನ್ನಾಗಿ ಮಾಡಲು ಉದ್ದೇಶಿಸಲಾಗಿದೆ ಮತ್ತು ಅವುಗಳನ್ನು ಖಾತರಿ ಯೋಜನೆಗೆ ಬಳಸುವುದು ಸಂಪೂರ್ಣವಾಗಿ ಸ್ವೀಕಾರಾರ್ಹವಲ್ಲ **-ಸಂಸದ ಕೋಟ ಶ್ರೀನಿವಾಸ ಪೂಜಾರಿ**

ಖಾತರಿ ಯೋಜನೆಗೆ ಅಂದಾಜು 15,000 ಕೋಟಿ ರೂ.ಗಳನ್ನು ಬಳಸಲು ಯೋಜಿಸಿದ್ದಾರೆ. ಹಿಂದುಳಿದ ಜಾತಿಗಳ ಕಲ್ಯಾಣವಿಲ್ಲದೆ, ನಿಜವಾದ ರಾಷ್ಟ್ರೀಯ ಕಲ್ಯಾಣ ಸಾಧ್ಯವಿಲ್ಲ. ಎಸ್ಟಿ ನಿಧಿಯಿಂದ ಶೇ 22 ಮತ್ತು ಎಸ್‌ಸಿ ನಿಧಿಯಿಂದ ಶೇ 41 ಅನುದಾನವನ್ನು ಮಾತ್ರ ಆಯಾ ಸಮುದಾಯಗಳ ಕಲ್ಯಾಣಕ್ಕೆ ಬಳಸಲಾಗಿದೆ. ಮುಂಬರುವ ತಾಲೂಕು ಮತ್ತು ಜಿಲ್ಲಾ ಪಂಚಾಯಿತಿ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷಕ್ಕೆ ತಕ್ಕ ಪಾಠ ಕಲಿಸಬೇಕು. ಕೋವಿಡ್ ಸಾಂಕ್ರಾಮಿಕ ಸಮಯದಲ್ಲಿಯೂ ಸಹ, ನಾವು ಎಸ್‌ಸಿ, ಎಸ್‌ಟಿ ಅನುದಾನವನ್ನು ಬಳಸುವುದರಿಂದ ದೂರವಿದ್ದೇವೆ, ಆದರೆ ಈ ಸರ್ಕಾರವು ರಾಜಕೀಯ ಲಾಭಕ್ಕಾಗಿ ಈ ಹಣವನ್ನು ದುರುಪಯೋಗಪಡಿಸಿಕೊಂಡಿದೆ ಎಂದು ದೂರಿದರು. ಪ್ರತಿಭಟನೆಯ ನಂತರ ಜಿಲ್ಲಾಧಿಕಾರಿ ಡಾ.ಕೆ.ವಿದ್ಯಾ ಕುಮಾರಿ ಅವರಿಗೆ ಮನವಿ ಪತ್ರ ಸಲ್ಲಿಸಲಾಯಿತು.

ಬಿಜೆಪಿ ಉಡುಪಿ ಜಿಲ್ಲಾಧ್ಯಕ್ಷ ಕಿಶೋರ್ ಕುಮಾರ್ ಕುಂದಾಪುರ, ಮಂಗಳೂರು ವಿಭಾಗ ಪ್ರಭಾರಿ ಕೆ.ಉದಯಕುಮಾರ್ ಶೆಟ್ಟಿ, ಸಂಸದ ಕೋಟ ಶ್ರೀನಿವಾಸ್ ಪೂಜಾರಿ, ಎಸ್ಸಿ ಮೋರ್ಚಾ ರಾಜ್ಯ ಉಪಾಧ್ಯಕ್ಷರಾದ ಸಾಬು ದೊಡ್ಮನಿ, ಗೋಪಾಲ್ ಘಾಟ್ ಕಾಂಬಳೆ, ದಿನಕರ ಬಾಬು, ನಿಕಟಪೂರ್ವ ಜಿಲ್ಲಾಧ್ಯಕ್ಷ ಕುಯಿಲಾಡಿ ಸುರೇಶ್ ನಾಯಕ್, ಶಾಸಕರಾದ ಯಶ್ಪಾಲ್ ಸುವರ್ಣ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಯಶ್ಪಾಲ್ ಸುವರ್ಣ, ಪ್ರಭಾಕರ ಪೂಜಾರಿ, ಪಕ್ಷದ ಮುಖಂಡರು, ಬಿಜೆಪಿ ಜಿಲ್ಲಾ ಪದಾಧಿಕಾರಿಗಳು, ಅಧ್ಯಕ್ಷರು, ಸಮಿತಿ ಸದಸ್ಯರು, ಮತ್ತಿತರರು ಉಪಸ್ಥಿತರಿದ್ದರು.

> ಎಸ್‌ಇಪಿಟಿ ಮೊತ್ತವನ್ನು ನಿರ್ದಿಷ್ಟವಾಗಿ ಎಸ್‌ಸಿ ಮತ್ತು ಎಸ್‌ಟಿ ಸಮುದಾಯಗಳ ಕಲ್ಯಾಣಕ್ಕಾಗಿ ಮೀಸಲಿಡಲಾಗಿದೆ. ಕಾಂಗ್ರೆಸ್ ದಲಿತ ಮುಖಂಡರು ಮೌನವಾಗಿದ್ದಾರೆ. ನಾನು ಸಮಾಜ ಕಲ್ಯಾಣ ಸಚಿವರಾಗಿದ್ದ ಅವಧಿಯಲ್ಲಿ ಇದೇ ರೀತಿಯ ಸಮಸ್ಯೆ ಉದ್ಭವಿಸಿದಾಗ ನಾನು ಅದನ್ನು ಎಚ್ಚರಿಕೆಯಿಂದ ಪರಿಹರಿಸಿದೆ
> **-ರಮೇಶ ಜಿಗಜಿಗಣಿ,** ಸಂಸದ

**ಜನರ ಕಲ್ಯಾಣಕ್ಕಾಗಿ ಕಟ್ಟುನಿಟ್ಟಾಗಿ ಬಳಸಬೇಕು**

# ಹಿಮದಲ್ಲಿ ಸಿಲುಕಿದ್ದ 55 ಕಾರ್ಮಿಕರಲ್ಲಿ 47 ಮಂದಿ ರಕ್ಷಣೆ

**ಡೆಹ್ರಾಡೂನ್:** ಹಿಮದಿಂದ ಮುಚ್ಚಿಹೋಗಿದ್ದ ಉತ್ತರಾಖಂಡದ ಚಮೋಲಿ ಜಿಲ್ಲೆಯ ಎತ್ತರದ ಮಾನಾ ಗ್ರಾಮದ ಬಿಆರ್‌ಒ ಶಿಬಿರದಿಂದ 14 ಕಾರ್ಮಿಕರನ್ನು ರಕ್ಷಣಾ ಸಿಬ್ಬಂದಿ ಹೊರತೆಗೆದಿದ್ದಾರೆ. ಇನ್ನು ಎಂಟು ಕಾರ್ಮಿಕರು ಹಿಮದಲ್ಲಿ ಸಿಕ್ಕಿಬಿದ್ದಿದ್ದಾರೆ ಎನ್ನಲಾಗಿದೆ. 14 ಕಾರ್ಮಿಕರನ್ನು ಸ್ಥಳಾಂತರಿಸುವುದರೊಂದಿಗೆ, ಇದುವರೆಗೂ 47 ಕಾರ್ಮಿಕರನ್ನು ರಕ್ಷಿಸಲಾಗಿದೆ.

ಶುಕ್ರವಾರ ಮುಂಜಾನೆ ಮಾನಾ ಮತ್ತು ಬದರೀನಾಥ್ ನಡುವಿನ ಬಾರ್ಡರ್ ರೋಡ್ಸ್ ಆರ್ಗನೈಸೇಶನ್ ಶಿಬಿರಕ್ಕೆ ಅಪ್ಪಳಿಸಿದ ಹಿಮಪಾತದ ಅಡಿಯಲ್ಲಿ ಸಿಲುಕಿದ್ದ 55 ಕಾರ್ಮಿಕರಲ್ಲಿ 47 ಜನ ರನ್ನು ರಕ್ಷಿಸಲಾಗಿದೆ. ರಾತ್ರಿಯ ವೇಳೆಗೆ ಮೂವತ್ತಮೂರು ಜನರನ್ನು ರಕ್ಷಿಸಲಾಗಿದೆ. ಮಳೆ, ಹಿಮಪಾತವು ಶುಕ್ರವಾರ ರಕ್ಷಣಾ ಪ್ರಯತ್ನಗಳಿಗೆ



ಅಡ್ಡಿಯಾಯಿತು, ರಾತ್ರಿಯಾಗುತ್ತಿದ್ದಂತೆ ಕಾರ್ಯಾಚರಣೆಯನ್ನು ಸ್ಥಗಿತಗೊಳಿಸಲಾಯಿತು. ಶನಿವರ ಮುಂಜಾನೆ ಹವಾಮಾ ನವು ಸ್ಪಷ್ಟವಾಗುತ್ತಿದ್ದಂತೆ, ಹೆಲಿಕಾಪ್ಟರ್‌ಗಳು ಕಾರ್ಯಾಚರಣೆಯಲ್ಲಿ ಸೇರಿಕೊಂಡವು. ಅಧಿಕಾರಿಗಳ

> ಮಾನಾ ಮೂಲದ ಸೇನೆ ಮತ್ತು ಇಂಡೋ- ಟಿಬೆಟಿಯನ್ ಬಾರ್ಡರ್ ಪೊಲೀಸ್ (ಐಟಿಬಿಪಿ) ಸಿಬ್ಬಂದಿ ಬೆಳಿಗ್ಗೆ ರಕ್ಷಣಾ ಕಾರ್ಯಾಚರಣೆಯನ್ನು ಪುನರಾರಂಭಿಸಿದ್ದಾರೆ
>
> -ಎನ್.ಕೆ.ಜೋಶಿ
>
> ಜಿಲ್ಲಾ ವಿಪತ್ತು ನಿರ್ವ ಹಣಾ ಅಧಿಕಾರಿ

ಪ್ರಕಾರ, ರಕ್ಷಣಾ ತಂಡಗಳು ಹಿಮದಿಂದ ಇನ್ನೂ 14 ಕಾರ್ಮಿಕರನ್ನು ಹೊರತೆಗೆದವು. ಅಧಿಕಾರಿಗಳ ಪ್ರಕಾರ, ರಕ್ಷಣಾ ತಂಡಗಳು ಹಿಮದಿಂದ ಇನ್ನೂ 14 ಕಾರ್ಮಿಕರನ್ನು ಹೊರತೆಗೆದರೆ, ಉಳಿದ ಎಂಟು ಕಾರ್ಮಿಕರಿಗಾಗಿ ರಕ್ಷಣಾ ಕಾರ್ಯ ಮುಂದು ವರೆಸಲಾಗಿದೆ. ಮಾನಾದ ಐಟಿಬಿಪಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದ ಮೂವರು ಕಾರ್ಮಿಕರನ್ನು ಶುಕ್ರವಾರ ರಕ್ಷಿಸಲಾಗಿದ್ದು, ಅವರನ್ನು ಜ್ಯೋತಿರ್ಮಠ್ ಸೇನಾ ಆಸ್ಪತ್ರೆಗೆ ಸಾಗಿಸಲಾಗಿದೆ ಎಂದು ಚಮೋಲಿ ಜಿಲ್ಲಾ ಮ್ಯಾಜಿಸ್ಟ್ರೇಟ್ ಸಂದೀಪ್ ತಿವಾರಿ ತಿಳಿಸಿದ್ದಾರೆ. ಸ್ಪಷ್ಟ ಹವಾಮಾನವು ರಕ್ಷಣಾ ಕಾರ್ಯಾಚರಣೆಯನ್ನು ವೇಗಗೊಳಿಸುತ್ತದೆ ಎಂದು ನಾವು ಭಾವಿಸುತ್ತೇವೆ ಎಂದು ಅವರು ಹೇಳಿದರು. ಉತ್ತರಾಖಂಡ ರಾಜ್ಯ ವಿಪತ್ತು ನಿರ್ವಹಣಾ ಪ್ರಾಧಿಕಾರ ಬಿಡುಗಡೆ ಮಾಡಿದ ಪಟ್ಟಿಯ ಪ್ರಕಾರ, ಸಿಕ್ಕಿಬಿದ್ದ ಕಾರ್ಮಿಕರು ಬಿಹಾರ, ಉತ್ತರ ಪ್ರದೇಶ, ಉತ್ತರಾಖಂಡ, ಹಿಮಾಚಲ ಪ್ರದೇಶ, ಪಂಜಾಬ್ ಮತ್ತು ಜಮ್ಮು ಮತ್ತು ಕಾಶ್ಮೀರದವರು. ಈ ಪಟ್ಟಿಯಲ್ಲಿ 10 ಕಾರ್ಮಿಕರ ಹೆಸರುಗಳಿವೆ.

ಅವರು ಯಾವ ರಾಜ್ಯಗಳಿಗೆ ಸೇರಿದವರು ಎಂಬುದನ್ನು ಉಲ್ಲೇಖಿಸಿಲ್ಲ. 65 ಕ್ಕೂ ಹೆಚ್ಚು ಸಿಬ್ಬಂದಿ ರಕ್ಷಣಾ ಕಾರ್ಯಾಚರಣೆಯಲ್ಲಿ ತೊಡಗಿದ್ದಾರೆ ಎಂದು ವಿಪತ್ತು ನಿರ್ವಹಣಾ ಕಾರ್ಯದರ್ಶಿ ವಿನೋದ್ ಕುಮಾರ್ ಸುಮನ್ ತಿಳಿಸಿದ್ದಾರೆ.

# ಅನಿರೀಕ್ಷಿತ ತಿರುವು ಪಡೆದುಕೊಂಡ ಉಕ್ರೇನ್ ಅಧ್ಯಕ್ಷರ ಮಹತ್ವದ ಭೇಟಿ

## ಮಹತ್ವದ ಸಭೆಯಲ್ಲಿ ಉಕ್ರೇನ್ ಅಧ್ಯಕ್ಷರನ್ನು ಶ್ವೇತ ಭವನದಿಂದ ಹೊರ ಕಳಿಸಿದ ಟ್ರಂಪ್, ಉಕ್ರೇನ್‌ಗೆ ಯುದ್ಧ ನಿಲ್ಲಿಸುವಂತೆ ಟ್ರಂಪ್ ವಾರ್ನಿಂಗ್

**ವಾಷಿಂಗ್ಟನ್:** ಉಕ್ರೇನಿಯನ್ ಅಧ್ಯಕ್ಷ ವೊಲೊಡಿಮಿರ್ ಝೆಲೆನ್ಸ್ಕಿ ಅವರನ್ನು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಕೆಣಕಿದ್ದು, ಉಕ್ರೇನ್ 'ಮೂರನೇ ಮಹಾಯುದ್ಧದೊಂದಿಗೆ ಜೂಜಾಡುತ್ತಿದೆ' ಎಂದು ಹೇಳಿದ್ದಾರೆ. ಓವಲ್ ಕಚೇರಿಯಲ್ಲಿ ನಡೆದ ನಾಯರಿಬ್ಬರ ಭೇಟಿ ಸಮಯದಲ್ಲಿ ಈ ವಿದ್ಯಮಾನ ನಡೆದಿದೆ. ಇದೇ ವೇಳೆ ಪರಿಸ್ಥಿತಿ ಕೈಮೀರಿ ಹೋಗುತ್ತಿದ್ದಂತೆ, ಟ್ರಂಪ್ ಉಕ್ರೇನ್ ಅಧ್ಯಕ್ಷ ಝೆಲೆನ್ಸ್ಕಿಯವರನ್ನು ಶ್ವೇತಭವನದಿಂದ ಹೊರ ಹೋಗುವಂತೆ ಸೂಚಿಸಿದರು. ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್, ಉಪಾಧ್ಯಕ್ಷ ಜೆಡಿ ವ್ಯಾನ್ಸ್ ಜೊತೆ ಉಕ್ರೇನ್ ಅಧ್ಯಕ್ಷ ವೊಲೊಡಿಮಿರ್ ಝೆಲೆನ್ಸ್ಕಿ ನಡೆಸಿದ ಚರ್ಚೆ ಉದ್ವಿಗ್ನತೆ ಪಡೆದುಕೊಂಡಿದೆ. ಝೆಲೆನ್ಸ್ಕಿ ಅಮೆರಿಕದ ಬೆಂಬಲಕ್ಕೆ ಕೃತಜ್ಞತೆ ತೋರಿಸದಿರುವುದು ಮತ್ತು ರಷ್ಯಾದ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಅವರ ರಾಜತಾಂತ್ರಿಕ ನಿಲುವನ್ನು ಚರ್ಚಿಸಲು ಪ್ರಯತ್ನಿಸಿದ್ದಕ್ಕೆ ಟ್ರಂಪ್ ಮತ್ತು ವ್ಯಾನ್ಸ್ ತೀವ್ರವಾಗಿ ಟೀಕಿಸಿದರು.

ನೀವು ಲಕ್ಷಾಂತರ ಜನರ ಜೀವಗಳೊಂದಿಗೆ ಆಟವಾಡುತ್ತಿದ್ದೀರಿ, ಮೂರನೇ ಮಹಾಯುದ್ಧದೊಂದಿಗೆ ಜೂಜಾಡುತ್ತಿದ್ದೀರಿ. ನೀವು ಹೀಗೆ ಮಾಡುತ್ತಿರುವುದು ಈ ದೇಶಕ್ಕೆ ತುಂಬಾ ಅಗೌರವವಾಗಿದೆ ಎಂದು ನೇರವಾಗಿಯೇ ಝೆಲೆನ್ಸ್ಕಿ ಮೇಲೆ ಟ್ರಂಪ್ ವಾಗ್ದಾಳಿ ನಡೆಸಿದರು. ಈ ಚರ್ಚೆಯ ಸಮಯದಲ್ಲಿ, ರಷ್ಯಾದೊಂದಿಗೆ ಯಾವುದೇ ಕದನ ವಿರಾಮವನ್ನು ಒಪ್ಪಿಕೊಳ್ಳುವುದಿಲ್ಲ ಎಂದು ಝೆಲೆನ್ಸ್ಕಿ ಸ್ಪಷ್ಟಪಡಿಸಿದರು. ಝೆಲೆನ್ಸ್ಕಿ ಉಕ್ರೇನ್‌ಗೆ ಯುಎಸ್ ಬೆಂಬಲವನ್ನು ಕೋರಿದರು. ಆದರೆ ಈ ಭೇಟಿ ಒಪ್ಪಂದಕ್ಕೆ ಸಹಿ ಹಾಕದೆ ಮತ್ತು ಜಂಟಿ ಪತ್ರಿಕಾಗೋಷ್ಠಿಯನ್ನು ರದ್ದುಗೊಳಿಸುವುದರೊಂದಿಗೆ ಕೊನೆಗೊಂಡಿತು. ರಷ್ಯಾದ ವಿದೇಶಾಂಗ ಸಚಿವಾಲಯದ ವಕ್ತಾರೆ ಮಾರಿಯಾ ಜಖರೋವಾ, ಟ್ರಂಪ್, ವ್ಯಾನ್ಸ್ ಝೆಲೆನ್ಸ್ಕಿಯನ್ನು ಟೀಕಿಸಿರುವುದನ್ನು ಸಂಯಮದ ಪವಾಡ ಎಂದು ಬಣ್ಣಿಸಿದ್ದಾರೆ. ರಷ್ಯಾದ ನೇರ ಹೂಡಿಕೆ ನಿಧಿಯ ಮುಖ್ಯಸ್ಥ ಕಿರಿಲ್ ಡಿಮಿಟ್ರೀವ್, ಟ್ರಂಪ್, ಝೆಲೆನ್ಸ್ಕಿ ನಡುವಿನ ಚರ್ಚೆಯನ್ನು ಮಹತ್ವದ ಘಟನೆ ಎಂದು ಕರೆದಿದ್ದಾರೆ.




**ಯುದ್ಧ ಕೊನೆಗಾಣಿಸಲು ರಾಜೀ ಮಾಡಿಕೊಳ್ಳಿ:** ರಷ್ಯಾದೊಂದಿಗಿನ ಉಕ್ರೇನ್‌ನ ಸಂಘರ್ಷ ಕೊನೆಗೊಳಿಸುವ ಸಂಬಂಧ ಕದನ ವಿರಾಮದ ಕುರಿತು ಸುದೀರ್ಘ ಮಾತುಕತೆಗಳ ಭಾಗವಾಗಿ, ಅಮೆರಿಕಕ್ಕೆ ಬಂದ ಝೆಲೆನ್ಸ್ಕಿ ಹಾಗೂ ಟ್ರಂಪ್ ನಡುವೆ ಮಾತುಕತೆ ನಡೆಯಿತು. ಈ ವೇಳೆ ಉಭಯ ರಾಷ್ಟ್ರಗಳ ನಡುವೆ ಭಿನ್ನಾಭಿಪ್ರಾಯ ಆರಂಭವಾಯಿತು.

ಅಮೆರಿಕದೊಂದಿಗಿನ ಖನಿಜ ಒಪ್ಪಂದದ ಕುರಿತು ಚರ್ಚಿಸಲು ಶ್ವೇತ ಭವನಕ್ಕೆ ಆಗಮಿಸಿದ ಝೆಲೆನ್ಸ್ಕಿ, ರಷ್ಯಾದ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಅವರನ್ನು ಉಲ್ಲೇಖಿಸಿ, ನಮ್ಮ ಭೂಪ್ರದೇಶದಲ್ಲಿರುವ ಕೊಲೆಗಾರನೊಂದಿಗೆ ರಾಜಿ ಮಾಡಿಕೊಳ್ಳಬೇಡಿ' ಎಂದು ಟ್ರಂಪ್ ಅವರನ್ನು ಒತ್ತಾಯಿಸಿದರು. ಇದಕ್ಕೆ ಬಗ್ಗದ ಟ್ರಂಪ್, ಕದನ ವಿರಾಮಕ್ಕಾಗಿ ರಾಜಿ ಮಾಡಿಕೊಳ್ಳಬೇಕಾಗುತ್ತದೆ ಎಂದು ನೇರವಾಗಿಯೇ ಹೇಳಿದರು. ರಾಜಿ ಮಾಡಿಕೊಳ್ಳದೆ ನೀವು ಯಾವುದೇ ಒಪ್ಪಂದಗಳನ್ನು ಮಾಡಲು ಸಾಧ್ಯವಿಲ್ಲ. ಕೆಲವು ಜನರು ನೀವು ಮಾಡಬೇಕೆಂದು ಭಾವಿಸುವಷ್ಟು ದೊಡ್ಡದಾಗಿರುವುದಿಲ್ಲ. ನಾನು ಮಧ್ಯದಲ್ಲಿದ್ದೇನೆ, ಉಕ್ರೇನ್ ಮತ್ತು ರಷ್ಯಾ ಎರಡರ ಪರವಾಗಿಯೂ ಇದ್ದೇನೆ. ನಾನು ಸಮಸ್ಯೆ ಬಗೆಹರಿಸಲು ಬಯಸುತ್ತೇನೆ' ಎಂದರು.

ಯುದ್ಧದ ಬಗ್ಗೆ ತಮ್ಮ ಅಸ್ಪಷ್ಟ ನಿಲುವಿನಿಂದ ಟೀಕೆಗೆ ಗುರಿಯಾಗಿರುವ ಟ್ರಂಪ್, ಪುಟಿನ್, ಉಕ್ರೇನ್ ಇಬ್ಬರೊಂದಿಗೂ ತಾನು ಹೊಂದಿಕೊಂಡಿದ್ದೇನೆ. ಶಾಂತಿ ಒಪ್ಪಂದವನ್ನು ಮಧ್ಯಸ್ಥಿಕೆ ವಹಿಸಲು ತಟಸ್ಥ ನೀತಿ ಅಗತ್ಯ. ನಾನು ಅಮೆರಿಕ ಮತ್ತು ಪ್ರಪಂಚದ ಒಳಿತಿಗಾಗಿ ಹೊಂದಿಕೊಂಡಿದ್ದೇನೆ' ಎಂದು ಟ್ರಂಪ್ ಹೇಳಿದರು.

> **ರಾಜತಾಂತ್ರಿಕ ನಿಲುವನ್ನು ಚರ್ಚಿಸಲು ಪ್ರಯತ್ನ**
>
> ಉಕ್ರೇನಿಯನ್ ಅಧ್ಯಕ್ಷ ವೊಲೊಡಿಮಿರ್ ಝೆಲೆನ್ಸ್ಕಿ ಅವರನ್ನು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಕೆಣಕಿದ್ದು, ಉಕ್ರೇನ್ 'ಮೂರನೇ ಮಹಾಯುದ್ಧದೊಂದಿಗೆ ಜೂಜಾಡುತ್ತಿದೆ ಎಂದು ಹೇಳಿದ್ದಾರೆ. ಓವಲ್ ಕಚೇರಿಯಲ್ಲಿ ನಡೆದ ನಾಯಕರಿಬ್ಬರ ಭೇಟಿ ಸಮಯದಲ್ಲಿ ಈ ವಿದ್ಯಮಾನ ನಡೆದಿದೆ. ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮತ್ತು ಉಪಾಧ್ಯಕ್ಷ ಜೆಡಿ ವ್ಯಾನ್ಸ್ ಜೊತೆ ಉಕ್ರೇನ್ ಅಧ್ಯಕ್ಷ ವೊಲೊಡಿಮಿರ್ ಝೆಲೆನ್ಸ್ಕಿ ನಡೆಸಿದ ಚರ್ಚೆ ಉದ್ವಿಗ್ನತೆ ಪಡೆದುಕೊಂಡಿದೆ. ಝೆಲೆನ್ಸ್ಕಿ ಅಮೆರಿಕದ ಬೆಂಬಲಕ್ಕೆ ಕೃತಜ್ಞತೆ ತೋರಿಸದಿರುವುದು, ರಷ್ಯಾದ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಅವರ ರಾಜತಾಂತ್ರಿಕ ನಿಲುವನ್ನು ಚರ್ಚಿಸಲು ಪ್ರಯತ್ನಿಸಿದ್ದಕ್ಕೆ ಟ್ರಂಪ್, ವ್ಯಾನ್ಸ್ ತೀವ್ರವಾಗಿ ಟೀಕಿಸಿದರು.

# 14ನೇ ಮಗುವಿಗೆ ತಂದೆಯಾದ ಎಲಾನ್ ಮಸ್ಕ್



**ವಾಷಿಂಗ್ಟನ್:** ಟೆಕ್ ಉದ್ಯಮದ ದಿಗ್ಗಜ ಎಲಾನ್ ಮಸ್ಕ್ ಮತ್ತೆ ತಂದೆಯಾಗಿದ್ದಾರೆ. ಈ ಬಾರಿ ಮಸ್ಕ್ ಮತ್ತು ಅವರ ಪಾರ್ಟನರ್ ಶಿವೋನ್ ಜಿಲಿಸ್‌ಗೆ ಗಂಡು ಮಗು ಜನಿಸಿದ್ದು, ಮಗುವಿಗೆ ಸೆಲ್ಡನ್ ಲೈಕರ್ಗಸ್ ಎಂದು ನಾಮಕರಣ ಮಾಡಲಾಗಿದೆ.

> **ಗಂಡು ಮಗುವಿಗೆ ಜನ್ಮ ನೀಡಿದ ಶಿವೋನ್**


ಅವರ ಹಿಂದಿನ ಮಗುವಿನ (ವರದಿಗಳು ನಿಜವಾಗಿದ್ದರೆ ಇದು ಅವರ 14ನೇ ಮಗುವಾಗುವಾಗಲಿದೆ, ನ್ಯೂರಾಲಿಂಕ್ ಕಂಪನಿಯಲ್ಲಿ ಕಾರ್ಯನಿರ್ವಾಹಕಿಯಾಗಿರುವ ಜಿಲಿಸ್, ಈ ಸಂತಸದ ಸುದ್ದಿಯನ್ನು ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಹಂಚಿಕೊಂಡಿದ್ದಾರೆ. ಮಸ್ಕ್ ಸಹ ಈ ವಿಷಯವನ್ನು ದೃಢಪಡಿಸಿದ್ದಾರೆ. ಎಲಾನ್ ಅವರೊಂದಿಗೆ ಚರ್ಚಿಸಿದ ನಂತರ, ನಮ್ಮ ಮಗುವಿನ ಬಗ್ಗೆ ನೇರವಾಗಿ ಹೇಳುವುದೇ ಸೂಕ್ತ ಎಂದು ನಾವು ಭಾವಿಸಿದೆವು. ನಮ್ಮ ಮಗ ಸೆಲ್ಡನ್ ಲೈಕರ್ಗಸ್, ಅರ್ಕಾಡಿಯಾ ಹುಟ್ಟುಹಬ್ಬದಂದು ಜನಿಸಿದ್ದಾನೆ ಎಂದು ಜಿಲಿಸ್ ಬರೆದುಕೊಂಡಿದ್ದಾರೆ.

2021ರಲ್ಲಿ ಮಸ್ಕ್ ಮತ್ತು ಜಿಲಿಸ್ ದಂಪತಿಗೆ ಅವಳಿ ಮಕ್ಕಳಾಗಿದ್ದವು. 2024ರಲ್ಲಿ ಅವರಿಗೆ ಮತ್ತೊಂದು ಮಗು ಜನಿಸಿತ್ತು. ಆದರೆ ಈ ಮಗುವಿನ ಹೆಸರು ಮತ್ತು ಲಿಂಗವನ್ನು ಇನ್ನೂ ಬಹಿರಂಗಪಡಿಸಲಾಗಿಲ್ಲ. ಈಗ ಜನಿಸಿದ ಸೆಲ್ಡನ್ ಲೈಕರ್ಗಸ್ ಮಸ್ಕ್ ಮತ್ತು ಜಿಲಿಸ್ ದಂಪತಿಗಳ ನಾಲ್ಕನೇ ಮಗುವಾಗಿದೆ. ಇದರ ಜೊತೆಗೆ, ಸಂಗೀತಗಾರ್ತಿ ಗ್ರೈಮ್ಸ್ ಜೊತೆಗೂ ಮಸ್‌ಗೆ ಇಬ್ಬರು ಮಕ್ಕಳಿದ್ದಾರೆ. ಮಾಜಿ ಪತ್ನಿ ಜಸ್ಟಿನ್ ವಿಲ್ಸನ್ ಅವರೊಂದಿಗೆ ಐದು ಮಕ್ಕಳಿದ್ದಾರೆ. ಇತ್ತೀಚೆಗೆ ವಿವಾದಾತ್ಮಕ ಸುದ್ದಿ ಹೊರಬಿದ್ದಿತ್ತು. ಸಾಮಾಜಿಕ ಮಾಧ್ಯಮ ತಾರೆ ಆಶ್ಲೆ ಸೇಂಟ್ ಕ್ಲರ್ ಅವರು ಮಸ್ಕ್ ಅವರ 13ನೇ ಮಗುವಿಗೆ ಜನ್ಮ ನೀಡಿದ್ದಾಗಿ ಹೇಳಿಕೊಂಡಿದ್ದರು. ಆದರೆ ಮಸ್ಕ್ ಈ ಬಗ್ಗೆ ಇನ್ನೂ ಯಾವುದೇ ಪ್ರತಿಕ್ರಿಯೆ ನೀಡಿಲ್ಲ. 2024ರ ಜನವರಿಯಲ್ಲಿ ಸೇಂಟ್ ಬಾತ್‌ಗೆ ಭೇಟಿ ನೀಡಿದ ಸಂದರ್ಭದಲ್ಲಿ ಮಸ್ಕ್ ಜೊತೆಗೆ ತನಗೆ ಮಗುವಾಗಿದೆ ಎಂದು ಸೇಂಟ್ ಕ್ಲೇರ್ ಹೇಳಿಕೊಂಡಿದ್ದಾರೆ. ಆದರೆ ಈ ಬಗ್ಗೆ ಮಸ್ಕ್ ಇನ್ನೂ ಯಾವುದೇ ಪ್ರತಿಕ್ರಿಯೆ ನೀಡಿಲ್ಲ. ಒಟ್ಟಾರೆಯಾಗಿ, ಮಸ್ಕ್ ಅವರ ವೈಯಕ್ತಿಕ ಜೀವನ ಮತ್ತೊಮ್ಮೆ ಸದ್ದು ಮಾಡುತ್ತಿದೆ. ಎಲಾನ್ ಮಸ್ಕ್, ಬಹುತೇಕರಿಗೆ ಪರಿಚಿತ ಹೆಸರು. ಆದರೆ, ಅವರ ವೈಯಕ್ತಿಕ ಜೀವನ ಕೂಡ ಸಾಕಷ್ಟು ಕುತೂಹಲ ಮೂಡಿಸುತ್ತದೆ. ಹಲವು ಸಂಬಂಧಗಳ ಮೂಲಕ ಮಸ್ಕ್ 12 ಮಕ್ಕಳ ತಂದೆಯಾಗಿದ್ದಾರೆ. 13ನೇ ಮಗುವಿನ ಬಗ್ಗೆ ಮಹಿಳೆ ಹೇಳಿಕೊಂಡಿದ್ದಾರೆ ಆದರೆ ಮಸ್ಕ್ ದನ್ನು ದೃಢಪಡಿಸಿಲ್ಲ. ಇದು ದೃಢವಾದರೆ ಈಗ ಜನಿಸಿರುವ ಮಗು ಮಸ್ಕ್ ಅವರ 14ನೇ ಮಗುವಾಗಲಿದೆ.

# ಜಹಾನ್ ಎ ಖುಸ್ರೋ ಕಾರ್ಯದಲ್ಲಿ ಭಾರತದ ಮಣ್ಣಿನ ಘಮವಿದೆ

**ನವದೆಹಲಿ:** ದೆಹಲಿಯ ಸುಂದರ್ ನರ್ಸರಿಯಲ್ಲಿ ಜರುಗಿದ ಜಹಾನ್-ಎ-ಖುಸ್ರೋ ಸೂಫಿ ಸಂಗೀತ ಉತ್ಸವದ ವಿಡಿಯೋವನ್ನು ಪ್ರಧಾನಿ ನರೇಂದ್ರ ಮೋದಿ ತಮ್ಮ ಎಕ್ಸ್ ಖಾತೆಯಲ್ಲಿ ಹಂಚಿಕೊಂಡಿದ್ದಾರೆ. ಈ ಜಹಾನ್ ಎ ಖುಸ್ರೋ ಕಾರ್ಯಕ್ರಮದಲ್ಲಿ ಭಾರತದ ಮಣ್ಣಿನ ಘಮವಿದೆ ಎಂದು ಅವರು ಪೋಸ್ಟ್ ಮಾಡಿ ಗಮನ ಸೆಳೆದಿದ್ದಾರೆ. ಪವಿತ್ರ ರಂಜಾನ್ ಮಾಸ ಆರಂಭವಾಗುತ್ತಿದೆ, ನಿಮಗೆಲ್ಲರಿಗೂ ಮತ್ತು ದೇಶವಾಸಿಗಳಿಗೂ ರಂಜಾನ್ ಹಬ್ಬದ ಶುಭಾಶಯಗಳು. ಜಹಾನ್-ಎ-ಖುಸ್ರೋ ಸರಣಿಯು 25 ವರ್ಷಗಳನ್ನು ಪೂರೈಸುತ್ತಿದೆ. ಈ 25 ವರ್ಷಗಳಲ್ಲಿ, ಈ ಕಾರ್ಯಕ್ರಮವು ಜನರ ಮನಸ್ಸಿನಲ್ಲಿ ಸ್ಥಾನ ಪಡೆದಿರುವುದು ದೊಡ್ಡ ಸಾಧನೆಯಾಗಿದೆ ಎಂದು ಪ್ರಧಾನಿ ಮೋದಿ ತಿಳಿಸಿದ್ದಾರೆ. ಭಾರತದಲ್ಲಿ ಸೂಫಿ ಸಂಪ್ರದಾಯವು ತನಗಾಗಿ ಒಂದು ವಿಶಿಷ್ಟ ಗುರುತನ್ನು ಸೃಷ್ಟಿಸಿಕೊಂಡಿದೆ. ಸೂಫಿ ಸಂತರು ತಮ್ಮನ್ನು ಮಸೀದಿಗಳಿಗೆ ಸೀಮಿತಗೊಳಿಸಿಲ್ಲ.

ಆ ಕಾಲದಲ್ಲಿ ಭಾರತವು ಜಗತ್ತಿನ ಎಲ್ಲಾ ದೊಡ್ಡ ದೇಶಗಳಿಗಿಂತ ಶ್ರೇಷ್ಠವಾಗಿತ್ತು ಎಂದು ಹಜರತ್ ಖುಸ್ರೋ ಹೇಳಿದ್ದರು. ಸಂಸ್ಕೃತವು ವಿಶ್ವದ ಅತ್ಯುತ್ತಮ ಭಾಷೆ ಎಂದು ಅವರು ಹೇಳಿದರು. ಭಾರತದ ಋಷಿಮುನಿಗಳು ಶ್ರೇಷ್ಠ ವಿದ್ವಾಂಸರಿಗಿಂತಲೂ ಶ್ರೇಷ್ಠರು ಎಂದು ಅವರು ಪರಿಗಣಿಸಿದ್ದರು ಎಂದು ಮೋದಿ ಹೇಳಿದರು.



# ಅಂತಾರಾಷ್ಟ್ರೀಯ ಗಡಿಯಲ್ಲಿ ದಾಳಿ; ಗುಂಡಿಕ್ಕಿ ಬಾಂಗ್ಲಾದೇಶಿ ಸ್ಮಗ್ಲರ್ ಹತ್ಯೆಗೈದ ಬಿಎಸ್‌ಎಫ್



**ಅಗರ್ತಲಾ:** ತ್ರಿಪುರಾದ ಸೆಪಹಿಜಾಲಾ ಜಿಲ್ಲೆಯಲ್ಲಿ ಬಾಂಗ್ಲಾದೇಶಿ ಸ್ಮಗ್ಲರ್ ನನ್ನು ಗಡಿ ಭದ್ರತಾ ಪಡೆ (ಬಿಎಸ್‌ಎಫ್) ಸಿಬ್ಬಂದಿ ಗುಂಡಿಕ್ಕಿ ಹತ್ಯೆ ಮಾಡಿವೆ. ಅಂತಾರಾಷ್ಟ್ರೀಯ ಗಡಿಯ ಎರಡೂ ಕಡೆಯಿಂದ ಕಳ್ಳಸಾಗಾಣಿಕೆದಾರರ ಗುಂಪು ದಾಳಿ ಮಾಡಿದ ನಂತರ ಬಿಎಸ್‌ಎಫ್ ಗುಂಡಿಕ್ಕಿ ಕೊಂದಿದೆ ಎಂದು ಪಡೆ ಶನಿ ವಾರ ತಿಳಿಸಿದೆ. ದಾಳಿ ವೇಳೆ ಬಿಎಸ್‌ಎಫ್ ಸಿಬ್ಬಂದಿಯೊಬ್ಬರು ಗಾಯಗೊಂಡಿದ್ದಾರೆ. 20 ರಿಂದ 25 ಬಾಂಗ್ಲಾದೇಶಿ ದುಷ್ಕರ್ಮಿಗಳ ಗುಂಪು ಕಲಾಂಚೌರಾ ಪೊಲೀಸ್ ಠಾಣೆ ವ್ಯಾಪ್ತಿಯ ಪುತಿಯಾದಲ್ಲಿ ಭಾರತೀಯ ಪ್ರದೇಶವನ್ನು ಪ್ರವೇಶಿಸಿದ್ದು, ಶುಕ್ರವಾರ ಸಂಜೆ ತಡರಾತ್ರಿ, ಹಲವಾರು ಭಾರತೀಯ ಸಹಚರರನ್ನು ಭೇಟಿ ಮಾಡಿದೆ.

ಗಡಿ ಭದ್ರತಾ ಪಡೆ ಅವರಿಗೆ ಪ್ರತಿರೋಧ ತೋರುತ್ತಿದ್ದಂತೆಯೇ ಅವರ ಮೇಲೆ ಕಳ್ಳಸಾಗಣೆದಾರರು ದಾಳಿ ಮಾಡಿದ್ದಾರೆ.

ಅವರಲ್ಲಿ ಒಬ್ಬರು ಗಾಯಗೊಂಡಿರುವುದಾಗಿ ಬಿಎಸ್‌ಎಫ್ ತಿಳಿಸಿದೆ. ಕಳ್ಳಸಾಗಣೆದಾರರು ಬಿಎಸ್‌ಎಫ್ ಸಿಬ್ಬಂದಿಯ ಮೇಲೆ ಮತ್ತೊಮ್ಮೆ ದಾಳಿ ನಡೆಸಿ ಶಸ್ತ್ರಾಸ್ತ್ರಗಳನ್ನು ಕಸಿದುಕೊಳ್ಳಲು ಯತ್ನಿಸಿದಾಗ, ಸ್ವಯಂ ರಕ್ಷಣೆಗಾಗಿ ಯೋಧರೊಬ್ಬರು ಬಂದೂಕಿನಿಂದ ಒಂದು ಸುತ್ತಿನ ಗುಂಡು ಹಾರಿಸಿದ್ದಾಗ ಓರ್ವ ಕಳ್ಳಸಾಗಣೆದಾರ ಗಾಯಗೊಂಡಿದ್ದು, ಅವರನ್ನು ಬಿಶಾಲ್‌ಗಢ ಆಸ್ಪತ್ರೆಗೆ ಕರೆದೊಯ್ಯಲಾಗಿತ್ತು.

ಆದರೆ, ಚಿಕಿತ್ಸೆ ಫಲಕಾರಿಯಾಗದೆ ಆತನ ಸಾವನ್ನಪ್ಪಿದ್ದಾನೆ. ಕಳ್ಳಸಾಗಣೆದಾರನ ಮೃತದೇಹವನ್ನು ಆಸ್ಪತ್ರೆಯ ಶವಾಗಾರದಲ್ಲಿ ಇರಿಸಲಾಗಿದೆ. ದಾಳಿಯಲ್ಲಿ ಗಾಯಗೊಂಡಿರುವ ಜವಾನ್ ಕೂಡ ಅದೇ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ ಎಂದು ಬಿಎಸ್‌ಎಫ್ ಹೇಳಿದೆ.

# ಅತ್ಯಾಚಾರದ ಸಂದರ್ಭದಲ್ಲಿ ಮಹಿಳೆ ಕೂಗಿಕೊಳ್ಳಬೇಕಿತ್ತು; ವಕೀಲರ ವಾದ


**ಪುಣೆ:** ಪುಣೆಯಲ್ಲಿ ಬಸ್‌ನಲ್ಲಿ ಮಹಿಳೆಯೊಬ್ಬರ ಮೇಲೆ ನಡೆದ ಅತ್ಯಾಚಾರ ಪ್ರಕರಣದಲ್ಲಿ ಆರೋಪಿಯ ತಪ್ಪು ಏನು ಇಲ್ಲ. ಸಂತ್ರಸ್ಥ ಮಹಿಳೆ ಆ ಸಂದರ್ಭದಲ್ಲಿ ಸಹಾಯಕ್ಕಾಗಿ ಕೂಗಿಕೊಳ್ಳಬಹುದಿತ್ತು ಎದು ದತ್ತಾತ್ರೇಯ ರಾಮದಾಸ್ ಗಡೆ ಪರ ವಕೀಲ ನ್ಯಾಯಲಯದಲ್ಲಿ ಮೊಂಡು ವಾದ ಮಾಡಿದ್ದಾರೆ. ಈ ಪ್ರಕರಣದಲ್ಲಿ ಬಲವಂತವಾಗಿ ಏನೂ ಆಗಿಲ್ಲ, ಆಕೆ ಕೂಗಿಕೊಂಡು ಸಹಾಯ ಕೋರಬಹುದಿತ್ತು ಎಂದು ವಕೀಲ ವಾಜಿದ್ ಖಾನ್ ವಾದಿಸಿದ್ದಾರೆ. ಏನೇ ನಡೆದಿದ್ದರೂ ಅದು ಇಬ್ಬರ ನಡುವಿನ ಒಪ್ಪಿಗೆಯ ನಂತರವೇ ಸಂಭವಿಸಿದೆ, ಪುಣೆ ಪೊಲೀಸರು ಗಡೆಯನ್ನು ಬಂಧಿಸಲು ಶಿರೂರ್ ತಹಸೀಲ್‌ನಲ್ಲಿ ಡ್ರೋನ್‌ಗಳು, ಶ್ವಾನ ದಳಗಳನ್ನು ನಿಯೋಜಿಸಿದ್ದರು. ಪುಣೆಯ ಸ್ವರ್ಗೇಟ್ ಬಸ್ ನಿಲ್ದಾಣದಲ್ಲಿ ಮಹಾರಾಷ್ಟ್ರ ರಾಜ್ಯ ರಸ್ತೆ ಸಾರಿಗೆ ನಿಗಮದ ಶಿವಶಾಹಿ ಬಸ್ಸಿನೊಳಗೆ ಆತ ಮಹಿಳೆಯ ಮೇಲೆ ಅತ್ಯಾಚಾರ ಎಸಗಿದ್ದ ಎಂದು ಆರೋಪಿಸಲಾಗಿದೆ.

ಬೆಳಗ್ಗೆ 5.45 ರ ಸುಮಾರಿಗೆ ಪಕ್ಕದ ಸತಾರ ಜಿಲ್ಲೆಯ ಫಾಲ್ಟನ್ ಗೆ ಹೋಗುವ ಬಸ್‌ಗಾಗಿ ಒಂದು ಪ್ಲಾಟ್ ಫಾರ್ಮ್ ನಲ್ಲಿ ಕಾಯುತ್ತಿದ್ದಾಗ, ಒಬ್ಬ ವ್ಯಕ್ತಿ ಹತ್ತಿರ ಬಂದು ಅವಳನ್ನು ಅಕ್ಕಾ ಎಂದು ಕರೆದು ಮಾತನಾಡಲು ಶುರು ಮಾಡಿದ್ದ. ಸತಾರಕ್ಕೆ ಹೋಗುವ ಬಸ್ ಮತ್ತೊಂದು ಪ್ಲಾಟ್ ಫಾರ್ಮ್‌ಗೆ ಬಂದಿದೆ ಎಂದು ಹೇಳಿದ್ದ, ವಿಶಾಲವಾದ ನಿಲ್ದಾಣದ ಆವರಣದಲ್ಲಿ ಬೇರೆಡೆ ನಿಲ್ಲಿಸಿದ್ದ ಖಾಲಿ ಶಿವ ಶಾಹಿ ಎಸಿ ಬಸ್‌ಗೆ ಅವಳನ್ನು ಕರೆದೊಯ್ದು ಅತ್ಯಾಚಾರ ನಡೆಸಿ ಪರಾರಿಯಾಗಿದ್ದ. ಆರೋಪಿಯು ಮಹಿಳೆಗೆ ತಾನು ಫಾಲ್ಟನ್ ಬಸ್‌ನ ಕಂಡಕ್ಟರ್ ಎಂದು ಹೇಳಿದ್ದಾನೆ. ಆದ್ದರಿಂದ ಆಕೆ ಅವನನ್ನು ನಂಬಿ ಅವನೊಂದಿಗೆ ಹೋಗಿದ್ದರು.

ಪುಣೆಯ ಶಿರೂರ್ ತಹಸೀಲ್‌ನ ಹಳ್ಳಿಯೊಂದರಲ್ಲಿ ಮಧ್ಯರಾತ್ರಿಯ ಸುಮಾರಿಗೆ ಬಂಧನ ನಡೆದಿದೆ. ರಾಮದಾಸ್ ಗಡೆ ಶಿರೂರ್‌ನ ಜಮೀನಿನಲ್ಲಿ ಅಡಗಿಕೊಂಡಿರುವುದು ಕಂಡುಬಂದಿತ್ತು.

# 3 ಕೋಟಿ ಭಕ್ತರಿಂದ ಕಾಶಿ ವಿಶ್ವನಾಥನ ದರ್ಶನ

**ವಾರಾಣಾಸಿ:** ಪ್ರಯಾಗ್‌ರಾಜ್‌ನಲ್ಲಿ ನಡೆದ ಮಹಾ ಕುಂಭಮೇಳ ಪರಿಣಾಮ ವಾರಣಾಸಿಯ ಕಾಶಿ ವಿಶ್ವನಾಥನ ದೇವಸ್ಥಾನಕ್ಕೆ ದಾಖಲೆಯ ಪ್ರಮಾಣದಲ್ಲಿ ಭಕ್ತರು ಭೇಟಿ ನೀಡಿದ್ದಾರೆ. ಕಳೆದ 45 ದಿನಗಳಲ್ಲಿ ಮೂರು ಕೋಟಿ ಭಕ್ತರು ದೇವಾಲಯಕ್ಕೆ ಭೇಟಿ ನೀಡಿದ್ದಾರೆ ಎಂದು ಶ್ರೀ ಕಾಶಿ ವಿಶ್ವನಾಥ ದೇವಾಲಯ ಟ್ರಸ್ಟ್ ಹೇಳಿದೆ. ಶ್ರೀ ಕಾಶಿ ವಿಶ್ವನಾಥ ದೇವಾಲಯ ಟ್ರಸ್ಟ್ ಬಿಡುಗಡೆ ಮಾಡಿದ ಮಾಹಿತಿಗಳ ಪ್ರಕಾರ, ಪ್ರತಿದಿನ ಸರಾಸರಿ ಆರೂವರೆ ಲಕ್ಷಕ್ಕೂ ಹೆಚ್ಚು ಭಕ್ತರು ದೇವಾಲಯಕ್ಕೆ ಭೇಟಿ ನೀಡಿದ್ದಾರೆ. ಇದು ದೇವಾಲಯದ ಇತಿಹಾಸದಲ್ಲಿ ಅತಿ ಹೆಚ್ಚು ದರ್ಶನ ಪಡೆದ ಭಕ್ತರ ಸಂಖ್ಯೆಯಾಗಿದೆ. ಶ್ರಾವಣಕ್ಕಿಂತ ಮಾಘ ಮತ್ತು ಫಾಲ್ಗುಣದಲ್ಲಿ ಹೆಚ್ಚಿನ ಭಕ್ತರು ದರ್ಶನ ಪಡೆದಿದ್ದಾರೆ. ಮಹಾಶಿವರಾತ್ರಿ ಮತ್ತು ಮೌನಿ



ಅಮಾವಾಸ್ಯೆಯಂದು ಭಕ್ತರ ಸಂಖ್ಯೆಯಲ್ಲಿ ಭಾರಿ ಏರಿಕೆ ಕಂಡುಬಂದಿದೆ. ಮೌನಿ ಅಮಾವಾಸ್ಯೆಯಂದು 11 ಲಕ್ಷಕ್ಕೂ ಹೆಚ್ಚು ಭಕ್ತರು ಬಂದಿದ್ದರೆ, ಮಹಾಶಿವರಾತ್ರಿಯಂದು 46 ಗಂಟೆಗಳಲ್ಲಿ 17 ಲಕ್ಷಕ್ಕೂ ಹೆಚ್ಚು ಭಕ್ತರು ವಿಶ್ವನಾಥನ ದರ್ಶನ ಪಡೆದಿದ್ದಾರೆ. ಜನವರಿ 13ರಿಂದ ಫೆಬ್ರವರಿ 19ರ ನಡುವೆ, ಭಕ್ತರ ಸಂಖ್ಯೆ ಎರಡು ಕೋಟಿ ಗಡಿ ದಾಟಿದೆ. ಫೆಬ್ರವರಿ 27ರಂದು ಬಿಡುಗಡೆಯಾದ ಮಾಹಿತಿಯ ಪ್ರಕಾರ, ಈ ಸಂಖ್ಯೆ ಮೂರು ಕೋಟಿ ತಲುಪಿದೆ. ಅಂದರೆ ಕೇವಲ ಎಂಟು ದಿನಗಳಲ್ಲಿ (ಫೆಬ್ರವರಿ 20ರಿಂದ 27ರವರೆಗೆ) ಒಂದು ಕೋಟಿಗೂ ಹೆಚ್ಚು ಭಕ್ತರು ದರ್ಶನ ಪಡೆದಿದ್ದಾರೆ. 2022ರ ಶ್ರಾವಣ ಮಾಸದಲ್ಲಿ, ಒಂದು ಕೋಟಿಗೂ ಹೆಚ್ಚು ಭಕ್ತರು ವಿಶ್ವನಾಥನ ಜಲಾಭಿಷೇಕವನ್ನು ನೆರವೇರಿಸಿದ್ದರು. 2023ರಲ್ಲಿ ಭಕ್ತರ ಸಂಖ್ಯೆ ಹೊಸ ದಾಖಲೆಯನ್ನು ಸೃಷ್ಟಿಸಿತ್ತು. ಜುಲೈ 4 ರಿಂದ ಪ್ರಾರಂಭವಾದ 60 ದಿನಗಳ ಶ್ರಾವಣದಲ್ಲಿ 1.63 ಕೋಟಿ ಭಕ್ತರು ದರ್ಶನ ಪಡೆದಿದ್ದರು. 2024ರ ಶ್ರಾವಣ ಮಾಸದಲ್ಲಿ 53.84 ಲಕ್ಷ ಭಕ್ತರು ವಿಶ್ವನಾಥನ ಜಲಾಭಿಷೇಕ ನೆರವೇರಿಸಿದ್ದರು. ಇದೇ ಮೊದಲ ಬಾರಿಗೆ ಮೂರು ಕೋಟಿ ಭಕ್ತರು ಭೇಟಿ ನೀಡಿದ್ದಾರೆ.

# ಸುರಂಗ ಕುಸಿತ: ಸಿಲುಕಿರುವ 8 ಕಾರ್ಮಿಕರ ಪೈಕಿ ನಾಲ್ವರು ಇರುವ ಸ್ಥಳ ಪತ್ತೆ

**ನಾಗರ್‌ಕರ್ನೂಲ್:** ಶ್ರೀಶೈಲಂ ಎಡದಂಡೆ ಕಾಲುವೆಯಡಿಯಲ್ಲಿ ಸಿಲುಕಿರುವ ಎಂಟು ಜನರ ಪೈಕಿ ನಾಲ್ವರು ಇರುವ ಸ್ಥಳವನ್ನು ರಾಡಾರ್ ಮೂಲಕ ಪತ್ತೆ ಮಾಡಲಾಗಿದೆ ಎಂದು ರಾಜ್ಯ ಅಬಕಾರಿ ಸಚಿವ ಜೂಪಲ್ಲಿ ಕೃಷ್ಣ ರಾವ್ ಶನಿವಾರ ತಿಳಿಸಿದ್ದಾರೆ. ನೀರಾವರಿ ಸಚಿವ ಎನ್.ಉತ್ತಮ್ ರೆಡ್ಡಿ ಸೇರಿದಂತೆ ರಕ್ಷಣಾ ಕಾರ್ಯಾಚರಣೆಯಲ್ಲಿ ತೊಡಗಿರುವ ಅಧಿಕಾರಗಳ ಸಭೆಯಲ್ಲಿ ಭಾಗವಹಿಸಿ ಮಾತನಾಡಿದ ಅವರು, ಪತ್ತೆಯಾಗಿರುವ




ನಾಲ್ವರನ್ನು ಭಾನುವಾರ ಸಂಜೆಯೊಳಗೆ ಹೊರತರುವ ಪ್ರಯತ್ನ ಮಾಡಲಾಗುವುದು ಎಂದರು. ಉಳಿದ ನಾಲ್ವರು ಟನಲ್ ಬೋರಿಂಗ್ ಯಂತ್ರದ ಅಡಿಯಲ್ಲಿ ಸಿಲುಕಿರುವ ಸಾಧ್ಯತೆಯಿದೆ ಎಂದರು. ನಾಲ್ವರು ಜೀವಂತವಾಗಿ ಹೊರಬರಲಿದ್ದಾರೆಯೇ ಎಂಬ ಪ್ರಶ್ನೆಗೆ, ನಾನು ಮೊದಲೇ ಹೇಳಿರುವ ಹಾಗೆ ಬದುಕಿರುವ ಸಾಧ್ಯತೆ ಅತ್ಯಂತ ಕ್ಷೀಣ ಎಂದರು. ಸುಮಾರು 11 ಏಜೆನ್ಸಿಗಳ ಸಿಬ್ಬಂದಿ ಕಾರ್ಯಾಚರಣೆಯಲ್ಲಿ ಭಾಗಿಯಾಗಿದ್ದಾರೆ. ಕೆಸರು ಮತ್ತು ಮಣ್ಣಿನಿಂದ ಕಾರ್ಯಾಚರಣೆಗೆ ಅಡ್ಡಿಯಾಗುತ್ತಿದೆ. ಸಿಲುಕಿರುವ ಕಾರ್ಮಿಕರನ್ನು ಹೊರಗೆ ತರಲು 450 ಅಡಿ ಎತ್ತರದ ಟಿಬಿಎಂ ಅನ್ನು ಕತ್ತರಿಸಲಾಗುತ್ತಿದೆ ಎಂದರು.

# ಅದೃಷ್ಟದ ಶಿವಲಿಂಗ ಕದ್ದ ಕಟುಂಬ ಬಂಧನ

**ಗುಜರಾತ್:** ಬಾಲಕಿಯ ಕನಸಿನಲ್ಲಿ ಶಿವ ಕಾಣಿಸಿಕೊಂಡಿದ್ದ ಎಂಬ ಕಾರಣಕ್ಕೆ ದೇವಾಲಯದಿಂದ ಶಿವನ ವಿಗ್ರಹವನ್ನು ಕದ್ದು ತಮ್ಮ ಮನೆಯಲ್ಲಿ ಶಿವನ ಪ್ರತಿಷ್ಠಾಪನೆ ಮಾಡಿಕೊಂಡಿದ್ದ ಕುಟುಂಬವೊಂದರ ಎಂಟು ಸದಸ್ಯರನ್ನು ಬಂಧಿಸಲಾಗಿದೆ. ಮಹಾಶಿವರಾತ್ರಿಯ ಸಂದರ್ಭದಲ್ಲಿ ಗುಜರಾತ್‌ನ ದ್ವಾರಕಾದ ದೇವಸ್ಥಾನದಿಂದ ಶಿವಲಿಂಗವನ್ನು ಕದ್ದು ತಮ್ಮ ಮನೆಯಲ್ಲಿ ಪ್ರತಿಷ್ಠಾಪಿಸಿದ ಆರೋಪದ ಮೇಲೆ ಕುಟುಂಬದ ಎಂಟು ಸದಸ್ಯರನ್ನು ಬಂಧಿಸಲಾಗಿದೆ. ಬಾಲಕಿಯೊಬ್ಬಳಿಗೆ ಶಿವಲಿಂಗದ ಕನಸು ಬಿದ್ದ ನಂತರ ಕುಟುಂಬದವರು ದ್ವಾರಕಾದಲ್ಲಿರುವ ಪ್ರಾಚೀನ ಭೀದ್ಧಂಜನ್ ಮಹಾದೇವ್ ದೇವಾಲಯದಿಂದ ಶಿವಲಿಂಗವನ್ನು ಕದ್ದಿದ್ದರು. ಅಧಿಕಾರಿಗಳು ಆರಂಭದಲ್ಲಿ ಅದನ್ನು ಸಮುದ್ರಕ್ಕೆ ಎಸೆದಿದ್ದಾರೆ ಎಂದು ಶಂಕಿಸಿದ್ದರು. ದ್ವಾರಕಾದಿಂದ 500 ಕಿಲೋಮೀಟರ್ ದೂರದಲ್ಲಿರುವ ಸಬರ್ಕಾಂತ ಜಿಲ್ಲೆಯ ಹಿಮ್ಮತ್‌ನಗರದ ಕುಟುಂಬವೊಂದು ಅದನ್ನು ಕದ್ದಿರುವುದು ಬಳಿಕ ತಿಳಿದುಬಂದಿತ್ತು. ಪ್ರಾಥಮಿಕ ತನಿಖೆಯ ಆಧಾರದ ಮೇಲೆ, ಕುಟುಂಬದ ಒಬ್ಬ ಹುಡುಗಿ ಕನಸಿನಲ್ಲಿ ಕಾಣಿಸಿಕೊಂಡ ಭೀದ್ದಂಜನ್ ಮಹಾದೇವ್ ದೇವಸ್ಥಾನದ ಶಿವಲಿಂಗವನ್ನು

ಮನೆಗೆ ತಂದು ಪ್ರತಿಷ್ಠಾಪಿಸುವುದರಿಂದ ಅವರ ಸಮಸ್ಯೆಗಳು ಕೊನೆಗೊಂಡು ಸಮೃದ್ಧಿ ತರುತ್ತದೆ ಎಂದು ನಂಬಿದ್ದರು ಎಂಬುದು ಪೊಲೀಸರಿಗೆ ಬಳಿಕ ಶಿವಲಿಂಗದಲ್ಲಿ ಕೆತ್ತನೆ ಮಾಡಿರುವ ಕಲ್ಲು ನಾಗರದ ತಲೆ ಮೇಲೆ ಬೆಳೆದ ಕೂದಲು; ಪವಾಡ ಕಣ್ತುಂಬಿಕೊಳ್ಳಲು



ಬಂದ ಜನಮಹೇಂದ್ರ, ಮಕ್ವಾನಾ ಅವರ ಸೊಸೆಯ ಕನಸಿನಲ್ಲಿ ಶಿವಲಿಂಗ ಕಾಣಿಸಿಕೊಂಡಿತ್ತು, ಕುಟುಂಬದ ಏಳರಿಂದ ಎಂಟು ಸದಸ್ಯರು ದ್ವಾರಕೆಗೆ ಪ್ರಯಾಣ ಬೆಳೆಸಿ ಕೆಲವು ದಿನಗಳ ಕಾಲ ಅಲ್ಲಿಯೇ ಇದ್ದರು.

ಅವರು ದೇವಾಲಯದ ಪೂಜೆಯನ್ನು ನಡೆಸಿದರು ಮತ್ತು ಶಿವಲಿಂಗವನ್ನು ಕದ್ದ ನಂತರ, ಮನೆಗೆ ಹಿಂತಿರುಗಿ ಮಹಾಶಿವರಾತ್ರಿಯಂದು ಅದನ್ನು ತಮ್ಮ ಮನೆಯಲ್ಲಿ ಪ್ರತಿಷ್ಠಾಪಿಸಿದ್ದರು. ನಾವು ಎಂಟು ಆರೋಪಿಗಳನ್ನೂ ಬಂಧಿಸಿದ್ದೇವೆ.

ಮಹೇಂದ್ರನ ಸೊಸೆ ಹರ್ಷದ ಭೀದ್ದಂಜನ್ ಮಹಾದೇವನ ಶಿವಲಿಂಗವನ್ನು ತಮ್ಮ ಮನೆಯಲ್ಲಿ ಸ್ಥಾಪಿಸಿದರೆ, ಅದು ಅದೃಷ್ಟವನ್ನು ತರುತ್ತದೆ ಮತ್ತು ಕುಟುಂಬವು ಪ್ರಗತಿ ಹೊಂದುತ್ತದೆ ಎಂಬುದಾಗಿ ಕನಸು ಕಂಡಿದ್ದರಂತೆ. ಕುಟುಂಬದ ಎಲ್ಲಾ ಸದಸ್ಯರು ಒಟ್ಟಾಗಿ ಒಂದು ಯೋಜನೆಯನ್ನು ರೂಪಿಸಿ ಅದನ್ನು ಕಾರ್ಯಗತಗೊಳಿಸಿದರು ಎಂದು ದ್ವಾರಕಾ ಎಸ್ಪಿ ನಿತೀಶ್ ಪಾಂಡೆ ಹೇಳಿದರು.

# ಹೆದ್ದಾರಿಯಲ್ಲಿ ಟ್ರಕ್‌ಗೆ ಬಸ್ ಡಿಕ್ಕಿಯಾಗಿ ನಾಲ್ವರ ದುರ್ಮರಣ

**ಆಗ್ರಾ:** ವಾರಣಾಸಿ-ಜೈಪುರ ಬಸ್ ನಿಂತಿದ್ದ ಟ್ರಕ್‌ಗೆ ಡಿಕ್ಕಿ ಹೊಡೆದ ಪರಿಣಾಮ ನಾಲ್ವರು ಮೃತಪಟ್ಟು, 19 ಮಂದಿ ಗಾಯಗೊಂಡಿರುವ ಘಟನೆ ಆಗ್ರಾ-ಲಕ್ನೋ ಎಕ್ಸ್ ಪ್ರೆಸ್ ವೇನಲ್ಲಿ ಶನಿವಾರ ಬೆಳಿಗ್ಗೆ ನಡೆದಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಆಗ್ರಾದ ಫತೇಹಾಬಾದ್ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಬೆಳಿಗ್ಗೆ 5.30 ರ ಸುಮಾರಿಗೆ ಬಸ್ ಹಿಂದಿನಿಂದ ಟ್ರಕ್‌ಗೆ ಡಿಕ್ಕಿ ಹೊಡೆದಿದೆ ಎಂದು ವರದಿಯಾಗಿದೆ. ಮೃತರ ಶವಗಳನ್ನು ಮರಣೋತ್ತರ ಪರೀಕ್ಷೆಗೆ ಕಳುಹಿಸಲಾಗಿದೆ ಎಂದು ಫತೇಹಾಬಾದ್ ಎಸಿಪಿ ಅಮರ್ದೀಪ್ ಲಾಲ್ ತಿಳಿಸಿದ್ದಾರೆ. ಮೃತರಲ್ಲಿ ಒಬ್ಬರನ್ನು ಇನ್ನೂ ಗುರುತಿಸಲಾಗಿಲ್ಲ. ಗಾಯಾಳುಗಳನ್ನು ಆಂಬ್ಯುಲೆನ್ಸ್ ಸಹಾಯ ದಿಂದ ಆಸ್ಪತ್ರೆಗೆ ಕಳುಹಿಸಲಾಗಿದೆ. ಮೃತರನ್ನು ರಾಜಸ್ಥಾನ ಮೂಲದ ಗೋವಿಂದ್ (68), ರಮೇಶ್ (45), ಆಗ್ರಾ ನಿವಾಸಿ ದೀಪಕ್ ವರ್ಮಾ (40) ಗುರುತಿಸಲಾಗಿದೆ.

ಗಾಯಗೊಂಡ ನಾಲ್ವರನ್ನು ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿದ್ದು, ಉಳಿದವರನ್ನು ಸರ್ಕಾರಿ ಆಸ್ಪತ್ರೆಗೆ ದಾಖಲಿಸಲಾಗಿದೆ.

# ಗೋವಾ ಕಡಲತೀರದಲ್ಲಿ ಮುಳುಗುತ್ತಿದ್ದ ನಾಲ್ವರು ರಷ್ಯನ್ನರ ರಕ್ಷಣೆ

**ಪಣಜಿ:** ಉತ್ತರ ಗೋವಾದ ಮಾಂಡ್ರೆಮ್ ಕಡಲತೀರದಲ್ಲಿ ಮುಳುಗುತ್ತಿದ್ದ ಮೂವರು ಮಹಿಳೆಯರು ಸೇರಿದಂತೆ ನಾಲ್ವರು ರಷ್ಯನ್ನರನ್ನು ರಕ್ಷಿಸಲಾಗಿದೆ. ಗೋವಾ ಸರ್ಕಾರ ನೇಮಿಸಿದ ಜೀವರಕ್ಷಕ ಸಂಸ್ಥೆ ಸಿಬ್ಬಂದಿಗಳು ಕಡಲಿನಲ್ಲಿ ಮುಳುಗುತ್ತಿದ್ದ ನಾಲ್ವರು ವಿದೇಶಿ ಪ್ರವಾಸಿಗರನ್ನು ರಕ್ಷಿಸಿದ್ದಾರೆ.

ಈ ಪ್ರದೇಶದಲ್ಲಿ ಹಠಾತ್, ಅನಿರೀಕ್ಷಿತ ಎತ್ತರದ ಅಲೆಗಳು ಉಲ್ಬಣಗೊಂಡ ನಂತರ ಮೂವರು ಮಹಿಳೆಯರು, ಒಬ್ಬ ಪುರುಷ ನೀರಿನಲ್ಲಿ ಮುಳುಗತೊಡಗಿದರು. ಅವರಿಗೆ ಈಜಿ ದಡ ಸೇರಲು ಸಾಧ್ಯವಾಗದಂತಹ ಪರಿಸ್ಥಿತಿ ನಿರ್ಮಾಣವಾಗಿತ್ತು. ತಕ್ಷಣ ಕಾರ್ಯಾಚರಣೆ ನಡೆಸಿದ ಜೀವರಕ್ಷಕ ಸಿಬ್ಬಂದಿಗಳು ರಕ್ಷಣಾ ಮಂಡಳಿಯೊಂದಿಗೆ ನೀರಿಗೆ ಧಾವಿಸಿ ಅವರನ್ನು ಸುರಕ್ಷಿತವಾಗಿ ರಕ್ಷಿಸುವಲ್ಲಿ ಯಶಸ್ವಿಯಾದರು.

# ಆಶಾ ಕಾರ್ಯಕರ್ತೆಯರಿಗೆ ಗ್ರಾಚ್ಯುಟಿ, ವೇತನ ಸಹಿತ ಹೆರಿಗೆ ರಜೆ ಜಾರಿ

**ಅಮರಾವತಿ:** ಮಾನ್ಯತೆ ಪಡೆದ ಸಾಮಾಜಿಕ ಆರೋಗ್ಯ ಕಾರ್ಯಕರ್ತೆಯರಿಗೆ ಗ್ರಾಚ್ಯುಟಿ, ವೇತನ ಸಹಿತ ಹೆರಿಗೆ ರಜೆ ನೀಡುವ ಪ್ರಸ್ತಾವನೆಗೆ ಆಂಧ್ರಪ್ರದೇಶದ ಮುಖ್ಯಮಂತ್ರಿ ಎನ್. ಚಂದ್ರಬಾಬು ನಾಯ್ಡು ಸಹಿ ಹಾಕಿದ್ದಾರೆ. ಇದರೊಂದಿಗೆ ಆಶಾ ಕಾರ್ಯಕರ್ತೆಯರ ನಿವೃತ್ತಿ ವಯಸ್ಸನ್ನೂ ಹೆಚ್ಚಿಸಿ, ಸಮುದಾಯ ಮತ್ತು ಆರೋಗ್ಯ ವ್ಯವಸ್ಥೆ ನಡುವೆ ಅತ್ಯಂತ ಪ್ರಮುಖ ಕೊಂಡಿಯಾಗಿ ಕೆಲಸ ಮಾಡುತ್ತಿರುವವರು ಆಶಾ ಕಾರ್ಯಕರ್ತೆಯರು ಎಂದು ಬಣ್ಣಿಸಿದ್ದಾರೆ. 30 ವರ್ಷಗಳ ಕಾಲ ಕರ್ತವ್ಯ ನಿರ್ವಹಿಸಿದ ಪ್ರತಿ ಆಶಾ ಕಾರ್ಯಕರ್ತೆಯರು ತಲಾ 1.5 ಲಕ್ಷ ನಿವೃತ್ತಿ ಸೌಲಭ್ಯ ಪಡೆಯಲು ಅರ್ಹರು. ಮುಖ್ಯಮಂತ್ರಿಯವರ ಈ ನಿರ್ಧಾರದಿಂದಾಗಿ 42,752 ಆಶಾ ಕಾರ್ಯಕರ್ತೆಯರಿಗೆ ಪ್ರಯೋಜನವಾಗಲಿದೆ ಎಂದು ಸರ್ಕಾರದ ಪ್ರಕಟಣೆಯಲ್ಲಿ ಹೇಳಲಾಗಿದೆ.

## ಭವಿಷ್ಯದ ಯುದ್ಧಗಳು ತಂತ್ರಜ್ಞಾನ ಆಧಾರಿತ, ಭಾರತ ಮುಂಚೂಣಿಯಲ್ಲಿರಬೇಕು: ರಕ್ಷಣಾ ಸಚಿವ

# ಯುವಜನರು ವೈಜ್ಞಾನಿಕ ಮನೋಭಾವವನ್ನು ಬೆಳೆಸಿಕೊಳ್ಳಿ

**ಹೈದರಾಬಾದ್:** ಸರ್ಕಾರದ ಕ್ರಮಗಳಿಂದ ದೇಶದಲ್ಲಿ ಅಭಿವೃದ್ಧಿಯಾಗುತ್ತಿರುವ ಅಂತರ ರಾಷ್ಟ್ರೀಯ ಮಟ್ಟ ಸ್ಪರ್ಧಾತ್ಮಕ ಮೂಲಸೌಕರ್ಯಗಳನ್ನು ಸದುಪಯೋಗ ಪಡಿಸಿಕೊಳ್ಳುವ ಮೂಲಕ ಯುವಜನರು ವೈಜ್ಞಾನಿಕ ಮನೋಭಾವವನ್ನು ಬೆಳೆಸಿಕೊಳ್ಳಬೇಕು, ತಂತ್ರಜ್ಞಾನಗಳಲ್ಲಿ ಉತ್ಕೃಷ್ಟರಾಗಬೇಕು ಎಂದು ಕೇಂದ್ರ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಹೇಳಿದ್ದಾರೆ.

ರಾಷ್ಟ್ರೀಯ ವಿಜ್ಞಾನ ದಿನಾಚರಣೆ ಅಂಗವಾಗಿ ಹೈದರಾಬಾದ್‌ನಲ್ಲಿ ಆಯೋಜಿಸಿದ್ದ ವಿಜ್ಞಾನ ವೈಭವ ಎಂಬ ಎರಡು ದಿನಗಳ ವಿಜ್ಞಾನ ಮತ್ತು ತಂತ್ರಜ್ಞಾನ ಪ್ರದರ್ಶನ ಉದ್ಘಾಟಿಸಿ ಮಾತನಾಡಿದ ರಾಜನಾಥ್ ಸಿಂಗ್, ಯುದ್ಧವು ಹಾರ್ಡ್‌ವೇರ್‌ನಿಂದ ಸಾಫ್ಟ್‌ವೇರ್‌ಗೆ ಬದಲಾಗುತ್ತಿದೆ.



ಎಐ, ಕ್ವಾಂಟಮ್ ಕಂಪ್ಯೂಟಿಂಗ್, ಮೆಷಿನ್ ಲರ್ನಿಂಗ್, ಕ್ಲೀನ್-ಟೆಕ್ ಪ್ರಗತಿಯೊಂದಿಗೆ, ಪ್ರತಿಕೂಲ ಸಂದರ್ಭಗಳಲ್ಲಿ ಸದೃಢವಾಗಿ ಉಳಿಯಲು ಭಾರತ ಪರಿವರ್ತಕ ತಂತ್ರಜ್ಞಾನಗಳಲ್ಲಿ ಮುಂಚೂಣಿಯಲ್ಲಿರಬೇಕು. ನಮ್ಮ ಯುವಕರು ವೈಜ್ಞಾನಿಕ ದೃಷ್ಟಿಕೋನ ಮತ್ತು ವಿಮರ್ಶಾತ್ಮಕ ಚಿಂತನೆಯನ್ನು ಅಳವಡಿಸಿಕೊಳ್ಳಬೇಕು ಎಂದು ತಿಳಿಸಿದರು. ವಿಜ್ಞಾನವು ಮಾನವೀಯತೆಗೆ ಒಂದು ಸುಂದರವಾದ ಕೊಡುಗೆಯಾಗಿದೆ; ನಾವು ಅದನ್ನು ವಿರೂಪಗೊಳಿಸದೆ ಸಮಾಜದ ಒಳಿತಿಗಾಗಿ ಬಳಸಬೇಕು ಎಂಬ ಮಾಜಿ ರಾಷ್ಟ್ರಪತಿ ಡಾ.ಎ.ಪಿ.ಜೆ.ಅಬ್ದುಲ್ ಕಲಾಂ ಅವರ ಮಾತುಗಳನ್ನು ನೆನಪಿಸಿಕೊಂಡ ರಾಜನಾಥ್ ಸಿಂಗ್, ದೇಶದ ಭವಿಷ್ಯಕ್ಕಾಗಿ ವಿಜ್ಞಾನ ಶಿಕ್ಷಣದ ಮಹತ್ವವನ್ನು ಒತ್ತಿ ಹೇಳಿದರು. ರಾಷ್ಟ್ರೀಯ ಭದ್ರತೆಗಾಗಿ ಆಧುನಿಕ ತಂತ್ರಜ್ಞಾನವನ್ನು




ಬಳಸಿಕೊಳ್ಳುವ ಕೇಂದ್ರ ಸರ್ಕಾರದ ಬದ್ಧತೆಯನ್ನು ಸಿಂಗ್ ಪುನರುಚ್ಚರಿಸಿದರು. ಭಾರತದ ಯುವಕರ ಸಾಮರ್ಥ್ಯವನ್ನು ಮತ್ತು 2047 ರ ವೇಳೆಗೆ ವಿಕಸಿತ ಭಾರತ ಪರಿಕಲ್ಪನೆ ಸಾಕಾರಗೊಳಿಸಲು ಯುವಜನತೆಯ ಸಾಮರ್ಥ್ಯವನ್ನು ಬಳಸಿಕೊಳ್ಳುವ ಸರ್ಕಾರದ ಪ್ರಯತ್ನಗಳನ್ನು ವಿವರಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಮುಖ್ಯಮಂತ್ರಿ ಎ ರೇವಂತ್ ರೆಡ್ಡಿ, ಯುವಜನತೆ ದೊಡ್ಡ ಕನಸುಗಳನ್ನು ಕಾಣಲು ಮತ್ತು ಹೊಸತನವನ್ನು ಅಳವಡಿಸಿಕೊಳ್ಳಲು ಒತ್ತಾಯಿಸಿದರು.

> **ಯುದ್ಧವು ಹಾರ್ಡ್‌ವೇರ್‌ನಿಂದ ಸಾಫ್ಟ್‌ವೇರ್‌ಗೆ ಬದಲಾಗುತ್ತಿದೆ. ಎಐ, ಕ್ವಾಂಟಮ್ ಕಂಪ್ಯೂಟಿಂಗ್, ಮೆಷಿನ್ ಲರ್ನಿಂಗ್ ಮತ್ತು ಕ್ಲೀನ್-ಟೆಕ್ ಪ್ರಗತಿಯೊಂದಿಗೆ, ಪ್ರತಿಕೂಲ ಸಂದರ್ಭಗಳಲ್ಲಿ ಸದೃಢವಾಗಿ ಉಳಿಯಲು ಭಾರತ ಪರಿವರ್ತಕ ತಂತ್ರಜ್ಞಾನಗಳಲ್ಲಿ ಮುಂಚೂಣಿಯಲ್ಲಿರಬೇಕು.**

ದೇಶದ ರಕ್ಷಣೆಗಾಗಿ ಉನ್ನತ ಎಂಜಿನಿಯರ್‌ಗಳನ್ನು ಪೂರೈಸಲು ಬದ್ಧರಾಗಿದ್ದು, ಹೈದರಾಬಾದ್, ಬೆಂಗಳೂರು ಪ್ರಮುಖ ರಕ್ಷಣಾ ಕೇಂದ್ರಗಳಾಗಿದ್ದು, ಹೂಡಿಕೆಯನ್ನು ಆಕರ್ಷಿಸಲು ಮತ್ತು ಸ್ಕೈರೂಟ್ ಏರೋಸ್ಪೇಸ್‌ನಂತಹ ಸ್ಟಾರ್ಟ್‌ಅಪ್‌ಗಳನ್ನು ಹೆಚ್ಚಿಸಲು ಹೈದರಾಬಾದ್-ಬೆಂಗಳೂರು ರಕ್ಷಣಾ ಇಂಡಸ್ಟ್ರಿಯಲ್ ಕಾರಿಡಾರ್ ಪ್ರಸ್ತಾಪಿಸಿರುವುದಾಗಿ ತಿಳಿಸಿದರು.

> **ಡಿಆರ್‌ಡಿಒಗೆ ರಾಜನಾಥ್ ಸಿಂಗ್ ಭೇಟಿ**
>
> ಬಳಿಕ ರಾಜನಾಥ್ ಸಿಂಗ್ ಅವರು ಡಿಆರ್‌ಡಿಒನ ಡಾ ಕಲಾಂ ಅವರ ಕ್ಷಿಪಣಿ ಸಂಕೀರ್ಣಕ್ಕೆ ಭೇಟಿ ನೀಡಿ, ಕ್ಷಿಪಣಿ ಯೋಜನೆಗಳನ್ನು ಪರಿಶೀಲಿಸಿದರು. ವಿಜ್ಞಾನಿಗಳೊಂದಿಗೆ ಸಂವಾದ ನಡೆಸಿ, ಅವರ ಕೊಡುಗೆಗಳನ್ನು ಶ್ಲಾಘಿಸಿದರು ಮತ್ತು 2027ರ ವೇಳೆಗೆ ಭಾರತ ವಿಶ್ವದ ಮೂರನೇ ಅತಿದೊಡ್ಡ ಆರ್ಥಿಕತೆಯಾಗುವ ವಿಶ್ವಾಸ ವ್ಯಕ್ತಪಡಿಸಿದರು.





# ಸಮರಾಭ್ಯಾಸ ಶುರು ಮಾಡಿದ ಸಿಎಸ್‌ಕೆ, ಸಿಕ್ಸರ್‌ಗಳ ಮಳೆಗರೆದ ಮಹಿ

**ಐಪಿಎಲ್‌ಗೆ ತಮ್ಮ ಸಿದ್ಧತೆ ಆರಂಭ**

ಎಲ್ಲಾ ತಂಡಗಳು ಈಗಾಗಲೇ 2025 ರ ಐಪಿಎಲ್‌ಗೆ ತಮ್ಮ ಸಿದ್ಧತೆಗಳನ್ನು ಆರಂಭಿಸಿವೆ. 5 ಬಾರಿಯ ಚಾಂಪಿಯನ್ ಚೆನ್ನೈ ಸೂಪರ್ ಕಿಂಗ್ಸ್ ಕೂಡ ತಮ್ಮ ಸಮರಾಭ್ಯಾಸವನ್ನು ಶುರು ಮಾಡಿದೆ. ಚೆನ್ನೈ ಸೂಪರ್ ಕಿಂಗ್ಸ್ ತಂಡದ ಮಾಜಿ ನಾಯಕ ಮಹೇಂದ್ರ ಸಿಂಗ್ ಧೋನಿ ಕೂಡ ಈಗಾಗಲೇ ತಂಡವನ್ನು ಕೂಡಿಕೊಂಡಿದ್ದು, ನೆಟ್ಸ್‌ನಲ್ಲಿ ಬೆವರು ಹರಿಸುತ್ತಿದ್ದಾರೆ. ಚೆನ್ನೈ ಸೂಪರ್ ಕಿಂಗ್ಸ್ ಫ್ರಾಂಚೈಸಿಯೂ ಸಾಮಾಜಿಕ ಜಾಲತಣದಲ್ಲಿ ಒಂದು ವಿಡಿಯೋವನ್ನು ಹಂಚಿಕೊಂಡಿದ್ದು, ಅದರಲ್ಲಿ ಧೋನಿ ಇತರ ಆಟಗಾರರೊಂದಿಗೆ ಕಠಿಣ ಅಭ್ಯಾಸ ಮಾಡುತ್ತಿರುವುದನ್ನು ಕಾಣಬಹುದು.

**ಟ್ರೇಲರ್ ತೋರಿಸಿದ ಧೋನಿ**


ಈ ಬಾರಿ ಚೆನ್ನೈ ಸೂಪರ್ ಕಿಂಗ್ಸ್ ತನ್ನ 10 ದಿನಗಳ ಶಿಬಿರವನ್ನು ತಮಿಳುನಾಡಿನ ಚೆನ್ನೈನ ನವಲೂರಿನಲ್ಲಿ ಆಯೋಜಿಸಿದ್ದು, ಅಲ್ಲಿ ಎಲ್ಲಾ ಆಟಗಾರರು ಅಭ್ಯಾಸ ಮಾಡುತ್ತಿದ್ದಾರೆ. ಮಹೇಂದ್ರ ಸಿಂಗ್ ಧೋನಿ ಕೂಡ ಐಪಿಎಲ್ 2025 ಗಾಗಿ ಮೈದಾನದಲ್ಲಿ ಬೆವರು ಸುರಿಸುತ್ತಿದ್ದಾರೆ. ಚೆನ್ನೈ ಸೂಪರ್ ಕಿಂಗ್ಸ್ ತಂಡದ ಅಭ್ಯಾಸದ ವಿಡಿಯೋವನ್ನು ಸಾಮಾಜಿಕ ಮಾಧ್ಯಮದಲ್ಲಿ ಹಂಚಿಕೊಂಡಿದೆ. ಈ ವಿಡಿಯೋದಲ್ಲಿ ಧೋನಿ ಬ್ಯಾಟಿಂಗ್ ಮಾಡುತ್ತಿರುವುದನ್ನು ಕಾಣಬಹುದು.

# ಪಂದ್ಯ ಪೂರ್ಣಗೊಳ್ಳುವ ಮುನ್ನವೇ ಸೆಮೀಸ್ ಟಿಕೆಟ್ ಪಡೆದ ಆಫ್ರಿಕಾ

ಚಾಂಪಿಯನ್ಸ್ ಟ್ರೋಫಿಯ ಸೆಮಿಫೈನಲ್‌ಗೆ 4 ತಂಡಗಳು ಅಧಿಕೃತವಾಗಿ ಎಂಟ್ರಿಕೊಟ್ಟಿವೆ. ಎ ಗುಂಪಿನಲ್ಲಿ ಈಗಾಗಲೇ ಭಾರತ ಮತ್ತು ನ್ಯೂಜಿಲೆಂಡ್ ಸೆಮಿಫೈನಲ್ ತಲುಪಿದ್ದವು. ಇತ್ತ ಬಿ ಗುಂಪಿನಲ್ಲಿ ಆಸ್ಟ್ರೇಲಿಯಾ ಕೂಡ ಸೆಮೀಸ್‌ಗೆ ಅರ್ಹತೆ ಗಳಿಸಿತ್ತು. ಇದೀಗ ದಕ್ಷಿಣ ಆಫ್ರಿಕಾ ಕೂಡ ನಾಲ್ಕನೇ ತಂಡವಾಗಿ ಸೆಮಿಫೈನಲ್ ಪ್ರವೇಶಿಸಿದೆ. ಅಚ್ಚರಿಯ ಸಂಗತಿಯೆಂದರೆ ಇಂಗ್ಲೆಂಡ್ ವಿರುದ್ಧದ ಕೊನೆಯ ಪಂದ್ಯದ ಫಲಿತಾಂಶ ಪ್ರಕಟವಾಗುವ ಮೊದಲೇ ದಕ್ಷಿಣ ಆಫ್ರಿಕಾ ಸೆಮಿಫೈನಲ್ ಟಿಕೆಟ್ ಪಡೆದುಕೊಂಡಿದೆ. ಆಫ್ರಿಕಾ ಸೆಮೀಸ್ ಗೇರುತ್ತಿದ್ದಂತೆ, ಅಫ್ಘಾನಿಸ್ತಾನದ ಭರವಸೆಯೂ ಭಗ್ನಗೊಂಡಿದೆ. ಇದೀಗ ಇಂಗ್ಲೆಂಡ್ ವಿರುದ್ಧ ದಕ್ಷಿಣ ಆಫ್ರಿಕಾ ಸೋತರೂ ಸೆಮಿಫೈನಲ್ ಆಡಲಿದೆ.

**ಸೆಮಿಫೈನಲ್‌ಗೇರಿದ ಆಫ್ರಿಕಾ**

ಮಾರ್ಚ್ 1 ರ ಶನಿವಾರ ಕರಾಚಿಯಲ್ಲಿ ನಡೆದ ಗ್ರೂಪ್ ಬಿ ನ ಕೊನೆಯ ಪಂದ್ಯದ ಮೇಲೆ ಅಫ್ಘಾನಿಸ್ತಾನ ಕ್ರಿಕೆಟ್ ತಂಡದ ಸೆಮೀಸ್ ಹಾದಿ



ನಿರ್ಧಾರವಾಗುತ್ತಿತ್ತು. ನಿನ್ನೆ ನಡೆದ ಅಫ್ಘಾನಿಸ್ತಾನ ಹಾಗೂ ಆಸ್ಟ್ರೇಲಿಯಾ ನಡುವಿನ ಪಂದ್ಯ ಮಳೆಯಿಂದಾಗಿ ರದ್ದಾಗಿತ್ತು. ಇದರಿಂದಾಗಿ, ಸೆಮಿಫೈನಲ್ ತಲುಪುವ ಅಫ್ಘನ್ ತಂಡದ ಆಸೆಗೆ ದೊಡ್ಡ ಹೊಡೆತ ಬಿದ್ದಿತ್ತು. ಆದಾಗ್ಯೂ ಅಫ್ಘನ್ ತಂಡಕ್ಕೆ ಕೊನೆಯ ಅವಕಾಶವಿತ್ತು. ಅದೇನೆಂದರೆ ನಡೆಯುತ್ತಿರುವ ಇಂಗ್ಲೆಂಡ್ ಹಾಗೂ ದಕ್ಷಿಣ ಆಫ್ರಿಕಾ ನಡುವಿನ ಪಂದ್ಯದಲ್ಲಿ ಇಂಗ್ಲೆಂಡ್ ವಿರುದ್ಧ ಆಫ್ರಿಕಾ 210 ಕ್ಕೂ ಹೆಚ್ಚು ರನ್‌ಗಳಿಂದ ಹೀನಾಯವಾಗಿ ಸೋತರೆ ಮಾತ್ರ ಅಫ್ಘಾನಿಸ್ತಾನ ನೆಟ್ ರನ್‌ರೇಟ್ ಆದಾರದ ಮೇಲೆ ಸೆಮಿಫೈನಲ್ ತಲುಪಬಹುದಿತ್ತು.

**ಸೆಮಿಫೈನಲ್‌ನಲ್ಲಿ ಯಾರು ಎದುರಾಳಿ:** ಈಗ ಪ್ರಶ್ನೆ ಏನೆಂದರೆ ದಕ್ಷಿಣ ಆಫ್ರಿಕಾ ಸೆಮಿಫೈನಲ್‌ನಲ್ಲಿ ಯಾರನ್ನು ಎದುರಿಸಲಿದೆ ಎಂಬುದು. ಇದರ ಸ್ಪಷ್ಟ ಚಿತ್ರಣ ಸಿಗಬೇಕೆಂದರೆ ಮಾರ್ಚ್ 2 ರ ಭಾನುವಾರದಂದು ಭಾರತ ಮತ್ತು ನ್ಯೂಜಿಲೆಂಡ್ ನಡುವಿನ ಪಂದ್ಯದ ಫಲಿತಾಂಶ ಹೊರಬೀಳಬೇಕು. ಇದೀಗ ನಡೆಯುತ್ತಿರುವ ಪಂದ್ಯದಲ್ಲಿ ದಕ್ಷಿಣ ಆಫ್ರಿಕಾ ತಂಡ, ಇಂಗ್ಲೆಂಡ್ ತಂಡವನ್ನು ಸೋಲಿಸಿದರೆ, ಗ್ರೂಪ್ ಬಿನಲ್ಲಿ 5 ಅಂಕಗಳೊಂದಿಗೆ ಅಗ್ರಸ್ಥಾನವನ್ನು ಪಡೆಯಲಿದೆ. ಇದು ಸಾಧ್ಯವಾದರೆ, ಮಾರ್ಚ್ 5 ರಂದು ನಡೆಯುವ 2ನೇ ಸೆಮಿಫೈನಲ್‌ನಲ್ಲಿ ಆಫ್ರಿಕಾ, ಎ ಗುಂಪಿನಲ್ಲಿ ಎರಡನೇ ಸ್ಥಾನ ಪಡೆಯುವ ತಂಡವನ್ನು ಎದುರಿಸಿದೆ. ಒಂದು ವೇಳೆ ಇಂಗ್ಲೆಂಡ್ ವಿರುದ್ಧದ ಪಂದ್ಯದಲ್ಲಿ ಸೋತರೆ ಕೇವಲ 3 ಅಂಕಗಳೊಂದಿಗೆ ಅಂಕಪಟ್ಟಿಯಲ್ಲಿ ಎರಡನೇ ಸ್ಥಾನ ಪಡೆಯಲಿದೆ.

**200 ರ ಗಡಿ ದಾಟದ ಇಂಗ್ಲೆಂಡ್**

**ವಾಸ್ತವವಾಗಿ ಈ ಪಂದ್ಯಕ್ಕೂ ಮುನ್ನ ದಕ್ಷಿಣ ಆಫ್ರಿಕಾ ಮತ್ತು ಅಫ್ಘಾನಿಸ್ತಾನ ತಲಾ 3 ಅಂಕಗಳನ್ನು ಹೊಂದಿದ್ದವು. ಆದರೆ ನೆಟ್ ರನ್ ರೇಟ್‌ನಲ್ಲಿ ದಕ್ಷಿಣ ಆಫ್ರಿಕಾ ಬಹಳ ಮುಂದಿತ್ತು. ಅಂತಹ ಪರಿಸ್ಥಿತಿಯಲ್ಲಿ, ದಕ್ಷಿಣ ಆಫ್ರಿಕಾ ಸೆಮಿಫೈನಲ್ ತಲುಪುವುದು ಬಹುತೇಕ ಖಚಿತವಾಗಿತ್ತು. ಆದಾಗ್ಯೂ ಇಂದಿನ ಪಂದ್ಯದಲ್ಲಿ ಆಫ್ರಿಕಾ, ಇಂಗ್ಲೆಂಡ್ ವಿರುದ್ಧ 207 ರನ್ ಅಥವಾ ಅದಕ್ಕಿಂತ ಹೆಚ್ಚಿನ ಅಂತರದಿಂದ ಸೋತಿದ್ದರೆ ಮಾತ್ರ ಅಫ್ಘಾನಿಸ್ತಾನಕ್ಕೆ ಸೆಮಿಫೈನಲ್ ಆಡುವ ಅವಕಾಶ ಸಿಗುತ್ತಿತ್ತು, ಆದರೆ ಇದಕ್ಕೆ ಅವಕಾಶ ನೀಡದ ದಕ್ಷಿಣ ಆಫ್ರಿಕಾ, ಇಂಗ್ಲೆಂಡ್ ತಂಡವನ್ನು 200 ರ ಗಡಿ ದಾಟಲು ಅವಕಾಶ ನೀಡಲಿಲ್ಲ.**

# 25 ವರ್ಷಗಳ ನಂತರ ಭಾರತ- ಕಿವೀಸ್ ಫೈಟ್ ಕೊನೆಯ ಮುಖಾಮುಖಿಯಲ್ಲಿ ಗೆದ್ದಿದ್ದ್ಯಾರು

ಚಾಂಪಿಯನ್ಸ್ ಟ್ರೋಫಿಯ ಲೀಗ್ ಹಂತ ಭಾಗಶಃ ಮುಗಿದಿದೆ. ಭಾರತ ಹಾಗೂ ನ್ಯೂಜಿಲೆಂಡ್ ನಡುವೆ ಮಾರ್ಚ್ 2 ರಂದು ನಡೆಯುವ ಕೊನೆಯ ಪಂದ್ಯದೊಂದಿಗೆ ಲೀಗ್ ಹಂತ ಮುಗಿಯಲಿದೆ. ಆ ಬಳಿಕ ನಾಕೌಟ್ ಸುತ್ತು ಆರಂಭವಾಗಲಿದೆ. ಇನ್ನು ಭಾರತ ಹಾಗೂ ಕಿವೀಸ್ ನಡುವಿನ ಮುಖಾಮುಖಿ ಚಾಂಪಿಯನ್ಸ್ ಟ್ರೋಫಿಯಲ್ಲಿ ಬಹಳ ವಿಶೇಷವಾಗಿದೆ. ಏಕೆಂದರೆ ಬರೋಬ್ಬರಿ 25 ವರ್ಷಗಳ ನಂತರ ಉಭಯ ತಂಡಗಳು ಚಾಂಪಿಯನ್ಸ್ ಟ್ರೋಫಿಯಲ್ಲಿ ಎದುರುಬದುರಾಗುತ್ತಿವೆ. ವಾಸ್ತವವಾಗಿ 8 ತಂಡಗಳ ನಡುವೆ ನಡೆಯುತ್ತಿರುವ ಈ ಐಸಿಸಿ ಚಾಂಪಿಯನ್ಸ್ ಟ್ರೋಫಿ 1998 ರಲ್ಲಿ ಪ್ರಾರಂಭವಾಯಿತ. ಈ ಟೂರ್ನಿಯನ್ನು ಪ್ರತಿ 4 ವರ್ಷಗಳಿಗೊಮ್ಮೆ ಆಯೋಜಿಸಲಾಗುತ್ತದೆ. ಆದರೆ ಕೊರೊನಾ ಕಾರಣದಿಂದಾಗಿ 2017 ರ ನಂತರ ಈ ಟೂರ್ನಿಯನ್ನು ನಡೆಸಿರಲಿಲ್ಲ. ಆದರೆ ಇದೀಗ 6 ವರ್ಷಗಳ ನಂತರ ನಡೆಯುತ್ತಿರುವ ಈ ಟೂರ್ನಿಯಲ್ಲಿ ಭಾರತ ತಂಡ 25 ವರ್ಷಗಳ ಬಳಿಕ ಕಿವೀಸ್ ವಿರುದ್ಧ ಕಣಕ್ಕಿಳಿಯಲು ಸಜ್ಜಾಗಿದೆ.

**ಟೀಂ ಇಂಡಿಯಾ ಮೇಲುಗೈ**

**ಭಾರತ ಮತ್ತು ನ್ಯೂಜಿಲೆಂಡ್ ತಂಡಗಳ ನಡುವೆ ಇಲ್ಲಿಯವರೆಗೆ 118 ಏಕದಿನ ಪಂದ್ಯಗಳು ನಡೆದಿವೆ. ಈ ಅವಧಿಯಲ್ಲಿ ಟೀಂ ಇಂಡಿಯಾ 60 ಪಂದ್ಯಗಳನ್ನು ಗೆದ್ದಿದ್ದರೆ, ನ್ಯೂಜಿಲೆಂಡ್ 50 ಪಂದ್ಯಗಳನ್ನು ಮಾತ್ರ ಗೆಲ್ಲುವಲ್ಲಿ ಯಶಸ್ವಿಯಾಗಿದೆ. ಮತ್ತೊಂದೆಡೆ, ಭಾರತ ತಂಡವು ಉಭಯ ತಂಡಗಳ ನಡುವೆ ಆಡಿದ ಕೊನೆಯ 5 ಏಕದಿನ ಪಂದ್ಯಗಳನ್ನು ಗೆದ್ದಿದೆ. ಇದರರ್ಥ ಈ ಪಂದ್ಯದಲ್ಲೂ ಟೀಂ ಇಂಡಿಯಾ ಮೇಲುಗೈ ಸಾಧಿಸುವ ನಿರೀಕ್ಷೆ ಇದೆ.**

**25 ವರ್ಷಗಳ ನಂತರ ಮುಖಾಮುಖಿ:** 2025 ರ ಚಾಂಪಿಯನ್ಸ್ ಟ್ರೋಫಿಯಲ್ಲಿ ಟೀಂ ಇಂಡಿಯಾದ ಪ್ರದರ್ಶನ ಇಲ್ಲಿಯವರೆಗೆ ಅತ್ಯುತ್ತಮವಾಗಿದೆ. ಗುಂಪು ಹಂತದಲ್ಲಿ ತನ್ನ ಮೊದಲ ಎರಡು ಪಂದ್ಯಗಳನ್ನು ಗೆಲ್ಲುವ ಮೂಲಕ ರೋಹಿತ್ ಪಡೆ ಸೆಮಿಫೈನಲ್‌ನಲ್ಲಿ ತನ್ನ ಸ್ಥಾನವನ್ನು ಖಚಿತಪಡಿಸಿಕೊಂಡಿದೆ. ಭಾರತ ತಂಡ ತನ್ನ ಮೊದಲ ಪಂದ್ಯದಲ್ಲಿ ಬಾಂಗ್ಲಾದೇಶವನ್ನು ಸೋಲಿಸಿದರೆ, ಆ ನಂತರದ ಪಂದ್ಯದಲ್ಲಿ ಪಾಕಿಸ್ತಾನವನ್ನು ಸೋಲಿಸಿತ್ತು. ಇದೀಗ ನ್ಯೂಜಿಲೆಂಡ್ ವಿರುದ್ಧ ತನ್ನ ಕೊನೆಯ ಗುಂಪು ಹಂತದ ಪಂದ್ಯವನ್ನು ಆಡಲು ಟೀಂ ಇಂಡಿಯಾ ಸಿದ್ಧವಾಗಿದೆ. ಮೇಲೆ ಹೇಳಿದಂತೆ ಭಾರತ ಮತ್ತು ನ್ಯೂಜಿಲೆಂಡ್ ತಂಡಗಳು 25 ವರ್ಷಗಳ ನಂತರ ಚಾಂಪಿಯನ್ಸ್ ಟ್ರೋಫಿಯಲ್ಲಿ ಪರಸ್ಪರ ಎದುರಾಗಲಿವೆ.

ಈ ಟೂರ್ನಿಯಲ್ಲಿ ಈ ಎರಡೂ ತಂಡಗಳ ನಡುವೆ ಇಲ್ಲಿಯವರೆಗೆ ಒಂದೇ ಒಂದು ಪಂದ್ಯ ನಡೆದಿದೆ. ಈ ಪಂದ್ಯವನ್ನು 2000 ನೇ ಇಸವಿಯಲ್ಲಿ ಆಡಲಾಗಿತ್ತು.


**ಫೈನಲ್‌ನಲ್ಲಿ ಸೋತಿದ್ದ ಭಾರತ:** ಚಾಂಪಿಯನ್ಸ್ ಟ್ರೋಫಿಯಲ್ಲಿ ಭಾರತ ಮತ್ತು ನ್ಯೂಜಿಲೆಂಡ್ ತಂಡಗಳ ನಡುವೆ ಏಕೈಕ ಪಂದ್ಯ ನಡೆದಿದ್ದು 2000ನೇ ಇಸವಿಯಲ್ಲಿ. ಆ ಆವೃತ್ತಿಯ ಫೈನಲ್‌ನಲ್ಲಿ ಈ ಎರಡೂ ತಂಡಗಳು ಪರಸ್ಪರ ಮುಖಾಮುಖಿಯಾಗಿದ್ದವು.

ಆ ಪಂದ್ಯದಲ್ಲಿ ಮೊದಲು ಬ್ಯಾಟಿಂಗ್ ಮಾಡಿದ ಟೀಂ ಇಂಡಿಯಾ 50 ಓವರ್‌ಗಳಲ್ಲಿ 6 ವಿಕೆಟ್ ನಷ್ಟಕ್ಕೆ 264 ರನ್ ಗಳಿಸಿತು. ಈ ಗುರಿ ಬೆನ್ನಟ್ಟಿದ ನ್ಯೂಜಿಲೆಂಡ್ ಎರಡು ಎಸೆತಗಳು ಬಾಕಿ ಇರುವಂತೆ 6 ವಿಕೆಟ್‌ಗಳನ್ನು ಕಳೆದು ಕೊಂಡು ಜಯ ಸಾಧಿಸಿದಲ್ಲದೆ ಚಾಂಪಿಯನ್ ಕೂಡ ಆಗಿತ್ತು.

ಇದಾದ ನಂತರ, ಈ ಟೂರ್ನಿಯಲ್ಲಿ ಈ ಎರಡೂ ತಂಡಗಳ ನಡುವೆ ಯಾವುದೇ ಪಂದ್ಯ ನಡೆದಿಲ್ಲ. ಆದಾಗ್ಯೂ, ಈಗ 25 ವರ್ಷಗಳ ನಂತರ, ಈ ಎರಡೂ ತಂಡಗಳು ದುಬೈನಲ್ಲಿ ಮುಖಾಮುಖಿಯಾಗಲು ಸಿದ್ಧವಾಗಿವೆ.

**ಐಸಿಸಿ ಚಾಂಪಿಯನ್ಸ್ ಟ್ರೋಫಿ 1998 ರಲ್ಲಿ ಪ್ರಾರಂಭ**







# ಆರೋಪಗಳ ಬಳಿಕ ವಿಡಿಯೋ ಹಂಚಿಕೊಂಡ ಎಸ್‌ಎಸ್ ರಾಜಮೌಳಿ

ಕೆಲ ದಿನಗಳ ಹಿಂದೆಯಷ್ಟೆ ಎಸ್‌ಎಸ್ ರಾಜಮೌಳಿಯ ಹಳೆಯ ಮಿತ್ರ ಶ್ರೀನಿವಾಸ ರಾವ್ ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಆತ್ಮಹತ್ಯೆ ಮಾಡಿಕೊಳ್ಳುವ ಮುಂಚೆ ತನ್ನ ಸಾವಿಗೆ ಎಸ್‌ಎಸ್ ರಾಜಮೌಳಿ ಮತ್ತು ಅವರ ಪತ್ನಿ ರಮಾ ರಾಜಮೌಳಿ ಕಾರಣ ಎಂದು ಹೇಳಿ ವಿಡಿಯೋ ಮಾಡಿ ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಪೊಲೀಸರು ಸುಮೋಟೊ ಕೇಸು ದಾಖಲಿಸಿಕೊಂಡು, ರಾಜಮೌಳಿಯನ್ನು ವಿಚಾರಣೆಗೆ ಒಳಪಡಿಸಬೇಕು ಎಂದು ಸಹ ಶ್ರೀನಿವಾಸ್ ರಾವ್ ವಿಡಿಯೋನಲ್ಲಿ ಒತ್ತಾಯಿಸಿದ್ದರು. ಆದರೆ ಪೊಲೀಸರು ರಾಜಮೌಳಿ ವಿರುದ್ಧ ಕೇಸು ದಾಖಲಿಸಿಕೊಂಡಿದ್ದು ವರದಿಯಾಗಿಲ್ಲ. ಇದರ ನಡುವೆ ರಾಜಮೌಳಿ, ಸಾಮಾಜಿಕ ಜಾಲತಾಣದಲ್ಲಿ ವಿಡಿಯೋ ಹಂಚಿಕೊಂಡಿದ್ದಾರೆ. ಎಸ್‌ಎಸ್ ರಾಜಮೌಳಿ ತಮ್ಮ ಟ್ವಿಟ್ಟರ್ ಖಾತೆಯಲ್ಲಿ ವಿಡಿಯೋ ಹಂಚಿಕೊಂಡಿದ್ದಾರೆ.


ಆದರೆ ಈ ವಿಡಿಯೋ ಸ್ನೇಹಿತನ ಆತ್ಮಹತ್ಯೆ ಕುರಿತಾಗಿ ಮಾಹಿತಿ ನೀಡಲು ಅಲ್ಲ ಬದಲಿಗೆ ತಮ್ಮ ಅಣ್ಣ ಎಂಎಂ ಕೀರವಾಣಿಯ ಹೊಸ ಪ್ರಯತ್ನದ ಕುರಿತಾಗಿ ಮಾಹಿತಿ ಹಂಚಿಕೊಳ್ಳಲು. ಆಸ್ಕರ್ ವಿಜೇತ ಸಂಗೀತ ನಿರ್ದೇಶಕ ಎಂಎಂ ಕೀರವಾಣಿ ಮೊದಲ ಬಾರಿಗೆ ಲೈವ್ ಕಾನ್ಸರ್ಟ್ ಮಾಡುತ್ತಿದ್ದಾರೆ. ಈ ಲೈವ್ ಕಾನ್ಸರ್ಟ್ ಬಗ್ಗೆ ಮಾಹಿತಿ ಹಂಚಿಕೊಳ್ಳಲೆಂದು ವಿಡಿಯೋ ಶೇರ್ ಮಾಡಿದ್ದಾರೆ ರಾಜಮೌಳಿ. ವಿಡಿಯೋನಲ್ಲಿ ಮಾತನಾಡಿರುವ ರಾಜಮೌಳಿ, 'ಮಾರ್ಚ್ 22ಕ್ಕಾಗಿ ನಾನು ಬಹಳ ಕಾತರದಿಂದ ಕಾಯುತ್ತಿದ್ದೇನೆ. ಏಕೆಂದರೆ ಅಂದು ಎಂಎಂ ಕೀರವಾಣಿಯವರ 'ನಾ ಟೂರ್ ಕಾನ್ಸರ್ಟ್' ನಡೆಯಲಿದೆ. ಅಂದಿನ ಕಾನ್ಸರ್ಟ್‌ನಲ್ಲಿ ನನ್ನ ಸಿನಿಮಾದ ಹಾಡುಗಳು, ಕೀರವಾಣಿ ಸಂಗೀತ ನೀಡಿರುವ ಇತರೆ ಸಿನಿಮಾಗಳ ಹಾಡುಗಳು ಇರುತ್ತವೆ. ಜೊತೆಗೆ ಕಾನ್ಸರ್ಟ್ ಗಾಗಿ ಎಂದೇ ಕೀರವಾಣಿ ಇನ್ನೂ ಕೆಲವು ಹಾಡುಗಳನ್ನು ಮಾಡಿದ್ದಾರೆ ಎಂಬ ಮಾಹಿತಿ ಇದೆ' ಎಂದಿದ್ದಾರೆ ರಾಜಮೌಳಿ.





# ಟಾಕ್ಸಿಕ್ ಶೂಟಿಂಗ್ ನಡೆಯುವಾಗಲೇ ಪ್ರೆಗ್ನೆನ್ಸಿ ಘೋಷಿಸಿದ ಕಿಯಾರಾ

'ಟಾಕ್ಸಿಕ್' ಸಿನಿಮಾದ ಶೂಟಿಂಗ್ ಭರದಿಂದ ಸಾಗುತ್ತಿದೆ. ಎಲ್ಲವೂ ಅಂದುಕೊಂಡಂತೆ ನಡೆದಿದ್ದರೆ ಏಪ್ರಿಲ್‌ನಲ್ಲಿ ಸಿನಿಮಾ ರಿಲೀಸ್ ಆಗಬೇಕಿತ್ತು. ಆದರೆ, ಸಿನಿಮಾದ ಶೂಟಿಂಗ್ ವಿಳಂಬ ಆದ ಕಾರಣ ಅಷ್ಟು ಬೇಗ ಸಿನಿಮಾ ರಿಲೀಸ್ ಆಗೋದು ಅನುಮಾನ ಎಂದು ಹೇಳಲಾಗುತ್ತಿದೆ. ಹೀಗಿರುವಾಗಲೇ ಈ ಚಿತ್ರದ ನಾಯಕಿ ಕಿಯಾರಾ ಅಡ್ವಾಣಿ ಅವರು ಪ್ರೆಗ್ನೆನ್ಸಿ ಘೋಷಿಸಿದ್ದಾರೆ. ಈ ವಿಚಾರ ಸಾಕಷ್ಟು ಕುತೂಹಲ ಹಾಗೂ ಅನುಮಾನಗಳಿಗೆ ಕಾರಣ ಆಗಿದೆ. 'ಟಾಕ್ಸಿಕ್' ಹೈ ಬಜೆಟ್ ಚಿತ್ರ. ಹೀಗಾಗಿ, ಚಿತ್ರದ ನಿರ್ಮಾಪಕರಾದ ವೆಂಕಟ್ ನಾರಾಯಣ್ ಹಾಗೂ ಯಶ್ ಯಾವ ವಿಚಾರದಲ್ಲೂ ರಾಜಿ ಆಗುತ್ತಿಲ್ಲ. ಹೀಗಿರುವಾಗಲೇ ಚಿತ್ರದ ನಾಯಕಿ ಆಗಿರೋ ಕಿಯಾರಾ ಅವರು ಪ್ರೆಗ್ನೆನ್ಸಿ ಘೋಷಿಸಿದ್ದಾರೆ. ಅಂದರೆ ಇನ್ನು ಅವರು ಶೂಟಿಂಗ್‌ಗೆ ಲಭ್ಯವಾಗೋದು ಅನುಮಾನ. ಸಿನಿಮಾ ಶೂಟಿಂಗ್ ಪ್ರಗತಿಯಲ್ಲಿರುವಾಗಲೇ ಕಿಯಾರಾ ಪ್ರೆಗ್ನೆನ್ಸಿ ಘೋಷಿಸಿದ್ದು ಹೇಗೆ ಎನ್ನುವ ಅನುಮಾನ ಹುಟ್ಟಿಕೊಂಡಿದೆ. ಕೆಲವರು ಇದಕ್ಕೆ ಉತ್ತರ ಕಂಡುಕೊಳ್ಳುವ ಪ್ರಯತ್ನವನ್ನೂ ಮಾಡಿದ್ದಾರೆ. 'ಟಾಕ್ಸಿಕ್' ಸಿನಿಮಾದಲ್ಲಿ ಕಿಯಾರಾ ಮಾತ್ರವಲ್ಲದೆ ನಯನತಾರಾ, ಹುಮಾ ಖುರೇಷಿ ಮೊದಲಾದವರೂ ಇದ್ದಾರೆ. ಈ ಕಾರಣಕ್ಕೆ ಕಿಯಾರಾ ಪಾತ್ರಕ್ಕೆ ಹೆಚ್ಚಿನ ಸ್ಕ್ರೀನ್‌ಸ್ಪೇಸ್ ಇಲ್ಲದೆ ಇರಬಹುದು ಎಂದು ಕೆಲವರು ಊಹಿಸಿದ್ದಾರೆ. ಹೀಗಾಗಿ, ಅವರ ಭಾಗದ ಶೂಟಿಂಗ್ ಮುಗಿದಿರಬಹುದು ಎಂಬುದು ಕೆಲವರ ಲೆಕ್ಕಾಚಾರ. ಈ ಮೊದಲು ಅವರು ಸಿನಿಮಾ ಸೆಟ್‌ಗೆ ತೆರಳುತ್ತಿರುವ ವಿಡಿಯೋಗಳು ವೈರಲ್ ಆಗಿತ್ತು. ಹೀಗಾಗಿ, ಅವರು ಸಿನಿಮಾ ಕೆಲಸ ಮುಗಿದಿರುವುದರಿಂದ ಮಗು ಹೊಂದುವ ನಿರ್ಧಾರಕ್ಕೆ ಬಂದರು ಎನ್ನಲಾಗುತ್ತಿದೆ. ಇನ್ನು, ಕಿಯಾರಾ ಅವರು 'ವಾರ್ 2' ಚಿತ್ರದ ಕೆಲಸಗಳಲ್ಲೂ ಬ್ಯುಸಿ ಇದ್ದಾರೆ. ಈ ಚಿತ್ರದಲ್ಲಿ ಹೃತಿಕ್ ರೋಷನ್, ಜೂನಿಯರ್ ಎನ್‌ಟಿಆರ್ ಮೊದಲಾದವರು ಇದ್ದಾರೆ. ಈ ಚಿತ್ರದ ಕೆಲಸಗಳನ್ನು ಕಿಯಾರಾ ಪೂರ್ಣಗೊಳಿಸಿದರೇ ಎನ್ನುವ ಪ್ರಶ್ನೆ ಮೂಡಿದೆ. ಇದರಲ್ಲೂ ಅವರ ಪಾತ್ರ ಏನು ಅವರಿಗೆ ಸಿಕ್ಕ ಸ್ಕ್ರೀನ್ ಸ್ಪೇಸ್ ಎಷ್ಟು ಎಂಬಿತ್ಯಾದಿ ಪ್ರಶ್ನೆಗಳು ಮೂಡಿದೆ. ಕಿಯಾರಾ ಅಡ್ವಾಣಿ ಅವರು 2023ರ ಫೆಬ್ರವರಿಯಲ್ಲಿ ಸಿದ್ಧಾರ್ಥ್ ಮಲ್ಹೋತ್ರ ಅವರನ್ನು ಮದುವೆ ಆದರು. ರಾಜಸ್ಥಾನದ ಜೈಸಲ್ಮೇರ್‌ನಲ್ಲಿ ವಿವಾಹ ನಡೆಯಿತು. ವಿವಾಹ ಆಗಿ ಸರಿಯಾಗಿ ಎರಡು ವರ್ಷಕ್ಕೆ ಅವರು ತಾಯಿ ಆಗೋ ಬಗ್ಗೆ ಘೋಷಣೆ ಮಾಡಿದ್ದಾರೆ.





# 11 ಮಿಲಿಯನ್ ಫಾಲೋವರ್ಸ್‌ಗಳಿಸಿದ ನಟಿ


'ಪುಷ್ಪ 2 ಸಿನಿಮಾದಲ್ಲಿ ಸೊಂಟ ಬಳುಕಿಸಿದ ಕನ್ನಡತಿ ಶ್ರೀಲೀಲಾಗೆ ಬೇಡಿಕೆ ಹೆಚ್ಚಾಗಿದೆ. ಸಿನಿಮಾ ಮಾತ್ರವಲ್ಲದೇ ಇನ್ಸ್ಟಾಗ್ರಾಂನಲ್ಲಿ ಫಾಲೋ ಮಾಡುವವರ ಸಂಖ್ಯೆ ಹೆಚ್ಚಾಗಿದೆ. ಇನ್ಸ್ಟಾಗ್ರಾಂನಲ್ಲಿ ನಟಿ ಸಂಚಲನ ಮೂಡಿಸಿದ್ದಾರೆ. ಇದು ಫ್ಯಾನ್ಸ್‌ಗೆ ಖುಷಿಯ ಜೊತೆ ಅಚ್ಚರಿ ಮೂಡಿಸಿದೆ.

ಅಲ್ಲು ಅರ್ಜುನ್ ಜೊತೆ 'ಕಿಸ್ಸಿಕ್' ಎಂದು ಶ್ರೀಲೀಲಾ ಹೆಜ್ಜೆ ಹಾಕಿದ್ಮೇಲೆ ಡ್ಯಾನ್ಸಿಂಗ್ ಕ್ವೀನ್ ಎಂದೇ ಟಾಲಿವುಡ್‌ನಲ್ಲಿ ಟಾಕ್ ಆಗಿದ್ದಾರೆ. ಸೌತ್ ಮತ್ತು ಬಾಲಿವುಡ್‌ನಲ್ಲಿ ನಟಿಗೆ ಬೇಡಿಕೆ ಹೆಚ್ಚಾಗಿದೆ. ಕಿಸ್ಸಿಕ್ ಸಾಂಗ್‌ನ ಕಿಕ್‌ನಿಂದ ಇನ್ಸ್ಟಾಗ್ರಾಂನಲ್ಲಿ ಎರಡೇ ತಿಂಗಳಲ್ಲಿ 9 ಮಿಲಿಯನ್ ಇದ್ದ ಫಾಲೋವರ್ಸ್ ಈಗ 11 ಮಿಲಿಯನ್‌ಗೆ ಏರಿಕೆ ಆಗಿದೆ. 2024 ಸೆಪ್ಟಂಬರ್‌ನಲ್ಲಿ ನಟಿ 6 ಮಿಲಿಯನ್ (60 ಲಕ್ಷ) ಫಾಲೋವರ್ಸ್ ಹೊಂದಿದ್ದರು. ಡಿಸೆಂಬರ್ 2024ರಲ್ಲಿ 9 ಮಿಲಿಯನ್ (90 ಲಕ್ಷ) ಫಾಲೋವರ್ಸ್ ಇತ್ತು. ಎರಡೇ ತಿಂಗಳಲ್ಲಿ ಇದೀಗ 11 ಮಿಲಿಯನ್ ( 1 ಕೋಟಿ, 10 ಲಕ್ಷ) ಫಾಲೋವರ್ಸ್ ಅನ್ನು ಶ್ರೀಲೀಲಾ ಇನ್ಸ್ಟಾಗ್ರಾಂ ಖಾತೆಯಲ್ಲಿ ಹೊಂದಿದ್ದಾರೆ. ಅಷ್ಟರ ಮಟ್ಟಿಗೆ ಶ್ರೀಲೀಲಾ ಮೇಲಿನ ಕ್ರೇಜ್ ಫ್ಯಾನ್ಸ್‌ಗೆ ಹೆಚ್ಚಾಗಿದೆ. ಇನ್ನೂ ನಿತಿನ್ ಜೊತೆ 'ರಾಬಿನ್‌ಹುಡ್', ಪವನ್ ಕಲ್ಯಾಣ್ ಜೊತೆ 'ಉಸ್ತಾದ್ ಭಗತ್ ಸಿಂಗ್', ರವಿತೇಜ ಜೊತೆ 'ಮಾಸ್ ಜಾತ್ರಾ', ಬಾಲಿವುಡ್‌ನಲ್ಲಿ ಸೈಫ್ ಅಲಿ ಖಾನ್‌ಗೆ ನಾಯಕಿಯಾಗಿ ಹೊಸ ಸಿನಿಮಾ ಸೇರಿದಂತೆ ಹಲವು ಚಿತ್ರಗಳು ಶ್ರೀಲೀಲಾ ಕೈಯಲ್ಲಿವೆ.



# ಪ್ಯಾಂಟ್‌ಲೆಸ್ ಫೋಟೋಶೂಟ್ ನೋಡಿ ಕಾಲೆಳೆದ ನೆಟ್ಟಿಗರು

ಕನ್ನಡದ 'ಹೆಬ್ಬುಲಿ' ನಟಿ ಅಮಲಾ ಪೌಲ್ ಸಿನಿಮಾಗಿಂತ ಈಗೀಗ ವೈಯಕ್ತಿಕ ವಿಚಾರವಾಗಿಯೇ ಸುದ್ದಿಯಾಗ್ತಿದ್ದಾರೆ. ಸದ್ಯ ಪ್ಯಾಂಟ್‌ಲೆಸ್ ಆಗಿ ಫೋಟೋಶೂಟ್ ಮಾಡಿಸಿ ನೆಟ್ಟಿಗರ ಕೆಂಗಣ್ಣಿಗೆ ಗುರಿಯಾಗಿದ್ದಾರೆ. ಮದುವೆಯಾಗಿ ಒಂದು ಮಗುವಿನ ತಾಯಿ ಆಗಿರೋ ಅಮಲಾ ಈಗೀಗ ಮತ್ತಷ್ಟು ಹಾಟ್ ಆಗಿ ಕ್ಯಾಮೆರಾ ಮುಂದೆ ಕಾಣಿಸಿಕೊಳ್ತಿದ್ದಾರೆ. ಪ್ಯಾಂಟ್ ಧರಿಸದೇ ಟಾಪ್ ಹಾಕಿಕೊಂಡು ಅಮಲಾ ಕ್ಯಾಮೆರಾ ಕಣ್ಣಿಗೆ ಪೋಸ್ ನೀಡಿದ್ದಾರೆ. ಓವರ್ ಸೈಜ್ ಇರೋ ಒಂದು ಟೀ ಶರ್ಟ್ ಧರಿಸಿದ್ದಾರೆ. ಪ್ಯಾಂಟ್ ಧರಿಸದೇ ಫೋಟೋಗೆ ಪೋಸ್ ಕೊಟ್ಟ ಅಮಲಾ ಬಗ್ಗೆ ಸೋಶಿಯಲ್ ಮೀಡಿಯಾದಲ್ಲಿ ಭಾರೀ ಚರ್ಚೆ ನಡೆಯುತ್ತಿದೆ. ನಟಿ ಬೇಕಂತಲೇ ಹೀಗೆ ಮಾಡಿದ್ರಾ, ಅಥವಾ ಫ್ಯಾಷನ್ ಭಾಗವೇ ಎಂದೆಲ್ಲಾ ನೆಟ್ಟಿಗರು ಪ್ರಶ್ನಿಸುತ್ತಿದ್ದಾರೆ. ಇನ್ನೂ ಕೆಲವರು ಸಿನಿಮಾ ಚಾನ್ಸ್‌ಗಾಗಿ ಹೀಗೆಲ್ಲಾ ಮಾಡುತ್ತಿದ್ದಾರೆ ಎಂದೇ ಅಮಲಾಗೆ ನೆಟ್ಟಿಗರು ಟೀಕಿಸಿದ್ದಾರೆ. ಇದಕ್ಕೆಲ್ಲಾ ನಟಿ ಏನಂತಾರೆ ಎಂದು ಕಾದುನೋಡಬೇಕಿದೆ. ಕಳೆದ ವರ್ಷ ಅಮಲಾ ಅವರು ದಿ ಗೋಟ್ ಲೈಫ್, ಲೆವೆಲ್ ಕ್ರಾಸ್ ಸಿನಿಮಾಗಳಲ್ಲಿ ನಟಿಸಿದ್ದರು. ಸದ್ಯ ಅವರು ಸೌತ್ ಸಿನಿಮಾಗಳಲ್ಲಿ ಬ್ಯುಸಿಯಾಗಿದ್ದಾರೆ.



# ನನ್ನ ತಂಗಿಗೆ ಸವಲತ್ತು ಸಿಗಬಾರದು

ರಶ್ಮಿಕಾ ಮಂದಣ್ಣ ಅವರು ಭಾರತ ಚಿತ್ರರಂಗದ ಶ್ರೇಷ್ಠ ನಟಿಯರಲ್ಲಿ ಒಬ್ಬರು. ಅವರ ನಟನೆಯ 'ಛಾವ' ಸಿನಿಮಾ ಇತ್ತೀಚೆಗೆ ರಿಲೀಸ್ ಆಗಿ ಯಶಸ್ಸು ಕಂಡಿದೆ. ಛತ್ರಪತಿ ಸಾಂಭಾಜಿ ಮಹಾರಾಜ್ ಅವರ ಪತ್ನಿ ಯೇಸುಬಾಯಿ ಪಾತ್ರದಲ್ಲಿ ರಶ್ಮಿಕಾ ನಟಿಸಿದ್ದಾರೆ.

ಇದೊಂದು ಐತಿಹಾಸಿಕ ಕಥಾ ಹಂದರ ಹೊಂದಿರೋ ಚಿತ್ರ ಆಗಿರುವುದರಿಂದ ರಶ್ಮಿಕಾ ಮಂದಣ್ಣ ಮೆಚ್ಚುಗೆ ಪಡೆದರು. ಅವರು ಇತ್ತೀಚೆಗೆ ತಮ್ಮ ತಂಗಿಯ ಬಗ್ಗೆ ಮಾತನಾಡಿದ್ದರು. ರಶ್ಮಿಕಾ ಸಹೋದರಿಯ ಹೆಸರು ಶಿಮನ್ ಮಂದಣ್ಣ. ಅವಳು ಇನ್ನೂ ಶಿಕ್ಷಣ ಪಡೆಯುತ್ತಾ ಇದ್ದಾಳೆ. ರಶ್ಮಿಕಾ ಹಾಗೂ ಶಿಮನ್ ಮಧ್ಯೆ 16 ವರ್ಷಗಳ ವಯಸ್ಸಿನ ಅಂತರ ಇದೆ. ಇದು ಬಹುತೇಕರಿಗೆ ಗೊತ್ತಿದೆ. ರಶ್ಮಿಕಾ ಚಿತ್ರರಂಗಕ್ಕೆ ಬಂದಾಗ ಈ ವಿಚಾರ ಸಾಕಷ್ಟು ಸುದ್ದಿ ಆಗಿತ್ತು. ಈಗ ರಶ್ಮಿಕಾ ಮಂದಣ್ಣ ಅವರು ತನ್ನ ತಂಗಿಗೆ ಯಾವ ರೀತಿಯ ವಾತಾವರಣ ಸೃಷ್ಟಿಸುತ್ತಿದ್ದೇನೆ ಎಂಬುದನ್ನು ಹೇಳಿಕೊಂಡಿದ್ದಾರೆ. ರಶ್ಮಿಕಾ ಮಂದಣ್ಣ ಹಿಂಗೆಲ್ಲ ಮಾಡಿದರೂ ಕ್ಯೂಟ್ ಅಂತಾರೆ ಅಭಿಮಾನಿಗಳು ಅಬ್ಬರಿಸುತ್ತ ಬಂದ ಸಿಕಂದರ್ ಟೀಸರ್; ಖುಷಿಯಾದ ಸಲ್ಮಾನ್ ಖಾನ್ ಫ್ಯಾನ್ಸ್ ಮುಂಜಾನೆ ನಾಲ್ಕು ಗಂಟೆಗೆ ರಶ್ಮಿಕಾ ತಿನ್ನೋ ಸ್ನ್ಯಾಕ್ಸ್ ಏನು ಫೋಟೋ ವೈರಲ್ ರಶ್ಮಿಕಾ ಮಂದಣ್ಣಗೆ **ಗುಲಾಬಿ ಹೂವು ನೀಡಿದ ಪ್ರೇಮಿ:** ಆ ವ್ಯಕ್ತಿ ಮೇಲೆ ಅನುಮಾನ

'ನಮ್ಮ ಮಧ್ಯೆ 16 ವರ್ಷಗಳ ಅಂತರ ಇದೆ. ಇದು ನಿನ್ನ ಜೀವನ. ನಿನ್ನ ಜೀವನದಲ್ಲಿ ನಮ್ಮನ್ನು ಸೇರಿಸಿಕೊಳ್ಳಬೇಡ ಎಂದು ನನ್ನ ತಂದೆ ತಾಯಿ ಹೇಳಿದ್ದರು. ನನ್ನ ತಂಗಿಗೆ ಕೇಳಿದ್ದನ್ನು ಪಡೆದುಕೊಳ್ಳಬಹುದು. ಅವಳಿಗೆ ಅದು ಸಿಗೋಕೆ ನನಗೆ ಇಷ್ಟ ಇಲ್ಲ. ಬಾಲ್ಯದಲ್ಲಿ ನಾನು ಹೇಗೆ ಇದ್ದೆನೋ ಅದೇ ವಾತಾವರಣ ಅವಳಿಗೂ ಸಿಗಬೇಕು. ಆ ವಾತಾವರಣ ಸಿಕ್ಕಿದ್ದರಿಂದಲೇ ನಾನು ಈಗ ಹೀಗೆ ಇದ್ದೇನೆ. ನಾನು ಭದ್ರತೆ, ಕಂಫರ್ಟ್‌ನ ಕೊಡಬಹುದು, ಆದರೆ ಐಷಾರಾಮಿ ಸವಲತ್ತುಗಳನ್ನು ನೀಡಲಾರೆ ' ಎಂದಿದ್ದಾರೆ ರಶ್ಮಿಕಾ ಮಂದಣ್ಣ. ರಶ್ಮಿಕಾ ಮಂದಣ್ಣ ಚಿತ್ರರಂಗದ ಯಶಸ್ವಿ ನಾಯಕಿಯರಲ್ಲಿ ಒಬ್ಬರು.

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966